ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 20 ಬುಧವಾರ 2023

ಸಂಪುಟ: 44 | ಸಂಚಿಕೆ: 155 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಅ.17ಕ್ಕೆ ಕಾವೇರಿ ತೀರ್ಥೋದ್ಭವ

ಮಡಿಕೇರಿ, ಸೆ.19– ತಲಕಾವೇರಿ ಜಾತ್ರಾ ಮಹೋತ್ಸವಕ್ಕೆ ಮುಹೂರ್ತ ನಿಗದಿಯಾಗಿದ್ದು, ಅಕ್ಟೋಬರ್ 17ರ ಮಂಗಳವಾರ ರಾತ್ರಿ 1.27 ನಿಮಿಷಕ್ಕೆ ಸಲ್ಲುವ ಕರ್ಕಾಟಕ ಲಗ್ನದಲ್ಲಿ ಪವಿತ್ರ 'ಕಾವೇರಿ ತೀರ್ಥೋದ್ಭವ' ಜರುಗಲಿದೆ.



ಈ ಹಿನ್ನೆಲೆಯಲ್ಲಿ ಶ್ರೀ ಭಾಗಮಂಡಲ ಮತ್ತು ಶ್ರೀ ತಲಕಾವೇರಿ ಕ್ಷೇತ್ರಗಳಲ್ಲಿ ವಿವಿಧ ಸಂಪ್ರದಾಯ ಬದ್ಧ ಧಾರ್ಮಿಕ ಕಾರ್ಯಗಳು ನೆರವೇರಲಿವೆ. ಸೆ.27ರ ಬುಧವಾರ ಬೆಳಗ್ಗೆ 9.29 ನಿಮಿಷಕ್ಕೆ ಸಲ್ಲುವ ತುಲಾ ಲಗ್ನದಲ್ಲಿ 'ಪತಾಯಕ್ಕೆ' ಅಕ್ಕಿ ಹಾಕುವುದು, ಅಕ್ಟೋಬರ್ 5ರ ಗುರುವಾರ ಬೆಳಗ್ಗೆ 8.31 ನಿಮಿಷಕ್ಕೆ ಸಲ್ಲುವ ತುಲಾ ಲಗ್ನದಲ್ಲಿ 'ಆಜ್ಞಾ ಮುಹೂರ್ತ', ಅಕ್ಟೋಬರ್ 15ರ ಭಾನುವಾರ ಮಧ್ಯಾಹ್ನ 11.45 ನಿಮಿಷಕ್ಕೆ ಸಲ್ಲುವ ಧನುರ್ ಲಗ್ನದಲ್ಲಿ 'ಅಕ್ಷಯ ಪಾತ್ರೆ' ಇರಿಸುವುದು, ಅಕ್ಟೋಬರ್ 15ರ ಭಾನುವಾರ ಸಂಜೆ 4.05 ನಿಮಿಷಕ್ಕೆ ಸಲ್ಲುವ ಕುಂಭ ಲಗ್ನದಲ್ಲಿ 'ಕಾಣಿಕೆ ಡಬ್ಬ' ಇಡುವ ಕಾರ್ಯಗಳು ನಡೆಯಲಿದೆ ಎಂದು ಶ್ರೀ ಭಗಂಡೇಶ್ವರ ಮತ್ತು ಶ್ರೀ ತಲಕಾವೇರಿ ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಕ್ಟೋಬರ್ 17ರ ಮಂಗಳವಾರ ರಾತ್ರಿ 1.27 ನಿಮಿಷದಲ್ಲಿ ಮಾತೆ ಕಾವೇರಿ 'ತೀರ್ಥ' ಸ್ವರೂಪಿಣಿಯಾಗಿ ಆವಿರ್ಭವಿಸಲಿದ್ದಾಳೆ.

'ಸಂವಿಧಾನ ಸದನ'ದಿಂದ ನೂತನ ಸಂಸತ್‌ನತ್ತ ನಮ್ಮ ನಡೆ...!





ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ತಮ್ಮ ಸಚಿವ ಸಹೋದ್ಯೋಗಿಗಳು, ಸಂಸದರೊಂದಿಗೆ ಹಳೆ ಸಂಸತ್ ಭವನದಿಂದ ಕಾಲ್ನಡಿಗೆಯಲ್ಲಿ ಹೊಸ ಸಂಸತ್‌ಗೆ ಪ್ರವೇಶ ಮಾಡಿದರು.

ಮಹಿಳಾ ಮೀಸಲಾತಿ ಮಸೂದೆ ಮಂಡನೆ

● ಇದರ ಅವಧಿ 15 ವರ್ಷ; ಮತ್ತೆ ವಿಸ್ತರಿಸುವ ಅಧಿಕಾರ ಸಂಸತ್‌ಗಿದೆ ● ಶೇ.33ರೊಳಗೇ ಎಸ್‌ಸಿ, ಎಸ್‌ಟಿ ಕೋಟಾವೂ ಇದೆ; 2024ರ ಲೋಕಸಭಾ ಚುನಾವಣೆ ವೇಳೆಗೆ ಜಾರಿ ಕಷ್ಟಸಾಧ್ಯ

ನವದೆಹಲಿ, ಸೆ.19– ಬಹುದಿನಗಳ ಊಹಾಪೋಹಗಳಿಗೆ ತೆರೆ ಎಳೆದಿರುವ ಆಡಳಿತಾರೂಢ ಎನ್‌ಡಿಎ, ಸಂಸತ್ತಿನಲ್ಲಿ ಮಹಿಳೆಯರಿಗೆ ಗಣನೀಯ ಪ್ರಮಾಣದ ಸ್ಥಾನಗಳನ್ನು ಮೀಸಲಿಡುವ ಮಹತ್ವದ ಮಸೂದೆಯನ್ನು ಮಂಡಿಸಿದೆ.

ಮಂಗಳವಾರ ನೂತನ ಸಂಸತ್ ಭವನದಲ್ಲಿ ಕಾನೂನು ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಅವರು ಮಹಿಳೆಯರಿಗೆ ಶೇಖಡ 33ರಷ್ಟು ಮೀಸಲಾತಿ ನೀಡುವ ಮಹಿಳಾ ಮೀಸಲಾತಿ ಮಸೂದೆಯನ್ನು ಮಂಡಿಸಿದರು.



ಈ ಮಹಿಳಾ ಮೀಸಲಾತಿ ಮಸೂದೆಯ ಅವಧಿ 15 ವರ್ಷಗಳಾಗಿರುತ್ತದೆ. ನಂತರವೂ ಅದರ ಅವಧಿಯನ್ನು ವಿಸ್ತರಿಸುವ ಅಧಿಕಾರ ಸಂಸತ್ತಿಗಿದೆ. ಈ ಶೇ.33 ರೊಳಗೇ ಎಸ್‌ಸಿ, ಎಸ್‌ಟಿ ಕೋಟಾವೂ ಇರಲಿದೆ. ಆದರೆ 2024ರ ಲೋಕಸಭಾ ಚುನಾವಣೆಗೆ ಇದು ಜಾರಿ ಕಷ್ಟಸಾಧ್ಯ.

ಹೊಸ ಸಂಸತ್ ಭವನದಲ್ಲಿ ನಡೆದ ಎರಡನೇ ದಿನದ ಸಂಸತ್ ವಿಶೇಷ ಅಧಿವೇಶನ ನಾಳೆಗೆ ಮುಂದೂಡಲ್ಪಟ್ಟಿದೆ. ನಾಳೆ 11ಗಂಟೆಗೆ ಸಂಸತ್ ವಿಶೇಷ ಅಧಿವೇಶನ ನಡೆಯಲಿದ್ದು ನಿರೀಕ್ಷಿತ ಮಹಿಳಾ ಮೀಸಲಾತಿ ಮಸೂದೆಗೆ ನಾಳಿನ ಅಧಿವೇಶನದಲ್ಲಿ ಅಂಗೀಕಾರ ಸಿಗುವ ಸಾಧ್ಯತೆ ಇದೆ. ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಮುನ್ನಡೆಯುತ್ತಿದ್ದಾರೆ. ಆದ್ದರಿಂದ, ನೀತಿ ನಿರೂಪಣೆಯಲ್ಲಿ ನಮ್ಮ ತಾಯಂದಿರು, ಸಹೋದರಿಯರು ಮತ್ತು ಮಹಿಳೆಯರು ತಮ್ಮ ಗರಿಷ್ಠ ಕೊಡುಗೆಯನ್ನು ನೀಡುವುದು ಮತ್ತು ಪ್ರಮುಖ ● 3ನೇ ಪುಟಕ್ಕೆ

ದೇವೇಗೌಡರ ಕನಸು ನನಸಾಗುತ್ತಿದೆ

ಬೆಂಗಳೂರು, ಸೆ.19– ಕೇಂದ್ರದ ಮೋದಿ ಸರ್ಕಾರದ ಮಹಿಳಾ ಮೀಸಲಾತಿ ಮಸೂದೆ ಮಂಡನೆ ವಿಚಾರವನ್ನು ಜೆಡಿಎಸ್ ನಾಯಕ ಹಾಗೂ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಸ್ವಾಗತಿಸಿದ್ದು, ಎಚ್.ಡಿ.ದೇವೇಗೌಡರ ಕನಸು ಈಗ ನನಸಾಗುತ್ತಿದೆ ಎಂದು ಹೇಳಿದ್ದಾರೆ.

ವಿಧಾನಸಭೆ ಮತ್ತು ಲೋಕಸಭೆಯಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ನೀಡುವ ಮಸೂದೆ ಲೋಕಸಭೆಯಲ್ಲಿ ಮಂಡನೆ ಆಗುತ್ತಿರುವುದನ್ನು ನಾನು ಮುಕ್ತವಾಗಿ ಸ್ವಾಗತಿಸುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದು, ಈ ಕುರಿತು ಟ್ವೀಟ್ ಮಾಡಿರುವ ಅವರು, 'ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಪ್ರಧಾನಮಂತ್ರಿಗಳಾಗಿದ್ದ ಸಂದರ್ಭದಲ್ಲಿಯೇ 1996 ಸೆಪ್ಟೆಂಬರ್ 12ರಂದು ರಾಜ್ಯಸಭೆಯಲ್ಲಿ ಈ ಐತಿಹಾಸಿಕ ಬಿಲ್ ಅನ್ನು ಮಂಡಿಸಲಾಗಿತ್ತು. ಆದರೆ, ಅವರ ಸಂಯುಕ್ತ ರಂಗ ಸರಕಾರದ ಮೈತ್ರಿಕೂಟದ ಕೆಲ ಮಿತ್ರಪಕ್ಷಗಳೇ ತೀವ್ರ ವಿರೋಧ ವ್ಯಕ್ತಪಡಿಸಿದ ಕಾರಣಕ್ಕೆ ಆ ಮಸೂದೆ ಅಂಗೀಕಾರ ಆಗಲಿಲ್ಲ. ಇವತ್ತು ಕಾಂಗ್ರೆಸ್ಸಿನ I.N.D.I.A. ಮೈತ್ರಿಕೂಟವನ್ನು ಸೇರಿಕೊಂಡಿರುವ ನಾಯಕರೇ ಅಂದು ಈ ಮಸೂದೆಗೆ ತಡೆ ಒಡ್ಡಿದ್ದರು. 27 ವರ್ಷಗಳ ನಂತರ ಎಚ್.ಡಿ.ದೇವೇಗೌಡರ ಕನಸಿಗೆ ಮರುಜೀವ ● 9ನೇ ಪುಟಕ್ಕೆ



ಹುಕ್ಕಾಬಾರ್ ನಿಷೇಧಕ್ಕೆ ರಾಜ್ಯ ಸರ್ಕಾರ ತೀರ್ಮಾನ

● ತಂಬಾಕು ಉತ್ಪನ್ನ ಮಾರಾಟ, ಖರೀದಿಗಿರುವ ವಯೋಮಿತಿ 18 ರಿಂದ 21 ವರ್ಷಕ್ಕೆ ಏರಿಕೆ
● ಗಾಂಜಾ, ಅಫೀಮು, ಮತ್ತು ಬರುವ ಔಷಧ ತಡೆಗೆ ವಿಶೇಷ ಕಾರ್ಯಪಡೆ
● ಯುವ ಪೀಳಿಗೆಗೆ ಮಾರಕವಾದ ಇಂತಹ ವಸ್ತು ಹತ್ತಿಕ್ಕಲು ಕಾನೂನಿಗೆ ತಿದ್ದುಪಡಿ

ಬೆಂಗಳೂರು, ಸೆ.19(ಕೆಎಂಶಿ)– ಯುವ ಪೀಳಿಗೆಗೆ ಮಾರಕವಾಗಿರುವ ಹುಕ್ಕಾಬಾರ್ ನಿಷೇಧಿಸಲು ಮಹತ್ವದ ತೀರ್ಮಾನ ಕೈಗೊಂಡಿರುವ ರಾಜ್ಯ ಸರ್ಕಾರ, ತಂಬಾಕು ಮಾರಾಟ ಮತ್ತು ಖರೀದಿಗಿರುವ ವಯೋಮಿತಿಯನ್ನು 18ರಿಂದ 21 ವರ್ಷಕ್ಕೆ ಹೆಚ್ಚಿಸಲು ನಿರ್ಧರಿಸಿದೆ.

ಮತ್ತೊಂದೆಡೆ ಗಾಂಜಾ, ಅಫೀಮು ಮತ್ತು ಮತ್ತು ಬರುವ ಔಷಧ ತಡೆಗೆ ವಿಶೇಷ ಕಾರ್ಯಪಡೆಯೊಂದನ್ನು ರಚಿಸಲು ಸರ್ಕಾರ ಮುಂದಾಗಿದೆ. ಹುಕ್ಕಾ ಬಾರ್‌ನಿಂದ ಮಕ್ಕಳ ಭವಿಷ್ಯ ಹಾಳಾಗು ತ್ತಿದೆ. ಇವುಗಳನ್ನು ನಿಷೇಧ ಮಾಡಲು ಕಾನೂನು ತಿದ್ದುಪಡಿತರುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹಾಗೂ ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವ ಬಿ.ನಾಗೇಂದ್ರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿ ದರು. ಹುಕ್ಕಾಬಾರ್ ನಿಷೇಧಿಸಿದರೆ ಕೆಲವರು ನ್ಯಾಯಾಲಯದ ಮೆಟ್ಟಿಲು ಹತ್ತುವ ಸಂಭವವಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಕಾಯ್ದೆಗೆ ತಿದ್ದುಪಡಿ ತಂದು ಕರ್ನಾಟಕವನ್ನು ಹುಕ್ಕಾಬಾರ್ ಮುಕ್ತ ಮಾಡಲು ನಿರ್ಧರಿಸಿದ್ದೇವೆ ಎಂದರು.



ಯುವಜನರು ವ್ಯಸನಕ್ಕೆ ಒಳಗಾಗುವಂತೆ ಆರೋಗ್ಯಕ್ಕೆ ಹಾನಿಕಾರವಾಗುವ ಪದಾರ್ಥಗಳನ್ನು ಸೇರಿಸಲಾಗುತ್ತಿದೆ. ನಿಕೋಟಿನ್ ಸೇರಿದಂತೆ ಕೆಲವೊಂದು ಡ್ರಗ್‌ಗಳನ್ನು ಬಳಸಲಾಗುತ್ತಿದೆ. ಅರ್ಧ, ಮುಕ್ಕಾಲು ಗಂಟೆ ಹುಕ್ಕಾ ಸೇವಿಸಿದರೆ, ನೂರು ಸಿಗರೇಟ್ ಸೇದಿದರೆ ಆಗುವಷ್ಟು ಆರೋಗ್ಯಕ್ಕೆ ಹಾನಿಯಾಗುತ್ತದೆ ಎಂದು ಹೇಳಿದರು.

ಅಷ್ಟೇ ಅಲ್ಲ, ತಂಬಾಕು ನಿಷೇಧ ವಲಯವನ್ನು ವಿಸ್ತರಣೆ ಮಾಡಲು ನಿರ್ಧರಿಸಿದ್ದು, ದೇವಾಲಯ, ಚರ್ಚ್, ಮಸೀದಿ ಹಾಗೂ ಆಸ್ಪತ್ರೆಗಳ ಆಸುಪಾಸಿನಲ್ಲಿ ತಂಬಾಕು ವಸ್ತು ಮಾರಾಟ ಮಾಡು ವಂತಿಲ್ಲ. ಮಾರಾಟ ನಿಷೇಧಕ್ಕೆ ಸಂಬಂಧಿಸಿದಂತೆ ಸರ್ಕಾರ ಶೀಘ್ರದಲ್ಲೇ ಆದೇಶ ಹೊರಡಿಸಲಿದೆ. ಇದು ಜನಾರೋಗ್ಯಕ್ಕೆ ಸಂಬಂಧಿಸಿದ ನಿರ್ಣಯವಾಗಿರುವುದರಿಂದ ಎಲ್ಲರೂ ಸ್ವಾಗತಿಸಲಿದ್ದಾರೆ ಎಂಬ ವಿಶ್ವಾಸವಿದೆ ಎಂದರು.

ಕಾವೇರಿ ಜಲ ವಿವಾದ: ಸುಪ್ರೀಂಕೋರ್ಟ್ ಮೊರೆ ಹೋಗಲು ರಾಜ್ಯ ನಿರ್ಧಾರ




● ಇಂದು ದೆಹಲಿಯಲ್ಲಿ ರಾಜ್ಯದ ಕೇಂದ್ರ ಸಚಿವರು, ಸಂಸದರು, ಕಾನೂನು ತಜ್ಞರೊಂದಿಗೆ ಸಿಎಂ, ಡಿಸಿಎಂ ಸಭೆ
● ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಪಾಲನೆಯೊಂದಿಗೆ ಕಾನೂನು ಸಮರಕ್ಕೆ ತೀರ್ಮಾನ

ಬೆಂಗಳೂರು, ಸೆ.19(ಕೆಎಂಶಿ)– ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಪಾಲನೆ ಮಾಡಿ ನಂತರ ರೈತರ ಉಳಿವಿಗಾಗಿ ಸುಪ್ರೀಂ ಕೋರ್ಟ್ ಮೊರೆ ಹೋಗಲು ರಾಜ್ಯ ಸರ್ಕಾರ ಮುಂದಾಗಿದೆ. ತಮಿಳುನಾಡು ಸರ್ಕಾರದ ತಕರಾರು ಅರ್ಜಿಗೆ ಸ್ಪಂದಿಸಿ, ಸೆ.13ರಿಂದ 15 ದಿನಗಳ ಕಾಲ ಪ್ರತಿನಿತ್ಯ 5 ಸಾವಿರ ಕ್ಯುಸೆಕ್ ನೀರು ಹರಿಸುವಂತೆ ನೀಡಿರುವ ಆದೇಶ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿದೆ. ಸಂಕಷ್ಟದಿಂದ ಪಾರಾಗುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಲಸಂಪನ್ಮೂಲ ಹೊಣೆ ಹೊತ್ತಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಇಂದು ಕಾನೂನು ಮತ್ತು ನೀರಾವರಿ ತಜ್ಞರೊಂದಿಗೆ ಸುದೀರ್ಘ ಚರ್ಚೆ ನಡೆಸಿದ ನಂತರ ಸುಪ್ರೀಂಕೋರ್ಟ್ ಮೊರೆ ಹೋಗುವ ತೀರ್ಮಾನ ಕೈಗೊಂಡಿದ್ದಾರೆ. ಸಭೆಯ ನಂತರ ಉಭಯ ನಾಯಕರು ಇಂದೇ ದೆಹಲಿಗೆ ತೆರಳಿದ್ದು, ನಾಳೆ ಬೆಳಗ್ಗೆ ಮಾನಸಿಂಗ್ ಹೋಟೆಲ್‌ನಲ್ಲಿ ಕೇಂದ್ರದಲ್ಲಿ ರಾಜ್ಯ ಪ್ರತಿನಿಧಿಸುವ ಸಚಿವರು, ಸಂಸದರು ಹಾಗೂ ಕಾನೂನು ತಜ್ಞರೊಂದಿಗೆ ಚರ್ಚಿಸಲು ಉಪಾಹಾರ ಸಭೆ ಕರೆದಿದ್ದಾರೆ. ಇದಕ್ಕೂ ಮುನ್ನ ನ್ಯಾಯಾಲಯದಲ್ಲಿ ರಾಜ್ಯದ ಪರ ವಾದ ಮಾಡುತ್ತಿರುವ ಕಾನೂನು ತಜ್ಞರೊಂದಿಗೆ ಚರ್ಚಿಸಿ ಅವರು ನೀಡುವ ಸಲಹೆಯಂತೆ ಮುಂದಿನ ತೀರ್ಮಾನ ಕೈಗೊಳ್ಳಲು ನಿರ್ಧರಿಸಲಾಗಿದೆ.

ಎಲ್ಲಾ ಅಭಿಪ್ರಾಯ ಸಂಗ್ರಹಿಸಿದ ನಂತರ ಸುಪ್ರೀಂಕೋರ್ಟ್ ಮೊರೆ ಹೋಗಲು ಸರ್ಕಾರ ನಿರ್ಧಾರ ಕೈಗೊಂಡಿದೆ. ಸಂಕಷ್ಟಕ್ಕೆ ಸಿಲುಕಿರುವ ಕರ್ನಾಟಕವನ್ನು ಪಾರು ಮಾಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವ ● 9ನೇ ಪುಟಕ್ಕೆ

ರಾಜ್ಯದ 3 ಹೊಯ್ಸಳ ದೇವಾಲಯಗಳು ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆ



ಹಾಸನದ ಬೇಲೂರು ಚೆನ್ನಕೇಶವ ದೇವಾಲಯ

"ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಯಲ್ಲಿ ಹೊಯ್ಸಳ ದೇವಾಲಯಗಳು ಸೇರ್ಪಡೆಯಾಗಿರುವುದು ಭಾರತಕ್ಕೆ ಸಿಕ್ಕಿರುವ ಬಹು ದೊಡ್ಡ ವಿಶ್ವ ಮಾನ್ಯತೆ. ಭಾರತದ ಸಂಸ್ಕೃತಿ, ಪರಂಪರೆಯ ಶ್ರೀಮಂತಿಕೆಯ ಅನಾವರಣವಾದಂತಾಗಿದೆ. ಅಂತಹ ಸ್ಮಾರಕಗಳನ್ನು ಉಳಿಸಿ ಸಂರಕ್ಷಿಸೋಣ. – ನರೇಂದ್ರ ಮೋದಿ, ಪ್ರಧಾನಮಂತ್ರಿ



"ರಾಜ್ಯದ 3 ಹೊಯ್ಸಳರ ಕಾಲದ ದೇವಾಲಯಗಳು ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆಯಾಗಿರುವುದು ಸಂತಸ ತಂದಿದೆ. ನಾಡಿನ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ವಿಶ್ವ ಮಟ್ಟದ ಸೌಲಭ್ಯ ಮತ್ತು ಸುರಕ್ಷತೆ ಒದಗಿಸುವುದು ನಮ್ಮ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ನಾವು ಕಾರ್ಯ ಪ್ರವೃತ್ತರಾಗುತ್ತೇವೆ. – ಸಿದ್ದರಾಮಯ್ಯ, ಮುಖ್ಯಮಂತ್ರಿ




ಮೈಸೂರು, ಸೆ.19(ಆರ್‌ಕೆ)– ಮೈಸೂರು ಜಿಲ್ಲೆಯ ಸೋಮನಾಥಪುರದ ಕೇಶವ ದೇವಸ್ಥಾನ, ಹಾಸನ ಜಿಲ್ಲೆಯ ಹಳೇಬೀಡಿನ ಹೊಯ್ಸಳೇಶ್ವರ ಹಾಗೂ ಬೇಲೂರಿನ ಚೆನ್ನಕೇಶವ ದೇವಾಲಯಗಳು ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆಗೊಂಡಿವೆ.

ರಾಜ್ಯದ ಈ ಮೂರೂ ದೇವಾಲಯಗಳು 12ನೇ ಶತಮಾನದಲ್ಲಿ ಹೊಯ್ಸಳರ ಕಾಲದಲ್ಲಿ ನಿರ್ಮಾಣವಾದ ವಾಸ್ತುಶಿಲ್ಪ ಅದ್ಭುತಗಳಿವು. ಪ್ರತಿಷ್ಠಿತ ಯುನೈಟೆಡ್ ನೇಷನ್ಸ್ ಎಜುಕೇಷನಲ್, ಸೈಂಟಿಫಿಕ್ ಅಂಡ್ ಕಲ್ಚರಲ್ ಆರ್ಗನೈಸೇಷನ್ (UNESCO), ವಿಶ್ವ ಪರಂಪರೆ ಪಟ್ಟಿಯಲ್ಲಿ ಈ ಮೂರೂ ದೇವಾಲಯ ಗಳ ಸೇರ್ಪಡೆಗೆ ಅನುಮೋದನೆ ನೀಡಿದೆ.

ಇದು ಭಾರತದ 42ನೇ ಅಡಿಷನ್ ಆಗಿದ್ದು, ಕರ್ನಾಟಕದ ಪರಂಪರೆ ಪಟ್ಟಿಯಲ್ಲಿ ನಾಲ್ಕನೆಯದಾಗಿದೆ. ಹೊಯ್ಸಳರು ತಮ್ಮ ಪವಿತ್ರ ಸಂದೇಶಗಳನ್ನು ಪದ ಪುಂಜದ ರೂಪದಲ್ಲಿ ಶಿಲ್ಪಕಲೆಯ ಕೆತ್ತನೆ ಮೂಲಕ ಅಭಿವ್ಯಕ್ತಗೊಳಿಸಿರುವ ಈ ಮೂರೂ ದೇವಾಲಯಗಳ ಪಾರಂಪರಿಕ ವಿನ್ಯಾಸವನ್ನು ಪರಿಗಣಿಸಿ ಭಾರತದ ● 9ನೇ ಪುಟಕ್ಕೆ



ಹಾಸನದ ಹಳೇಬೀಡು ಹೊಯ್ಸಳೇಶ್ವರ ದೇವಾಲಯ



ಮೈಸೂರು ಸೋಮನಾಥಪುರದ ಕೇಶವ ದೇವಾಲಯ

'ಹೊಯ್ಸಳರ ಪವಿತ್ರ ತಾಣಗಳು' ಸಮಗ್ರ ಪ್ರಸ್ತಾವನೆ ಸಲ್ಲಿಸಲಾಗಿತ್ತು

■ ಡಾ.ಸಿ.ಜಿ.ಬೆಟಸೂರಮಠ ಪ್ರತಿಕ್ರಿಯೆ ■ ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆಯಾಗಿರುವ ಬಗ್ಗೆ ಅತೀವ ಸಂತಸ

ಮೈಸೂರು, ಸೆ.19(ಎಸ್‌ಬಿಡಿ)– ಹೊಯ್ಸಳರ ವಾಸ್ತುಶಿಲ್ಪ ವೈಭವ ಸಾರುವ ಮೂರು ತಾಣಗಳು ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆಯಾಗಿದ್ದು, ಈ ಸಂಬಂಧ 2014ರಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಡಾ.ಸಿ.ಜಿ.ಬೆಟಸೂರಮಠ ಅವರು ಪ್ರಾಚ್ಯವಸ್ತು, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯುಕ್ತರಾಗಿದ್ದಾಗ 2014ರ ಏಪ್ರಿಲ್‌ನಲ್ಲಿ 'ಡೆಕ್ಕನ್ ಸುಲ್ತಾನರ ಸ್ಮಾರಕಗಳು ಮತ್ತು ಕೋಟೆಗಳು(ಗುಲ್ಬರ್ಗಾ, ಬೀದರ್, ಬಿಜಾಪುರ ಸೇರಿದಂತೆ ಡೆಕ್ಕನ್ ಸುಲ್ತಾನರ ವಾಸ್ತುಶಿಲ್ಪ)', 'ಶ್ರೀರಂಗಪಟ್ಟಣ ದ್ವೀಪ ಪಟ್ಟಣದ ಸ್ಮಾರಕಗಳು' ಹಾಗೂ 'ಹೊಯ್ಸಳರ ಪವಿತ್ರ ತಾಣಗಳು ● 9ನೇ ಪುಟಕ್ಕೆ



ಅಮೆರಿಕದ ಜೆಎಸ್ಎಸ್ ಸ್ಪಿರಿಚ್ಯುಯಲ್ ಮಿಷನ್‌ಗೆ ಡಾ.ವಿವೇಕ್ ಮೂರ್ತಿ ಭೇಟಿ



ಮೈಸೂರು, ಸೆ. 19– ಅಮೆರಿಕದ ಮೇರಿಲ್ಯಾಂಡ್‌ನ ಗೇಥರ್ಸ್‌ಬರ್ಗ್‌ನಲ್ಲಿರುವ ಜೆಎಸ್ಎಸ್ ಸ್ಪಿರಿಚ್ಯುಯಲ್ ಮಿಷನ್‌ಗೆ ಅಮೆರಿಕದ ಜನರಲ್ ಸರ್ಜನ್ ಹಾಗೂ ವೈಸ್ ಅಡ್ಮಿರಲ್ ಡಾ.ವಿವೇಕ್ ಹೆಚ್. ಮೂರ್ತಿ ತಮ್ಮ ಮಾತಾ–ಪಿತರಾದ ಡಾ. ಎಲ್.ಎನ್.ಮೂರ್ತಿ ಮತ್ತು ಶ್ರೀಮತಿ ಮೈತ್ರೇಯಿ ಮೂರ್ತಿಯವರೊಡನೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರಿಂದ ಆಶೀರ್ವಾದ ಪಡೆದರು.

ನಂತರ ಮಿಷನ್‌ನಲ್ಲಿರುವ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆಯಲ್ಲಿ ಪಾಲ್ಗೊಂಡಿದ್ದರು. ಮಿಷನ್‌ನಲ್ಲಿ ನಡೆಯುತ್ತಿರುವ ಭಾರತೀಯ ಸಂಸ್ಕೃತಿಗೆ ಪೂರಕವಾದ ಚಟುವಟಿಕೆಗಳನ್ನು ಗಮನಿಸಿ ಸಂತೋಷ ವ್ಯಕ್ತಪಡಿಸಿದರು. ಶ್ರೀ ಸುತ್ತೂರು ಮಠ ಹಾಗೂ ಜೆಎಸ್ಎಸ್ ಮಹಾವಿದ್ಯಾಪೀಠದಿಂದ ಭಾರತವೂ ಸೇರಿದಂತೆ ವಿದೇಶಗಳಲ್ಲಿ ನಡೆಯುತ್ತಿರುವ ಸೇವಾಕಾರ್ಯಗಳ ಬಗೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಅವರು ಭಾರತಕ್ಕೆ ಮುಂದಿನ ಭೇಟಿ ಸಂದರ್ಭದಲ್ಲಿ ಜೆಎಸ್ಎಸ್ ಸಂಸ್ಥೆಗಳಿಗೆ ಭೇಟಿ ನೀಡಲು ಆಹ್ವಾನಿಸಲಾಯಿತು. ಅಮೆರಿಕದಲ್ಲಿ ನೆಲೆಸಿರುವ ಮಂಡ್ಯದ ಅಭಿನವ ಭಾರತಿ ಸಂಸ್ಥೆ ಅಧ್ಯಕ್ಷ ಶಿವಮೂರ್ತಿ ಕಿಲಾರ ಜತೆಯಲ್ಲಿದ್ದರು. ಗಣ್ಯರು, ಮಿಷನ್‌ನ ಪದಾಧಿಕಾರಿಗಳು ಹಾಗೂ ಸ್ವಯಂಸೇವಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮುಂಚೂಣಿ ಸಿಬ್ಬಂದಿ ದಿನ: ಇಂದು ಬಂಡೀಪುರದಲ್ಲಿ ಸಫಾರಿ ಬಂದ್



ಮೈಸೂರು, ಸೆ.19(ಎಂಟಿವೈ) – ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೇಲುಕಾಮನಹಳ್ಳಿ ಸಫಾರಿ ಕೌಂಟರ್ ಬಳಿ ನಾಳೆ (ಸೆ.20) ಬೆಳಗ್ಗೆ 11.30ಕ್ಕೆ 'ಮುಂಚೂಣಿ ಸಿಬ್ಬಂದಿ ದಿನಾಚರಣೆ' ಕಾರ್ಯಕ್ರಮ ಆಚರಿಸಲಾಗುತ್ತಿದ್ದು, ಒಂದು ದಿನ ಸಫಾರಿ ಸ್ಥಗಿತಗೊಳಿಸಲಾಗಿದೆ ಎಂದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಡಾ.ಪಿ.ರಮೇಶ್‌ಕುಮಾರ್ ತಿಳಿಸಿದ್ದಾರೆ.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವಿವಿಧ ವಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮುಂಚೂಣಿ ಸಿಬ್ಬಂದಿಯ ಸಾಧನೆಯನ್ನು ಗುರುತಿಸಿ, ಬಹುಮಾನ ನೀಡಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮುಂಚೂಣಿ ಸಿಬ್ಬಂದಿಯ ದಿನ ಆಚರಿಸಲಾಗುತ್ತಿದ್ದು, ಗುಂಡ್ಲುಪೇಟೆ ತಾಲೂಕಿನ ಮೇಲುಕಾಮನಹಳ್ಳಿಯಲ್ಲಿರುವ ಹೊಸ ಸಫಾರಿ ಕೌಂಟರ್ ಬಳಿ ಕಾರ್ಯಕ್ರಮ ಆಯೋಜಿಸಲಾಗಿದೆ. ಶಾಸಕ ಹೆಚ್.ಎಂ. ಗಣೇಶ್‌ಪ್ರಸಾದ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದು, ಸಾಧನೆ ಮಾಡಿರುವ ಅಧಿಕಾರಿಗಳು, ಮುಂಚೂಣಿ ಸಿಬ್ಬಂದಿಗೆ ಬಹುಮಾನ ವಿತರಿಸಲಿದ್ದಾರೆ ಎಂದರು.

ಸಫಾರಿ ಬಂದ್

ಮುಂಚೂಣಿ ಸಿಬ್ಬಂದಿಯ ದಿನಾಚರಣೆಯಲ್ಲಿ ಮುಂಚೂಣಿ ಸಿಬ್ಬಂದಿ ಹಾಗೂ ಕುಟುಂಬದ ಸದಸ್ಯರು ಪಾಲ್ಗೊಳ್ಳುವ ಹಿನ್ನೆಲೆಯಲ್ಲಿ ನಾಳೆ (ಸೆ.20) ಬೆಳಗ್ಗೆ ಮತ್ತು ಸಂಜೆ ಎರಡೂ ಅವಧಿಯಲ್ಲೂ ಸಫಾರಿ ಬಂದ್ ಮಾಡಲಾಗಿದೆ. ಪ್ರವಾಸಿಗರು ಸಹಕರಿಸಬೇಕೆಂದು ಕೋರಿದ್ದಾರೆ.



ಮೈಸೂರಿನ ಗಿರಿದರ್ಶಿನಿ ಬಡಾವಣೆಯಲ್ಲಿ ಗೌರಿ–ಗಣೇಶ ಹಬ್ಬದ ಪ್ರಯುಕ್ತ ಶ್ರೀ ಬೆನಕ ಯುವಕರ ಬಳಗದ ವತಿಯಿಂದ 21ನೇ ವರ್ಷದ ಗಣೇಶ ಹಬ್ಬದ ಮಹೋತ್ಸವದ ಅಂಗವಾಗಿ 1001 ಗಣಪತಿಯನ್ನು ಪ್ರತಿಷ್ಠಾಪಿಸಲಾಗಿದೆ. 9 ದಿನ ಹಲವಾರು ಕಾರ್ಯಕ್ರಮಗಳೊಂದಿಗೆ ಗಣೇಶೋತ್ಸವವನ್ನು ಅದ್ಧೂರಿಯಾಗಿ ಆಚರಿಸ ಲಾಗುತ್ತಿದೆ. ಇಲ್ಲಿನ ದೊಡ್ಡ ಗಣಪತಿ ಅಕ್ಕಪಕ್ಕ ಚಿಕ್ಕ ಚಿಕ್ಕ 1000 ಗಣಪತಿ ಮೂರ್ತಿಗಳನ್ನು ಇಡಲಾಗಿದ್ದು, ನೋಡುಗರ ಕಣ್ಮನ ಸೆಳೆಯುತ್ತಿದೆ.

ಮಾದಕ ವಸ್ತುಗಳಿಂದ ದೂರವಿರಿ

ಹಿರಿಯ ಸಿವಿಲ್ ನ್ಯಾಯಾಧೀಶ ಬಿ.ಜಿ.ದಿನೇಶ್ ಸಲಹೆ



ಮೈಸೂರು,ಸೆ.19–ಮೈಸೂರಿನ ವಸುದೇವ ಸೋಮಾನಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ವತಿಯಿಂದ ಮಾದಕ ವ್ಯಸನ ದುಷ್ಪರಿಣಾಮಗಳ ಕುರಿತು ಕಾನೂನು ಅರಿವು– ನೆರವು ಕಾರ್ಯಕ್ರಮ ಆಯೋಜಿಸಲಾಗಿತ್ತು.

ಈ ವೇಳೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಬಿ.ಜಿ.ದಿನೇಶ್ ಮಾತನಾಡಿ, ಮಾದಕ ವ್ಯಸನಕ್ಕೆ ಲಿಂಗ, ವಯಸ್ಸಿನ ತಾರತಮ್ಯವಿಲ್ಲ ಒಂದು ಬಾರಿ ಮಾದಕ ವ್ಯಸನಕ್ಕೆ ಗುರಿಯಾದರೆ ನಮ್ಮ ಮಾನಸಿಕ ಮತ್ತು ಬೌದ್ಧಿಕ ಸ್ಥಿಮಿತ ಎರಡನ್ನೂ ಕಳೆದುಕೊಂಡು ಕುಟುಂಬಕ್ಕೆ ಮತ್ತು ಸಾಮಾಜಕ್ಕೆ ಮಾರಕವಾಗಿ ಬದಲಾಗುತ್ತೇವೆ ಆದ್ದರಿಂದ ಯುವ ಸಮೂಹ ಇದರ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ಸುಂದರ್‌ರಾಜು ಮಾತನಾಡಿ, 1985ರಲ್ಲಿ ಮಾದಕ ವಸ್ತುಗಳು ಮತ್ತು ಮಾದಕ ವಸ್ತು ಸೇವನೆ ನಿಷೇಧಿಸುವ ಉದ್ದೇಶದಿಂದ ಎನ್‌ಡಿಪಿಎಸ್ ಕಾಯ್ದೆಯನ್ನು ಜಾರಿಗೊಳಿಸಲಾಯಿತು. ಈ ಕಾಯಿದೆಯಂತೆ ಮಾದಕ ವಸ್ತುಗಳ ಸೇವನೆಗೆ 2000 ದಂಡ, 1 ವರ್ಷ ಕಾರಾಗೃಹ ಶಿಕ್ಷೆಯನ್ನು ವಿಧಿಸಲಾಗುತ್ತದೆ. ಮಾದಕ ವಸ್ತುಗಳ ಮಾರಾಟಕ್ಕೆ 18 ವರ್ಷಗಳ ಶಿಕ್ಷೆ 1 ಲಕ್ಷ ದಂಡ ವಿಧಿಸಲಾಗುತ್ತದೆ. ಅಪರಾಧ ಪುನರಾವರ್ತನೆಯಾದಾಗ ಮರಣದಂಡನೆ ವಿಧಿಸಲಾಗುತ್ತದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ.ಎಂ.ಮಹದೇವಸ್ವಾಮಿ ಮಾತನಾಡಿ, ವಿದ್ಯಾರ್ಥಿಗಳು ಮಾದಕ ವಸ್ತುಗಳ ಮಾರಕತೆಯನ್ನು ಅರಿತುಕೊಂಡು ವ್ಯಸನಮುಕ್ತ ಜೀವನವನ್ನು ಕಟ್ಟಿಕೊಳ್ಳಬೇಕೆಂದು ಕರೆ ನೀಡಿದರು. ಇನ್ಸ್ಟಿಟ್ಯೂಟ್ ಆಫ್ ಎಜುಕೇಷನ್ ಟ್ರಸ್ಟ್ ಕಾರ್ಯದರ್ಶಿ ಕುಬೇರ ಪಿ.ಗೌಡ, ಎನ್.ಎಸ್ಎಸ್. ಕಾರ್ಯಕ್ರಮಾಧಿಕಾರಿ ಡಾ.ಟಿ.ರಮೇಶ್, ಕಚೇರಿ ಅಧೀಕ್ಷಕ ಡಾ.ಬಸವರಾಜು ಉಪಸ್ಥಿತರಿದ್ದರು.

ನಿಧನ

ಮಂಗಳಾದೇವಿ



ಮೈಸೂರು,ಸೆ.19–ಮೈಸೂರು ವಿಜಯನಗರ ಮೊದಲ ಹಂತದ ನಿವಾಸಿ ಸಿದ್ದಲಿಂಗಪ್ಪ ಅವರ ಪತ್ನಿ ಶ್ರೀಮತಿ ಮಂಗಳಾದೇವಿ (82) ಅವರು ಕಳೆದ ಭಾನುವಾರ (ಸೆ.17)ದಂದು ನಿಧನರಾದರು.

ಇವರು ಪತಿ, ಮೂವರು ಪುತ್ರಿಯರು, ಓರ್ವ ಪುತ್ರ, ಸೊಸೆ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಪುತ್ರ ಮಹಾಲಿಂಗೇಶ್ವರ್ ಮೈಸೂರು ಇನ್‌ಫೋಸಿಸ್‌ನಲ್ಲಿ ಎವಿಪಿ. ಇವರ ಅಂತ್ಯಕ್ರಿಯೆ ನಿನ್ನೆ (ಸೋಮವಾರ) ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಈ ಬಾರಿ ಇನ್ನೂ ಎರಡು ವೇದಿಕೆಯಲ್ಲಿ ವಿಶಿಷ್ಟ ದಸರಾ ಸಂಗೀತ ಕಾರ್ಯಕ್ರಮ

● ಇದುವರೆಗೆ ಎಂಟು ವೇದಿಕೆಯಲ್ಲಿ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗುತ್ತಿತ್ತು ● ಈ ಬಾರಿಯಿಂದ ಆಧುನಿಕ ಮೈಸೂರು ನಿರ್ಮಾತೃ ನಾಲ್ವಡಿ ಕೃಷ್ಣರಾಜ ಒಡೆಯರ 'ಜಯಹೇ ನಾಲ್ವಡಿ' ವಿಶೇಷ ಕಾರ್ಯಕ್ರಮ



ಮೈಸೂರು, ಸೆ.19(ಜಿಎ)–ಪ್ರತಿ ವರ್ಷ ವಿಶ್ವವಿಖ್ಯಾತ ದಸರಾ ಮಹೋತ್ಸವದಲ್ಲಿ ಅರಮನೆ ಸೇರಿದಂತೆ ಎಂಟು ವೇದಿಕೆಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತದೆ. ಆದರೆ, ಈ ಬಾರಿ ಇನ್ನೂ ಎರಡು ವೇದಿಕೆಗಳಲ್ಲಿ ಆಯೋಜಿಸಲಾಗುತ್ತಿದೆ. ಅದರೊಟ್ಟಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕುರಿತು 'ಜಯಹೇ ನಾಲ್ವಡಿ' ವಿಶೇಷ ಕಾರ್ಯಕ್ರಮ ರೂಪಿಸಲು ಚಿಂತಿಸಲಾಗಿದೆ.

ಮೈಸೂರು ದಸರಾ ಮಹೋತ್ಸವದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ತಮ್ಮ ಕಲೆ ಪ್ರದರ್ಶಿಸಲು ಕಲಾವಿದರು ಕಾತುರರಾಗಿದ್ದು, ಈಗಾಗಲೇ 637 ಅರ್ಜಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಸಲ್ಲಿಕೆಯಾಗಿವೆ. ಪ್ರತಿವರ್ಷ ವಿಶ್ವವಿಖ್ಯಾತ ದಸರಾ ಮಹೋತ್ಸವದಲ್ಲಿ ಅರಮನೆ ಸೇರಿದಂತೆ ಎಂಟು ವೇದಿಕೆಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತಿದೆ. ಈ ಬಾರಿ ಇಲ್ಲಿ ಕಾರ್ಯಕ್ರಮ ನೀಡಲು ಕರ್ನಾಟಕ ಮಾತ್ರವಲ್ಲದೆ ದೇಶ–ವಿದೇಶಗಳಿಂದಲೂ ಕಲಾವಿದರು ಹಾಗೂ ಕಲಾತಂಡಗಳು ಅರ್ಜಿ ಸಲ್ಲಿಸಿವೆ. ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಕಥಕ್, ಒಡಿಸ್ಸಿ, ವಯೋಲಿನ್, ಸಿತಾರ್ ಸಂಗೀತ ಕಾರ್ಯಕ್ರಮ ನೀಡಲು ಪಂಜಾಬ್, ಅಸ್ಸಾಂ, ಮಹಾರಾಷ್ಟ್ರ, ಕೇರಳ, ತಮಿಳುನಾಡು ರಾಜ್ಯದ ಕಲಾವಿದರು ಅರ್ಜಿ ಸಲ್ಲಿಸಿದ್ದಾರೆ. ಅಲ್ಲದೆ, ಕೆನಡಾ, ಅಮೆರಿಕಾ, ಬ್ರಿಟನ್‌ನಿಂದಲೂ ಕಲಾವಿದರು ದಸರಾ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ, ತಮ್ಮ ಕಲಾ ಪ್ರೌಢಿಮೆ ಪ್ರದರ್ಶಿಸಲು ಸಿದ್ಧರಾಗಿದ್ದಾರೆ.

ಕಳೆದ ವರ್ಷ 2137 ಅರ್ಜಿಗಳು ಬಂದಿದ್ದವು. ಈ ವರ್ಷ ಅಧಿಕೃತವಾಗಿ ಅರ್ಜಿ ಆಹ್ವಾನಿಸುವ ಮುನ್ನವೇ 450 ಅರ್ಜಿಗಳು ಬಂದಿದ್ದವು. ಇದೀಗ ಅರ್ಜಿ ಕರೆದ 4ಕ್ಕೆ ದಿನಕ್ಕೆ 200ಕ್ಕೂ ಅಧಿಕ ಅರ್ಜಿಗಳು ಬಂದಿವೆ. ಸೆ.25ರಂದು ಅರ್ಜಿ ಸಲ್ಲಿಸಲು ಕಡೇ ದಿನಾಂಕವಾಗಿದೆ. ಈ ಹಿನ್ನೆಲೆಯಲ್ಲಿ ದೇಶ–ವಿದೇಶಗಳಿಂದ ಅನೇಕ ಕಲಾವಿದರು ಮೈಸೂರಿನ ಕಲಾಮಂದಿರದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಗೆ ನೇರವಾಗಿ ಮತ್ತು ಅಂಚೆ ಮೂಲಕ ಅರ್ಜಿ ಸಲ್ಲಿಸುತ್ತಿದ್ದಾರೆ.

ಎರಡು ಹೊಸ ವೇದಿಕೆ: ಈ ಬಾರಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ 2 ಹೊಸ ಪ್ರಯೋಗ ಮಾಡಲಾಗುತ್ತಿದ್ದು, ಅದರಂತೆ ನಟನಾ ರಂಗಮಂದಿರದಲ್ಲಿ ನಾಟಕ ಪ್ರದರ್ಶನ ಮತ್ತು ನಗರದ ಹೊರಭಾಗದಲ್ಲಿರುವ ಉದ್ಯಾನವನದಲ್ಲಿ ಕರೋಕೆ ಗಾಯನ ಸ್ಪರ್ಧೆ ಏರ್ಪಡಿಸಲಾಗುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಮೈಸೂರಿನಲ್ಲಿ ರಂಗಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಇರುವುದರಿಂದ ನಟನಾದಲ್ಲೂ ನಾಟಕ ಪ್ರದರ್ಶನ ಆಯೋಜಿಸಲಾಗುತ್ತಿದೆ. ಪ್ರತಿವರ್ಷ ಎಂಟು ವೇದಿಕೆಗಳಲ್ಲಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತಿತ್ತು. ಈ ವರ್ಷ ನಟನಾ ಹಾಗೂ ನಗರದ ಪ್ರತಿಷ್ಠಿತ ಉದ್ಯಾನವನವೊಂದರಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲು ದಸರಾ ಸಾಂಸ್ಕೃತಿಕ ಉಪ ಸಮಿತಿ ತೀರ್ಮಾನಿಸಿದೆ. ಈ ಮೂಲಕ ಹೆಚ್ಚಿನ ಪ್ರೇಕ್ಷಕರನ್ನು ತಲುಪುವ ಉದ್ದೇಶವೂ ಆಗಿದೆ ಎಂದರು.

ಕರೋಕೆ ಗಾಯನ: ಮೈಸೂರಿನಲ್ಲಿ ಸಾಕಷ್ಟು ಕರೋಕೆ ಗಾಯಕರು ಇದ್ದಾರೆ. ಅವರಿಗಾಗಿ ಇದೇ ಮೊದಲ ಬಾರಿಗೆ ದಸರಾದಲ್ಲಿ ಕರೋಕೆ ಗಾಯನ ಹಮ್ಮಿಕೊಳ್ಳಲಾಗುತ್ತಿದೆ. ನಗರದ ಪ್ರಮುಖ ಉದ್ಯಾನವನದಲ್ಲಿ ಈ ಗಾಯನ ಕಾರ್ಯಕ್ರಮ ನಡೆಯಲಿದ್ದು, ಪ್ರತಿದಿನ ಸಂಜೆ ಕರೋಕೆ ಗಾಯಕರು ಗೀತೆಗಳನ್ನು ಪ್ರಸ್ತುತಪಡಿಸಲಿದ್ದಾರೆ. ಮಿನಿ ಬಜೆಟ್‌ನಲ್ಲಿ ಈ ಕಾರ್ಯಕ್ರಮ ಆಯೋಜಿಸಲು ದಸರಾ ಸಾಂಸ್ಕೃತಿಕ ಉಪ ಸಮಿತಿ ಚಿಂತನೆ ನಡೆಸಿದೆ ಎಂದು ತಿಳಿಸಿದರು.



ಜಯಹೇ ನಾಲ್ವಡಿ

ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯಂತೆ ಈ ಬಾರಿಯ ದಸರಾ ಮಹೋತ್ಸವದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕುರಿತಂತೆ 'ಜಯಹೇ ನಾಲ್ವಡಿ' ಧ್ವನಿ–ಬೆಳಕು ವಿಶೇಷ ಕಾರ್ಯಕ್ರಮ ರೂಪಿಸಲಾಗುತ್ತಿದೆ. ಈ ಕಾರ್ಯಕ್ರಮ ಅರಮನೆಯ ಮುಖ್ಯ ವೇದಿಕೆಯಲ್ಲಿ ನಡೆಯಲಿದ್ದು, ಅದರ ಮೂಲಕ ನಾಲ್ವಡಿ ಅವರ ಸಾಧನೆ ಮತ್ತು ಆಡಳಿತವನ್ನು ವಿಶೇಷವಾಗಿ ತೋರಿಸಲಾಗುತ್ತದೆ.

–ಡಾ.ಎಂ.ಡಿ.ಸುದರ್ಶನ್, ಸಹಾಯಕ ನಿರ್ದೇಶಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಮೈಸೂರು ಕೊಡವ ಸಮಾಜದಿಂದ ಕೈಲ್ ಪೊಳ್ದ್ ಸಂತೋಷ ಕೂಟ



ಮೈಸೂರು, ಸೆ.19– ವಿಜಯನಗರ 1ನೇ ಹಂತದಲ್ಲಿರುವ ಕೊಡವ ಸಮಾಜದಲ್ಲಿ 'ಕೈಲ್ ಪೊಳ್ದ್' ಹಬ್ಬದ ಪ್ರಯುಕ್ತ ಪ್ರತಿ ವರ್ಷದಂತೆ ಈ ಬಾರಿಯೂ ಸಮುದಾಯ ಬಾಂಧವರಿಗೆ ಕೈಲ್ ಪೊಳ್ದ್ ಸಂತೋಷ ಕೂಟವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೂ ಮುನ್ನ ಸಮಾಜದ 'ಗುರುಮನೆ' ಸಭಾಂಗಣದಲ್ಲಿ ಕೊಡವರ ಸಾಂಪ್ರದಾಯಿಕ ಆಯುಧಗಳಾದ ಬಂದೂಕು, ಒಡಿ ಕತ್ತಿ ಮತ್ತು ಕೃಷಿ ಪರಿಕರಗಳಿಗೆ ವಿಶೇಷ ಪೂಜೆ ಸಲ್ಲಿಸಿ, ಪ್ರಾರ್ಥಿಸಲಾಯಿತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಕೊಡಗಿನ ವಿರಾಜಪೇಟೆ ಕ್ಷೇತ್ರದ ಶಾಸಕ ಅಜ್ಜಿಕುಟ್ಟಿರ ಎ. ಪೊನ್ನಣ್ಣ ಅವರು, ಕೊಡವ ಸಂಸ್ಕೃತಿ, ಪದ್ಧತಿ, ಪರಂಪರೆಗಳನ್ನು ಉಳಿಸಲು ಸಮುದಾಯ ಮುಂದಾಗಬೇಕು. ಕೊಡವ ಯುವ ಸಮುದಾಯಕ್ಕೆ ಈ ಕುರಿತು ಜಾಗೃತಿ ಮೂಡಿಸಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಮೈಸೂರು ಕೊಡವ ಸಮಾಜದ ಅಧ್ಯಕ್ಷ ಮೇಚಂಡ ಎಂ.ಶಶಿ ಪೊನ್ನಪ್ಪ, ಉಪಾಧ್ಯಕ್ಷ ಮಲಚೀರ ಎಂ.ಪೊನ್ನಪ್ಪ, ಜಂಟಿ ಕಾರ್ಯದರ್ಶಿ ಅಪ್ಪಡೆರಂಡ ತಾರಾ ಸೋಮಯ್ಯ, ಗೌರವ ಕಾರ್ಯದರ್ಶಿ ಮುಕ್ಕಾಟಿರ ಬಿ.ಜೀವನ್, ಗೌರವ ಖಜಾಂಚಿ ಮಾಚಿಮಾಡ ಪಿ.ನಾಣಯ್ಯ, ಕೊಡವ ಸಮಾಜದ ಆಡಳಿತ ಮಂಡಳಿ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮುದಾಯ ಬಾಂಧವರು ಪಾಲ್ಗೊಂಡು ಸಂಭ್ರಮಿಸಿದರು.

ವಿವಿಧ ಸಾಲ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

ಮೈಸೂರು,ಸೆ.19–ಹನಿ ನೀರಾವರಿ ಅಳವಡಿಸಲು ಸಾಮಾನ್ಯ ವರ್ಗದವರಿಗೆ ಶೇ.75ರಷ್ಟು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ರೈತರಿಗೆ ಶೇ.90ರಷ್ಟು ಧನ ಸಹಾಯ ನೀಡಬಹುದಾಗಿತ್ತು. ಗರಿಷ್ಠ 5 ಹೆಕ್ಟೇರ್ ಪ್ರದೇಶಕ್ಕೆ ಸಹಾಯಧನ ಪಡೆಯಲು ಅವಕಾಶವಿದೆ. ತರಕಾರಿ ಮತ್ತು ಹೂವಿನ ಬೆಳೆಗೆ 2 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ನೀಡಲಾಗುವುದು. ರಾಷ್ಟ್ರೀಯ ಖಾದ್ಯತೈಲ ಅಭಿಯಾನದಡಿ ತಾಳೆ ಬೆಳೆ ಬೇಸಾಯ ಕೈಗೊಳ್ಳುವ ರೈತರಿಗೆ ಉಚಿತವಾಗಿ ಗಿಡಗಳನ್ನು ನೀಡುವುದರ ಜೊತೆಗೆ ನಿರ್ವಹಣೆ ಹಾಗೂ ಅಂತರ ಬೆಳೆಗೆ 4 ವರ್ಷಗಳವರೆಗೆ ಪ್ರತ್ಯೇಕ ಸಹಾಯಧನ ಲಭ್ಯವಿರುತ್ತದೆ. ಯಾಂತ್ರೀಕರಣ ಕಾರ್ಯಕ್ರಮದಲ್ಲಿ ವಿವಿಧ ಯಂತ್ರೋಪಕರಣಗಳಾದ ಬ್ರಷ್ ಕಟರ್, ಪವರ್ ವೀಡರ್ ಟೆಲಿಸ್ಕೋಪಿಕ್ ಪ್ರೂನರ್, ಚಾಪ್ ಕಟ್ಟರ್ ಇತ್ಯಾದಿ ಯಂತ್ರೋಪಕರಣ ಖರೀದಿಸಲು ಸಾಮಾನ್ಯ ರೈತರಿಗೆ ಶೇ.40 ಸಹಾಯಧನ ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಗೆ ಶೇ.50 ಸಹಾಯಧನ ನೀಡಲು ಅವಕಾಶವಿರುತ್ತದೆ. ಆಸಕ್ತರು ಕೂಡಲೇ ಮೈಸೂರು ತಾಲೂಕಿನ ಕಸಬಾ ಹೋಬಳಿ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ.ಸಂ: 9901387284, ವರುಣ ಹೋಬಳಿ ಸಹಾಯ ತೋಟಗಾರಿಕೆ ಅಧಿಕಾರಿ ಮೊ.ಸಂ: 8197392697, ಜಯಪುರ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ.ಸಂ: 8904673607, ಇಲವಾಲ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ.ಸಂ: 9986086262 ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್‌ನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೀರಿನ ಮಟ್ಟ

ಕೆಆರ್‌ಎಸ್ ಅಣೆಕಟ್ಟು	ಕಬಿನಿ ಅಣೆಕಟ್ಟು	ಹಾರಂಗಿ ಅಣೆಕಟ್ಟು
ಗರಿಷ್ಠ ಮಟ್ಟ 124.80 ಅಡಿ	ಗರಿಷ್ಠ ಮಟ್ಟ 2,284.00 ಅಡಿ	ಗರಿಷ್ಠ ಮಟ್ಟ 2,859.00 ಅಡಿ
ಇಂದಿನ ಮಟ್ಟ 97.06 ಅಡಿ	ಇಂದಿನ ಮಟ್ಟ 2,276.18 ಅಡಿ	ಇಂದಿನ ಮಟ್ಟ 2,858.08 ಅಡಿ
ಹಿಂದಿನ ವರ್ಷದ ಮಟ್ಟ 124.30 ಅಡಿ	ಹಿಂದಿನ ವರ್ಷದ ಮಟ್ಟ 2,282.87 ಅಡಿ	ಹಿಂದಿನ ವರ್ಷದ ಮಟ್ಟ 2,857.80 ಅಡಿ
ನಿನ್ನೆಯ ಮಟ್ಟ 96.86 ಅಡಿ	ನಿನ್ನೆಯ ಮಟ್ಟ 2,276.28 ಅಡಿ	ನಿನ್ನೆಯ ಮಟ್ಟ 2,858.15 ಅಡಿ

ರೋಲರ್ ಸ್ಕೇಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಹರ್ಷಿತಾಗೆ ಚಿನ್ನದ ಪದಕ



ಮೂರನೇ ಕರ್ನಾಟಕ ರಾಜ್ಯ ಶ್ರೇಯಾಂಕ ರೋಲರ್ ಸ್ಕೇಟಿಂಗ್ ಚಾಂಪಿಯನ್‌ಶಿಪ್ ಕಲಬುರಗಿಯಲ್ಲಿ ಕರ್ನಾಟಕ ರಾಜ್ಯ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ವತಿಯಿಂದ ಏರ್ಪಡಿಸಲಾಗಿತ್ತು. ಮೈಸೂರಿನ ಎಲೈಟ್ ರೋಲರ್ ಸ್ಕೇಟಿಂಗ್ ಸಂಸ್ಥೆಯ 6 ಕ್ರೀಡಾಪಟುಗಳು ಇದರಲ್ಲಿ ಭಾಗವಹಿಸಿದ್ದರು. ಇವರಲ್ಲಿ 11ರಿಂದ 14 ವಯೋಮಿತಿಯ ಕ್ವಾಡ್ ವಿಭಾಗದ ವಿ ಹರ್ಷಿತಾ 1 ಚಿನ್ನ, 1 ಬೆಳ್ಳಿ, 1 ಕಂಚು ಪದಕಗಳನ್ನು ಗೆದ್ದಿದ್ದಾರೆ. ಈಕೆ ಆದಿತ್ಯ ಎಸ್.ರಾವ್ ಹಾಗೂ ಎಂ.ಜಿ.ಉಮಾ ಅವರ ಮಾರ್ಗದರ್ಶನದಲ್ಲಿ ತರಬೇತಿ ಪಡೆಯುತ್ತಿದ್ದಾಳೆ. ಈಕೆ ಮೈಸೂರಿನ ಸುಹಾಸಿನಿ ಮತ್ತು ವಿಜಯ್‌ರಾವ್ ಅವರ ದ್ವಿತೀಯ ಪುತ್ರಿ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

20.9.2023 ಬುಧವಾರ, ಮಳೆ ನಕ್ಷತ್ರ: ಉತ್ತರಾ 14.09.2023ರಿಂದ 27.09.2023 ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ, ತಿಥಿ: ಪಂಚಮಿ, ನಕ್ಷತ್ರ: ವಿಶಾಖ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಕಟ್ಟೆ ಬಳಗ :** 8ನೇ ವರ್ಷದ ಗಣೇಶೋತ್ಸವ, ಬೆಳಗ್ಗೆ 10ಕ್ಕೆ ಶ್ರೀ ಮಹಾಗಣಪತಿ ಪ್ರತಿಷ್ಠಾಪನೆ, ಸಂಜೆ 4.30ಕ್ಕೆ ಮಕ್ಕಳಿಗೆ ಮತ್ತು ಮಹಿಳೆಯರಿಗೆ ಕ್ರೀಡಾ ಸ್ಪರ್ಧೆ, ಸ್ಥಳ: ಕೃಷ್ಣಮೂರ್ತಿಪುರಂ.

■ **ಮಹಾಜನ ಪ್ರೌಢಶಾಲೆ :** ಶ್ರೀ ವಿದ್ಯಾಗಣಪತಿ ಮಹಾಮಂಗಳಾರತಿ ಸಮಾರಂಭ, ಅಧ್ಯಕ್ಷತೆ : ಮಹಾಜನ ವಿದ್ಯಾಸಂಸ್ಥೆ ಕಾರ್ಯದರ್ಶಿ ಡಾ. ಟಿ. ವಿಜಯಲಕ್ಷ್ಮೀ ಮುರಳೀಧರ್ ಭಾಗವತ್, ಮುಖ್ಯ ಅತಿಥಿಗಳು : ಶ್ರೀರಾಮಕೃಷ್ಣ ವಿದ್ಯಾಶಾಲೆಯ ಶ್ರೀಸ್ವಾಮಿ ಅಘಹರಾನಂದಜಿ, ವಿಶೇಷ ಆಹ್ವಾನಿತರು : ಶ್ರೀಪಾಲ್, ಸ್ಥಳ: ಸುಬ್ಬುಲಕ್ಷ್ಮಿ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10.15ಕ್ಕೆ.

■ **ಜೆಎಸ್‌ಎಸ್ ಮಹಿಳಾ ಕಾಲೇಜು :** ದೀಕ್ಷಾರಂಭ, ಅಂಡರ್‌ಗ್ರಾಜ್ಯುಯೇಟ್ ವಿದ್ಯಾರ್ಥಿಗಳ ಸೇರ್ಪಡೆ ಕಾರ್ಯಕ್ರಮ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ: ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರ ಮಠ, ಮುಖ್ಯ ಅತಿಥಿಗಳು: ಹೆಚ್ಚುವರಿ ಜಿಲ್ಲಾಧಿಕಾರಿ ಪಿ.ಶಿವರಾಜು, ಅಧ್ಯಕ್ಷತೆ: ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಆರ್. ಮೂಗೇಶಪ್ಪ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಶ್ರೀ ಸ್ವಾಮಿ ವಿವೇಕಾನಂದ ಚಿಕಿತ್ಸಾ ಕೇಂದ್ರ :** ಮಾನಸಿಕ ಒತ್ತಡ, ಕೋಪ, ನಿದ್ರಾಹೀನತೆ, ನೆನಪಿನ ಶಕ್ತಿ, ಮೈಗ್ರೇನ್, ಥೈರಾಯ್ಡ್, ಮಂಡಿನೋವು, ವೆರಿಕೋಸ್ ವೇನ್, ಅಸ್ತಮಾ, ಸೈನಸ್, ಕತ್ತು ನೋವು, ಬೆನ್ನುನೋವು ಕಾಯಿಲೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಶ್ರೀ ಸ್ವಾಮಿ ವಿವೇಕಾನಂದ ಚಿಕಿತ್ಸಾ ಕೇಂದ್ರ, ವಿದ್ಯಾರಣ್ಯಪುರಂ, ಸಂಜೆ 4 ರಿಂದ.

■ **ಎಸ್‌ಪಿವಿಜಿಎಂಸಿ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** 62ನೇ ಪಾರಂಪರಿಕ ಸಂಗೀತೋತ್ಸವ, ಸಂಜೆ 5.30 ರಿಂದ ಗಣೇಶ ಪುರಾಣ, ವಾಚನ : ವಿದುಷಿ ಮಹಿಮಾ ಕಶ್ಯಪ, ವ್ಯಾಖ್ಯಾನ : ಡಾ. ಜ್ಯೋತಿ ಶಂಕರ, ಸಂಜೆ 6.45 ರಿಂದ ವಿದ್ವಾನ್ ಶೇಷಾಚಾರಿ ಮತ್ತು ವಿದ್ವಾನ್ ರಾಘವಾಚಾರಿ (ಹೈದರಾಬಾದ್ ಬ್ರದರ್ಸ್) ಅವರಿಂದ ದ್ವಂದ್ವ ಗಾಯನ, ವಿದ್ವಾನ್ ಎಚ್.ಎನ್.ಭಾಸ್ಕರ್–ವಯೋಲಿನ್, ವಿದ್ವಾನ್ ಮನ್ನಾರ್‌ಗುಡಿ ಈಶ್ವರನ್–ಮೃದಂಗ, ವಿದ್ವಾನ್ ಗಿರಿಧರ ಉಡುಪ–ಘಟಂ, ಸ್ಥಳ: 8ನೇ ಕ್ರಾಸ್, ವಿ.ವಿ.ಮೊಹಲ್ಲಾ.

■ **ಮೈಸೂರು ಧಾರ್ಮಿಕ ಪ್ರತಿಷ್ಠಾನ, ಮೈಸೂರು ಕಲಾ ಪ್ರತಿಷ್ಠಾನ:** ಮೈಸೂರು ಗಣೇಶ ಉತ್ಸವ–2023, ಸಂಜೆ 5.30 ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಂಜೆ 6.30 ರಿಂದ ಜಾನಪದ ಕಲೆ ಪ್ರದರ್ಶನ, ಸಂಜೆ 7.30 ರಿಂದ ಹರಿಚರಣ್ ಬ್ಯಾಂಡ್ ಮತ್ತು ರಕ್ಷಿತ ತಂಡದಿಂದ ಕಾರ್ಯಕ್ರಮ, ಸ್ಥಳ: ಮಾಧವಕೃಪ

■ **ರೋಗಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಉತ್ತರಾದಿ ಮಠ :** ಶ್ರೀ ಧನ್ವಂತರಿ ಜಯಂತಿ ಪ್ರಯುಕ್ತ ಸಪ್ತರಾತ್ರೋತ್ಸವ, ಪಂಡಿತ್ ವ್ಯಾಸನಕೆರೆ ಪ್ರಭಂಜನಾಚಾರ್ಯ ಅವರಿಂದ ಶ್ರೀಮದ್ಭಾಗವತ ಸಪ್ತಾಹ ಪ್ರವಚನ, ಸ್ಥಳ: ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 7 ರಿಂದ.

■ **ಇಂಡಿಯನ್ ಥಿಯೇಟರ್ ಫೌಂಡೇಶನ್:** ರಾಷ್ಟ್ರೀಯ ಮಕ್ಕಳ ರಂಗೋತ್ಸವ, ಮಧ್ಯಾಹ್ನ 3.30 ರಿಂದ ಕೃಷ್ಣೇಗೌಡನ ಆನೆ (ಕನ್ನಡ), ಸಂಜೆ 7 ರಿಂದ ಕೌಟೊ (ಹಿಂದಿ) ನಾಟಕ ಪ್ರದರ್ಶನ, ಸ್ಥಳ: ಕಿರು ರಂಗಮಂದಿರ.

■ **ಶ್ರೀ ಶ್ರೀ ಶ್ರೀ 101 ಗಣಪತಿ ದೇವಸ್ಥಾನ ಟ್ರಸ್ಟ್:** ಶ್ರೀ ಗೌರಿ–ಗಣೇಶ ಹಬ್ಬ ಮತ್ತು ಶ್ರೀ 101 ಗಣಪತಿ ಪ್ರತಿಷ್ಠಾನ, 69ನೇ ವಾರ್ಷಿಕೋತ್ಸವದ ಪ್ರಯುಕ್ತ ವಿಶೇಷ ಪೂಜಾ ಮಹೋತ್ಸವ, ಬೆಳಗ್ಗೆ 10ಕ್ಕೆ ದೇವತಾ ಪ್ರಾರ್ಥನೆ, ಮಹಾಸಂಕಲ್ಪ, ಗಂಗಾಪೂಜೆ, ನೂರೊಂದು ಗಣಪತಿಗಳಿಗೆ ತೈಲಾಭಿಷೇಕ, ಕ್ಷೀರಾಭಿಷೇಕ, ಪಂಚಾಮೃತ, ಮಹಾರುದ್ರಾಭಿಷೇಕ, ರಜತಲವಚಾಲಂಕಾರ, ವಿಶೇಷ ಹೂವಿನ ಅಲಂಕಾರ, ಸಂಜೆ 4ಕ್ಕೆ ಮಹಾಮಂಗಳಾರತಿ, ಕುಂಕುಮ ಅರ್ಚನೆಗಳು, ರಾಜೋಪಚಾರ, ತೀರ್ಥಪ್ರಸಾದ ವಿನಿಯೋಗ, ಸಂಜೆ 7 ರಿಂದ ಶ್ರೀ ಸುಮಾವಸಂತ ಮತ್ತು ಸಂಗಡಿಗರಿಂದ ಭಕ್ತಿಗೀತೆಗಳು, ಸ್ಥಳ:ದೇವಸ್ಥಾನ, ಕೆ.ಆರ್.ಮೊಹಲ್ಲಾ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಜಿ.ಎಸ್.ಎಸ್. ಯೋಗದ ಮಾತು, ಪ್ರಸ್ತುತಿ–ಡಿ. ಶ್ರೀಹರಿ, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಬಿ.ವಿ.ವಸಂತ ಕುಮಾರ್, 7.15 ಭಾವಗೀತೆಗಳು–ಸಿಂಚನ್ ದೀಕ್ಷಿತ್, ಬಿ.ಆರ್.ಛಾಯಾ, ಶಂಕರ್ ಶ್ಯಾನ್ ಭೋಗ್, 9.00 ವೃತ್ತಿ ಮಾರ್ಗದರ್ಶನ–ಇಂದಿರಾಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ರಾಧಾ ರೆಸ್. ಅವರೊಂದಿಗೆ ಮಾತುಕತೆ, 10.00 ಹಿಂದೂಸ್ಥಾನಿ ಸಂಗೀತ, ಡಿ.ಕೆ.ದಾತಾರ್–ವಯೋಲಿನ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ಮಡಿಕೇರಿ ನಾಗೇಂದ್ರ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ–ತಾಳ, ಲಯ ರಸಾಸ್ವಾದ, ಗಣೇಶ ಚತುರ್ಥಿಯ ಸಂದರ್ಭದಲ್ಲಿ ವಿಶೇಷ ಸಂಚಿಕೆ 'ನಾದ ವೇದ ಲಯ ಗಣಪ' ಪ್ರಸ್ತುತಿ– ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ, ಪ್ರಸ್ತುತಿ– ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಡಾ. ಮಾಧವಿ ಭಂಡಾರಿ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50ಕೃಷಿರಂಗ–ಕಿಸಾನ್‌ವಾಣಿ –ಸಾವಯವ ಸಂಪದ–ದ್ರವರೂಪದ ಗೊಬ್ಬರಗಳ ತಯಾರಿಕೆ ಹಾಗೂ ಬಳಕೆ ಕುರಿತು ಸಂವಾದದಲ್ಲಿ ಭಾಗವಹಿಸು ವವರು ಎಸ್.ಬಿ.ಮಮತಾ ಹಾಗೂ ಸಿದ್ದಪ್ಪ, ಪ್ರಸ್ತುತಿ–ಎನ್. ಕೇಶವಮೂರ್ತಿ, 9.30 ಹಿಂದೂಸ್ಥಾನಿ ಸಂಗೀತ–ಉಸ್ತಾದ್ ಅಲ್ಲಾಉದ್ದೀನ್ ಖಾನ್ ಸಾಹೇಬ್–ಸರೋಡ್, 10.30 ಸವಿನೆನಪು

ನೂತನ ಸಂಸತ್ ಭವನದಲ್ಲಿ ಕಲಾಪ ಕಲರವ....







ಮಂಗಳವಾರ ನೂತನ ಸಂಸತ್ ಭವನದಲ್ಲಿ ಕಲಾಪಗಳು ಆರಂಭಗೊಂಡವು. ಪ್ರಧಾನಮಂತ್ರಿ ನರೇಂದ್ರ ಮೋದಿ ಸದನದಲ್ಲಿ ವಿಪಕ್ಷ ಹಾಗೂ ಆಡಳಿತ ಪಕ್ಷ ಸದಸ್ಯರ ಆಸನಗಳತ್ತ ತೆರಳಿ ಎಲ್ಲರ ಕುಶಲೋಪರಿ ನಡೆಸಿ, ಶುಭ ಕೋರಿದರು.

ಹೊಸ ಸಂಸತ್ ಭವನದಲ್ಲಿ ವಿಶೇಷ ಅಧಿವೇಶನ

ಹಳೇ ಸಂಸತ್ ಭವನದಿಂದ ಹೊಸ ಸಂಸತ್ ಭವನಕ್ಕೆ ನಡೆದುಕೊಂಡು ಬಂದ ಪ್ರಧಾನಿ, ಸಚಿವರು, ಸದಸ್ಯರು...

ನವದೆಹಲಿ, ಸೆ.19– ಹೊಸ ಸಂಸತ್ ಭವನಕ್ಕೆ ಲೋಕಸಭಾ ಹಾಗೂ ರಾಜ್ಯಸಭಾ ಸದಸ್ಯರು ಇಂದು ಪ್ರವೇಶಿಸಿದರು. ಇದೇ ವೇಳೆ ಕೇಂದ್ರ ಸಚಿವರು ಮತ್ತು ಇತರ ಸಂಸದರೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರೂ ನಡೆದುಕೊಂಡೇ ನೂತನ ಕಟ್ಟಡದೊಳಗೆ ಆಗಮಿಸಿದರು.

ಇದರೊಂದಿಗೆ ನೂತನ ಸಂಸತ್ ಭವನದಲ್ಲಿ ವಿಶೇಷ ಅಧಿವೇಶನ ಆರಂಭವಾಯಿತು. ಮೊದಲ ದಿನದ ಲೋಕಸಭಾ ಹಾಗೂ ರಾಜ್ಯಸಭಾ ಕಲಾಪಗಳು ಹಳೆ ಸಂಸತ್ತಿನ ಭವನದಲ್ಲಿ ಜರುಗಿದ್ದವು.

ಇಂದಿನಿಂದ ಹೊಸ ಭವನದಲ್ಲಿ ಕಲಾಪಗಳು ಶುರುವಾಗಿವೆ. ಇದರ ಭಾಗವಾಗಿ ಹಳೆ ಸಂಸತ್ ಕಟ್ಟಡದ ಸೆಂಟ್ರಲ್ ಹಾಲ್‌ನಲ್ಲಿ ವಿದಾಯ ಕಾರ್ಯಕ್ರಮ ನಡೆಯಿತು. ಇದರಲ್ಲಿ ಎರಡೂ ಸದನಗಳ ಸದಸ್ಯರು ಪಾಲ್ಗೊಂಡರು. ನಂತರ ಸಂಸತ್ ಸಂಕೀರ್ಣಕ್ಕೆ ಎಲ್ಲರೂ ಆಗಮಿಸಿದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಗೃಹ ಸಚಿವ ಅಮಿತ್ ಶಾ ಮತ್ತು ಜೆ.ಪಿ. ನಡ್ಡಾ ಸೇರಿದಂತೆ ಅನೇಕರು, ಬಿಜೆಪಿ ನೇತೃತ್ವದ ಎನ್‌ಡಿಎ ಒಕ್ಕೂಟದ ಸಂಸದರು 'ಭಾರತ್ ಮಾತಾ ಕಿ ಜೈ' ಮತ್ತು 'ವಂದೇ ಮಾತರಂ' ಘೋಷಣೆಗಳನ್ನು ಕೂಗುತ್ತಾ ಹಿಂಬಾಲಿಸಿದರು. ಮತ್ತೊಂದೆಡೆ, ಹಲವಾರು ಪ್ರತಿಪಕ್ಷಗಳ ಸಂಸದರು ಕೂಡ ಹೊಸ ಸಂಸತ್ತಿನ ಸಂಕೀರ್ಣದ ಕಡೆಗೆ ಕಾಲ್ನಡಿಗೆಯಲ್ಲಿ ಆಗಮಿಸಿದರು. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಕೂಡ ಪ್ರತ್ಯೇಕವಾಗಿ ಹೊಸ ಸಂಸತ್ತಿಗೆ ಪ್ರವೇಶಿಸಿದರು. ನಂತರ ಲೋಕಸಭೆ ಕಲಾಪ ಆರಂಭವಾಯಿತು.

ಸದನವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿಯವರು, 'ನೂತನ ಸಂಸತ್ ಭವನದ ಮೊದಲ ಹಾಗೂ ಐತಿಹಾಸಿಕ ಅಧಿವೇಶನ ಇದಾಗಿದೆ. ಈ ಹೊಸ ಸಂಸತ್ ಭವನದಲ್ಲಿ ನಿಮ್ಮೆಲ್ಲರಿಗೂ ನನ್ನ ಹೃತ್ಪೂರ್ವಕ ಸ್ವಾಗತ ಕೋರುತ್ತೇನೆ. ಈ ಸಂದರ್ಭ ಹಲವಾರು ವಿಧಗಳಲ್ಲಿ ಅಭೂತಪೂರ್ವವಾಗಿದೆ. ಇದು ಆಜಾದಿ ಕಾ ಅಮೃತ್ ಕಾಲ್' ಎಂದು ಹೇಳಿದರು.

'ಸಂವಿಧಾನ ಸದನ': ಹಳೆಯ ಸಂಸತ್ ಕಟ್ಟಡಕ್ಕೆ ಪ್ರಧಾನಿ ಮೋದಿ ಹೊಸ ಹೆಸರು ಘೋಷಣೆ



ನವದೆಹಲಿ, ಸೆ.19– ಹೊಸ ಸಂಸತ್ ಭವನ ಉದ್ಘಾಟನೆ ಬಳಿಕ ಹೊಸ ಸಂಸತ್ ಭವನದಲ್ಲೇ ಈಗ ಅಧಿವೇಶನ ನಡೆಯುತ್ತಿದ್ದು, ಇದೀಗ ಹಳೆಯ ಸಂಸತ್ ಕಟ್ಟಡಕ್ಕೆ ಪ್ರಧಾನಿ ನರೇಂದ್ರ ಮೋದಿ 'ಸಂವಿಧಾನ ಸದನ' ಹೊಸ ಹೆಸರು ಘೋಷಣೆ ಮಾಡಿದ್ದಾರೆ.

ಹಳೆಯ ಸಂಸತ್ ಕಟ್ಟಡವನ್ನು 'ಸಂವಿಧಾನ ಸದನ್ (ಸಂವಿಧಾನ ಭವನ)' ಎಂದು ಕರೆಯಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಹಳೆಯ ಸಂಸತ್ ಕಟ್ಟಡದಲ್ಲಿ ಮಾಡಿದ ತಮ್ಮ ಕೊನೆಯ ಭಾಷಣದಲ್ಲಿ ಘೋಷಿಸಿದರು. ನಿನ್ನೆ ಲೋಕಸಭೆಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಹಳೆಯ ಕಟ್ಟಡದ ಪ್ರತಿ ಇಟ್ಟಿಗೆಗೆ ನಮನ ಸಲ್ಲಿಸಿದರು ಮತ್ತು ಸಂಸದರು 'ಹೊಸ ಭರವಸೆ ಮತ್ತು ಆತ್ಮವಿಶ್ವಾಸದಿಂದ' ಹೊಸ ಕಟ್ಟಡವನ್ನು ಪ್ರವೇಶಿಸುತ್ತಾರೆ ಎಂದು ಹೇಳಿದ್ದರು. ಕಟ್ಟಡವನ್ನು ಕೆಡವಲಾಗುವುದಿಲ್ಲ ಮತ್ತು ಸಂಸತ್ತಿನ ಕಾರ್ಯಕ್ರಮಗಳಿಗೆ ಹೆಚ್ಚು ಕ್ರಿಯಾತ್ಮಕ ಸ್ಥಳಗಳನ್ನು ಒದಗಿಸಲು ಅದನ್ನು 'ರಿಟ್ರೊಫಿಟ್' ಮಾಡಲಾಗುವುದು ಎಂದು ಸರ್ಕಾರಿ ಮೂಲಗಳು ಹೇಳುತ್ತವೆ. ಹಳೆಯ ಕಟ್ಟಡದ ಒಂದು ಭಾಗವನ್ನು ವಸ್ತುಸಂಗ್ರಹಾಲಯವಾಗಿ ಪರಿವರ್ತಿಸಬಹುದು ಎಂದು ಕೆಲವು ವರದಿಗಳು ಸೂಚಿಸುತ್ತವೆ. ಐತಿಹಾಸಿಕ ರಚನೆಯನ್ನು ಸಂರಕ್ಷಿಸಲಾಗುವುದು, ಏಕೆಂದರೆ ಇದು ದೇಶದ ಪುರಾತತ್ವ ಆಸ್ತಿಯಾಗಿದೆ' ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಧಾನಿ ಮೋದಿ ಅವರು ಎಲ್ಲಾ ಸಂಸದರನ್ನು ಕಾಲ್ನಡಿಗೆಯಲ್ಲಿ ಹೊಸ ಸಂಸತ್ ಕಟ್ಟಡಕ್ಕೆ ಕರೆದೊಯ್ದಿದ್ದು, ಇದು ಇಂದಿನಿಂದ ಅಧಿಕೃತ ಭಾರತೀಯ ಸಂಸತ್ತಾಗಿರಲಿದೆ.

ಬ್ರಿಟಿಷ್ ವಾಸ್ತುಶಿಲ್ಪಿಗಳಾದ ಸರ್ ಎಡ್ವಿನ್ ಲುಟಿಯೆನ್ಸ್ ಮತ್ತು ಹರ್ಬರ್ಟ್ ಬೇಕರ್ ವಿನ್ಯಾಸಗೊಳಿಸಿದ ಸಾಂಪ್ರದಾಯಿಕ ಹಳೆಯ ಕಟ್ಟಡವು 1927ರಲ್ಲಿ ಪೂರ್ಣಗೊಂಡಿತ್ತು. ಈಗ 96 ವರ್ಷ ಹಳೆಯದ್ದಾಗಿದೆ. ವರ್ಷಗಳಲ್ಲಿ, ಇಂದಿನ ಅವಶ್ಯಕತೆಗಳಿಗೆ ಇದು ಅಸಮರ್ಪಕವಾಗಿದೆ ಎಂದು ಕಂಡುಬಂದಿದೆ.

ಹೊಸ ಭವಿಷ್ಯಕ್ಕಾಗಿ ಹೊಸ ಆರಂಭ: ಹಳೇ ಸಂಸತ್ ಭವನದಲ್ಲಿ ಕಲಾಪಕ್ಕೆ ವಿದಾಯ

ನವದೆಹಲಿ, ಸೆ.19– ನಾವು ಹೊಸ ಭವಿಷ್ಯಕ್ಕಾಗಿ ಹೊಸ ಆರಂಭ ಮಾಡುತ್ತಿದ್ದೇವೆ. 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಬದ್ಧತೆಯನ್ನು ಸಂಸದರು ಪುನರುಚ್ಚರಿಸಬೇಕು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಮಂಗಳವಾರ ಹೇಳಿದರು.

ಹಳೇ ಸಂಸತ್ ಭವನದಲ್ಲಿ ಕಲಾಪಕ್ಕೆ ವಿದಾಯ ಹಿನ್ನೆಲೆ ಸಂಸತ್ ಭವನದ ಸೆಂಟ್ರಲ್ ಹಾಲ್‌ನಲ್ಲಿ ಪ್ರಧಾನಿ ಮೋದಿ ಅವರು ಭಾಷಣ ಮಾಡಿದರು.

ನಮ್ಮ ಚಿಂತನೆಯ ಕ್ಯಾನ್ವಾಸ್ ಅನ್ನು ನಾವು ವಿಸ್ತರಿಸಲು ಸಾಧ್ಯವಾಗದಿದ್ದರೆ, ನಾವು ಭವ್ಯ ಭಾರತದ ಚಿತ್ರವನ್ನು ಬಿಡಿಸಲು ಸಾಧ್ಯವಾಗುವುದಿಲ್ಲ. 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಬದ್ಧತೆಯನ್ನು ಸಂಸದರು ಪುನರುಚ್ಚರಿಸಬೇಕು. ಸಣ್ಣ ಸಮಸ್ಯೆಗಳಲ್ಲಿ ಸಿಲುಕಿ ಒದ್ದಾಡುವ ಸಮಯ ಮುಗಿದಿದೆ. ನಾವು ಆತ್ಮನಿರ್ಭರ್ ಆಗುವ ಗುರಿಯನ್ನು ಮುಟ್ಟಬೇಕು. ಇದು ಈ ಕಾಲದ ಅಗತ್ಯ, ಇದು ಪ್ರತಿಯೊಬ್ಬರ ಕರ್ತವ್ಯ. ಇದಕ್ಕೆ ಕೇವಲ ಹೃದಯ ಬೇಕು. ಅದೂ ದೇಶಕ್ಕಾಗಿ ಬೇಕಿದೆ ಎಂದು ಹೇಳಿದರು.

ಸಂಸತ್ತಿನಲ್ಲಿ ಮಾಡಿದ ಪ್ರತಿಯೊಂದು ಕಾನೂನು, ನಡೆಯುವ ಪ್ರತಿಯೊಂದು ಚರ್ಚೆ ಮತ್ತು ನೀಡುವ ಪ್ರತಿಯೊಂದು ಸಂಕೇತವು ಭಾರತೀಯ ಆಶಯವನ್ನು ಪ್ರೋತ್ಸಾಹಿಸಬೇಕು. ಇದು ನಮ್ಮ ಜವಾಬ್ದಾರಿ ಮತ್ತು ಪ್ರತಿಯೊಬ್ಬ ಭಾರತೀಯನ ನಿರೀಕ್ಷೆಯಾಗಿದೆ. ಇಲ್ಲಿ ಏನೇ ಸುಧಾರಣೆಗಳನ್ನು ಮಾಡಿದರೂ ಭಾರತೀಯ ಆಕಾಂಕ್ಷೆ ಇರಬೇಕು. ಚಿಕ್ಕ ಕ್ಯಾನ್ವಾಸ್‌ನಲ್ಲಿ ನಾವು ದೊಡ್ಡ ಚಿತ್ರವನ್ನು ಬಿಡಿಸಲು ಸಾಧ್ಯವಿಲ್ಲ. ಅದೇ ರೀತಿಯಲ್ಲಿ, ನಮ್ಮ ಆಲೋಚನೆಯ ಕ್ಯಾನ್ವಾಸ್ ಅನ್ನು ದೊಡ್ಡದಾಗಿಸಲು ಸಾಧ್ಯವಾಗದಿದ್ದರೆ, ಭವ್ಯ ಭಾರತದ ಚಿತ್ರವನ್ನು ಬಿಡಿಸಲು ಸಾಧ್ಯವಾಗುವುದಿಲ್ಲ.


ಇಂದು, ನಾವು ಹೊಸ ಸಂಸತ್ತಿನ ಕಟ್ಟಡದಲ್ಲಿ ಹೊಸ ಭವಿಷ್ಯದ ಆರಂಭ ಮಾಡುತ್ತಿದ್ದೇವೆ ಇಂದು ನಾವು ಅಭಿವೃದ್ಧಿ ಹೊಂದಿದ ಭಾರತದ ಸಂಕಲ್ಪವನ್ನು ಪೂರೈಸುವ ಸಂಕಲ್ಪದೊಂದಿಗೆ ಹೊಸ ಕಟ್ಟಡಕ್ಕೆ ಹೋಗುತ್ತಿದ್ದೇವೆ. ಭಾರತವು ಹೊಸತನದಿಂದ ಪುನರುಜ್ಜೀವನಗೊಂಡಿದೆ, ದೇಶವು ಹೊಸ ಶಕ್ತಿಯಿಂದ ತುಂಬಿದೆ.

ಸ್ವಾತಂತ್ರ್ಯ ದಿನಾಚರಣೆಯಲ್ಲಿ ಕೆಂಪು ಕೋಟೆಯಲ್ಲಿ ಮಾಡಿದ್ದ ಭಾಷಣದಲ್ಲಿ ಹೇಳಿದ್ದೆ. ಯಹಿ ಸಮಯ ಹೈ, ಸಹಿ ಸಮಯ ಹೈ ಎಂದು. ನಾವು ಒಂದರ ನಂತರ ಒಂದರಂತೆ ಬೆಳವಣಿಗೆಗಳನ್ನು ನೋಡಿದರೆ, ಅವುಗಳಲ್ಲಿ ಪ್ರತಿಯೊಂದೂ ಇಂದು ಭಾರತವು ಹೊಸ ರೀತಿಯಲ್ಲಿ ಪುನರುಜ್ಜೀವನಗೊಂಡಿದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಭಾರತವು ಹೊಸ ಶಕ್ತಿಯಿಂದ ತುಂಬಿದೆ. ಈ ಶಕ್ತಿಯು ಕೋಟ್ಯಾಂತರ ಜನರ ಕನಸುಗಳನ್ನು ಸಂಕಲ್ಪಗಳಾಗಿ ಬದಲಾಯಿಸಬಹುದು. ಆ ನಿರ್ಣಯಗಳನ್ನು ನನಸಾಗಿಸಬಹುದು ಎಂದು ತಿಳಿಸಿದರು.

ಇದೇ ವೇಳೆ ಹಳೆಯ ಸಂಸತ್ ಕಟ್ಟಡದಲ್ಲಿ ಅಂಗೀಕರಿಸಲಾದ 'ತ್ರಿವಳಿ ತಲಾಖ್' ಮತ್ತು 370ನೇ ವಿಧಿಯ ರದ್ದತಿ ಸೇರಿದಂತೆ ಹಲವು ಕಾನೂನುಗಳನ್ನು ಮೋದಿಯವರು ಸ್ಮರಿಸಿದರು. ಇದುವರೆಗೆ ಲೋಕಸಭೆ ಮತ್ತು ರಾಜ್ಯಸಭೆ ಸೇರಿ 4 ಸಾವಿರಕ್ಕೂ ಹೆಚ್ಚು ಕಾನೂನುಗಳನ್ನು ಅಂಗೀಕರಿಸಿವೆ ಎಂದರು. ಈ ಸಂಸತ್ತಿನಿಂದ ಮುಸ್ಲಿಂ ತಾಯಂದಿರು ಮತ್ತು ಸಹೋದರಿಯರಿಗೆ ನ್ಯಾಯ ಸಿಕ್ಕಿತು, ಇಲ್ಲಿಂದ 'ತ್ರಿವಳಿ ತಲಾಖ್' ವಿರೋಧಿಸುವ ಕಾನೂನನ್ನು ಒಗ್ಗಟ್ಟಿನಿಂದ ಅಂಗೀಕರಿಸಲಾಯಿತು. ಕಳೆದ ಕೆಲವು ವರ್ಷಗಳ ಹಿಂದೆ ಸಂಸತ್ತು ಕೂಡ ತೃತೀಯಲಿಂಗಿಗಳಿಗೆ ನ್ಯಾಯ ನೀಡುವ ಕಾನೂನುಗಳನ್ನು ಅಂಗೀಕರಿಸಿದೆ. ವಿಶೇಷಚೇತನರಿಗೆ ಉಜ್ವಲ ಭವಿಷ್ಯವನ್ನು ಖಾತರಿಪಡಿಸುವ ಕಾನೂನುಗಳನ್ನು ನಾವು ಒಗ್ಗಟ್ಟಿನಿಂದ ಅಂಗೀಕರಿಸಿದ್ದೇವೆ. ಸಂಸತ್ತಿನಲ್ಲಿ 370 ನೇ ವಿಧಿಯನ್ನು ರದ್ದುಗೊಳಿಸುವ ಅವಕಾಶವನ್ನು ನಾವು ಪಡೆದುಕೊಂಡಿದ್ದೇವೆ. ತೃತೀಯ ಲಿಂಗಿಗಳಿಗೆ ನ್ಯಾಯ ಒದಗಿಸುವ ಕಾನೂನುಗಳನ್ನು ಜಾರಿಗೊಳಿಸಿದೆ, ಇದೀಗ ಅವರು ಉದ್ಯೋಗ, ಶಿಕ್ಷಣ, ಆರೋಗ್ಯ ಮತ್ತು ಇತರ ಸೌಲಭ್ಯಗಳನ್ನು ಗೌರವದಿಂದ ಪಡೆಯುತ್ತಿದ್ದಾರೆಂದು ಹೇಳಿದರು.

ಇದು ನಮ್ಮದು: ಮಹಿಳಾ ಮೀಸಲಾತಿ ಮಸೂದೆ ಕುರಿತು ಸೋನಿಯಾ ಗಾಂಧಿ ಹೇಳಿಕೆ

ನವದೆಹಲಿ, ಸೆ.19– ಕಾಂಗ್ರೆಸ್ ಪಕ್ಷದ ಮುಖ್ಯಸ್ಥೆ ಸೋನಿಯಾ ಗಾಂಧಿ, 'ಈ ಮಸೂದೆ ನಮ್ಮದು' ಎಂದು ಮಂಗಳವಾರ ಹೇಳಿದ್ದಾರೆ.



ಐದು ದಿನಗಳವರೆಗೆ ನಡೆಯಲಿರುವ ಸಂಸತ್‌ನ ವಿಶೇಷ ಅಧಿವೇಶ ನಿನ್ನೆಯಿಂದ ಆರಂಭಗೊಂಡಿದೆ. ಇಂದಿನಿಂದ ಕಲಾಪಗಳು ಹೊಸ ಸಂಸತ್ ಭವನದಲ್ಲಿ ನಡೆಯುತ್ತಿವೆ. ಹೊಸ ಸಂಸತ್ ಭವನದಲ್ಲಿ ಮಹಿಳಾ ಮೀಸಲಾತಿ ಮಸೂದೆ ಮಂಡಿಸಲಾಗಿದೆ.

ಈ ನಡುವೆ ಕಲಾಪದಲ್ಲಿ ಪಾಲ್ಗೊಳ್ಳಲು ಸಂಸತ್ತಿಗೆ ಪ್ರವೇಶಿಸಿದ ವೇಳೆ ಮಸೂದೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಸೋನಿಯಾ ಗಾಂಧಿಯವರು, 'ಇದು ನಮ್ಮದು, ಅಪ್ನಾ ಹೈ' ಎಂದು ಹೇಳಿದ್ದಾರೆ.

ಮಹಿಳಾ ಮೀಸಲಾತಿ ಮಸೂದೆ ಚುನಾವಣಾ ಜುಮ್ಲಾ, ಮಹಿಳೆಯರಿಗೆ ದ್ರೋಹ: ಕಾಂಗ್ರೆಸ್

ನವದೆಹಲಿ, ಸೆ.19– ಕೇಂದ್ರ ಸರ್ಕಾರ ಮಂಗಳವಾರ ಲೋಕಸಭೆಯಲ್ಲಿ ಮಂಡಿಸಿದ ಮಹಿಳಾ ಮೀಸಲಾತಿ ಮಸೂದೆ "ಚುನಾವಣಾ ಜುಮ್ಲಾ" ಎಂದು ಟೀಕಿಸಿದ ಕಾಂಗ್ರೆಸ್, "ಮಹಿಳೆಯರ ಭರವಸೆಗೆ ದೊಡ್ಡ ದ್ರೋಹ" ಮಾಡಲಾಗಿದೆ ಎಂದು ಆರೋಪಿಸಿದೆ. ಜನಗಣತಿ ಮತ್ತು ಡಿಲಿಮಿಟೇಶನ್ ನಡೆಸಿದ ನಂತರವೇ ಮಹಿಳಾ ಮೀಸಲಾತಿ ಜಾರಿಗೆ ಬರಲಿದೆ ಎಂದು ಕೇಂದ್ರ ಸರ್ಕಾರ ಹೇಳಿರುವುದು ಮಹಿಳೆಯರಿಗೆ ಮಾಡಿದ ದ್ರೋಹ ಎಂದು ಕಾಂಗ್ರೆಸ್ ವಾಗ್ದಾಳಿ ನಡೆಸಿದೆ.

2024ರ ಚುನಾವಣೆಗೂ ಮುನ್ನವೇ ಜನಗಣತಿ ಮತ್ತು ಡಿಲಿಮಿಟೇಶನ್ ನಡೆಯಲಿದೆಯೇ ಎಂದು ಪ್ರಶ್ನಿಸಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ನರೇಂದ್ರ ಮೋದಿ ಸರ್ಕಾರ 2021ರ ನಂತರ ದಶಕ ಕಳೆದರೂ ಜನಗಣತಿಯನ್ನು ಇನ್ನೂ ನಡೆಸಿಲ್ಲ ಎಂದು ಹೇಳಿದ್ದಾರೆ.

Xನಲ್ಲಿ ಪೋಸ್ಟ್ ಮಾಡಿದ ಜೈರಾಮ್ ರಮೇಶ್, ಚುನಾವಣಾ ಜುಮ್ಲಾಗಳಲ್ಲಿ, ಇದು ಎಲ್ಲಕ್ಕಿಂತ ದೊಡ್ಡ ಜುಮ್ಲಾ! ಕೋಟ್ಯಾಂತರ ಭಾರತೀಯ ಮಹಿಳೆಯರು ಮತ್ತು ಯುವತಿಯರ ಭರವಸೆಗಳಿಗೆ ದ್ರೋಹ ಎಸಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ನಾವು ಮೊದಲೇ ಹೇಳಿದಂತೆ, ಮೋದಿ ಸರ್ಕಾರವು 2021ರ ನಂತರ ದಶಕ ಕಳೆದರೂ ಜನಗಣತಿಯನ್ನು ನಡೆಸಿಲ್ಲ. G20ನಲ್ಲಿ ದಶಕ ಕಳೆದರೂ ಜನಗಣತಿ ಕೈಗೊಳ್ಳಲು ವಿಫಲವಾದ ಏಕೈಕ ದೇಶ ಭಾರತ. ಈಗ ಜನಗಣತಿ ಅನುಸರಿಸಿ ಮಹಿಳಾ ಮೀಸಲಾತಿ ಜಾರಿಗೆ ಬರಲಿದೆ ಎಂದು ಕೇಂದ್ರ ಸರ್ಕಾರ ಹೇಳುತ್ತಿದೆ. ಈ ಜನಗಣತಿ ಯಾವಾಗ ನಡೆಯುತ್ತದೆ ಎಂದು ರಮೇಶ್ ಪ್ರಶ್ನಿಸಿದ್ದಾರೆ.

ಮಹಿಳಾ ಮೀಸಲಾತಿ ಮಸೂದೆ ಮಂಡನೆ

ಒಂದನೇ ಪುಟದಿಂದ

ಪಾತ್ರವನ್ನು ವಹಿಸುವುದು ಅತ್ಯಗತ್ಯ. ಈ ಕಾರಣಕ್ಕಾಗಿಯೇ ಈ ದಿನ ಅಮರವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಸುಮಾರು 27 ವರ್ಷಗಳಲ್ಲಿ ಏಳನೇ ಬಾರಿಗೆ ಮಹಿಳಾ ಮೀಸಲಾತಿ ಮಸೂದೆಯನ್ನು ಮಂಡಿಸಿದರು.

ಈ ಮಸೂದೆ ಮಂಡನೆ ಇದೇ ಮೊದಲಲ್ಲ: ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಮಸೂದೆಯನ್ನು ಮಂಡಿಸುತ್ತಿರುವುದು ಇದೇ ಮೊದಲಲ್ಲ. 1996ರಲ್ಲಿ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಸ್ಥಾನಗಳನ್ನು ಮೀಸಲಿಡಲು ಸಂವಿಧಾನವನ್ನು ತಿದ್ದುಪಡಿ ಮಾಡಲು ಲೋಕಸಭೆಯಲ್ಲಿ ಪರಿಚಯಿಸಲಾಯಿತು. ಪ್ರಧಾನಿ ದೇವೇಗೌಡರ ನೇತೃತ್ವದ ಸಂಯುಕ್ತ ರಂಗ ಸರ್ಕಾರ ಈ ಮಸೂದೆಯನ್ನು ಮಂಡಿಸಿತ್ತು.

ಮಸೂದೆಯು ಸಂವಿಧಾನದ 330 ಮತ್ತು 332ನೇ ವಿಧಿಗಳಿಗೆ ತಿದ್ದುಪಡಿ ತರಲು ಪ್ರಸ್ತಾಪಿಸಿತ್ತು. ಲೋಕಸಭೆಯ 543 ಸ್ಥಾನಗಳಲ್ಲಿ 181 ಮತ್ತು ರಾಜ್ಯ ವಿಧಾನಸಭೆಗಳಲ್ಲಿ 4,109 ಸ್ಥಾನಗಳಲ್ಲಿ 1,370 ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಲು ಅದು ಪ್ರಯತ್ನಿಸಿತು. ಹಂಚಿಕೆಯಾದ ಸ್ಥಾನಗಳನ್ನು ಸರದಿಯ ಮೂಲಕ ನಿರ್ಧರಿಸಲಾಗುತ್ತದೆ. ಪ್ರತಿ ಚುನಾವಣೆಯಲ್ಲಿ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಮಹಿಳೆಯರಿಗಾಗಿ ಕಾಯ್ದಿರಿಸಲಾಗುತ್ತದೆ.

1996ರ ಸೆಪ್ಟೆಂಬರ್‌ನಲ್ಲಿ ಮಸೂದೆಯನ್ನು ಲೋಕಸಭೆಯಲ್ಲಿ ಪರಿಚಯಿಸಲಾಗಿದ್ದು, 1996ರ ಸೆ.12ರಂದು ಅಂಗೀಕರಿಸಲಾಯಿತು. ಆದರೆ, ಆ ಸಮಯದಲ್ಲಿ ಸರ್ಕಾರಕ್ಕೆ ಬಹುಮತದ ಕೊರತೆಯಿದ್ದ ರಾಜ್ಯಸಭೆಯಲ್ಲಿ ಅದು ಸ್ಥಗಿತಗೊಂಡಿತು. 1997ರಲ್ಲಿ ರಾಜ್ಯಸಭೆಯಲ್ಲಿ ಮಸೂದೆ ಅಂಗೀಕಾರವಾಗುವ ಮುನ್ನವೇ ಸಂಯುಕ್ತ ರಂಗ ಸರ್ಕಾರ ಪತನಗೊಂಡಿತು.

ನಂತರ 1998, 1999, 2008 ಮತ್ತು 2010ರಲ್ಲಿ ಲೋಕಸಭೆಯಲ್ಲಿ ಮಸೂದೆಯನ್ನು ಪುನಃ ಪರಿಚಯಿಸಲಾಯಿತು. ಆದರೆ ಹೆಚ್ಚಿನ ಪ್ರಮುಖ ರಾಷ್ಟ್ರೀಯ ಪಕ್ಷಗಳ ಬೆಂಬಲದ ಹೊರತಾಗಿಯೂ ಅಂಗೀಕಾರವಾಗಲಿಲ್ಲ. ಮಸೂದೆಯನ್ನು 1998ರಲ್ಲಿ ಜಂಟಿ ಸಂಸದೀಯ ಸಮಿತಿಗೆ ಉಲ್ಲೇಖಿಸಲಾಯಿತು. ಇದು ಪರಿಷ್ಕೃತ ಕರಡು ಮಸೂದೆಯೊಂದಿಗೆ 1999ರಲ್ಲಿ ತನ್ನ ಅಂತಿಮ ವರದಿಯನ್ನು ಮಂಡಿಸಿತು. ಆದರೆ, ಆಗಿನ ಸರ್ಕಾರ ಶಾಸನ ರೂಪಿಸಲು ಮುಂದಾಗಿರಲಿಲ್ಲ.

2008ರಲ್ಲಿ ಮಸೂದೆಯನ್ನು ಮತ್ತೆ 14ನೇ ಲೋಕಸಭೆಯಲ್ಲಿ ಪರಿಚಯಿಸಲಾಯಿತು. ಅಲ್ಲಿ ಅದನ್ನು RJD ಮತ್ತು LJPನ ಸಭಾ ತ್ಯಾಗದ ನಡುವೆ 9 ಮಾರ್ಚ್ 2010ರಂದು ಅಂಗೀಕರಿಸಲಾಯಿತು. ಮನಮೋಹನ್ ಸಿಂಗ್ ನೇತೃತ್ವದ ಯುಪಿಎ–II ಸರ್ಕಾರವು ಅದನ್ನು 9 ಮಾರ್ಚ್ 2010ರಂದು ರಾಜ್ಯಸಭೆಯಲ್ಲಿ ಮಂಡಿಸಿತು. ಆದಾಗ್ಯೂ, 2014ರಲ್ಲಿ 15ನೇ ಲೋಕಸಭೆಯ ವಿಸರ್ಜನೆಯ ನಂತರ ಮಸೂದೆ ರದ್ದಾಗಿತ್ತು. ರಾಜ್ಯಸಭೆಯಲ್ಲಿ ಮಸೂದೆಗೆ ಒಮ್ಮತದ ಕೊರತೆಯು ಪ್ರಮುಖ ಅಡ್ಡಿಯಾಗಿತ್ತು. ಅಂದು ಆ ಸರ್ಕಾರಗಳಿಗೆ ಬಹುಮತದ ಕೊರತೆಯಿತ್ತು. ಮೂರನೇ ಒಂದು ಭಾಗದಷ್ಟು ಸೀಟುಗಳನ್ನು ಮಹಿಳೆಯರಿಗೆ ಮೀಸಲಿಡಬೇಕೆಂಬ ಬೇಡಿಕೆಯೂ ವಿವಾದದ ವಿಷಯವಾಗಿದೆ.

ಬಹುತೇಕ ಪ್ರಮುಖ ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ್, ಬಿಜೆಪಿ ಮತ್ತು ಎಡ ಪಕ್ಷಗಳು ಮಸೂದೆಯನ್ನು ಬಹಿರಂಗವಾಗಿ ಬೆಂಬಲಿಸಿವೆ. ಆದಾಗ್ಯೂ, ವಿಧಾನಗಳು ಮತ್ತು ಮೀಸಲಾತಿಯ ವ್ಯಾಪ್ತಿಯ ಬಗ್ಗೆ ಪಕ್ಷಗಳಲ್ಲಿ ಭಿನ್ನಾಭಿಪ್ರಾಯಗಳಿವೆ. ಎಸ್‌ಪಿ, ಬಿಎಸ್‌ಪಿ, ಟಿಡಿಪಿ ಮತ್ತು ಎಐಎಡಿಎಂಕೆಯಂತಹ ಕೆಲವು ಪ್ರಮುಖ ಪ್ರಾದೇಶಿಕ ಪಕ್ಷಗಳು ಸಹ ವಿವಿಧ ಹಂತಗಳಲ್ಲಿ ಬೆಂಬಲವನ್ನು ನೀಡಿವೆ. ಮುಖ್ಯವಾಗಿ ವಿರೋಧವು ಸಮಾಜವಾದಿ ಪಕ್ಷ, ಆರ್‌ಜೆಡಿ ಮತ್ತು ಜೆಡಿಯುನಿಂದ ಹುಟ್ಟಿಕೊಂಡಿತ್ತು. ಲಾಲು ಪ್ರಸಾದ್ ಯಾದವ್ ಮತ್ತು ಶರದ್ ಯಾದವ್ ಅವರಂತಹ OBCನಾಯಕರು ಈ ಮಸೂದೆಯು ಕೇವಲ ಗಣ್ಯ ಮಹಿಳೆಯರಿಗೆ ಮಾತ್ರ ಒಲವು ನೀಡುತ್ತದೆ ಮತ್ತು OBC/SC/ST ಮಹಿಳೆಯರ ರಾಜಕೀಯ ಪ್ರಾತಿನಿಧ್ಯವನ್ನು ತಿಳಿಸುವುದಿಲ್ಲ ಎಂದು ವಾದಿಸಿದ್ದಾರೆ. ಆದಾಗ್ಯೂ, ಮಾಯಾವತಿ ಮತ್ತು ಮೀರಾ ಕುಮಾರ್ ಅವರಂತಹ ಕೆಲವು ಪ್ರಮುಖ OBC/ದಲಿತ ಮಹಿಳಾ ನಾಯಕರು ಮಸೂದೆಯನ್ನು ಅನುಮೋದಿಸಿದ್ದಾರೆ. 2019ರಲ್ಲಿ ಲೋಕಸಭೆ ಚುನಾವಣೆ ಮತ್ತು ರಾಜ್ಯಸಭೆಯ ರಚನೆಯ ಬದಲಾವಣೆಯು ಮಸೂದೆಯನ್ನು ಅಂಗೀಕರಿಸುವ ಭರವಸೆಯನ್ನು ಪುನರುಜ್ಜೀವನಗೊಳಿಸಿದೆ. ಮೋದಿ ಸರ್ಕಾರ ಮಸೂದೆಗೆ ಬೆಂಬಲ ವ್ಯಕ್ತಪಡಿಸಿದೆ. ಕಾಂಗ್ರೆಸ್ ತನ್ನ ನಿಲುವನ್ನು ಪರಿಶೀಲಿಸಲು ಮತ್ತು ಆರಂಭಿಕ ಅಂಗೀಕಾರವನ್ನು ಖಚಿತಪಡಿಸಿಕೊಳ್ಳಲು ಮಾರ್ಗಗಳನ್ನು ಶಿಫಾರಸು ಮಾಡಲು ಮನೀಶ್ ತಿವಾರಿ ನೇತೃತ್ವದ ಸಮಿತಿಯನ್ನು 2019ರಲ್ಲಿ ನೇಮಿಸಿತು.

ನಕ್ಕರೆ ಅದೇ ಸ್ವರ್ಗ

ಟೀಚರ್ : "ಬಸ್ಯಾ, ಮಳೆ ಬರುವ ಮುನ್ನ ಮಿಂಚು ಯಾಕೆ ಬರುತ್ತೆ?"
ಬಸ್ಯಾ : "ನೆಲ ಒದ್ದೆ ಇದೆಯೋ ಇಲ್ವೋ ಅಂತ ದೇವರು ಮಳೆಗೆ ಮುನ್ನ ಟಾರ್ಚ್ ಹಾಕಿ ನೋಡ್ತಾನೆ ಅದಕ್ಕೆ!"

ಮೈಸೂರು ಮಿತ್ರ
ಬುಧವಾರ, 20 ಸೆಪ್ಟೆಂಬರ್ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಸಾಧ್ಯವೇ ಇಲ್ಲ ಎಂದುಕೊಂಡರೆ ಏನನ್ನೂ ಸಾಧಿಸಲಾಗದು, ಪ್ರಯತ್ನಿಸುವುದರಿಂದ ನಷ್ಟವೇನಿದೆ, ಗೆದ್ದರೆ ಸಂತೋಷವಾಗುತ್ತದೆ. ಸೋತರೆ ಅನುಭವ ಸಿಗುತ್ತದೆ. –ನುಡಿಮುತ್ತು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಆಳ ನೋಡಿ ಪಾಯ ಹಾಕು

ನಿಮ್ಮ ಪತ್ರಗಳು

ಸಿಗ್ನಲ್ ಇರುವ ವೃತ್ತಗಳಲ್ಲಿ ಬ್ಯಾನರ್ ಅಳವಡಿಕೆಗೆ ಅವಕಾಶ ನೀಡಬೇಡಿ



ಮಾನ್ಯರೆ,

ಮೈಸೂರಿನ ಮುಖ್ಯ ರಸ್ತೆಗಳಾದ ವಿಶ್ವಮಾನವ ಜೋಡಿ ರಸ್ತೆ, ಕುಕ್ಕರಹಳ್ಳಿಕೆರೆಯ ಮುಂಭಾಗ, ಮಾನಸಗಂಗೋತ್ರಿ, ಬೋಗಾದಿ, ರಾಮಸ್ವಾಮಿ ಸರ್ಕಲ್ ಇನ್ನಿತರ ಪ್ರಮುಖ ಸರ್ಕಲ್‌ಗಳಲ್ಲಿ ಬ್ಯಾನರ್‌ಗಳನ್ನು ಅಳವಡಿಸುತ್ತಿದ್ದು, ಇದರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ.

ಪ್ರತಿನಿತ್ಯ ಸಾವಿರಾರು ವಾಹನ ಸವಾರರು, ವಿದ್ಯಾರ್ಥಿಗಳು ಈ ಸರ್ಕಲ್ ಮೂಲಕ ಸಂಚರಿಸುತ್ತಾರೆ. ನಗರದ ಪ್ರಮುಖ ಸರ್ಕಲ್‌ಗಳಲ್ಲಿ ಹುಟ್ಟುಹಬ್ಬದ ಪ್ರಯುಕ್ತ ಬ್ಯಾನರ್‌ಗಳನ್ನು ದೊಡ್ಡದಾಗಿ ಸಾರ್ವಜನಿಕರು ನೋಡಲಿ ಎಂದು ಹಾಕುವುದೇ? ಅಥವಾ ಸಾರ್ವಜನಿಕರು ಜನುಮದಿನದಕ್ಕೆ ಶುಭ ಹಾರೈಸುತ್ತಾರೆ ಎಂದು ಹಾಕುವುದೇ? ಅರ್ಥವಾಗುತ್ತಿಲ್ಲ. ಸಿಗ್ನಲ್‌ನಲ್ಲಿ ಬ್ಯಾನರ್ ಅಳವಡಿಸುವುದರಿಂದ ವಾಹನ ಸವಾರರ ಗಮನ ಬ್ಯಾನರ್‌ನತ್ತ ಸೆಳೆದಾಗ ರಸ್ತೆಯ ನಿಯಮಗಳನ್ನು ಮತ್ತು ಸಿಗ್ನಲ್ ನಿಯಮ ಪಾಲಿಸುವುದರ ಬಗ್ಗೆ ಗಮನ ಕಡಿಮೆ ಆಗಿ ಕೆಲವು ಸಮಯಗಳಲ್ಲಿ ಅಪಘಾತವಾಗುವ ಸಂಭವ ಹೆಚ್ಚಾಗಿರುತ್ತದೆ. ಈ ಬ್ಯಾನರ್‌ನಲ್ಲಿರುವ ನಾಯಕರುಗಳು ಸಮಾಜಕ್ಕೆ ಆದರ್ಶವಾಗಿ ಸಮಾಜದ ಏಳಿಗೆಗೆ ಅದರಲ್ಲೂ ಮೈಸೂರಿಗೆ ತಮ್ಮದೇ ಅನೇಕ ಕೊಡುಗೆ ನೀಡಿ ಹೆಸರುವಾಸಿಯಾಗಿದ್ದಾರೆ. ಇಂತಹ ಆದರ್ಶ ವ್ಯಕ್ತಿಗಳು ಕೂಡಲೇ ತಮ್ಮ ಅಪಾರ ಸಂಖ್ಯೆಯ ಅಭಿಮಾನಿಗಳಿಗೆ ಮೈಸೂರಿನ ರಸ್ತೆಯ ಸಿಗ್ನಲ್ಲಿನಲ್ಲಿ ಬ್ಯಾನರ್‌ಗಳ ಅಳವಡಿಸದೆ ಬೇರೆ ಕಡೆ ಅಳವಡಿಸಲು ಸಲಹೆ ನೀಡಬೇಕು. ಮೈಸೂರು ನಗರಪಾಲಿಕೆ, ಮೈಸೂರು ಸಂಚಾರ ಪೊಲೀಸರು ಮತ್ತು ಮೈಸೂರು ಪೊಲೀಸ್ ಕಮಿಷನರ್ ಸಹ ಸಿಗ್ನಲ್‌ಗಳಲ್ಲಿರುವ ಬ್ಯಾನರ್‌ಗಳನ್ನು ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಂಡು ವಾಹನ ಸವಾರರಿಗೆ ಸಿಗ್ನಲ್‌ನಲ್ಲಿ ಯಾವುದೇ ಅಪಘಾತಗಳು ಸಂಭವಿಸದಂತೆ ಎಚ್ಚರಗೊಳಿಸಲು ಸಹಕಾರ ನೀಡಬೇಕು ಎಂದು ಮನವಿ. –ನಾಗೇಶ್, ಮಾನಸಗಂಗೋತ್ರಿ, ಮೈಸೂರು.

ಚಾಮುಂಡೇಶ್ವರಿ ಶಾಸಕರಲ್ಲಿ ಮನವಿ

ಮಾನ್ಯರೆ,

ಈ ಹಿಂದೆ ಚಾಮುಂಡೇಶ್ವರಿ ಕ್ಷೇತ್ರದ ಕೂರ್ಗಳ್ಳಿ ಗ್ರಾಮಕ್ಕೆ ರೂಟ್ ನಂ. 126, ರೂಟ್ ನಂ. 127 ಸಂಖ್ಯೆಯ ಬಸ್‌ಗಳು ನಗರ ಬಸ್ ನಿಲ್ದಾಣದಿಂದ, ಒಂಟಿಕೊಪ್ಪಲು, ಹೆಬ್ಬಾಳು, ಭಾರತ್ ಕ್ಯಾನ್ಸರ್ ಆಸ್ಪತ್ರೆ, ಜಯದೇವ ಆಸ್ಪತ್ರೆ ಮಾರ್ಗವಾಗಿ ಸಂಚರಿಸುತ್ತಿದ್ದವು. ಇದರಿಂದ ವಿದ್ಯಾರ್ಥಿಗಳಿಗೆ, ಹಿರಿಯ ನಾಗರಿಕರಿಗೆ, ಗಾರ್ಮೆಂಟ್ಸ್ ಕಾರ್ಮಿಕರಿಗೆ ಸಮಯ ಮತ್ತು ಹಣದ ಉಳಿತಾಯವಾಗುತ್ತಿತ್ತು. ಈಗ ಈ ಬಸ್‌ಗಳು ರದ್ದಾಗಿ ಅನೇಕ ವರ್ಷಗಳೇ ಆಗಿದೆ. ಜನಾನುರಾಗಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕರು ಮತ್ತೆ ಈ ಬಸ್ಸುಗಳ ಸಂಚಾರಕ್ಕೆ ಮಾಡಿಕೊಡಬೇಕಾಗಿ ಮನವಿ. –ನೊಂದ ಪ್ರಯಾಣಿಕರು, ಮೈಸೂರು.

ಈ ಮಾರ್ಗದಲ್ಲಿ ಬಸ್‌ಗಳು ಸಂಚರಿಸಲಿ

ಮಾನ್ಯರೆ,

ಮೈಸೂರು ನಗರ ಬಸ್ ನಿಲ್ದಾಣದಿಂದ ಅಗ್ರಹಾರ, ಅಶೋಕ ರಸ್ತೆ, ಅಪೋಲೋ ಆಸ್ಪತ್ರೆ, ಅಕ್ಷಯ ಭಂಡಾರ ಮಾರ್ಗವಾಗಿ ವಿವೇಕಾನಂದ ವೃತ್ತ, ರಾಮಕೃಷ್ಣನಗರಕ್ಕೆ ಬಸ್‌ಗಳು ಸಂಚರಿಸುತ್ತಿವೆ. ಈ ಬಸ್‌ಗಳನ್ನು ಅಗ್ರಹಾರ, ಸಿದ್ದಪ್ಪ ಚೌಕ, ನಂಜು ಮಳಿಗೆ, ಚಾಮುಂಡಿಪುರಂ, ಅಶೋಕ ರಸ್ತೆ, ಮಾರ್ಗವಾಗಿ ಸಂಚರಿಸುವಂತೆ ಸ್ವಲ್ಪ ಬದಲಾವಣೆ ಮಾಡಿದಲ್ಲಿ ಅನೇಕ ಬಡಾವಣೆಗಳ ಪ್ರಯಾಣಿಕರಿಗೆ ಹಣ ಮತ್ತು ಸಮಯದ ಉಳಿತಾಯವಾಗುತ್ತದೆ. –ನಿವಾಸಿಗಳು, ಹೊಸ ಬಂಡಿಕೇರಿ, ಮೈಸೂರು.

ದೇಗುಲಗಳಿಗೆ ಮಹಿಳಾ ಅರ್ಚಕಿಯರ ನೇಮಕ ಸ್ವಾಗತಾರ್ಹ

ಮಾನ್ಯರೆ,

ಭಾರತದಲ್ಲಿ ಪುರುಷ ಪ್ರಧಾನ ಸಮಾಜ ವ್ಯವಸ್ಥೆಗೆ ಹೆಚ್ಚು ಒತ್ತು ನೀಡಲಾಗುತ್ತದೆ. ಇದರ ಭಾಗವಾಗಿ ದೇವರ ಪೂಜೆ, ಆರಾಧನೆಗಳು ಕೇವಲ ಒಂದು ವರ್ಗ ಮತ್ತು ಪುರುಷರು ಮಾತ್ರ ಮಾಡಬೇಕೆಂಬ ನಿಯಮವಾಗಲಿ, ಆಚಾರವಾಗಲಿ ಯಾವುದೇ ವೇದಗಳಲ್ಲಿ, ಪುರಾಣಗಳಲ್ಲಿ ಉಲ್ಲೇಖವಾಗಿಲ್ಲ.

ಪ್ರಸ್ತುತ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲೂ ಪ್ರತಿನಿಧಿಸುತ್ತಿದ್ದು, ಉದಾಹರಣೆಗೆ: ಬಾಹ್ಯಾಕಾಶ ಸಂಶೋಧನೆಯಲ್ಲಿ, ಮಿಲಿಟರಿಯಲ್ಲಿ, ಪೈಲೆಟ್ ಆಗಿ, ಉದ್ಯಮಗಳಲ್ಲಿ, ಕ್ರೀಡೆಗಳಲ್ಲಿ ಇನ್ನೂ ಮುಂತಾದ ಕ್ಷೇತ್ರಗಳಲ್ಲಿ ಹೆಚ್ಚು ಮಹಿಳೆಯರನ್ನು ಕಾಣಬಹುದಾಗಿದೆ. ಆದರೆ ದೇವಸ್ಥಾನಗಳಲ್ಲಿ ಮಹಿಳಾ ಅರ್ಚಕಿಯರನ್ನು ಕಾಣುವುದು ಬಹಳ ವಿರಳ. ಕಾರಣ ಮಹಿಳೆ ಋತುಮತಿಯಾಗುವ ಕಾರಣ.

ಋತುಮತಿಯಾಗುವುದು ಮಹಿಳೆಯ ಸ್ವಾಭಾವಿಕ ಗುಣವಾಗಿದ್ದು, ಅದೊಂದು ಸಹಜ ಪ್ರತಿಕ್ರಿಯೆಯಾಗಿದೆ. ಇದು ಯುವಕರು ಪುರುಷರಾಗುವಂತೆ, ಋತುಮತಿಯಾದ ಯುವತಿ ಪ್ರಬುದ್ಧತೆ ಹೆಚ್ಚಾಗಿ ಮಹಿಳೆಯಾಗುವ ಪ್ರಕೃತಿಯ ನಿಯಮವಾಗಿದೆ. ಇದರಿಂದಾಗಿ ಮಹಿಳೆಯರಿಗೆ ದೇವಾಲಯದಲ್ಲಿ ಅರ್ಚಕಿಯಾಗಲು ಅವಕಾಶ ನೀಡಲಾಗುವುದಿಲ್ಲ.

ಬದಲಾದ ಸಾಮಾಜಿಕ ವ್ಯವಸ್ಥೆಯಲ್ಲಿ ಲಿಂಗ ಅಸಮಾನತೆಯನ್ನು ತೊಡೆದು ಹಾಕಲು ಮಹಿಳಾ ಅರ್ಚಕಿಯರು ಅವಶ್ಯಕ ಮತ್ತು ಮಹಿಳಾ ಅರ್ಚಕಿಯರಾಗಲು ಯಾವುದೇ ಜಾತಿಯ ನಿಬಂಧನೆಗಳು ಇರುವುದಿಲ್ಲ. ವೇದಗಳ ಕಾಲದಲ್ಲಿ ಗಾರ್ಗಿ ಮತ್ತು ಮೈತ್ರೇಯಿ ಎಂಬ ಮಹಿಳಾ ವಿದ್ವಾಂಸರ ಉಲ್ಲೇಖವಿದೆ.

ತಮಿಳುನಾಡು ಸರ್ಕಾರ ಎಸ್. ರಮ್ಯ, ಎಸ್.ಕೃಷ್ಣವೇಣಿ ಮತ್ತು ಎಸ್. ರಂಜಿತಾ ಎಂಬ ಮಹಿಳೆಯರಿಗೆ ದೇಗುಲಗಳಲ್ಲಿ ಪೂಜಾ ಕಾರ್ಯಗಳನ್ನು ನಡೆಸಲು ತರಬೇತಿ ನೀಡಿ, ಸರ್ಕಾರದ ದೇವಸ್ಥಾನಗಳಲ್ಲಿ ಅರ್ಚಕಿಯರಾಗಿ ನೇಮಿಸಿರುವುದು, ಲಿಂಗ ಸಮಾನತೆಯನ್ನು ಎತ್ತಿ ಹಿಡಿಯುವ ಕ್ರಾಂತಿಕಾರಿ ಬದಲಾವಣೆಯಾಗಿದ್ದು, ಮಹಿಳಾ ಸಮಾತೆಯ ತಮಿಳುನಾಡು ಸರ್ಕಾರದ ಈ ಕ್ರಮ ದೇಶಕ್ಕೆ ಮಾದರಿಯಾಗಿದೆ. ಮತ್ತು ಎಲ್ಲಾ ಜಾತಿ ಮಹಿಳೆಯರು ಸಹ ಅರ್ಚಕಿಯರಾಗಲು ಅವಕಾಶ ನೀಡಿರುವ ಕ್ರಮ ಜಾತಿ ವ್ಯವಸ್ಥೆಯನ್ನು ತೊಡೆದು ಹಾಕಲು ಅನುವು ಮಾಡಿಕೊಡುತ್ತದೆ.

ಕರ್ನಾಟಕ ಸರ್ಕಾರ ಕೂಡ ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ಆಗ್ರಹಿಸುತ್ತಾ, ತಮಿಳುನಾಡು ಸರ್ಕಾರದ ಮಹಿಳೆಯರ ಅಭಿವೃದ್ಧಿಯ ಭಾಗವಾದ ಮಹಿಳಾ ಅರ್ಚಕಿಯರ ನೇಮಕ ದೇಶಕ್ಕೆ ಮಾದರಿಯಾಗಲೆಂದೇ ಆಶಿಸೋಣ. – ರಾಸುಮ ಭಟ್, ಚಿಕ್ಕಮಗಳೂರು.

ಪುಸ್ತಕ ವಿಮರ್ಶೆ

ಹೊಯ್ಸಳ ವಾಸ್ತುಶಿಲ್ಪ ಅವಲೋಕನ

–ಗೌರಿ ಸತ್ಯ






ಹನ್ನೊಂದನೆಯ ಶತಮಾನದಿಂದ (ಕ್ರಿ.ಶ. 1,000) ಹದಿನಾಲ್ಕನೆಯ ಶತಮಾನದ ಮಧ್ಯಭಾಗದವರೆಗೆ (ಕ್ರಿ.ಶ. 1342) ಆಳಿದ ಹೊಯ್ಸಳರು ತಮ್ಮ ಅವಧಿಯಲ್ಲಿ ನೂರಾರು ದೇವಾಲಯಗಳನ್ನು ಕಟ್ಟಿಸಿದರು. ಒಂದು ಲೆಕ್ಕದ ಪ್ರಕಾರ ಅವರು ಸುಮಾರು 350 ವರ್ಷಗಳ ಅವಧಿಯಲ್ಲಿ 1500ಕ್ಕೂ ಹೆಚ್ಚು ದೇವಾಲಯಗಳನ್ನು ನಿರ್ಮಿಸಿದ್ದಾರೆ. ಈ ಗ್ರಂಥದ ಲೇಖಕರೇ 1200ಕ್ಕೂ ಹೆಚ್ಚು ದೇವಾಲಯಗಳ ಪಟ್ಟಿ ಮಾಡಿದ್ದಾರೆ. ಇದುವರೆಗೂ 350 ದೇವಾಲಯಗಳನ್ನು ನೋಡಿ 20,000 ಕ್ಕೂ ಹೆಚ್ಚಿನ ಚಿತ್ರಗಳನ್ನು ಸಂಗ್ರಹಿಸುವ ಸಾಹಸ ಕಾರ್ಯ ಮಾಡಿದ್ದಾರೆ. ಪ್ರಾಯಶಃ ಇಷ್ಟು ವ್ಯಾಪಕವಾದ ಕಾರ್ಯವನ್ನು ಬೇರೆ ಯಾರೂ ಮಾಡಿಲ್ಲವೆಂದು ಕಾಣುತ್ತದೆ.

ಹೊಯ್ಸಳರು ಕಟ್ಟಿರುವ ದೇವಾಲಯಗಳು ಏಕಕೂಟದಿಂದ ಹಿಡಿದು ಪಂಚಕೂಟದವರೆಗೆ ಸೇರಿವೆ. ಅವುಗಳಲ್ಲಿ ಏಕಕೂಟ, ದ್ವಿಕೂಟ ಮತ್ತು ತ್ರಿಕೂಟ ದೇವಾಲಯಗಳೇ ಪ್ರಧಾನವಾಗಿವೆ. ಚತುಷ್ಕೂಟಕ್ಕೆ ಇರುವ ಏಕೈಕ ನಿದರ್ಶನವೆಂದರೆ ಹಾಸನ ಜಿಲ್ಲೆಯ ದೊಡ್ಡಗದ್ದವಳ್ಳಿಯ ಮಹಾಲಕ್ಷ್ಮಿ ದೇವಸ್ಥಾನ. ಸುಸ್ಥಿತಿಯಲ್ಲಿರುವ ಏಕೈಕ ಪಂಚಕೂಟ ದೇವಸ್ಥಾನ ಕೃಷ್ಣರಾಜಪೇಟೆಯ ಗೋವಿಂದನಹಳ್ಳಿಯ ಪಂಚಲಿಂಗೇಶ್ವರ. ಪ್ರಾರಂಭದಲ್ಲಿ ಗರ್ಭಗೃಹ ಮಾತ್ರವೇ ಇದ್ದ ಸಾಮಾನ್ಯ ದೇವಾಲಯಗಳು ಕ್ರಮೇಣ ವಾಸ್ತುವಿನಲ್ಲಿ ಅಭಿವೃದ್ಧಿ ಹೊಂದಿ ಶುಕನಾಸಿ, ನವರಂಗ, ಮುಖ ಮಂಟಪ ಇತ್ಯಾದಿಗಳ ಸೇರ್ಪಡೆಯಿಂದ ವಿಸ್ತಾರಗೊಂಡಿವೆ. ಪ್ರಾರಂಭದಲ್ಲಿ ಹೆಚ್ಚು ಅಲಂಕಾರವಿಲ್ಲದೆ ನಂತರದ ಅವಧಿಯಲ್ಲಿ ಅವು ಅತೀ ಸುಂದರವಾಗಿ ರೂಪುಗೊಂಡಿವೆ.

ಅವರು ಮೂಲತಃ ಜೈನರಾಗಿದ್ದು ವೈಷ್ಣವ ಧರ್ಮವನ್ನು ಸ್ವೀಕರಿಸಿದರೂ, ಅವರ ರಾಣಿಯರು, ಅನೇಕ ಮಂತ್ರಿಗಳು, ಮಹಾನಾಯಕರು, ಮತ್ತು ಪ್ರಧಾನರು ಜೈನರಾಗಿಯೇ ಮುಂದುವರಿದು, ನಾಡಿನಾದ್ಯಂತ ನೂರಾರು ಬಸದಿಗಳ ನಿರ್ಮಾಣಕ್ಕೆ ಕಾರಣರಾಗಿದ್ದಾರೆ. ವೈಷ್ಣವ ಧರ್ಮದವರಾದರೂ ಶೈವ–ವೈಷ್ಣವ ಧರ್ಮಗಳಲ್ಲಿ ಯಾವುದೇ ಮತಭೇದವನ್ನು ತೋರದೆ, ಅವರು ತಮ್ಮ ಬಹುತೇಕ ರಚನೆಗಳಲ್ಲಿ ಹರಿ–ಹರರ ಐಕ್ಯತೆ ಕಾಣುವಂತೆ ದೇವಾಲಯಗಳನ್ನು ನಿರ್ಮಿಸಿದ್ದಾರೆ. ಹಾಸನ ಜಿಲ್ಲೆ ಅರಸೀಕೆರೆ ತಾಲೂಕಿನಲ್ಲಿರುವ ಮಾವುತನಹಳ್ಳಿಯ ಮಹಾಲಿಂಗೇಶ್ವರ ದೇವಾಲಯ ಶೈವ ಮತ್ತು ವೈಷ್ಣವ ಧರ್ಮಗಳ ಸಂಗಮಕ್ಕೆ ಅತ್ಯುತ್ತಮ ಉದಾಹರಣೆಯಾಗಿದೆ. ಅವರ ಕಾಲದಲ್ಲಿ ಹಳೇಬೀಡು ಶೈವರ ಪ್ರಮುಖ ಕೇಂದ್ರವಾಗಿ ಅಭಿವೃದ್ಧಿಗೊಂಡರೆ, ಬೇಲೂರು ವೈಷ್ಣವ ಕೇಂದ್ರವಾಗಿತ್ತು ಎಂಬುದನ್ನು ಸ್ಮರಿಸಬಹುದು. ಪ್ರಸ್ತುತ ಉಳಿದಿರುವ ದೇವಾಲಯಗಳ ಅಂಕಿಸಂಖ್ಯೆಗಳನ್ನು ಅವಲೋಕಿಸಿದಾಗ ಶೇ.60ರಷ್ಟು ಶೈವ ದೇವಾಲಯಗಳು, ಶೇ.25ರಷ್ಟು ವೈಷ್ಣವ ದೇವಾಲಯಗಳು ಹಾಗೂ ಶೇ.15ರಷ್ಟು ಜೈನ ಬಸದಿಗಳು ನಿರ್ಮಾಣವಾಗಿರುವುದು ಕಂಡು ಬರುತ್ತವೆ. ಅವರ ಕಾಲದಲ್ಲಿ ನಿರ್ಮಾಣವಾದ ಅನೇಕ ಜೈನ ಬಸದಿಗಳು ಕಾಲಾಂತರದಲ್ಲಿ ಕಣ್ಮರೆಯಾಗಿವೆ. ಪ್ರಮುಖವಾಗಿ ಹಾಸನ ಜಿಲ್ಲೆಯಲ್ಲಿ 52, ಚಿಕ್ಕಮಗಳೂರು ಜಿಲ್ಲೆಯಲ್ಲಿ 23 ಮತ್ತು ಮಂಡ್ಯ ಜಿಲ್ಲೆಯಲ್ಲಿ 21 ಬಸದಿಗಳು ಉಳಿದುಬಂದಿವೆ.

ಬೇಲೂರು, ಹಳೇಬೀಡು ಮತ್ತು ಸೋಮನಾಥಪುರದ ದೇವಾಲಯಗಳು ಪ್ರವಾಸಿಗರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಕರ್ಷಿಸುತ್ತಿದ್ದರೆ, ಅವುಗಳಷ್ಟೇ ಆಕರ್ಷಕ ವಾಗಿರುವ ದೇವಾಲಯಗಳು ಪ್ರಚಾರದ ಕೊರತೆಯಿಂದ ಹಿಂದೆ ಬಿದ್ದಿವೆ. ಅಜ್ಞಾತವಾಗಿ ಉಳಿದಿವೆ. ಸ್ಥಳೀಯರಿಗೇ ಅರಿವಿಲ್ಲದಂತಿರುವ ದೇವಾಲಯಗಳೂ ಇವೆ. ಪ್ರಸಿದ್ಧ ಹಳೇಬೀಡಿನ ಸುತ್ತಮುತ್ತ ಸಾಕಷ್ಟು ಹೊಯ್ಸಳ ದೇವಾಲಯಗಳಿದ್ದರೂ, ಅವು ಹಳೇಬೀಡಿನಷ್ಟು ಪ್ರಸಿದ್ಧವಾಗಿಲ್ಲ. ಹದಿನೆಂಟು ದೇವಾಲಯಗಳು ಅಲ್ಲಿ ಸುಸ್ಥಿತಿಯಲ್ಲಿ ಇದ್ದರೆ, ಹೊಯ್ಸಳೇಶ್ವರ ಮತ್ತು ಶಾಂತಳೇಶ್ವರ ಬಿಟ್ಟರೆ ಮಿಕ್ಕೆಲ್ಲವು ಪ್ರವಾಸಿಗರಿಗೆ ಇನ್ನೂ ಅಜ್ಞಾತವಾಗಿಯೇ ಉಳಿದಿವೆ. ಇದಕ್ಕೆ ಮಾಹಿತಿ



ಲೇಖಕರು: ಎಚ್.ಜಿ.ಶಶಿಧರ ಮತ್ತು ಶಂಕರ ಅಜ್ಜಂಪುರ
ಪ್ರಕಟಿತ ವರ್ಷ : 2023
ಪುಟಗಳು: 198 + 44
ಪ್ರಕಾಶಕರು: ಸಿದ್ಧೇಶ್ವರ ಪ್ರಕಾಶನ, ಬೆಂಗಳೂರು

ಮತ್ತು ಪ್ರಚಾರದ ಕೊರತೆಯೇ ಮುಖ್ಯ ಕಾರಣವೆನ್ನಬಹುದು ಎನ್ನುತ್ತಾರೆ ಶಶಿಧರ ಅವರು.

ಶಶಿಧರ ಮತ್ತು ಶಂಕರ ಅಜ್ಜಂಪುರ ಅವರು ಸೇರಿ ರಚಿಸಿರುವ 'ಹೊಯ್ಸಳ ವಾಸ್ತುಶಿಲ್ಪ ಅವಲೋಕನ'ದಲ್ಲಿ ಆಯ್ದ 50 ಹೊಯ್ಸಳ ದೇವಾಲಯಗಳ ಪರಿಚಯಾತ್ಮಕ ಲೇಖನಗಳಿವೆ. ಇವುಗಳಲ್ಲಿ 13 ಹಾಸನ, ಏಳು ಮಂಡ್ಯ, ಏಳು ತುಮಕೂರು, 10 ಚಿಕ್ಕಮಗಳೂರು, ಐದು ಮೈಸೂರು, ನಾಲ್ಕು ದಾವಣಗೆರೆ, ಮೂರು ಬೆಂಗಳೂರು ಜಿಲ್ಲೆಯವುಗಳಾಗಿದ್ದು ಒಂದು ತಮಿಳುನಾಡಿನದು. ಇತರೆ ಹೊಯ್ಸಳ ದೇವಾಲಯಗಳ ಪರಿಚಯ 50 ಲೇಖನಗಳ ಒಂದು ಗುಚ್ಛದಂತೆ ಮುಂದಿನ ಪುಸ್ತಕ ಮಾಲಿಕೆಯಲ್ಲಿ ಪ್ರಕಟವಾಗುತ್ತವೆ. ಈಗಾಗಲೇ ಈ ದಿಕ್ಕಿನಲ್ಲಿ ಇದುವರೆಗೆ 250 ಲೇಖನಗಳು ಚಿತ್ರಸಹಿತ ಫೇಸ್‌ಬುಕ್‌ನಲ್ಲಿ ಪ್ರಕಟವಾಗಿವೆ. ಹೊಯ್ಸಳ ನಿರ್ಮಿತ ಜೈನ ಬಸದಿಗಳನ್ನು ಕುರಿತಾಗಿ ವಿಶೇಷ ಮಾಲಿಕೆಯನ್ನೇ ಸಿದ್ಧಪಡಿಸಲಾಗಿದ್ದು ಅವೆಲ್ಲವನ್ನೂ ಮುಂದಿನ ಸಂಪುಟಗಳಲ್ಲಿ ಪ್ರಕಟಿಸುವ ಯೋಜನೆಯಿದೆ ಎನ್ನುತ್ತಾರೆ ಶಂಕರ ಅಜ್ಜಂಪುರ ಅವರು.

ಹೊಯ್ಸಳ ವಾಸ್ತುಶಿಲ್ಪ ಅವಲೋಕನ ಮಾಲಿಕೆಯನ್ನು ಇವರು ಮೊದಲಿಗೆ ಜನ ಮಾಧ್ಯಮವಾದ ಫೇಸ್‌ಬುಕ್‌ನಲ್ಲಿ ಆರಂಭಿಸಿದರು. ಈ ಕಾರ್ಯವನ್ನು ಅವರು 2017ರ ಸಂಕ್ರಾಂತಿಯಂದು ಪ್ರಾರಂಭಿಸಿದರು. ಆರಂಭದ ದಿನಗಳಲ್ಲಿ ಉತ್ಸಾಹಿ ಯುವಕರಾದ ಶಶಿಧರ ಅವರು ಹೊಯ್ಸಳ ದೇಗುಲಗಳ ಚಿತ್ರಗಳನ್ನು ಒದಗಿಸಿದರೆ, ಶಂಕರ ಅಜ್ಜಂಪುರ ಅವರು ಆ ದೇವಾಲಯಗಳಿಗೆ ಸಂಬಂಧಿಸಿದ ವಿವರಗಳನ್ನು ಬರೆಯಲಾರಂಭಿಸಿದರು. ಈಗ ಶಶಿಧರ ಅವರೇ ಲೇಖನ–ಚಿತ್ರಣಗಳ ಜವಾಬ್ದಾರಿಯನ್ನು ನಿರ್ವಹಿಸುತ್ತಿದ್ದಾರೆ. ಇವರ ಫೇಸ್‌ಬುಕ್ ಮಾಲಿಕೆ ಈಗಾಗಲೇ 250 ಕಂತುಗಳನ್ನು ದಾಟಿರುವುದು ಅದರ ಜನಪ್ರಿಯತೆ ತೋರುತ್ತದೆ. ಪರಂಪರೆ ಮತ್ತು ಶಿಲ್ಪಗಳಲ್ಲಿ ಆಸಕ್ತಿಯಿರುವವರನ್ನು ಅದು ತಲುಪುತ್ತಿದ್ದು, ಹೊಯ್ಸಳ ದೇವಾಲಯಗಳ ಬಗ್ಗೆ ಜಾಗೃತಿ ಮೂಡಿಸುತ್ತಿರುವುದು ತೃಪ್ತಿ ತಂದಿದೆ ಎನ್ನುತ್ತಾರೆ ಶಂಕರ ಅಜ್ಜಂಪುರ ಅವರು.

ಹೊಯ್ಸಳರ ಕೊಡುಗೆಗಳು ಬರೀ ಬೇಲೂರು ಮತ್ತು ಹಳೇಬೀಡಿಗೆ ಸೀಮಿತವಾಗಿಲ್ಲದೆ ರಾಜ್ಯದ ತುಮಕೂರು, ತಿಪಟೂರು, ಹಾಸನ, ಶಿವಮೊಗ್ಗ, ಚಿಕ್ಕಮಗಳೂರು ಚಾಮರಾಜನಗರಗಳಂಥ ಸ್ಥಳಗಳಲ್ಲದೆ, ಬೆಂಗಳೂರು, ಮೈಸೂರಿನಲ್ಲಿ ಹಾಗೂ ನೆರೆಯ ತಮಿಳುನಾಡಿನಲ್ಲಿ ಇವೆಯೆನ್ನುವುದು ಈ ಮಾಲಿಕೆಯಿಂದ ಬೆಳಕಿಗೆ ಬರುವಂತಾಗಿದೆ. ಅಂತೆಯೇ ಕುಗ್ರಾಮಗಳಲ್ಲಿ ದುಸ್ಥಿತಿಯಲ್ಲಿರುವ ಹೊಯ್ಸಳರ ಕಲಾ ಸಂಗ್ರಹಗಳು ಈ ದೇವಾಲಯಗಳ ಬಗ್ಗೆ ಜನರಲ್ಲಿ ಆಸಕ್ತಿ ಕುದುರಿಸಿ, ಕೆಲವು ಕಡೆ ಸ್ವತಃ ಗ್ರಾಮಸ್ಥರೇ ಪುರಾತತ್ವ ಇಲಾಖೆಯ ಸಹಯೋಗದಲ್ಲಿ ಮೂಲ ಸ್ವರೂಪಕ್ಕೆ ಧಕ್ಕೆ ಬಾರದ ರೀತಿಯಲ್ಲಿ ಸುಂದರವಾಗಿ ಜೀರ್ಣೋದ್ಧಾರ ಮಾಡಿದ್ದಾರೆ. 'ಹಾಸನ ಜಿಲ್ಲಾ ಐತಿಹಾಸಿಕ ಸ್ಮಾರಕಗಳ ಸಂರಕ್ಷಣಾ ವೇದಿಕೆ' ಸಂಚಾಲಕರಾದ ನಟರಾಜ ಪಂಡಿತರು ಪಾಳುಬಿದ್ದ ದೇವಾಲಯಗಳನ್ನು ಉಳಿಸಬೇಕೆಂಬ ಪಣತೊಟ್ಟು ಅವುಗಳ ಜೀರ್ಣೋದ್ಧಾರ, ಸಂರಕ್ಷಣೆಗೆ ಶ್ರಮಿಸುತ್ತಿದ್ದಾರೆ. ಅವರ ಕಾರ್ಯವು ಕೆಲವು ದೇವಾಲಯಗಳ ಮಟ್ಟಿಗೆ ಯಶಸ್ವಿಯೂ ಆಗಿ ಅವು ಈಗ ಜೀವಂತ ದೇವಾಲಯಗಳಾಗಿವೆ. ಧರ್ಮಸ್ಥಳ ಧರ್ಮೋತ್ಥಾನ ಟ್ರಸ್ಟ್ ಕೂಡ ಕೆಲವು ದೇವಾಲಯಗಳ ಪುನರ್ ನಿರ್ಮಾಣಕ್ಕೆ ನೆರವಾಗಿದೆ. ದುಸ್ಥಿತಿಯಲ್ಲಿರುವ ಹಾಗೂ ಅಲಕ್ಷಿಸಿ ಕೆಟ್ಟ ವಾತಾವರಣದ ಮಧ್ಯೆ ಇರುವ ದೇವಾಲಯಗಳನ್ನು ಅಲ್ಲಿನ ಗ್ರಾಮಸ್ಥರೇ ಆಸಕ್ತಿ ತೋರಿ ರಕ್ಷಿಸಿದರೆ ಮಾತ್ರ ನಮ್ಮ ಇತಿಹಾಸ, ಕಲೆ ಮತ್ತು ಪರಂಪರೆಯನ್ನು ಉಳಿಸಿದಂತಾಗುತ್ತವೆ ಎನ್ನುತ್ತಾರೆ ಶಶಿಧರ ಮತ್ತು ಶಂಕರ ಅಜ್ಜಂಪುರ ಅವರು.



ಗೌರಿ ಸತ್ಯ
ಹಿರಿಯ ಪತ್ರಕರ್ತರು

ಹೊಯ್ಸಳ ದೇವಾಲಯಗಳ ಬಗ್ಗೆ ಇದು ವರೆಗೆ ಹತ್ತಾರು ಗ್ರಂಥಗಳು ಕನ್ನಡದಲ್ಲಿ ಪ್ರಕಟವಾಗಿದ್ದರೂ ಯಾವ ಗ್ರಂಥದಲ್ಲೂ ದೇವಾಲಯಗಳ ಬಗ್ಗೆ ಸಮಗ್ರ ಮಾಹಿತಿ ಇಲ್ಲದಿರುವುದು ಒಂದು ಕೊರತೆಯೇ ಆಗಿದೆ. ಈ ಕೊರತೆಯನ್ನು ತುಂಬುವತ್ತ ಶಶಿಧರ ಮತ್ತು ಶಂಕರ ಅಜ್ಜಂಪುರ ಅವರು 'ಹೊಯ್ಸಳ ವಾಸ್ತುಶಿಲ್ಪ ಅವಲೋಕನ' ಮಾಲಿಕೆಯಲ್ಲಿ ಪುಸ್ತಕಗಳನ್ನು ಹೊರತರಲು ನಿರ್ಧರಿಸಿದ್ದಾರೆ. ಈ ದಿಕ್ಕಿನಲ್ಲಿ ಈಗ ಪ್ರಕಟವಾಗಿರುವುದು ಮೊದಲ ಸಂಪುಟವಾಗಿದೆ. ಈ ಗ್ರಂಥದಲ್ಲಿ ಹೊಯ್ಸಳ ದೇವಾಲಯದ ಹೆಸರು, ಗ್ರಾಮದ ಹೆಸರು, ತಾಲೂಕು ಮತ್ತು ಜಿಲ್ಲೆಯ ವಿವರಗಳನ್ನು ಒಳಗೊಂಡಂತೆ, ಅವುಗಳಿರುವ ಗೂಗಲ್ ಸ್ಥಳದ ಕ್ಯೂ ಆರ್. ಕೋಡ್ ಕೂಡ ಪ್ರಕಟಿಸಿದ್ದಾರೆ. ಕ್ಯೂ ಆರ್. ಕೋಡ್ ಸ್ಕ್ಯಾನ್ ಮಾಡಿ ಯಾವುದೇ ದೇವಸ್ಥಾನಕ್ಕೆ ಸುಲಭವಾಗಿ ಭೇಟಿ ನೀಡಿ ನೋಡಿ ಬರಬಹುದಾಗಿದೆ. ಈ ಎಲ್ಲ ದೇವಾಲಯಗಳ ಪರಿಚಯವನ್ನು ಕ್ಯೂ. ಆರ್. ಕೋಡ್ ಸಮೇತ ಪುಸ್ತಕ ರೂಪದಲ್ಲಿ ಪ್ರಕಟಿಸಿದರೆ ಅದು ಇತಿಹಾಸ ವಿದ್ಯಾರ್ಥಿಗಳಿಗೆ ಮತ್ತು ಸಂಶೋಧಕರಿಗೆ ಉತ್ತಮ ಮಾರ್ಗದರ್ಶಿಯಾಗಬಲ್ಲದು ಎಂಬುದನ್ನು ಅರಿತು ಈ ಶ್ಲಾಘನೀಯ ಕಾರ್ಯ ಪ್ರಾರಂಭಿಸಿದ್ದಾರೆ.

ಅವರು ಪರಿಚಯಿಸಿರುವ ದೇವಾಲಯ ಗಳಲ್ಲಿ ಹಲವು ತಮ್ಮದೇ ಕಲೆ, ರಚನೆ ಇತ್ಯಾದಿಗಳ ವೈಶಿಷ್ಟ್ಯತೆ ಪಡೆದಿವೆ. ಹಾಸನ ಜಿಲ್ಲೆ ಬೇಲೂರು ತಾಲೂಕಿನ ನರಸೀಪುರದ ಯೋಗನರಸಿಂಹ ಅಂತಹ ದೇವಾಲಯ ಗಳಲ್ಲಿ ಜ್ಯಾಮಿತಿಯ ಕ್ಲಿಷ್ಟಕರವಾದ ವಿನ್ಯಾಸದಲ್ಲಿ ಶಿಲ್ಪಗಳನ್ನು ರಚಿಸಲಾಗಿದ್ದು, ಅವು ಹೊಯ್ಸಳ ಶಿಲ್ಪಿಗಳ ಜ್ಞಾನ ಮತ್ತು ಕೌಶಲ್ಯವನ್ನು ತೆರೆದಿಟ್ಟಿವೆ. ಹಾಸನ ಜಿಲ್ಲೆಯ ಬೇಲೂರಿನ ಚನ್ನಕೇಶವ ದೇವಾಲಯ ಶಿಲ್ಪಕಲೆಗೆ ವಿಶ್ವ ಖ್ಯಾತಿಯಾಗಿದ್ದು ಅಂದಿನ ಸಂಸ್ಕೃತಿ ಮತ್ತು ಕಲೆಯನ್ನು ಕಡೆದಿಟ್ಟಿರುವ ಅತ್ಯುತ್ತಮ ದೇವಾಲಯವಾಗಿದೆ. ಕಲಾ ಸೌಂದರ್ಯದ ದೃಷ್ಟಿಯಿಂದ ಹಳೇಬೀಡಿನ ಹೊಯ್ಸಳೇಶ್ವರ ದೇವಾಲಯಕ್ಕೆ ಸರಿಸಾಟಿಯಾಗಿ, ಒಂದು ಕಾಲದಲ್ಲಿ ಭಗ್ನವಾದರೂ, ದುರಸ್ಥಿಯ ನಂತರ ತನ್ನ ಗತವೈಭವವನ್ನು ತೋರುತ್ತಾ ನಿಂತಿದೆ, ಅಲ್ಲಿನ ಕೇದಾರೇಶ್ವರ ದೇವಾಲಯ. ಇದೇ ಜಿಲ್ಲೆಯ ದೊಡ್ಡಗದ್ದವಳ್ಳಿಯ ದೇವಾಲಯ ಶಾಕ್ತ ಪರಂಪರೆಯಲ್ಲಿ ವಿಶಿಷ್ಟ ಸ್ಥಾನ ಪಡೆದಿದೆ. ಇಲ್ಲಿ ಮಹಾಲಕ್ಷ್ಮಿಯೇ ಪ್ರಧಾನವಾಗಿದ್ದರೂ ಉತ್ತರದ ಗರ್ಭಗುಡಿಯಲ್ಲಿರುವ ಮಹಾಕಾಳಿ ಹಲವು ನಿಗೂಢತೆಗಳಿಂದಾಗಿ ಪ್ರಸಿದ್ಧಿಯಾಗಿದ್ದಾಳೆ. ಅವಳ ವಿಗ್ರಹ ಕ್ಷಣಕಾಲ ಬೆಚ್ಚಿಬೀಳಿಸುವಂತಿದ್ದರೆ, ಗರ್ಭಗುಡಿಯ ಎದುರಿಗೆ ನಿಂತಿರುವ ಎರಡೂ ಕಡೆಯ ಎತ್ತರದ ಬೇತಾಳಗಳು ನೋಡುಗರ ಎದೆಯಲ್ಲಿ ನಡುಕವನ್ನು ಹುಟ್ಟಿಸುತ್ತವೆ. ಇಲ್ಲಿ ಕಂಡುಬರುವ ವೈಶಿಷ್ಟ್ಯಪೂರ್ಣ ಶಿಲ್ಪಗಳು ಕರ್ನಾಟಕದಲ್ಲಿ ಬೇರೆ ಲ್ಲಿಯೂ ಕಂಡು ಬರುವುದಿಲ್ಲ. ಒಂದು ಕಾಲಕ್ಕೆ ಇಲ್ಲಿ ನರ ಬಲಿಯೂ ರೂಢಿಯಲ್ಲಿತ್ತೆಂದು ಕಂಡುಬರುತ್ತದೆ.

ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ಗೋವಿಂದನಹಳ್ಳಿಯ ಪಂಚಲಿಂಗೇಶ್ವರ ದೇವಾಲಯದ ಐದು ಗರ್ಭಗುಡಿಗಳಲ್ಲಿ ಶಿವನ ಐದು ಸ್ವರೂಪಗಳಾದ ಸದ್ಯೋಜಾತ, ವಾಮದೇವ, ಅಘೋರ, ತತ್ಪುರುಷ ಮತ್ತು ಈಶಾನ ಲಿಂಗಗಳು, ಅವುಗಳ ಮೇಲಿನ ಗೋಪುರಗಳು ಒಂದೇ ಸಾಲಿನಲ್ಲಿ ನಿರ್ಮಾಣಗೊಂಡಿವೆ. ಅದೇ ಕೆ.ಆರ್.ಪೇಟೆ ತಾಲೂಕಿನ ಭೈರಾಪುರದ ಭೈರವೇಶ್ವರ ದೇವಾಲಯದ ಅಧಿಷ್ಠಾನದ ಮೇಲೆ 'ಅಲೆಗಳೆ' ಎಂಬ ಪದವಿದ್ದು, ಇದು ಪ್ರಾಯಶಃ ಆಗಿನ ಕಾಲದ ಭೂಮಾಪನ ಅಳತೆಯನ್ನು ನಿರ್ಧರಿಸಿರುವ ಒಂದು ಮಾಪಕವಾಗಿರಬಹುದಾದ ಸಾಧ್ಯತೆಯಿದೆ. ಅಲ್ಲಿನದೇ ಹೊಸಹೊಳಲಿನ ಲಕ್ಷ್ಮೀನಾರಾಯಣ ದೇಗುಲದ ಒಂಬತ್ತು ವೈವಿಧ್ಯವಿತಾನಗಳು ಜ್ಯಾಮಿತಿಯ ಸೂತ್ರಗಳನ್ನು ಬಳಸಿ ನಿರ್ಮಿಸಿರುವಂತಿದ್ದು, ಅವು ಹೊಯ್ಸಳ ಶಿಲ್ಪಿಗಳ ನೈಪುಣ್ಯತೆಗೆ ಹಿಡಿದ ಕನ್ನಡಿಯಂತಿವೆ. ಅದೇ ತಾಲೂಕಿನ ಅಘಲಯದ ಮಲ್ಲೇಶ್ವರ ದೇವಾಲಯ ಉಳಿದಿರುವ ಈ ಮಾದರಿಯ ತ್ರಿಕೂಟ ದೇವಾಲಯ ಇದೊಂದೇ ಆಗಿದೆ.

ತುಮಕೂರು ಜಿಲ್ಲೆ ಗುಬ್ಬಿ ತಾಲೂಕಿನ ನಿಟ್ಟೂರು ಗ್ರಾಮದಲ್ಲಿರುವ ಶಾಂತಿನಾಥ ಬಸದಿ ಬೇರೆಲ್ಲದವುಗಳಿಗಿಂತ ವಿಶೇಷವಾದ ಮತ್ತು ವಿಶಿಷ್ಟವಾದ ಸ್ಥಾನವನ್ನು ಪಡೆದಿದೆ. ತುಮಕೂರು ಜಿಲ್ಲೆಯ ಅರಳ ಗುಪ್ಪೆಯ ಚನ್ನಕೇಶವ ದೇವಾಲಯ ತನ್ನ ಅದ್ಭುತ ಶಿಲ್ಪಸೌಂದರ್ಯಕ್ಕೆ ಹೆಸರುಗಳಿಸಿದೆ. ಅದೇ ಜಿಲ್ಲೆಯಲ್ಲಿರುವ ತುರುವೇಕೆರೆಯ ಮೂಲಶಂಕರ ದೇಗುಲದಲ್ಲಿ ಪೂರ್ವ ಭಾಗದಲ್ಲಿರುವ ಸಣ್ಣ ರಂಧ್ರದ ಮೂಲಕ ಸೂರ್ಯ ಕಿರಣಗಳು ಶಿವಲಿಂಗವನ್ನು ತಲುಪುವಂತೆ ಮಾಡಲಾಗಿದೆ. ಅತ್ಯಾಧುನಿಕ ಯಂತ್ರಗಳು ಮತ್ತು ಸಾರಿಗೆ ವ್ಯವಸ್ಥೆ ಇಲ್ಲದಿದ್ದ ಕಾಲಕ್ಕೆ ಶಿವಮೊಗ್ಗ ಜಿಲ್ಲೆಯ ಯಾವುದೋ ಹಳ್ಳಿಯಲ್ಲಿ ಪಾಳು ಬಿದ್ದಿದ್ದ ಹೊಯ್ಸಳರ ಶ್ವೇತವರಾಹಸ್ವಾಮಿ ದೇವಾಲಯದ ಅವಶೇಷಗಳನ್ನು ಮೈಸೂರಿಗೆ ಸಾಗಿಸಿ 1909ರಲ್ಲಿ ಇಲ್ಲಿನ ಅರಮನೆ ಆವರಣದಲ್ಲಿ ಪುನರ್‌ನಿರ್ಮಿಸಿರುವ ದಿವಾನ್ ಪೂರ್ಣಯ್ಯನವರ ಕಾರ್ಯ ಒಂದು ಮಹಾ ಸಾಹಸವೇ ಆಗಿದೆ. ಬೆಂಗಳೂರು ನಗರ ದಲ್ಲೂ ಹೊಯ್ಸಳರ ಆಳ್ವಿಕೆಯಲ್ಲಿ ಹಲವು ದೇವಾಲಯಗಳು ನಿರ್ಮಾಣವಾಗಿದ್ದು, ಅವುಗಳಲ್ಲಿ ಅನೇಕ ದೇವಾಲಯಗಳು ಅತಿಯಾದ ನಗರೀಕರಣದಿಂದಾಗಿ ಭಗ್ನವಾಗಿ ಇಂದು ನಾಮಾವಶೇಷಗೊಂಡಿದ್ದು, ಉಳಿದಿರುವ ಕೆಲವೇ ದೇಗುಲಗಳಲ್ಲಿ ಬಾಣಸವಾಡಿಯ ಕಾಚಕರನಹಳ್ಳಿಯ ಸೋಮೇಶ್ವರ ದೇವಾಲಯ ಒಂದಾಗಿದೆ. ಹಳೇಬೀಡಿನಿಂದ ಸುಮಾರು 475 ಕಿ.ಮೀ. ದೂರದಲ್ಲಿರುವ ಕಣ್ಣಾನೂರಿನಲ್ಲಿರುವ ಹೊಯ್ಸಳರ ಹೊಯ್ಸಳೇಶ್ವರ ದೇವಾಲಯ ಚರಿತ್ರಾರ್ಹ ದೃಷ್ಟಿಯಿಂದ ಗಮನಾರ್ಹ.

ಇಂತಹ ವಿವರಗಳೊಂದಿಗೆ 50 ಹೊಯ್ಸಳ ದೇವಾಲಯಗಳ ವಾಸ್ತು ಮತ್ತು ಶಿಲ್ಪಗಳ ವೈಶಿಷ್ಟ್ಯವನ್ನು ಸ್ಥೂಲವಾಗಿ ಪರಿಚಯಿಸುವ ಶಶಿಧರ ಮತ್ತು ಶಂಕರ ಅಜ್ಜಂಪುರ ಅವರ 'ಹೊಯ್ಸಳ ವಾಸ್ತುಶಿಲ್ಪ ಅವಲೋಕನ' ಗ್ರಂಥ ಸ್ವಾಗತಾರ್ಹವಾಗಿದೆ. ಕರ್ನಾಟಕದ ಕಲೆ ಮತ್ತು ವಾಸ್ತುಗಳನ್ನು ಜನಸಾಮಾನ್ಯರಿಗೂ ಪರಿಚಯಿಸಿ, ಪ್ರಚುರ ಪಡಿಸುವ ಅವರ ಸಾಹಸ ಕಾರ್ಯ ಮೆಚ್ಚಬೇಕಾದ್ದು. ಈ ಗ್ರಂಥಕ್ಕೆ ಮುನ್ನುಡಿಯನ್ನು ಬರೆದಿರುವ ಹಿರಿಯರೂ–ಖ್ಯಾತ ಇತಿಹಾಸಕಾರರೂ ಆದ ಡಾ.ಎಚ್.ಎಸ್.ಗೋಪಾಲರಾವ್ ಅವರು ಈ ಇಬ್ಬರು ಲೇಖಕರ ಆಸಕ್ತಿಯನ್ನು ಶ್ಲಾಘಿಸಿದ್ದಾರೆ. ಅವರ ಶ್ರಮ ಸಾರ್ಥಕವಾಗಲಿ ಎಂದು ಆಶಿಸಿದ್ದಾರೆ.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಣೆ



ಮೈಸೂರು,ಸೆ.19–ಮೈಸೂರಿನ ಎಂ.ಎಂ.ಕೆ ಮತ್ತು ಎಸ್.ಡಿ.ಎಂ. ಮಹಿಳಾ ಮಹಾವಿದ್ಯಾಲಯ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಸಮಿತಿಯ ರಾಷ್ಟ್ರೀಯ ಸೇವಾ ಯೋಜನೆ –ಘಟಕದ ಸಹಯೋಗದಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಸಂವಿಧಾನ ಪ್ರತಿಜ್ಞಾವಿಧಿ ಬೋಧನಾ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ವೇಳೆ ವಕೀಲರಾದ ಸ್ಮಿತಾ ದೇವಯ್ಯ ಅವರು, ಭಾರತೀಯ ಸಂವಿಧಾನ, ಸಂವಿಧಾನದ ಪೀಠಿಕೆ ಮತ್ತು ಅದರ ಪ್ರಾಮುಖ್ಯತೆ, ಶ್ರೀಮಂತ ಜ್ಞಾನದ ಬಗ್ಗೆ ಸ್ಫೂರ್ತಿದಾಯಕ ಮಾತುಗಳೊಂದಿಗೆ ತಿಳಿಸಿದರು. ಅವರು ಸಂವಿಧಾನದ ಪೀಠಿಕೆಯ ಸಾರ ಮತ್ತು ಮಹತ್ವವನ್ನು ವಿವರಿಸಿ ಅದು ಸರ್ಕಾರದೊಂದಿಗೆ ನಾಗರಿಕರ ಪ್ರತಿಬಿಂಬವಾಗಿದೆ ಮತ್ತು ಅದು ರಾಷ್ಟ್ರದ ಮೌಲ್ಯಗಳನ್ನು ಎತ್ತಿ ಹಿಡಿಯುತ್ತದೆ ಎಂಬ ವಿಷಯವನ್ನು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಪ್ರೊ.ಸಾಯಿನಾಥ್ ಮಲ್ಲಿಗೆಮಾಡು ಮಾತನಾಡಿ, ನಮ್ಮ ಸಂವಿಧಾನದ ಪೀಠಿಕೆಯಲ್ಲಿ ಪ್ರತಿಪಾದಿಸಿರುವ ಪ್ರಜಾಪ್ರಭುತ್ವದ ಸಾರವನ್ನು ವಿವರಿಸುವ ಮೂಲಕ ಪ್ರತಿಯೊಬ್ಬರು ಸಂವಿಧಾನಾತ್ಮಕವಾಗಿ ಜೀವಿಸಿದರೆ ಉತ್ತಮ ಸಮಾಜ ಮತ್ತು ಸದೃಢ ಭಾರತವನ್ನು ನಿರ್ಮಿಸಲು ಸಾಧ್ಯವಾಗುತ್ತದೆ. ನಮ್ಮ ಸಂವಿಧಾನದ ಪೀಠಿಕೆಯು ನ್ಯಾಯಯುತ, ಸಮಾನ ಮತ್ತು ಪ್ರಜಾಪ್ರಭುತ್ವದ ಭಾರತಕ್ಕಾಗಿ ನಮ್ಮ ಹಂಚಿಕೆಯ ದೃಷ್ಟಿಯ ಕಾಲಾತೀತ ಮಹತ್ವವನ್ನು ಹೇಳಿದೆ ಎಂದರು. ನಾವೆಲ್ಲರೂ ನಮ್ಮ ರಾಷ್ಟ್ರವನ್ನು ವಿಶ್ವದ ಶ್ರೇಷ್ಠರಾಷ್ಟ್ರವಾಗಿಸಬೇಕಾದರೆ ಸಾಂವಿಧಾನಿಕ ಪೀಠಿಕೆ ತತ್ವಗಳನ್ನು ನಮ್ಮ ಜೀವನಕ್ಕೆ ಅಳವಡಿಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ವಿದ್ಯಾರ್ಥಿ ಕ್ಷೇಮಪಾಲನಾಧಿಕಾರಿ ಜ್ಯೋತಿ ಲಕ್ಷ್ಮೀ ಕಾವಾ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಅನಿತಾ ಪಿ.ಜಯ ರಾಂ, ಐಕ್ಯೂಎಸಿ ಸಂಯೋಜಕಿ ಸುಕೃತಾ, ಲೀಗಲ್ ಲಿಟ್ರೆಸಿ ಸಮಿತಿ ಸಂಚಾಲಕ ಎಂ.ಆರ್.ನಿರಂತ್, ಪದಾಧಿಕಾರಿಗಳು ಇದ್ದರು.



ಮೈಸೂರಿನ ನಜರ್‌ಬಾದ್ ವಾರ್ಡ್ ನಂ.40ರಲ್ಲಿ ಸೋಮವಾರ ಗೌರಿ–ಗಣೇಶ ಹಬ್ಬದ ಪ್ರಯುಕ್ತ ಚಾಮರಾಜ ಕ್ಷೇತ್ರದ ಶಾಸಕರಾದ ಕೆ.ಹರೀಶ್‌ಗೌಡ ಅವರು ನೂರಾರು ಮಹಿಳೆಯರಿಗೆ ಸೀರೆ, ಬಳೆ, ಅರಿಶಿನ –ಕುಂಕುಮ ವಿತರಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕಿನ ನಿರ್ದೇಶಕರಾದ ಎಸ್.ಆರ್.ರವಿಕುಮಾರ್ ಇತರರು ಉಪಸ್ಥಿತರಿದ್ದರು.

ಡಿ-ಗ್ರೂಪ್ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು.ಸೆ.19– ಮೈಸೂರು ಜಿಲ್ಲೆ ಸಹಾಯಕ ಕಾರ್ಮಿಕ ಆಯುಕ್ತರ ಕಚೇರಿಯ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯಲ್ಲಿ ಗೌರವಧನದ ಆಧಾರದ ಮೇಲೆ ಡಿ ಗ್ರೂಪ್ ಹುದ್ದೆ ಖಾಲಿಯಿದ್ದು, ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.22 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಕುವೆಂಪುನಗರದಲ್ಲಿರುವ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸಹಾಯಕ ಕಾರ್ಮಿಕ ಆಯುಕ್ತರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಬುಧವಾರ 20 ಸೆಪ್ಟೆಂಬರ್ 2023

ಮುಂಗಾರು ಮಳೆ ಕೊರತೆ: 44 ಲಕ್ಷ ಹೆಕ್ಟೇರ್ ಕೃಷಿ, ತೋಟಗಾರಿಕೆ ಬೆಳೆ ನಷ್ಟ

● 6 ಸಾವಿರ ಕೋಟಿ ನೆರವಿಗೆ ಕೇಂದ್ರಕ್ಕೆ ಮನವಿ ● ಕಂದಾಯ ಸಚಿವ ಕೃಷ್ಣಭೈರೇಗೌಡ ಮಾಹಿತಿ ● ಸಂಪುಟ ಸಭೆಯಲ್ಲಿ ಮನವಿ ಪತ್ರಕ್ಕೆ ಅನುಮತಿ ಪಡೆದು ಕೇಂದ್ರಕ್ಕೆ ಸಲ್ಲಿಕೆ

ಬೆಂಗಳೂರು, ಸೆ.19(ಕೆಎಂಶಿ)– ಮುಂಗಾರು ಮಳೆ ಕೊರತೆಯಿಂದ 44 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಹಾಗೂ ತೋಟಗಾರಿಕೆ ಬೆಳೆ ನಷ್ಟವಾಗಿದ್ದು, ಪರಿಹಾರಕ್ಕಾಗಿ 6 ಸಾವಿರ ಕೋಟಿ ರೂ. ನೆರವು ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸುವುದಾಗಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 42 ಲಕ್ಷ ಹೆಕ್ಟೇರ್ ಕೃಷಿ ಬೆಳೆ ಹಾಗೂ 2 ಲಕ್ಷ ಹೆಕ್ಟೇರ್ ತೋಟಗಾರಿಕೆ ಬೆಳೆ ಇದುವರೆಗೂ ನಷ್ಟವಾಗಿದೆ. ಮುಂದಿನ ದಿನಗಳಲ್ಲಿ ಇದರ ಪ್ರಮಾಣ ಹೆಚ್ಚಬಹುದು ಎಂದರು.

ಹಾಲಿ 195 ತಾಲೂಕುಗಳ ಜತೆಗೆ ಮತ್ತಷ್ಟು ತಾಲೂಕುಗಳು ತಿಂಗಳಾಂತ್ಯ ಬರಪೀಡಿತ ತಾಲೂಕುಗಳೆಂಬ ಘೋಷಣೆಗೆ ಒಳಪಡುತ್ತವೆ. ಬರ ಪರಿಹಾರದ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಇನ್ನೊಂದು ವಾರದಲ್ಲಿ ಮನವಿ ಸಲ್ಲಿಸಲಾಗುವುದು. ಘೋಷಿತ ತಾಲೂಕುಗಳಲ್ಲಿ ಬರ ಪರಿಹಾರ ಕಾರ್ಯಗಳಿಗೆ ಕೇಂದ್ರದ ಮಾರ್ಗಸೂಚಿ ಪ್ರಕಾರ ವರದಿ ನೀಡಲು ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆ ಸೂಚಿಸಲಾಗಿತ್ತು. ಆಯಾ ಇಲಾಖೆಗಳು ಕರಡು ವರದಿ ಸಲ್ಲಿಸಿದ್ದನ್ನು ಇಂದು ಹಿರಿಯ ಅಧಿಕಾರಿಗಳೊಂದಿಗೆ ಪರಿಶೀಲಿಸಲಾಗಿದ್ದು, ಕೆಲವೊಂದು ಸಣ್ಣ-ಪುಟ್ಟ ಬದಲಾವಣೆಗಳೊಂದಿಗೆ ನಾಲ್ಕೈದು ದಿನದಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಿರುವ ಮನವಿ ಪತ್ರ ಸಿದ್ಧವಾಗಲಿದೆ ಎಂದು ಹೇಳಿದರು.



ಮನವಿ ಪತ್ರ ಸಿದ್ಧಪಡಿಸಿದ ಬಳಿಕ ಸಂಪುಟ ಸಭೆ ಒಪ್ಪಿಗೆ ಪಡೆದು ವಾರದೊಳಗೆ ಮಾರ್ಗಸೂಚಿ ಪ್ರಕಾರ ನೆರವು ಕೋರಿ ಮನವಿ ಪತ್ರ ಸಲ್ಲಿಸಲಾಗುವುದು. ಉಳಿದಿರುವ 41 ತಾಲೂಕುಗಳಲ್ಲಿ ಮಳೆ ಕೊರತೆ ಇದೆ. ಶಾಸಕರು ಬರಪೀಡಿತ ಪಟ್ಟಿಗೆ ಸೇರ್ಪಡೆ ಮಾಡುವಂತೆ ಒತ್ತಡ ಹಾಕುತ್ತಿದ್ದಾರೆ. ಆದರೂ ಕೇಂದ್ರದ ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಅರ್ಹವಾಗುವ ತಾಲೂಕುಗಳ ಎರಡನೇ ಪಟ್ಟಿಯನ್ನು ಈ ತಿಂಗಳ ಅಂತ್ಯದೊಳಗೆ ಘೋಷಣೆ ಮಾಡಲಾಗುವುದು ಎಂದರು. ಕೃಷಿ ಇಲಾಖೆ ವ್ಯಾಪ್ತಿಯ 40 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, 4 ಸಾವಿರ ಕೋಟಿ ರೂ. ಪರಿಹಾರ ಕೋರಬಹುದಾಗಿದೆ. 2 ಲಕ್ಷ ಹೆಕ್ಟೇರ್ ಪ್ರದೇಶದ ತೋಟಗಾರಿಕೆ ಬೆಳೆ ಹಾನಿಯಾಗಿದ್ದು, ಮಾರ್ಗಸೂಚಿ ಪ್ರಕಾರ 200 ಕೋಟಿ ಪರಿಹಾರ ಕೋರಬಹುದಾಗಿದೆ. ಇದಲ್ಲದೆ, ಜಾನುವಾರು ಮೇವು, ಕುಡಿಯುವ ನೀರು, ಉದ್ಯೋಗ ಸೇರಿದಂತೆ ಮಾರ್ಗಸೂಚಿ ಪ್ರಕಾರ ಸುಮಾರು 6 ಸಾವಿರ ಕೋಟಿ ರೂ.ಗೆ ಮನವಿ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಹೇಳಿದರು.



> ಕೇರಳ, ಜಾರ್ಖಂಡ್, ಪಶ್ಚಿಮ ಬಂಗಾಳ, ಅಸ್ಸಾಂ ಸೇರಿದಂತೆ ಹಲವು ರಾಜ್ಯಗಳಲ್ಲಿ ಮಳೆ ಕೊರತೆ ಇದೆ ಆ ರಾಜ್ಯಗಳು ಇನ್ನೂ ಬರಪೀಡಿತ ಪ್ರದೇಶಗಳನ್ನು ಘೋಷಿಸಿಲ್ಲ. ರಾಜ್ಯ ಸರ್ಕಾರ ಆದ್ಯತೆ ನೀಡಿ ಇತರೆ ರಾಜ್ಯಗಳಿಗಿಂತ ಮುಂಚೆ ಬರ ಘೋಷಣೆ ಮಾಡಿದೆ.
> –ಕೃಷ್ಣಭೈರೇಗೌಡ

ಅ.1ರಿಂದ ಆಸ್ತಿಯ ಮಾರ್ಗಸೂಚಿ ದರ ಪರಿಷ್ಕರಣೆ



ರಾಜ್ಯದಲ್ಲಿ ಅಕ್ಟೋಬರ್ ಒಂದರಿಂದ ಸ್ಥಿರಾಸ್ತಿ ನೋಂದಣಿ ಮಾರ್ಗಸೂಚಿ ದರ ಪರಿಷ್ಕರಣೆಯಾಗಲಿದ್ದು, ಸರಾಸರಿ ಶೇ.30ರಷ್ಟು ಹೆಚ್ಚಳವಾಗಲಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, ಪ್ರತಿವರ್ಷ ಆಸ್ತಿ ನೋಂದಣಿ ಮಾರ್ಗಸೂಚಿ ದರ ಪರಿಷ್ಕರಣೆ ಮಾಡಬೇಕು ಎಂಬ ನಿಯಮ ಇದೆ. ಪರಿಷ್ಕರಣೆಯಾದರೂ ಎಲ್ಲಾ ಕಡೆ ಮಾರ್ಗಸೂಚಿ ದರ ಏರಿಕೆ ಆಗಲ್ಲ. ಮಾರುಕಟ್ಟೆ ದರಕ್ಕಿಂತ ಮಾರ್ಗಸೂಚಿ ದರ ಹೆಚ್ಚಳವಿರುವ ಕಡೆಗಳಲ್ಲಿ ಮಾರ್ಗಸೂಚಿ ದರ ಹೆಚ್ಚಳವಾಗುವುದಿಲ್ಲ ಎಂದರು.

ಆದರೆ, ಮಾರುಕಟ್ಟೆ ದರಕ್ಕಿಂತ ಬಹಳ ಕಡಿಮೆ ಮಾರ್ಗಸೂಚಿ ದರವಿರುವ ಕಡೆಗಳಲ್ಲಿ ಖಂಡಿತ ಹೆಚ್ಚಳ ಆಗಲಿದೆ. ಹೆದ್ದಾರಿ, ವಿಮಾನ ನಿಲ್ದಾಣ, ಐಟಿ-ಬಿಟಿ ಇರುವ ಕಡೆಗಳಲ್ಲೇ ಮಾರ್ಗಸೂಚಿ ದರ ಕಡಿಮೆ ಇದ್ದು, ಇಂತಹ ಕಡೆ ಮಾರ್ಗಸೂಚಿ ದರ ಹೆಚ್ಚಳ ಆಗಲಿದೆ. ಏರಿಕೆ ಬಗ್ಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಇದೆ. ಆಕ್ಷೇಪಣೆ ಪರಿಶೀಲಿಸಿದ ಬಳಿಕ ಮಾರ್ಗಸೂಚಿ ದರ ಪರಿಷ್ಕರಣೆ ಅಧಿಸೂಚನೆ ಪ್ರಕಟವಾಗಲಿದೆ.

ಮಾರ್ಗಸೂಚಿ ದರ ಏರಿಕೆಯಾದರೆ ವರ್ಷಕ್ಕೆ 2000 ಕೋಟಿ ರೂ. ಆದಾಯ ಬರಲಿದೆ. ದರ ಏರಿಕೆಯಿಂದ ಒಂದಷ್ಟು ವ್ಯತ್ಯಾಸ ಆಗಬಹುದು. ಅದು 2 ತಿಂಗಳ ಬಳಿಕ ಸರಿ ಆಗಲಿದೆ ಎಂದರು.

ಆಸ್ತಿ ಮಾರಾಟದ ವೇಳೆ ಕಪ್ಪುಹಣ ಬಳಕೆಯಾಗುತ್ತಿದೆ. ಅದಕ್ಕೆ ಅವಕಾಶ ಕೊಡಬಾರದಲ್ಲವೇ? ಹೊಸದು ಮಾಡಿದಾಗ ಪರ-ವಿರೋಧ ಇರಲಿದೆ. ಆದರೆ ಮಾರ್ಗಸೂಚಿ ದರ ಪ್ರತಿವರ್ಷ ಏರಿಕೆ ಮಾಡಬೇಕು ಎಂಬುದು ಕಾಯಿದೆಯಲ್ಲಿದೆ. ಕಳೆದ ಐದು ವರ್ಷದಿಂದ ಮಾರ್ಗಸೂಚಿ ದರ ಏರಿಕೆ ಆಗಿರಲಿಲ್ಲ. ಅದಕ್ಕೆ ನಾವು ಈಗ ಮಾಡುತ್ತಿದ್ದೇವೆ ಎಂದು ಸಚಿವರು ಸ್ಪಷ್ಟನೆ ನೀಡಿದರು.

ಮಾಧವ ಕೃಪಾದಲ್ಲಿ ಗಣೇಶೋತ್ಸವ



ಮೈಸೂರು,ಸೆ.19(ಎಂಟಿವೈ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಮಾಧವ ಕೃಪಾದಲ್ಲಿ ಮೈಸೂರು ಧಾರ್ಮಿಕ ಪ್ರತಿಷ್ಠಾನದ ವತಿಯಿಂದ ಆಯೋಜಿಸಿದ್ದ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ರಾಜವಂಶಸ್ಥರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಲನೆ ನೀಡಿದರು.

ಸೆ.24ರವರೆಗೆ ಇಲ್ಲಿ ಗಣೇಶ ಉತ್ಸವ ಜರುಗಲಿದೆ. ಸೋಮವಾರ ನಡೆದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ನೂರಾರು ಮಂದಿ ಭಕ್ತರು ಪಾಲ್ಗೊಂಡಿದ್ದರು.

ಸೋಮವಾರ ಸಂಜೆ ನಡೆದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಗಣೇಶ ಉತ್ಸವಕ್ಕೆ ಮೆರಗು ನೀಡಿತು. ಹಿಂದೂ ಧರ್ಮದ ಶ್ರೀಮಂತ ಪರಂಪರೆಗೆ ಗಣೇಶೋತ್ಸವ ಸಾಕ್ಷಿಯಾಯಿತು.

ಈ ಸಂದರ್ಭದಲ್ಲಿ ಮೈಸೂರು ಧಾರ್ಮಿಕ ಪ್ರತಿಷ್ಠಾನದ ಸದಸ್ಯರಾದ ಮಂಜುನಾಥ್, ಲೋಹಿತ್ ಅರಸ್, ಅಕ್ಷಯ್, ಚರಣ್, ಎನ್.ಆರ್. ಮಂಜುನಾಥ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಾರಂತರ ಜನ್ಮದಿನ: ರಂಗ ಚೇತನಕ್ಕೆ ಗೀತ ನಮನ



ಮೈಸೂರು,ಸೆ.19(ಎಂಟಿವೈ)– ಮೈಸೂರಿನ ರಂಗಾಯಣದ ಆವರಣದಲ್ಲಿ ಗೀತ ನಮನದ ಮೂಲಕ ರಂಗಕರ್ಮಿ ಬಿ.ವಿ. ಕಾರಂತರ ಜನ್ಮದಿನ ಆಚರಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಂಗಾಯಣದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಂಗಾಯಣದ ಆವರಣದಲ್ಲಿರುವ ಬಿ.ವಿ.ಕಾರಂತರ ಪುತ್ಥಳಿಗೆ ಪುಷ್ಪಾರ್ಚನೆ ಮಾಡಲಾಯಿತು. ನಂತರ ಬಿ.ವಿ.ಕಾರಂತರು ರಂಗಾಯಣದ ಕಲಾವಿದರಿಗೆ ಮೊದಲ ಬಾರಿ ಹೇಳಿಕೊಟ್ಟ 'ಸೋಲಿಸಬೇಡ ಗೆಲ್ಲಿಸಯ್ಯ' ಹಾಗೂ 'ಕಿಂದರಜೋಗಿ' ಗೀತೆ ಸೇರಿದಂತೆ ಕಾರಂತರು ರಚಿಸಿರುವ ಇನ್ನಿತರ ಗೀತೆಗಳನ್ನು ರಂಗಾಯಣದ ಕಲಾವಿದರು ಹಾಡುವ ಮೂಲಕ ಗೌರವ ಅರ್ಪಿಸಿದರು.

ಈ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ರಂಗಾಯಣದ ನಿರ್ದೇಶಕಿ ನಿರ್ಮಲಾ ಮಠಪತಿ, ರಂಗಕರ್ಮಿಗಳಾದ ರಾಜಶೇಖರ್ ಕದಂಬ, ವೆಂಕಟರಮಣ ಐತಾಳ್, ರಂಗಾಯಣದ ಹಿರಿಯ ಕಲಾವಿದರಾದ ಗೀತಾ ಮೊಂಟಡ್ಕಾ, ಶಶಿಕಲಾ, ನಂದಿನಿ, ಕೃಷ್ಣಕುಮಾರ್, ಮಹದೇವ ಸೇರಿ ದಂತೆ ಇನ್ನಿತರರು ಉಪಸ್ಥಿತರಿದ್ದರು.

ರೈಲ್ವೆ ಗೂಡ್ಸ್ ಶೆಡ್‌ನಿಂದ ರಿಂಗ್ ರಸ್ತೆಗೆ ನೇರ ಸಂಪರ್ಕ

ಎಂಎನ್‌ಜಿಟಿ ರೈಲ್ವೆ ಗೂಡ್ಸ್ ಶೆಡ್ ಲಾರಿ ಮಾಲೀಕರ ಸಂಘದ ಸಮಾರಂಭದಲ್ಲಿ ಶಾಸಕ ತನ್ವೀರ್ ಸೇಠ್



ಮೈಸೂರು, ಸೆ. 19– ನಗರದ ರೈಲ್ವೆ ಗೂಡ್ಸ್ ಶೆಡ್‌ನಿಂದ ರಿಂಗ್ ರಸ್ತೆಗೆ ನೇರ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಶೀಘ್ರದಲ್ಲೇ ಅಭಿವೃದ್ಧಿಪಡಿಸಲಾಗುವುದು ಎಂದು ಶಾಸಕ ತನ್ವೀರ್ ಸೇಠ್ ಹೇಳಿದರು.

ನಗರದ ಎಂಎನ್‌ಜಿಟಿ ರೈಲ್ವೆ ಗೂಡ್ಸ್ ಶೆಡ್ ಲಾರಿ ಮಾಲೀಕರ ಸಂಘದವರು ಏರ್ಪಡಿಸಿದ್ದ ಸಮಾರಂಭದಲ್ಲಿ ಲಾರಿ ಮಾಲೀಕರ ಕುಂದು ಕೊರತೆಗಳನ್ನು ಆಲಿಸಿ ಅವರು ಮಾತನಾಡಿದರು.

ವಿವಿಧ ಸರಕುಗಳನ್ನು ತುಂಬಿಕೊಂಡು ಬರುವ ಲಾರಿಗಳು ಈಗ ಜೋಡಿ ತೆಂಗಿನಮರ ರಸ್ತೆಯಲ್ಲಿ ಸಂಚರಿಸುತ್ತಿವೆ. ಇದರಿಂದ ಈ ಭಾಗದಲ್ಲಿ ಹಲವು ಅಪಘಾತಗಳು ಸಹ ನಡೆದಿವೆ. ಈ ರಸ್ತೆಯಲ್ಲಿ ಭಾರಿ ಸರಕು ವಾಹನಗಳ ಸಂಚಾರ ದಟ್ಟವಾಗಿರುವುದರಿಂದ ಇಲ್ಲಿ ರೈಲ್ವೆ ಗೂಡ್ಸ್ ಶೆಡ್ ಲಾರಿಗಳ ಸಂಚಾರ ತಪ್ಪಿಸಿ ನೇರವಾಗಿ ರಿಂಗ್ ರಸ್ತೆಗೆ ಸಂಪರ್ಕ ಕಲ್ಪಿಸುವ ಯೋಜನೆ ಪ್ರಗತಿಯಲ್ಲಿದೆ. 15 ಅಡಿ ಹಳ್ಳದಲ್ಲಿ ಮಣ್ಣನ್ನು ತುಂಬಿ ರಸ್ತೆ ಮಾಡಿದ್ದೇವೆ. ಈ ರಸ್ತೆಯ 150 ಮೀಟರ್ ಭಾಗ ರೈಲ್ವೆ ಇಲಾಖೆಗೆ ಸೇರಿರುವ ಕಾರಣ ಸಂಸದರು, ಜಿಲ್ಲಾಧಿಕಾರಿಗಳು ಮತ್ತು ರೈಲ್ವೆ ಡಿವಿಜನಲ್ ಮ್ಯಾನೇಜರ್ ಅವರೊಂದಿಗೆ ಈ ಹಿಂದೆಯೂ ಚರ್ಚಿಸಿದ್ದೇವೆ. ಈಗಲೂ ಈ ಬಗ್ಗೆ ಮಾತುಕತೆ ನಡೆಸಿ, ಅದೊಂದು ಸಮಸ್ಯೆಗೆ ಪರಿಹಾರ ಕಂಡುಕೊಂಡರೆ ರಿಂಗ್ ರಸ್ತೆಗೆ ನೇರ ಸಂಪರ್ಕ ಸುಲಭವಾಗುತ್ತದೆ. ಜತೆಗೆ ಗೂಡ್ಸ್ ಶೆಡ್ ಬಳಿ ಸಾಮೂಹಿಕ ಶೌಚಾಲಯ ನಿರ್ಮಿಸಲು ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಕುಡಿಯುವ ನೀರು, ಬೀದಿದೀಪ ಮುಂತಾದವುಗಳನ್ನೂ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕೋದಂಡರಾಮು, ಎಂಎನ್‌ಜಿಟಿ ರೈಲ್ವೆ ಗೂಡ್ಸ್ ಶೆಡ್ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಪೀರ್ ಬಾಷಾ, ಉಪಾಧ್ಯಕ್ಷ ದಾದಾಪೀರ್, ಕಾರ್ಯದರ್ಶಿ ಅಬ್ದುಲ್ ಖಾದರ್ ಶಾಹೀದ್ ಮುಂತಾದವರು ಇದ್ದರು.

ಸೆ.25ರಂದು 'ಜನತಾ ದರ್ಶನ'

ಮೈಸೂರು, ಸೆ.19– ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕರ ಅಹವಾಲುಗಳಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲೂ ಪ್ರತಿ ತಿಂಗಳು ಜನತಾದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ಸಂಬಂಧ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸೆ.25ರಂದು ಏಕಕಾಲದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಸಂಬಂಧಿತ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಂತೆ ಜನತಾದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸೆ.25ರ ಬೆಳಗ್ಗೆ 11 ಗಂಟೆಗೆ ಮೈಸೂರಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ ಮಹದೇವಪ್ಪ ನೇತೃತ್ವದಲ್ಲಿ 'ಜನತಾ ದರ್ಶನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾಡಳಿತವು ಜನತಾ ದರ್ಶನ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಆಯೋಜಿಸಿ ಸಾರ್ವಜನಿಕರಿಗೆ ಪರಿಹಾರವನ್ನು ಒದಗಿಸುವ ನಿಟ್ಟಿನಲ್ಲಿ ಸೆ.21, 22ರಂದು ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಸಾರ್ವಜನಿಕರು ಲಿಖಿತ ಸವಾಲುಗಳನ್ನು ಅಗತ್ಯ ದಾಖಲೆಗಳ ಸಹಿತ ಜಿಪಂ ಕಚೇರಿಯಲ್ಲಿ ತೆರೆದಿರುವ 'ಜನತಾ ದರ್ಶನ' ವಿಭಾಗದಲ್ಲಿ ಮತ್ತು ಸಿದ್ಧಾರ್ಥನಗರದಲ್ಲಿನ ಡಿಸಿ ಕಚೇರಿಯಲ್ಲಿ ಮನವಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ವೀಕೃತವಾದ ಮನವಿಗಳನ್ನು ಕ್ರೋಢೀಕರಿಸಿ ಆದ್ಯತೆ ಮೇರೆಗೆ ಸೆ.25ರಂದು ಪರಿಶೀಲನೆಗೆ ತೆಗೆದುಕೊಳ್ಳಲಾಗುವುದು. ಮುಂದುವರೆದು ಸೆ.25ರಂದು ಸಹ ಅಹವಾಲು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಟಿ ಕೋ-ಆಪರೇಟಿವ್ ಬ್ಯಾಂಕ್ ವಾರ್ಷಿಕ ಸರ್ವ ಸದಸ್ಯರ ಸಭೆ ಕರೆಯುವಂತೆ ಒತ್ತಾಯ

ಮೈಸೂರು,ಸೆ.19–ಮೈಸೂರಿನ ಶ್ರೀ ಹರ್ಷ ರಸ್ತೆಯಲ್ಲಿರುವ ದಿ ಸಿಟಿ ಕೋ ಆಪರೇಟಿವ್ ಬ್ಯಾಂಕ್‌ನ ಸರ್ವ ಸದಸ್ಯರ ಸಭೆಯನ್ನು ಸೆ.17ರಂದು ಬೆಳಗ್ಗೆ 10 ಗಂಟೆಗೆ ಸೊಸೈಟಿ ಅಧ್ಯಕ್ಷ ಎಂ.ಎನ್.ಸ್ವರೂಪ್ ಅಧ್ಯಕ್ಷತೆಯಲ್ಲಿ ಚಂದ್ರಗುಪ್ತ ರಸ್ತೆಯಲ್ಲಿರುವ ಎಂ.ಎಲ್.ವರ್ಧಮಾನಯ್ಯ ಸ್ಮಾರಕ ಭವನದಲ್ಲಿ ಕರೆಯಲಾಗಿತ್ತು.

ಆದರೆ ಸಭೆಯನ್ನು ಕೇವಲ ಅರ್ಧ ಗಂಟೆಯಲ್ಲೇ ಅಂದರೆ 10.30ಕ್ಕೆ ಮುಕ್ತಾಯಗೊಳಿಸಲಾಗಿದೆ. ಸದಸ್ಯರು ತಮ್ಮ ಅಭಿಪ್ರಾಯಗಳನ್ನು ಸಲ್ಲಿಸಲು ಸಾಧ್ಯವಾಗದೇ ಇರುವುದರಿಂದ ಈ ಸಂಬಂಧ ಸದಸ್ಯರಾದ ಬೆಲವತ್ತ ಶಿವಕುಮಾರ್ ಸೇರಿದಂತೆ ನೂರಾರು ಸದಸ್ಯರು ಸಹಕಾರ ಸಂಘಗಳ ನಿಬಂಧಕರಿಗೆ ಮನವಿ ಸಲ್ಲಿಸಿದ್ದು, ವಾರದೊಳಗೆ ಮತ್ತೆ ಬ್ಯಾಂಕಿನ ವಾರ್ಷಿಕ ಮಹಾಸಭೆ ಕರೆಯುವಂತೆ ಆಗ್ರಹಿಸಿದ್ದಾರೆ.

ಬ್ಯಾಂಕಿನಿಂದ ಸದಸ್ಯರಿಗೆ ಸರಿಯಾಗಿ ಸಾಲ ಲಭ್ಯವಾಗದೇ ನಿರಾಸೆಯಾಗಿದೆ. ಕಾರ್ಯದರ್ಶಿಯವರ ವಿರುದ್ಧ ಆರೋಪಗಳಿದ್ದರೂ ಹಂಗಾಮಿಯಾಗಿ ಮುಂದುವರೆದಿದ್ದಾರೆ. ಸದಸ್ಯರ ಎನ್‌ಪಿಎ ದಿನೇ ದಿನೆ ಬೆಳೆಯುತ್ತಿದೆ. ಸಾಲ ವಸೂಲಿಯಾಗದೇ ಬಾಕಿ ಹೇರಳವಾಗಿದೆ. ಆಡಳಿತ ಮಂಡಳಿ ಸದಸ್ಯರಿಗೆ ಹೇರಳ ಸಾಲ ಮಂಜೂರು ಮಾಡಿ ಸುಸ್ತಿಯಾಗಿದ್ದರೂ ಕ್ರಮ ಕೈಗೊಂಡಿಲ್ಲ ಎಂದು ಶಿವಕುಮಾರ್ ದೂರಿದ್ದಾರೆ.

ಜೈತ್ರಾ ಕುಂದಾಪುರ ವಂಚನೆ ಪ್ರಕರಣ

ಒಡಿಶಾದಲ್ಲಿ ಅಭಿನವ ಹಾಲಶ್ರೀ ಸ್ವಾಮೀಜಿ ಬಂಧನ



ಬೆಂಗಳೂರು, ಸೆ.19– ಬಿಜೆಪಿ ಟಿಕೆಟ್ ಹಗರಣದಲ್ಲಿ 3ನೇ ಆರೋಪಿಯಾಗಿರುವ ವಿಜಯನಗರ ಜಿಲ್ಲೆಯ ಹಿರೇಹಡಗಲಿ ತಾಲೂಕಿನ ಅಭಿನವ ಹಾಲಶ್ರೀ ಸ್ವಾಮೀಜಿಯನ್ನು ಬೆಂಗಳೂರು ಪೊಲೀಸ್‌ನ ಅಪರಾಧ ನಿಗ್ರಹ ದಳದ ಪೊಲೀಸರು ಒಡಿಶಾದಲ್ಲಿ ವಶಕ್ಕೆ ಪಡೆದಿದ್ದಾರೆ. ಪ್ರಕರಣ ಬೆಳಕಿಗೆ ಬಂದಾಗಿನಿಂದ ಸ್ವಾಮೀಜಿ ನಾಪತ್ತೆಯಾಗಿದ್ದರು. ಅವರು ಆಶ್ರಮದಲ್ಲಿರುವ ಕಾರನ್ನು ಖುದ್ದಾಗಿ ಡ್ರೈವ್ ಮಾಡಿಕೊಂಡು ಬೇರೆಲ್ಲಿಗೋ ಹೋಗಿರುವ ಬಗ್ಗೆ ಮಾಹಿತಿಗಳು ಲಭ್ಯವಾಗಿದ್ದವು. ಹಾಗಾಗಿ, ಅತ್ತ ಆರೋಪಿಯ ಪತ್ತೆಗೆ ಪೊಲೀಸರು ಬಲೆ ಬೀಸಿದ್ದರು. ಮೂರು ದಿನಗಳ ಹಿಂದೆ, ಸ್ವಾಮೀಜಿಯವರ ಖಾಸಗಿ ಡ್ರೈವರ್ ಲಿಂಗರಾಜುನನ್ನು ಬಂಧಿಸಿದ್ದ ಸಿಸಿಬಿ ಪೊಲೀಸರು ಆತನ ವಿಚಾರಣೆ ನಡೆಸಿದಾಗ, ಸ್ವಾಮೀಜಿಯವರು ತಾವೇ ಖುದ್ದಾಗಿ ಕಾರು ಚಲಾಯಿಸಿಕೊಂಡು ಮೈಸೂರಿಗೆ ಹೋಗಿದ್ದಾಗಿಯೂ, ಅಲ್ಲಿ ಕಾರಿನ ನಂಬರ್ ಪ್ಲೇಟ್‌ಗಳನ್ನು ಕಳಚಿಟ್ಟು ಅಲ್ಲಿಂದ ಹೈದರಾಬಾದ್‌ಗೆ ತೆರಳಿದ್ದಾಗಿಯೂ ತಿಳಿದು ಬಂದಿತ್ತು. ಹಾಗಾಗಿ, ಸಿಸಿಬಿ ಪೊಲೀಸರ ತಂಡವೊಂದು ಹೈದರಾಬಾದ್ ತೆರಳಿತ್ತು.

ಆದರೆ, ಸ್ವಾಮೀಜಿಯನ್ನು ಒಡಿಶಾದಲ್ಲಿ ಬಂಧಿಸಲಾಗಿದೆ. ಒಡಿಶಾದ ಕಟಕ್‌ನಲ್ಲಿನ ಖಾಸಗಿ ಹೋಟೆಲ್ ಒಂದರಲ್ಲಿ ನೆಲೆಸಿದ್ದ ಸ್ವಾಮೀಜಿಯನ್ನು ಪತ್ತೆ ಹಚ್ಚಿದ್ದ ಪೊಲೀಸರು ಅವರು ಹೋಟೆಲ್‌ಗೆ ಹೋಗಿದ್ದರು. ಸಿಸಿಬಿ ಅಧಿಕಾರಿಗಳು ಸ್ವಾಮಿಜಿಯನ್ನು ಒಡಿಶಾದಿಂದ ಬಂಧಿಸಿದ್ದು, ಬೆಂಗಳೂರಿಗೆ ಕರೆತಂದು ಕೋರ್ಟ್ ಮುಂದೆ ಹಾಜರುಪಡಿಸಲಿದ್ದಾರೆ. ಹಾಲಶ್ರೀ ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸಿದ್ದು, ಜಾಮೀನು ಸಿಗೋ ಮುನ್ನವೇ ಸಿಸಿಬಿ ಪೊಲೀಸರಿಂದ ಅರೆಸ್ಟ್ ಆಗಿದ್ದಾನೆ.



ಮೈಸೂರು ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ ಶ್ರೀ ವಿಶ್ವಕರ್ಮ ಜಯಂತಿ ಪ್ರಯುಕ್ತ ಸಭಾ ಕಾರ್ಯಕ್ರಮಕ್ಕೂ ಮುನ್ನ ಭಾನುವಾರ ನಡೆದ ಮೆರವಣಿಗೆಗೆ ಮೈಸೂರಿನ ಕೆಟಿ ಸ್ಟ್ರೀಟ್‌ನಲ್ಲಿರುವ ಶ್ರೀ ಕಾಳಿಕಾಂಬ ಕಮಟೇಶ್ವರಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ನಂತರ ಭಗವಾನ್ ಶ್ರೀ ವಿಶ್ವಕರ್ಮ ರಥಕ್ಕೂ ಪೂಜೆ ಸಲ್ಲಿಸುವ ಮೂಲಕ ಸಂಸದ ಪ್ರತಾಪ್ ಸಿಂಹ ಚಾಲನೆ ನೀಡಿದರು. ಶ್ರೀ ವಿಶ್ವಕರ್ಮ ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ಸಿದ್ದಾಚಾರ್, ಉಪಾಧ್ಯಕ್ಷ ರಾಜು, ಮೈಸೂರು ಜಿಲ್ಲಾ ವಿಶ್ವಕರ್ಮ ಸಂಘದ ಅಧ್ಯಕ್ಷ ರಿಷಿ ವಿಶ್ವಕರ್ಮ, ಮೈಸೂರು ಜಿಲ್ಲಾ ಅಮರಶಿಲ್ಪಿ ವೇದಿಕೆ ಅಧ್ಯಕ್ಷ ನಾಗರಾಜ್ ಮತ್ತಿತರರನ್ನು ಚಿತ್ರದಲ್ಲಿ ಕಾಣಬಹುದು.

ಸೆ.21, ರಾಧಾಕೃಷ್ಣರ ವೇಷಭೂಷಣ ಸ್ಪರ್ಧೆ

ಮೈಸೂರು,ಸೆ.19–ಚಾಮರಾಜನಗರ–ಅಂತರರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಪ್ರಕಾಶ ಭವನದಲ್ಲಿ ಸೆ.21ರಂದು ಬೆಳಗ್ಗೆ 8.30ರಿಂದ 9.30ರವರೆಗೆ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ರಾಧಾಕೃಷ್ಣರ ವೇಷ ಭೂಷಣ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸ್ಪರ್ಧೆಯಲ್ಲಿ ಭಾಗವಹಿಸುವವರು ಮಾಹಿತಿಗೆ 7899820430, 7483520495 ಸಂಪರ್ಕಿಸಿ. ಪ್ರವೇಶ ಉಚಿತ.

ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು,ಸೆ.19–ಮೈಸೂರು ಜಿಲ್ಲೆಯ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧರು ಮತ್ತು ಪಾರ್ಸಿ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು ಅಭ್ಯರ್ಥಿಗಳ ಸುರಕ್ಷತಾ ದೃಷ್ಟಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ ಬೆಂಗಳೂರು ನಗರದಲ್ಲಿ ನಿರ್ಮಾಣವಾಗಿರುವ ಹಜ್ ಭವನದಲ್ಲಿ 10 ತಿಂಗಳ ವಸತಿ ಸಹಿತ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.25 ಕೊನೆಯ ದಿನ. ಸೇವಾ ಸಿಂಧು ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಪ್ರತಿಯನ್ನು ಜಿಲ್ಲಾ ಅಲ್ಪಸಂಖ್ಯಾತರ ಕಚೇರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ನಾಳೆ ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ಬೆಳ್ಳಿಹಬ್ಬ

ಮೈಸೂರು, ಸೆ.19(ಆರ್‌ಕೆ)–ಮೈಸೂರಿನ ಪೈವಿಸ್ತಾ ಹೋಟೆಲ್‌ನಲ್ಲಿ ಸೆ.21ರಂದು ಹೋಟೆಲ್ ಮಾಲೀಕರ ಪತ್ತಿನ ಸಹಕಾರ ಸಂಘದ ಬೆಳ್ಳಿ ಹಬ್ಬ ಸಮಾರಂಭ ಏರ್ಪಡಿಸಲಾಗಿದೆ ಎಂದು ಸಂಘದ ಅಧ್ಯಕ್ಷ ನಾರಾಯಣ ವಿ.ಹೆಗಡೆ ತಿಳಿಸಿದ್ದಾರೆ.

ಗುರುವಾರ ಸಂಜೆ 5.30 ಗಂಟೆಗೆ ನಡೆಯಲಿರುವ ಸಮಾರಂಭದಲ್ಲಿ ಮೈಸೂರಿನ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಶ್ರೀ ಮುಕ್ತಿದಾನಂದಜಿ ಮಹಾರಾಜ್ ಹಾಗೂ ಬೇಬಿ ಮಠದ ಶ್ರೀ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಕಾರ್ಯಕ್ರಮ ಉದ್ಘಾಟಿಸುವರು.

ಸಚಿವ ಎನ್.ಚೆಲುವರಾಯಸ್ವಾಮಿ, ಮೇಯರ್ ಶಿವಕುಮಾರ್, ಶಾಸಕರಾದ ಟಿ.ಎಸ್.ಶ್ರೀವತ್ಸ, ಕೆ.ಹರೀಶ್‌ಗೌಡ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ. ರವಿಕುಮಾರ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕ ಕೆ.ಎಸ್. ಹರೀಶ್‌ಕುಮಾರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಇದೇ ವೇಳೆ ಸಂಘಕ್ಕಾಗಿ ದುಡಿದ ಎಂ.ಕೆ.ಪುರಾಣಿಕ್, ಸುಧಾಕರ್ ಎಸ್.ಶೆಟ್ಟಿ, ಶಿವಕುಮಾರ್, ಎಂ.ವಿಷ್ಣುಮೂರ್ತಿ, ವಿ.ಎಸ್.ರವಿಶಾಸ್ತ್ರಿ, ಪಿ.ನಾರಾಯಣ ಕುಂದರ್ ಸೇರಿದಂತೆ 14 ಮಂದಿ ಹೋಟೆಲ್ ಮಾಲೀಕರನ್ನು ಸನ್ಮಾನಿಸಲಾಗುವುದು ಎಂದು ಹೆಗಡೆ ತಿಳಿಸಿದ್ದಾರೆ.

ಚೈತ್ರಾ ಕುಂದಾಪುರ ಪ್ರಕರಣದಲ್ಲಿ ಬಿಜೆಪಿ, ಆರ್‌ಎಸ್‌ಎಸ್ ಮುಖಂಡರು ಭಾಗಿ

ಈ ಬಹುಕೋಟಿ ಹಗರಣದ ಸಮಗ್ರ ತನಿಖೆಗೆ ಕಾಂಗ್ರೆಸ್ ಆಗ್ರಹ



ಮೈಸೂರು,ಸೆ.19(ಎಂಟಿವೈ)–ಹಿಂದೂಪರ ಸಂಘಟನೆಯ ಚೈತ್ರಾ ಕುಂದಾಪುರ ಬಿಜೆಪಿ, ಆರ್‌ಎಸ್‌ಎಸ್ ಕಾರ್ಯಕರ್ತರೊಂದಿಗೆ ಸೇರಿ 17ಕ್ಕೂ ಹೆಚ್ಚು ಮಂದಿಗೆ ಬಿಜೆಪಿ ಟಿಕೆಟ್ ಕೊಡಿಸುವ ಆಮಿಷವೊಡ್ಡಿ ಬಹುಕೋಟಿ ರೂ. ವಂಚಿಸಿದ್ದು, ಸಮಗ್ರ ತನಿಖೆ ನಡೆಸುವಂತೆ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಒತ್ತಾಯಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚೈತ್ರ ಜೈನ್ ಕುಂದಾಪುರ ಆರ್‌ಎಸ್‌ಎಸ್ ಹಾಗೂ ಬಿಜೆಪಿಯ 9 ಮಂದಿ ಕಾರ್ಯಕರ್ತರ ತಂಡ ರಚಿಸಿಕೊಂಡು ಕಳೆದ ವಿಧಾನಸಭಾ ಚುನಾವಣೆ ವೇಳೆ ಬಿಜೆಪಿಯಿಂದ ಟಿಕೆಟ್ ಕೊಡಿಸುವುದಾಗಿ ಭಾರಿ ಮೊತ್ತದ ವಂಚನೆ ಮಾಡಿರುವುದು ಬಿಜೆಪಿ ಕಾರ್ಯಕರ್ತರಿಂದಲೇ ಬಯಲಾಗಿದೆ. ಕೇವಲ ಗೋವಿಂದ ಪೂಜಾರಿ ಮಾತ್ರ ದೂರು ನೀಡಿರುವುದರಿಂದ ಸದ್ಯಕ್ಕೆ ಒಂದೇ ಪ್ರಕರಣ ಚರ್ಚೆಯಾಗುತ್ತಿದೆ. ಲಭ್ಯವಿರುವ ಮಾಹಿತಿಯಂತೆ 40 ಮಂದಿ ಮುಖಂಡರಿಂದ ಕೋಟ್ಯಾಂತರ ರೂ. ಪಡೆದಿರುವ ಚೈತ್ರ ಜೈನ್ ಕುಂದಾಪುರ 23 ಮಂದಿಗೆ ಟಿಕೆಟ್ ಕೊಡಿಸುವಲ್ಲಿ ಯಶಸ್ವಿಯಾಗಿದ್ದು, ಗೋವಿಂದ ಪೂಜಾರಿ ಸೇರಿದಂತೆ 17 ಮಂದಿಗೆ ವಂಚಿಸಿದ್ದಾರೆ. ಬಿಜೆಪಿ ಕಾರ್ಯಕರ್ತರೇ ಮಾತನಾಡಿಕೊಳ್ಳುತ್ತಿರುವಂತೆ ಒಟ್ಟು 185 ಕೋಟಿ ರೂ. ವ್ಯವಹಾರ ನಡೆಸಿರುವುದು ಬೆಳಕಿಗೆ ಬಂದಿದೆ ಎಂದು ದೂರಿದರು.

ಪಿಎಸ್‌ಐ ಹಗರಣಕ್ಕೂ ಚೈತ್ರಾಗೂ ಸಂಬಂಧವಿದೆಯಾ ಎನ್ನುವ ಬಗ್ಗೆ ತನಿಖೆಯಾಗಬೇಕು. ಮೈಸೂರು ಭಾಗದ ಇಬ್ಬರು ರಾಜಕಾರಣಿ ಗಳು ಚೈತ್ರ ಕುಂದಾಪುರ ಮೂಲಕ ಹಣ ಕೊಟ್ಟು ಟಿಕೆಟ್ ಪಡೆದಿದ್ದಾರೆ. ಆ ಇಬ್ಬರು ಕೂಡ ಮೈಸೂರು ಗ್ರಾಮಾಂತರ ಭಾಗದವರು. ಶೀಘ್ರದಲ್ಲೇ ಅವರ ಹೆಸರನ್ನು ಬಹಿರಂಗಪಡಿಸುತ್ತೇವೆ ಎಂದರು.

ಮಹಿಳಾ ಮೀಸಲಾತಿಯಲ್ಲಿ ಸೋನಿಯಾರ ಶ್ರಮವಿದೆ: ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕೊಡಿಸಲು ಸೋನಿಯಾ ಗಾಂಧಿ ಅವರ ಶ್ರಮವಿದೆ. ಈ ಬಗ್ಗೆ ಸೋನಿಯಾ ಗಾಂಧಿ, ಪ್ರಿಯಾಂಕ ಗಾಂಧಿ ಹಾಗೂ ರಾಹುಲ್ ಗಾಂಧಿ ನಿರಂತರ ಹೋರಾಟ ಮಾಡಿದ್ದಾರೆ. ಮಹಿಳಾ ಮೀಸಲಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಆರೋಪಿಗಳ ಬಂಧಿಸಬೇಕು: ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮಾತನಾಡಿ, ಚೈತ್ರಾ ಕುಂದಾಪುರ ಹೇಳಿಕೆ ಆಧಾರದ ಮೇಲೆ ಚಕ್ರವರ್ತಿ ಸೂಲಿಬೆಲೆ, ಅರಗ ಜ್ಞಾನೇಂದ್ರ ಸೇರಿ ಎಲ್ಲರನ್ನೂ ಬಂಧಿಸಬೇಕು. ಪಿಎಸ್‌ಐ ನೇಮಕಾತಿ ಹಗರಣ, ಕುಲಪತಿ ನೇಮಕಾತಿ ಹಗರಣವನ್ನು ಇದರ ವ್ಯಾಪ್ತಿಗೆ ತರಬೇಕು. ಬಿಜೆಪಿ ಸರ್ಕಾರದ ಅವಧಿಯ ಲೋಕಸೇವಾ ಆಯೋಗದ ಸದಸ್ಯರ ನೇಮಕಾತಿಯಲ್ಲೂ ಅವ್ಯವಹಾರವಾಗಿದೆ. ತನಿಖೆ ಮಾಡಿದರೆ ದೊಡ್ಡ ಹಗರಣ ಬಯಲಿಗೆ ಬರಲಿದೆ. ಈ ಸಂಬಂಧ ಮೈಸೂರು ನಿಯೋಗ ಮುಖ್ಯಮಂತ್ರಿ ಭೇಟಿ ಮಾಡಿ ನಿವೃತ್ತ ನ್ಯಾಯಾಧೀಶರ ಮೂಲಕ ತನಿಖೆಗೆ ಮನವಿ ಮಾಡುವಂತೆ ಒತ್ತಾಯಿಸುತ್ತೇವೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಧ್ಯಮ ವಕ್ತಾರ ಕೆ.ಮಹೇಶ, ಗಿರೀಶ್ ಉಪಸ್ಥಿತರಿದ್ದರು.

ನಾಳೆ 'ಕರಿನೀರ ವೀರ' ಪುಸ್ತಕ ಬಿಡುಗಡೆ

ಮೈಸೂರು,ಸೆ.19(ಎಸ್‌ಪಿಎನ್)–ಅಯೋಧ್ಯ ಪ್ರಕಾಶನ ಹೊರತಂದಿರುವ ಹಿರಿಯ ರಂಗಕರ್ಮಿ ಅಡ್ಡಂಡ ಸಿ.ಕಾರ್ಯಪ್ಪ ರಚಿಸಿರುವ 'ಕರಿನೀರ ವೀರ' ಕೃತಿಯನ್ನು ಸೆ.21ರಂದು ಸಂಜೆ 6 ಗಂಟೆಗೆ ಮೈಸೂರು ಮಹಾತ್ಮ ಗಾಂಧೀಜಿ ರಸ್ತೆಯಲ್ಲಿನ ಸಿಪಾಯಿ ಗ್ರಾಂಡ್ ಹೋಟೆಲ್‌ನಲ್ಲಿ ಹಿರಿಯ ರಂಗಕರ್ಮಿ ಎಸ್.ಎಸ್. ಸೇತುರಾಮ್ ಬಿಡುಗಡೆಗೊಳಿಸಿ, ಪುಸ್ತಕ ಕುರಿತು ಮಾತನಾಡಲಿದ್ದಾರೆ. ಈ ವೇಳೆ ಆದಿತ್ಯ ಆಸ್ಪತ್ರೆಯ ಅಧ್ಯಕ್ಷ ಡಾ.ಚಂದ್ರಶೇಖರ್, ಉದ್ಯಮಿ ಜಗನ್ನಾಥಶೆಣೈ, ನವದೆಹಲಿಯ ಸಂಗೀತ ನಾಟಕ ಅಕಾಡೆಮಿ ಸದಸ್ಯ ಡಾ.ಬಿ.ವಿ.ರಾಜಾರಾಮ್, ಮೈಸೂರು ಸಾವರ್ಕರ್ ಪ್ರತಿಷ್ಠಾನದ ಡಾ.ಎಸ್. ಯಶಸ್ವಿನಿ, ಬೆಂಗಳೂರು ಅಯೋಧ್ಯಾ ಪಬ್ಲಿಕೇಷನ್‌ನ ರೋಹಿತ್ ಚಕ್ರತೀರ್ಥ ಉಪಸ್ಥಿತರಿರುತ್ತಾರೆ.

ಇಂದಿನಿಂದ ಟ್ರಕ್ ಟರ್ಮಿನಲ್‌ನಲ್ಲಿ ಸಾರಿಗೆ ವಾಹನಗಳ ಪರಿಶೀಲನೆ

ಮೈಸೂರು, ಸೆ.19(ಆರ್‌ಕೆ)–ನಾಳೆ (ಸೆ.20)ಯಿಂದ ಸಾರಿಗೆ ವಾಹನಗಳ ಅರ್ಹತಾ ಪತ್ರ ನವೀಕರಣ, ಹೊಸ ವಾಹನಗಳ ಪರಿಶೀಲನೆ ಕಾರ್ಯವನ್ನು ಮೈಸೂರಿನ ನಂಜನಗೂಡು ರಿಂಗ್ ರಸ್ತೆ ಜಂಕ್ಷನ್‌ನಲ್ಲಿರುವ ಡಿ.ದೇವರಾಜ ಅರಸು ಟ್ರಕ್ ಟರ್ಮಿನಲ್‌ನಲ್ಲಿ ಪ್ರತೀದಿನ ಮಧ್ಯಾಹ್ನ 12 ಗಂಟೆ ನಂತರ ನಡೆಸಲಾಗುವುದು ಎಂದು ಆರ್‌ಟಿಓ (ಪಶ್ಚಿಮ) ಅಧಿಕಾರಿಗಳು ತಿಳಿಸಿದ್ದಾರೆ. ಕಚೇರಿ ಆವರಣ ಹಾಗೂ ಅಕ್ಕ-ಪಕ್ಕದ ರಸ್ತೆಗಳಲ್ಲಿ ಈ ಕಾರ್ಯ ನಡೆಯುತ್ತಿದ್ದರಿಂದ ಸಾರ್ವಜನಿಕರ ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿದ್ದರಿಂದ ಪರಿಶೀಲನಾ ಕಾರ್ಯವನ್ನು ಸ್ಥಳಾಂತರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ತ.ನಾಡಿಗೆ ನೀರು: ರೈತರಿಂದ ಅರೆಬೆತ್ತಲೆ ಚಳವಳಿ



ಮಂಡ್ಯ, ಸೆ.19– ಕೃಷ್ಣರಾಜಸಾಗರ ದಿಂದ ತಮಿಳುನಾಡಿಗೆ ನೀರು ಬಿಟ್ಟಿರುವ ರಾಜ್ಯ ಸರ್ಕಾರದ ಕ್ರಮ ಖಂಡಿಸಿ ನಗರದಲ್ಲಿ ರೈತರು ಕತ್ತೆಗಳೊಂದಿಗೆ ಅರೆಬೆತ್ತಲೆ ಚಳವಳಿ ನಡೆಸಿದರು.

ನಗರದ ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ಜಮಾಯಿಸಿದ ರೈತ ಮುಖಂಡರು ಕತ್ತೆಗಳಿಗೆ ಕೇಂದ್ರ, ರಾಜ್ಯ ಹಾಗೂ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರ ಎಂದು ನಾಮಕರಣ ಮಾಡಿ ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ವಿರುದ್ಧ ಧಿಕ್ಕಾರ ಕೂಗಿದ ರೈತರು, ಕೆಆರ್‌ಎಸ್‌ನಿಂದ ನೀರು ಬಿಡುವ ಮೂಲಕ ರೈತರ ಜೀವಕ್ಕೆ ಕಂಟಕರಾಗಿದ್ದಾರೆ. ರೈತರ ಪಾಲಿಗೆ ಮಂಡ್ಯ ಜಿಲ್ಲೆ ಶಾಸಕರು, ಸಂಸದರು ಸತ್ತು ಹೋಗಿದ್ದಾರೆ. ತಮಿಳುನಾಡಿಗೆ ನೀರು ಬಿಡುತ್ತಿದ್ದರೂ ಬಾಯಿ ಮುಚ್ಚಿಕೊಂಡಿದ್ದು, ತಮ್ಮ ಸರ್ಕಾರದ ಬೆಂಬಲಕ್ಕೆ ನಿಲ್ಲುವ ಮೂಲಕ ರೈತರಿಗೆ ದ್ರೋಹ ಮಾಡಿದ್ದಾರೆ ಎಂದು ಆರೋಪಿಸಿದರು.

ಕೆಆರ್‌ಎಸ್‌ನಿಂದ 5 ಸಾವಿರಕ್ಕೂ ಹೆಚ್ಚು ಕ್ಯುಸೆಕ್ ನೀರನ್ನು ಹರಿಸಲಾಗುತ್ತಿದೆ. ಆದರೆ ಜಿಲ್ಲಾ ಉಸ್ತುವಾರಿ ಸಚಿವರು 3 ಸಾವಿರ ಕ್ಯುಸೆಕ್ ನೀರು ಹರಿದು ಹೋಗುತ್ತಿದೆ ಎಂದು ಸುಳ್ಳು ಹೇಳಿದ್ದಾರೆ. ನಿರಂತರವಾಗಿ ನೀರು ಹರಿಸಿದ ಪರಿಣಾಮ ಜಲಾಶಯದಲ್ಲಿ ನೀರು ಬರಿದಾಗಿದೆ. ಮತ್ತೆ 15 ದಿನ ನೀರು ಬಿಟ್ಟರೆ ರೈತರ ಗತಿಯೇನು? ಕುಡಿಯಲು ನೀರು ಸಿಗುವುದೇ ಎಂದು ಆತಂಕ ವ್ಯಕ್ತಪಡಿಸಿದರು.

ಕಾವೇರಿ ನದಿ ನೀರು ಪ್ರಾಧಿಕಾರ ಕರ್ನಾಟಕಕ್ಕೆ ನಿರಂತರ ಅನ್ಯಾಯ ಮಾಡುತ್ತಿದೆ. ಜಲಾಶಯಗಳಲ್ಲಿ ನೀರಿನ ಸಂಗ್ರಹದ ಬಗ್ಗೆ ಖುದ್ದು ಭೇಟಿ ನೀಡಿ ಅರಿಯದೆ ನೀರು ಬಿಡಿ ಎಂದು ಆದೇಶ ಮಾಡುತ್ತಿದೆ. ಕಳೆದೊಂದು ತಿಂಗಳಿಂದ ರೈತರು ಹೋರಾಟ ಮಾಡುತ್ತಿದ್ದರೂ, ಕೇಂದ್ರ ಸರ್ಕಾರ ಕಣ್ಮುಚ್ಚಿ ಕುಳಿತಿದೆ. ಈ ಕೂಡಲೇ ಮಧ್ಯ ಪ್ರವೇಶಿಸಿ ಕರ್ನಾಟಕಕ್ಕೆ ನ್ಯಾಯ ದೊರಕಿಸಿ ಕೊಡಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ರೈತ ಸಂಘದ ಚಂದ್ರಶೇಖರ್, ಸುರೇಶ್, ನಾಗರಾಜು, ದಿನೇಶ್, ಜವರೇಗೌಡ, ನಾಗರಾಜು, ವಿಜಯ ಕುಮಾರ್, ಶಿವರಾಂ ಇನ್ನಿತರರು ಭಾಗವಹಿಸಿದ್ದರು.

ಶ್ರೀರಂಗಪಟ್ಟಣದಲ್ಲಿ ರೈತರಿಂದ ಅಣಕು ಗುಳೆ ಯಾತ್ರೆ



ಶ್ರೀರಂಗಪಟ್ಟಣ, ಸೆ.19– ಕೆಆರ್‌ಎಸ್‌ನಿಂದ ತಮಿಳುನಾಡಿಗೆ ನೀರು ಹರಿಸುತ್ತಿರುವ ರಾಜ್ಯ ಸರ್ಕಾರ ರೈತರಿಗೆ ಗುಳೆ ಭಾಗ್ಯ ನೀಡಿದೆ ಎಂದು ಭೂಮಿ ತಾಯಿ ಹೋರಾಟ ಸಮಿತಿ ಆಶ್ರಯದಲ್ಲಿ ರೈತರು ಅಣಕು ಗುಳೆ ಯಾತ್ರೆ ನಡೆಸುವ ಮೂಲಕ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಕಾವೇರಿ ನದಿ ಸ್ನಾನಘಟ್ಟದ ಬಳಿಯಿಂದ ತಾಲೂಕು ಕಚೇರಿವರೆಗೆ ಅಣಕು ಗುಳೆ ಯಾತ್ರೆ ಮೂಲಕ ಪ್ರತಿಭಟನೆ ನಡೆಸಿ ಸರ್ಕಾರ ಹಾಗೂ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರ ವಿರುದ್ಧ ಘೋಷಣೆ ಕೂಗಿದರು.

ಭೂಮಿತಾಯಿ ಹೋರಾಟ ಸಮಿತಿ ಮುಖಂಡ ಕೆ.ಎಸ್.ನಂಜುಂಡೇಗೌಡ ಮಾತನಾಡಿ, ಸರ್ಕಾರ ಕದ್ದು ಮುಚ್ಚಿ ತಮಿಳುನಾಡಿಗೆ ನೀರು ಬಿಟ್ಟು ಜನ–ಜಾನುವಾರುಗಳಿಗೆ ಕುಡಿಯಲು ಹಾಗೂ ರೈತರ ಬೇಸಾಯಕ್ಕೂ ನೀರಿಲ್ಲದಂತೆ ಮಾಡುವ ಮೂಲಕ ನೇಣು ಭಾಗ್ಯ ನೀಡಿದೆ. ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡ ಮತ್ತೊಮ್ಮೆ ನೀರು ಬಿಟ್ಟರೆ ರೈತರ ಜೊತೆ ಉಪವಾಸ ಮಾಡುವುದಾಗಿ ಹೇಳಿದ್ದರು. ಇದೀಗ ಸರ್ಕಾರ ಪುನಃ ಕದ್ದು ಮುಚ್ಚಿ ನೀರು ಬಿಡುತ್ತಿದೆ. ಶಾಸಕರು ಈಗ ಎಲ್ಲಿ ಹೋಗಿದ್ದಾರೆ. ಕೊಟ್ಟ ಮಾತನ್ನು ಉಳಿಸಿಕೊಳ್ಳಿ ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಭೂಮಿತಾಯಿ ಹೋರಾಟ ಸಮಿತಿ ಅಧ್ಯಕ್ಷ ಬಿ.ಸಿ.ಕೃಷ್ಣೇಗೌಡ, ಎಂ.ವಿ.ಕೃಷ್ಣ, ಸುನೀಲ್, ಮಹದೇವು, ಶಿವಣ್ಣ, ಮಂಜುನಾಥ್ ಸೇರಿದಂತೆ ಇತರರಿದ್ದರು.

ಜನವರಿಗೆ ಕ್ಯಾನ್ಸರ್ ಆಸ್ಪತ್ರೆ ಆರಂಭಿಸಲು ಕ್ರಮ: ಸಚಿವ ಎನ್.ಚಲುವರಾಯಸ್ವಾಮಿ



ಮಂಡ್ಯ, ಸೆ.19– ನಗರದ ಮಿಮ್ಸ್ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಕ್ಯಾನ್ಸರ್ ಆಸ್ಪತ್ರೆಯನ್ನು ಜನವರಿಯಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ಮಂಗಳವಾರ ನಗರದ ಮಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಒಳ ಮತ್ತು ಹೊರರೋಗಿ ವಿಭಾಗ, ಹೆರಿಗೆ ವಾರ್ಡ್, ಔಷಧಿ ವಿಭಾಗ ಕೊಠಡಿ, ತುರ್ತು ಚಿಕಿತ್ಸಾ ವಿಭಾಗ ಸೇರಿದಂತೆ ವಿವಿಧ ವಾರ್ಡ್‌ಗಳಿಗೆ ತೆರಳಿ ಪರಿಶೀಲಿಸಿ ಮಾತನಾಡಿದ ಅವರು, ಜಿಲ್ಲಾ ಕ್ಯಾನ್ಸರ್ ಆಸ್ಪತ್ರೆಗೆ ಸರ್ಕಾರದಿಂದ 12 ಕೋಟಿ ಬಿಡುಗಡೆ ಮಾಡಲಾಗಿತ್ತು. ಇದೀಗ ಹೆಚ್ಚುವರಿಯಾಗಿ 5 ಕೋಟಿ ಬಿಡುಗಡೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ ಎಂದರು. ಕ್ಯಾನ್ಸರ್ ತಪಾಸಣೆ ಹಾಗೂ ಚಿಕಿತ್ಸೆಗೆ ಬೇಕಿರುವ ವೈದ್ಯಕೀಯ ಯಂತ್ರೋಪಕರಣಗಳನ್ನು 10 ಕೋಟಿ ವೆಚ್ಚದಲ್ಲಿ ಖರೀದಿಸಬೇಕಿದೆ. ಇದಕ್ಕಾಗಿ ರಾಜ್ಯ ಮಟ್ಟದಲ್ಲಿ ಟೆಂಡರ್ ಪ್ರಕ್ರಿಯೆ ನಡೆಸಲು ಕ್ರಮ ಕೈಗೊಳ್ಳಲಾಗುವುದು. ಆಸ್ಪತ್ರೆಗೆ 235 ಸಿಬ್ಬಂದಿ ಅವಶ್ಯಕತೆ ಇದ್ದು, ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ ಎಂದರು.

ಆಸ್ಪತ್ರೆ ಪ್ರಾರಂಭವಾಗಿ 30ರಿಂದ 40 ವರ್ಷಗಳಾಗಿವೆ. ದಿನಕ್ಕೆ 2 ಸಾವಿರ ಹೊರ ರೋಗಿಗಳು, 160 ಒಳ ರೋಗಿಗಳು ದಾಖಲಾಗುತ್ತಾರೆ. ಆಸ್ಪತ್ರೆಯಲ್ಲಿ 450 ಬೆಡ್‌ಗಳಿದ್ದು, ದಿನಕ್ಕೆ 850 ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಆಸ್ಪತ್ರೆಯಲ್ಲಿ ಸಾಕಷ್ಟು ಸಮಸ್ಯೆ ಇದೆ. ಇದನ್ನು ಹಂತ ಹಂತವಾಗಿ ಬಗೆಹರಿಸಲು ಕ್ರಮವಹಿಸಲಾಗುವುದು. ಪ್ರತಿದಿನ 500 ರೋಗಿಗಳಿಗೆ ಸ್ಕ್ಯಾನಿಂಗ್ ಮಾಡಬೇಕಿದೆ. ಮೂವರು ವೈದ್ಯರು ಲಭ್ಯವಿದ್ದಾರೆ. ಎಲ್ಲರಿಗೂ ಸೌಲಭ್ಯ ಒದಗಿಸಲು ತುರ್ತು ಪರಿಸ್ಥಿತಿ ಆಧಾರದ ಮೇಲೆ ಎಬಿಸಿ ಎಂಬಂತೆ 3 ವಿಭಾಗ ಮಾಡಿಕೊಂಡು ರೋಗಿಗಳಿಗೆ ತಕ್ಷಣ ಸ್ಪಂದಿಸುವಂತೆ ತಿಳಿಸಿದರು.

ಆಸ್ಪತ್ರೆ ಗ್ರಂಥಾಲಯ ಮತ್ತು ಪರೀಕ್ಷಾ ಕೊಠಡಿಗಳ ಕಾಮಗಾರಿಗೆ ಸರ್ಕಾರದಿಂದ 7 ಕೋಟಿ ಅನುಮೋದನೆ ಗೊಂಡಿದ್ದು, ಹೆಚ್ಚುವರಿ ಕಾಮಗಾರಿ ಕೈಗೊಳ್ಳಬೇಕಿದ್ದು, ಈ ಬಗ್ಗೆ ಸರ್ಕಾರದ ಹಂತದಲ್ಲಿ ನಿರ್ಧಾರವಾಗಬೇಕಿದೆ ಎಂದರು. ಈ ವೇಳೆ ಶಾಸಕರಾದ ಗಣಿಗ ರವಿಕುಮಾರ್, ಕೆ.ಎಂ.ಉದಯ್, ಜಿಲ್ಲಾಧಿಕಾರಿ ಡಾ. ಕುಮಾರ್, ಜಿಪಂ ಸಿಇಓ ಶೇಕ್ ತನ್ವೀರ್ ಆಸೀಫ್, ಎಸ್ಪಿ ಎನ್.ಯತೀಶ್, ಮಿಮ್ಸ್ ನಿರ್ದೇಶಕ ಡಾ.ಮಹೇಂದ್ರ, ಅಧೀಕ್ಷಕ ಶ್ರೀಧರ್ ಇತರರಿದ್ದರು.

ಕೆ.ಆರ್.ಪೇಟೆಯಲ್ಲಿ ವಿಶ್ವಕರ್ಮ ಜಯಂತಿ



ಕೆ.ಆರ್.ಪೇಟೆ, ಸೆ.19– ತಾಂತ್ರಿಕ ಕೌಶಲ್ಯ ಹಾಗೂ ವಾಸ್ತು ವಿನ್ಯಾಸಕ್ಕೆ ಭಗವಾನ್ ವಿಶ್ವಕರ್ಮರೇ ನಮಗೆ ಪ್ರೇರಕ ಶಕ್ತಿ. ಪಂಚ ಕಸುಬುಗಳಲ್ಲಿ ಪಾಂಡಿತ್ಯ ಹೊಂದಿರುವ ವಿಶ್ವಕರ್ಮ ಜನಾಂಗ ಕಾಯಕ ನಿಷ್ಠೆ ಹಾಗೂ ವೃತ್ತಿ ಕೌಶಲ್ಯಕ್ಕೆ ಹೆಸರಾಗಿದ್ದಾರೆ ಎಂದು ತಹಸೀಲ್ದಾರ್ ನಿಸರ್ಗಪ್ರಿಯ ತಿಳಿಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವಕರ್ಮ ಜಯಂತಿಯಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ರೈತರ ಬೇಸಾಯದ ಪರಿಕರಗಳು, ವಿಗ್ರಹಗಳು, ಮನೆಯ ಪರಿಕರಗಳು, ಬಂಗಾರದ ಒಡವೆಗಳು ಸೇರಿದಂತೆ ಪಂಚ ಕಸುಬುಗಳಿಗೆ ಪ್ರೇರಕ ಶಕ್ತಿ ವಿಶ್ವಕರ್ಮರು ಎಂದರು. ತಾಲೂಕು ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಕೆ.ಎನ್.ಕುಮಾರಸ್ವಾಮಿ ಮಾತನಾಡಿ, ಸಮಾಜದ ಮುಖಂಡ ನಂಜುಂಡಿ ಅವರ ಹೋರಾಟದ ಫಲವಾಗಿ ಸರ್ಕಾರ ವಿಶ್ವಕರ್ಮ ಜಯಂತಿ ಆಚರಿಸುತ್ತಿದೆ. ಇಂದು ಸರಳವಾಗಿ ವಿಶ್ವಕರ್ಮ ಜಯಂತಿ ಆಚರಿಸಿ ಮುಂದಿನ ದಿನಗಳಲ್ಲಿ ವಿಶ್ವಕರ್ಮ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸುತ್ತೇವೆ ಎಂದರು.

ಈ ವೇಳೆ ಸಮಾಜದ ಮುಖಂಡರಾದ ರೂಪೇಶಾಚಾರ್, ಎನ್.ಜೆ.ಮಂಜು, ಎ.ಎಸ್.ರಾಜಣ್ಣ, ರುಕ್ಮಾಂಗದಾಚಾರ್, ತಾಲೂಕು ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಡಾ.ಕೆ.ಎಂ.ಶಿವಪ್ಪ, ಶಿಕ್ಷಕರಾದ ಮಂಜುನಾಥ್, ಟಿಎಪಿಸಿಎಂಎಸ್ ರವಿ, ವಿಶ್ರಾಂತ ಉಪನ್ಯಾಸಕ ವಸಂತಕುಮಾರ್, ಪ್ರೌಢಶಾಲಾ ಮುಖ್ಯಶಿಕ್ಷಕ ಎಂ.ಎನ್.ರಮೇಶ್, ಬಿಆರ್‌ಪಿ ಯೋಗೇಶ್, ತಾಲೂಕು ಒಕ್ಕಲಿಗ ಸಮಾಜದ ಅಧ್ಯಕ್ಷ ಆರ್.ಎಸ್.ಶಿವರಾಮೇಗೌಡ, ತಾಲೂಕು ಬಿಸಿಎಂ ಅಧಿಕಾರಿ ಎಂ.ಎನ್.ವೆಂಕಟೇಶ್ ಸೇರಿದಂತೆ ವಿವಿಧ ಸಮಾಜಗಳ ಮುಖಂಡರಿದ್ದರು.

ಬರ ಪರಿಸ್ಥಿತಿ ನಿಭಾಯಿಸಲು ಅಧಿಕಾರಿಗಳು ಸಿದ್ಧರಾಗಿ

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಚನೆ



ಮಂಡ್ಯ, ಸೆ.19– ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿ ನಿಭಾಯಿಸಲು ಅಧಿಕಾರಿಗಳು ಸಿದ್ಧರಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ಮಂಗಳವಾರ ನಗರದ ಜಿಪಂ ಸಭಾಂಗಣದಲ್ಲಿ ನಡೆದ ಬರ ಪರಿಸ್ಥಿತಿ ನಿರ್ವಹಣೆ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಸದ್ಯದಲ್ಲೇ ಕೇಂದ್ರ ತಂಡ ಬರ ಪರಿಸ್ಥಿತಿ ಪರಿಶೀಲನೆಗಾಗಿ ಜಿಲ್ಲೆಗೆ ಆಗಮಿಸಲಿದೆ. ಅಧಿಕಾರಿಗಳು ಸಮನ್ವಯವಾಗಿ ಕಾರ್ಯನಿರ್ವಹಿಸಿ ನಿಖರ ಮಾಹಿತಿ ಒದಗಿಸಬೇಕು. ಸಮಸ್ಯೆಗಳಿದ್ದಲ್ಲಿ ತಕ್ಷಣ ಜಿಲ್ಲಾಧಿಕಾರಿ ಹಾಗೂ ಜಿಪಂ ಸಿಇಓ ಅವರೊಂದಿಗೆ ಚರ್ಚಿಸಬೇಕು ಎಂದರು.

ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಿ. ನೀರು ಸಿಗುವ ಸ್ಥಳಗಳಲ್ಲಿ ಮಾತ್ರ ಕೊಳವೆಬಾವಿ ಕೊರೆಯಿರಿ. ಟ್ಯಾಂಕರ್ ಮೂಲಕ ನೀರು ನೀಡುವ ಸಂದರ್ಭ ಸುಳ್ಳು ಮಾಹಿತಿ ನೀಡಿ ಹೆಚ್ಚಿನ ಟ್ರಿಪ್ ಬಿಲ್ ಮಾಡುವುದು ಕಂಡುಬಂದಲ್ಲಿ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ ಅವರು, ಬರ ನಿರ್ವಹಣೆಗಾಗಿ ಶಾಸಕರ ಅಧ್ಯಕ್ಷತೆಯಲ್ಲಿ ಟಾಸ್ಕ್‌ಫೋರ್ಸ್ ಸಮಿತಿ ರಚಿಸಲಾಗುವುದು. ಶಾಸಕರೊಂದಿಗೆ ಸಮಸ್ಯೆಗಳಿದ್ದಲ್ಲಿ ಚರ್ಚಿಸಿ ಪರಿಹಾರ ಕೈಗೊಳ್ಳಿ ಎಂದು ಸೂಚಿಸಿದರು.

ಪ್ರಾಣಿಗಳಿಗೆ ಮೇವು, ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯಾಗಬಾರದು. ಪಿಡಿಓಗಳು, ಗ್ರಾಮ ಲೆಕ್ಕಾಧಿಕಾರಿಗಳು, ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಬರ ಪರಿಸ್ಥಿತಿ ನಿರ್ವಹಣೆ ಕೆಲಸದಲ್ಲಿ ತೊಡಗಿಸಿಕೊಳ್ಳಿ ಎಂದು ಡಿಸಿಗೆ ಸೂಚನೆ ನೀಡಿದರು.

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿ, ಜೀವರಕ್ಷಕ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಿ. ಜೊತೆಗೆ ಜಾನುವಾರುಗಳಿಗೆ ಮೇವು ಸಮಸ್ಯೆಯಾಗಬಾರದು. ಪರಿಸ್ಥಿತಿಗಳು ಪ್ರತಿದಿನ ಬದಲಾಗುತ್ತದೆ. ಪರಿಸ್ಥಿತಿ ಅವಲೋಕಿಸಿ ಸೂಕ್ತ ಕ್ರಮಕೈಗೊಳ್ಳಿ, ಕೃಷಿ ಭೂಮಿಯಲ್ಲಿ ಹೆಚ್ಚಿನ ರಾಸಾಯನಿಕ ಬಳಕೆ ಮಾಡುವುದರಿಂದ, ಮಣ್ಣಿನಲ್ಲಿ ನೀರು ಇಂಗುವಿಕೆ ಕಡಿಮೆಯಾಗುತ್ತಿದೆ. ಬಿಸಿಲಿನ ತಾಪ ಹೆಚ್ಚಾದರೆ ನೀರು ಆವಿಯಾಗುವುದು ಹೆಚ್ಚಾಗುತ್ತದೆ. ಮುಂದಿನ ದಿನಗಳ ಪರಿಸ್ಥಿತಿ ಸುಧಾರಿಸಲು ಕೆರೆ ಕಟ್ಟೆಗಳಿಗೆ ನೀರು ತುಂಬಿಸಬೇಕಿದೆ ಎಂದರು. ಜಿಲ್ಲಾಧಿಕಾರಿ ಡಾ.ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಜನವರಿಯಿಂದ ಸೆಪ್ಟೆಂಬರ್‌ವರೆಗೆ 407 ಮೀಮೀ ಮಳೆ ಯಾಗುವುದು ವಾಡಿಕೆ. ಆದರೆ ಈವರೆಗೆ 362ಮೀಮೀ ಮಳೆಯಾಗಿದ್ದು, ಶೇ.11ರಷ್ಟು ಮಳೆ ಕೊರತೆಯಾಗಿದೆ. ಜಿಲ್ಲೆಯ 7 ತಾಲೂಕುಗಳಿಗೂ ತೀವ್ರ ಬರ ಘೋಷಣೆಯಾಗಿದೆ ಎಂದರು.

ಮಳೆಯ ಪ್ರಮಾಣ ಕಡಿಮೆಯಾಗಿ ಜಿಲ್ಲೆಯಲ್ಲಿ ಬರ ಘೋಷಣೆಯಾಗಿದೆ. ಇಂತಹ ಸಂದರ್ಭ ಯಾವ ಬೆಳೆಗಳನ್ನು ರೈತರು ಬೆಳೆಯಬೇಕು ಎಂದು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕೃಷಿ ಇಲಾಖೆ ಕಾರ್ಯಪ್ರವೃತ್ತರಾಗಬೇಕು ಎಂದರು. ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್ ಬರ ಸಂದರ್ಭ ನರೇಗಾ ಯೋಜನೆಯಡಿ ಕೈಗೊಳ್ಳಬಹುದಾದ ಕಾಮಗಾರಿ ಕುರಿತು ವಿವರಿಸಿದರು. ಸಭೆಯಲ್ಲಿ ಶಾಸಕರಾದ ಗಣಿಗ ರವಿಕುಮಾರ್, ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ.ಮಂಜು, ಕೆ.ಎಂ.ಉದಯ್, ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ, ಎಸ್ಪಿ ಎನ್.ಯತೀಶ್, ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗರಾಜು ಸೇರಿದಂತೆ ಇನ್ನಿತರ ಅಧಿಕಾರಿಗಳು ಹಾಜರಿದ್ದರು.

ವಿದ್ಯುತ್ ವ್ಯತ್ಯಯ

ನಾಗಮಂಗಲ, ಸೆ.19– ಬೆಳ್ಳೂರು ಉಪ ವಿಭಾಗ ಬಿಂಡಿಗನವಿಲೆ ವ್ಯಾಪ್ತಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಸೆ.21ರಿಂದ ಸೆ.28ವರೆಗೆ ಬಿಂಡಿಗನವಿಲೆ, ದೊಡ್ಡಬಾಲ, ಮಾಯಗೋನಹಳ್ಳಿ, ಹೊನ್ನಾವರ, ಮಠದ ಭೂನಹಳ್ಳಿ, ಚನ್ನಾಪುರ, ಬಿದರಕೆರೆ, ಹನುಮನಕೊಪ್ಪಲು, ತುರುಬನಹಳ್ಳಿ ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ತಮಿಳುನಾಡಿಗೆ ನೀರು ಬಿಡುಗಡೆ: ಭುಗಿಲೆದ್ದ ಆಕ್ರೋಶ

ಜೆಡಿಎಸ್, ಕಾಂಗ್ರೆಸ್, ಬಿಜೆಪಿ, ರೈತ, ಕನ್ನಡಪರ ಸಂಘಟನೆಗಳ ಭಾರಿ ಪ್ರತಿಭಟನೆ: ರಸ್ತೆತಡೆ



ಮಂಡ್ಯ, ಸೆ.19(ಮೋಹನ್‌ರಾಜ್)– ತಮಿಳುನಾಡಿಗೆ ನೀರು ಹರಿಸುತ್ತಿರುವ ರಾಜ್ಯ ಸರ್ಕಾರದ ಕ್ರಮ ಖಂಡಿಸಿ ಕಾವೇರಿ ಕೊಳ್ಳದಲ್ಲಿ ಆಕ್ರೋಶ ಭುಗಿಲೆದ್ದಿದ್ದು, ಜೆಡಿಎಸ್, ಕಾಂಗ್ರೆಸ್, ಬಿಜೆಪಿ ಜೊತೆಗೆ ರೈತರು, ಕನ್ನಡಪರ, ಪ್ರಗತಿಪರ ಸಂಘಟನೆಗಳು ಮಂಗಳವಾರ ನಗರದ ಸರ್ ಎಂ.ವಿಶ್ವೇಶ್ವರಯ್ಯ ಪ್ರತಿಮೆ ಬಳಿ ಭಾರಿ ಪ್ರತಿಭಟನೆ ನಡೆಸಿ, ಬಳಿಕ ಸರ್‌ಎಂವಿ ವೃತ್ತದಲ್ಲಿ ರಸ್ತೆ ತಡೆ ನಡೆಸಿದರು.

ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಆಶ್ರಯದಲ್ಲಿ ಜೆಡಿಎಸ್ ಹಾಗೂ ಕಾಂಗ್ರೆಸ್‌ನ ಮಾಜಿ ಶಾಸಕರು, ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು ಕೊರಳಿಗೆ ಕಪ್ಪು ಪಟ್ಟಿ ಸುತ್ತಿಕೊಂಡು ಕಪ್ಪು ಬಾವುಟ ಪ್ರದರ್ಶಿಸುತ್ತಾ ನೀರು ಬಿಟ್ಟಿರುವ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ತಮಿಳುನಾಡಿಗೆ ನೀರು ಹರಿಸುವುದಿಲ್ಲ ಎಂದು ಮಾತು ಕೊಟ್ಟಿದ್ದ ಸರ್ಕಾರ ಇದೀಗ ನೀರು ಬಿಟ್ಟಿದ್ದು, ರೈತರಿಗೆ ದ್ರೋಹ ಮಾಡಿದೆ. ಕಾವೇರಿ ಕೊಳ್ಳದ ಜಲಾಶಯಗಳ ವಾಸ್ತವ ಪರಿಸ್ಥಿತಿ ಮನವರಿಕೆ ಮಾಡಿಕೊಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಕುಡಿಯುವ ನೀರನ್ನು ಸಹ ಬರಿದು ಮಾಡಿ ಜನ ಸಾಮಾನ್ಯರನ್ನು ಸಂಕಷ್ಟಕ್ಕೆ ದೂಡಲು ಸರ್ಕಾರ ಮುಂದಾಗಿದೆ ಎಂದು ಕಿಡಿಕಾರಿದರು.

ಬೆಳೆದು ನಿಂತಿರುವ ಬೆಳೆ ರಕ್ಷಣೆ ಸಾಧ್ಯವಾಗಿಲ್ಲ. ಹೊಸ ಬೆಳೆ ಹಾಕಲು ನೀರು ಕೊಡಲಿಲ್ಲ. ಇದೀಗ ಕುಡಿಯಲು ಸಹ ನೀರಿಲ್ಲದಂತೆ ಜಲಾಶಯದಿಂದ ನೀರು ಹರಿಸುತ್ತಿದೆ. ಜಿಲ್ಲೆಯ ಶಾಸಕರು, ಸಂಸದರು ಕಣ್ಮುಚ್ಚಿ ಕುಳಿತಿದ್ದಾರೆ. ಕಾವೇರಿ ಕೊಳ್ಳದ ಜಲಾಶಯಗಳ ವಾಸ್ತವ ಪರಿಸ್ಥಿತಿ ಅವಲೋಕಿಸದೇ ನೀರಿನ ಲಭ್ಯತೆ ಅರಿಯದೆ ಅವೈಜ್ಞಾನಿಕವಾಗಿ ನೀರು ಬಿಡಲು ಆದೇಶಿಸಿರುವ ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ತೀರ್ಮಾನ ಸರಿ ಇಲ್ಲ. ಸಂಕಷ್ಟ ಕಾಲದಲ್ಲಿ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು. ಕರ್ನಾಟಕದ ರೈತರ ಹಿತ ಕಾಪಾಡಲು ಮುಂದಾಗಬೇಕು ಎಂದು ಒತ್ತಾಯಿಸಿದರು.

ಮಾಜಿ ಶಾಸಕ ಡಾ.ಕೆ.ಅನ್ನದಾನಿ ಮಾತನಾಡಿ, ರಾಜ್ಯದ 200 ತಾಲೂಕುಗಳು ಬರಪೀಡಿತ ಎಂದು ಇದೇ ಸರ್ಕಾರ ಘೋಷಿಸಿದೆ. ಅದರಲ್ಲೂ ಜಿಲ್ಲೆಯ 7 ತಾಲೂಕುಗಳು ಬರಪೀಡಿತ ಪ್ರದೇಶವಾಗಿದೆ. ಜಿಲ್ಲೆಯ ಜನರಿಗೆ ನೀರು ಕೊಡದೇ ಪಕ್ಕದ ತಮಿಳುನಾಡಿಗೆ ಕೊಡುವ ಅವಶ್ಯಕತೆ ಏನಿದೆ. ಬೆಳೆಗಂತೂ ನೀರು ಸಿಗುವುದಿಲ್ಲ. ಆದರೆ ಕುಡಿಯಲು ನೀರು ಕೊಡದೆ ತಮಿಳುನಾಡಿಗೆ ಹರಿಸಲಾಗುತ್ತಿದೆ ಇದು ಯಾವ ನ್ಯಾಯ ಎಂದು ಪ್ರಶ್ನಿಸಿದರು.

ಹೋರಾಟ ಇನ್ನೂ ತೀವ್ರ ಸ್ವರೂಪ ಪಡೆಯಬೇಕು. ಮಂಡ್ಯ, ಮೈಸೂರಿಗೆ ಮಾತ್ರ ಹೋರಾಟ ಸೀಮಿತವಾಗದೇ ರಾಜ್ಯಾದ್ಯಂತ ನಡೆಯಬೇಕು. ಅದರಲ್ಲೂ ಬೆಂಗಳೂರು ಮಂದಿಗೆ ಕಾವೇರಿ ನೀರು ಬೇಕಿದೆ. ಆದರೆ ಹೋರಾಟಕ್ಕೆ ಮಾತ್ರ ಬರುತ್ತಿಲ್ಲ. ಬೆಂಗಳೂರಿಗರು ಹೋರಾಟಕ್ಕೆ ಧುಮುಕಬೇಕು. ಇಲ್ಲದಿದ್ದರೆ ಬೆಂಗಳೂರಿಗೆ ನೀರು ಹೋಗುವ ಟಿ.ಕೆ.ಹಳ್ಳಿಯ ಜಲಕೇಂದ್ರಕ್ಕೆ ಮುತ್ತಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ರಸ್ತೆತಡೆ ಹಿನ್ನೆಲೆ ಬೆಂಗಳೂರು– ಮೈಸೂರು ವಾಹನ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಈ ವೇಳೆ ಕೆಲ ಬೈಕ್ ಸವಾರರು ಹಾಗೂ ಹೋರಾಟಗಾರರ ನಡುವೆ ಮಾತಿನ ಚಕಮಕಿ ನಡೆಯಿತು. ಈ ವೇಳೆ ಪೊಲೀಸರು ಮಧ್ಯ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದರು.

ನಿರ್ಣಯ: ಧರಣಿ ಬಳಿಕ ರೈತ ಹಿತ ರಕ್ಷಣಾ ಸಮಿತಿ ಮಾಜಿ ಶಾಸಕರ ಸಮ್ಮುಖದಲ್ಲಿ ಹಲವು ನಿರ್ಣಯ ಕೈಗೊಂಡಿತು. ಕಾವೇರಿ ನದಿ ನೀರಿನ ವಿಚಾರದಲ್ಲಿ ನಿರಂತರ ಅನ್ಯಾಯಕ್ಕೊಳಗಾಗುತ್ತಿರುವ ಈ ಭಾಗದ ರೈತರಿಗೆ ನ್ಯಾಯ ದೊರಕಿಸಿ ಕೊಡಲು ವಿಧಾನಮಂಡಲದ ವಿಶೇಷ ತುರ್ತು ಅಧಿವೇಶನ ಕರೆಯಬೇಕು. ಸರ್ವಪಕ್ಷ ನಿಯೋಗದೊಂದಿಗೆ ಪ್ರಧಾನಿ ಭೇಟಿಯಾಗಿ ವಾಸ್ತವಾಂಶ ಮನವರಿಕೆ ಮಾಡಿಕೊಡಲು ಮುಂದಾಗಬೇಕು. ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಧಿಕ್ಕರಿಸಿ ಸುಪ್ರೀಂಕೋರ್ಟ್‌ನಲ್ಲಿ ವಾಸ್ತವಾಂಶ ಸಮೇತ ಸಮರ್ಥ ಮಂಡನೆಗೆ ಸರ್ಕಾರ ಮುಂದಾಗಬೇಕು. ಪ್ರಾಧಿಕಾರದ ಆದೇಶ ಪಾಲನೆ ಮಾಡಿ ಯಾವುದೇ ಕಾರಣಕ್ಕೂ ಒಂದು ಹನಿ ನೀರನ್ನು ಸರ್ಕಾರ ಬಿಡುಗಡೆ ಮಾಡಬಾರದು.

ರಾಜ್ಯದ ಸಂಸದರು ಪಕ್ಷಾತೀತವಾಗಿ ಒಗ್ಗೂಡಿ ಕೇಂದ್ರದ ಮೇಲೆ ಒತ್ತಡ ತಂದು ಕಾವೇರಿ ನೀರಿನ ಸಂಕಷ್ಟದ ಸಮಯದಲ್ಲಿ ಸಂಕಷ್ಟ ಸೂತ್ರ ರಚಿಸಲು ಒತ್ತಾಯಿಸಬೇಕು. ಒಕ್ಕೂಟ ವ್ಯವಸ್ಥೆಯಲ್ಲಿ ಪ್ರಧಾನ ಮಂತ್ರಿ ಮಧ್ಯ ಪ್ರವೇಶಿಸಿ ಸಂಕಷ್ಟ ಸಮಯದಲ್ಲಿ ಸಮಸ್ಯೆ ಪರಿಹಾರಕ್ಕೆ ಮುಂದಾಗಿ ರಾಜ್ಯಕ್ಕೆ ನ್ಯಾಯ ದೊರಕಿಸಿ ಕೊಡಬೇಕು. ಕರ್ನಾಟಕ ಸರ್ಕಾರ ಮೇಕೆದಾಟು ಯೋಜನೆ ಆರಂಭಿಸಿ ತ್ವರಿತವಾಗಿ ಮುಗಿಸಲು ಕಾರ್ಯೋನ್ಮುಖರಾಗಬೇಕು. ಕಾವೇರಿ ಕೊಳ್ಳದ ಜಲಾಶಯಗಳಲ್ಲಿರುವ ನೀರನ್ನು ಕುಡಿಯುವುದಕ್ಕಾಗಿ ಸಂರಕ್ಷಣೆ ಮಾಡಿಕೊಳ್ಳಬೇಕೆಂದು ರೈತ ಹಿತರಕ್ಷಣಾ ಸಮಿತಿ ನಿರ್ಣಯ ಮಾಡುವ ಮೂಲಕ ಕೇಂದ್ರ ಮತ್ತು ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

ಪ್ರತಿಭಟನೆಯಲ್ಲಿ ಮಾಜಿ ಶಾಸಕರಾದ ಎಂ.ಎಸ್.ಆತ್ಮಾನಂದ, ಕೆ.ಸುರೇಶ್‌ಗೌಡ, ಕೆ.ಟಿ.ಶ್ರೀಕಂಠೇಗೌಡ, ಜಿ.ಬಿ.ಶಿವಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ಯುವ ಕಾಂಗ್ರೆಸ್ ಅಧ್ಯಕ್ಷ ವಿಜಯ್ ಕುಮಾರ್, ರಾಜಕೀಯ ಪಕ್ಷಗಳ ಮುಖಂಡರಾದ ಸಾತನೂರು ಜಯರಾಂ, ನಾಗೇಶ್, ಸಿದ್ದರಾಮೇಗೌಡ, ಸಿ.ಟಿ.ಮಂಜುನಾಥ್, ರೈತ ಹಿತರಕ್ಷಣಾ ಸಮಿತಿಯ ಸುನಂದಾ ಜಯರಾಂ, ಕೆ.ಬೋರಯ್ಯ, ಚಂದ್ರಶೇಖರ್, ಅಂಬುಜಮ್ಮ, ಮಹದೇವು, ಬಸವರಾಜು, ಕರವೇ ಶಂಕರೇಗೌಡ, ಕನ್ನಡಸೇನೆ ಮಂಜು, ಮುದ್ದೇಗೌಡ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.


ತಮಿಳುನಾಡಿಗೆ ಕೆಆರ್‌ಎಸ್‌ನಿಂದ ನೀರು ಬಿಡುಗಡೆ



ಮಂಡ್ಯ, ಸೆ.19(ಮೋಹನ್‌ರಾಜ್)– ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತೆ ತಮಿಳುನಾಡಿಗೆ 15 ದಿನಗಳ ಕಾಲ ನಿತ್ಯ 5 ಸಾವಿರ ಕ್ಯುಸೆಕ್ ನೀರು ಬಿಡುಗಡೆ ಮಾಡಬೇಕೆಂದು ಆದೇಶಿಸಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಮಂಗಳವಾರದಿಂದ ತಮಿಳುನಾಡಿಗೆ ಕೆಆರ್‌ಎಸ್ ಹಾಗೂ ಕಬಿನಿ ಡ್ಯಾಂನಿಂದ ನೀರು ಬಿಡುಗಡೆ ಮಾಡಿದೆ. ಎರಡೂ ಡ್ಯಾಂಗಳಿಂದ 3,834 ಕ್ಯುಸೆಕ್ ನೀರು ತಮಿಳುನಾಡಿಗೆ ಹರಿಯುತ್ತಿದ್ದು, ಇನ್ನುಳಿದ 1166 ಕ್ಯುಸೆಕ್ ನೀರು ಮಳೆ ಮೂಲಕ ತಮಿಳುನಾಡಿನ ಮೆಟ್ಟೂರು ಡ್ಯಾಂಗೆ ಹರಿಯುತ್ತಿದೆ. ನಿನ್ನೆಯಷ್ಟೇ 15 ದಿನಗಳ ಕಾಲ 5 ಸಾವಿರ ಕ್ಯುಸೆಕ್ ನೀರು ಬಿಡುವಂತೆ ಆದೇಶ ಹೊರಬಿದ್ದ ಹಿನ್ನೆಲೆಯಲ್ಲಿ ಕೆಆರ್‌ಎಸ್‌ನಿಂದ 2,171 ಕ್ಯುಸೆಕ್, ಕಬಿನಿ ಜಲಾಶಯದಿಂದ 1,663 ಕ್ಯುಸೆಕ್ ಬಿಡುಗಡೆ ಮಾಡಲಾಗುತ್ತಿದೆ. ಒಟ್ಟಾರೆ ಎರಡು ಡ್ಯಾಂಗಳಿಂದ ಒಟ್ಟು 3,834 ಕ್ಯುಸೆಕ್ ನೀರು ಬಿಡುಗಡೆ ಮಾಡಿದ್ದು, ಉಳಿದ 1,166 ಕ್ಯುಸೆಕ್ ಮಳೆಯ ನೀರಾಗಿದೆ.

ಡ್ಯಾಂ ಕೆಳ ಭಾಗದಲ್ಲಿ ಭಾರಿ ಪ್ರಮಾಣದಲ್ಲಿ ಮಳೆಯಾದ ಪರಿಣಾಮ ಜೊತೆಗೆ ಬೆಂಗಳೂರು ಸೇರಿದಂತೆ ಹಲವೆಡೆ ನಿನ್ನೆ ಬಿದ್ದಿರುವ ಮಳೆ ಹಿನ್ನೆಲೆಯಲ್ಲಿ ಮಳೆ ನೀರು ಹಾಗೂ ಕೆಆರ್‌ಎಸ್ ಮತ್ತು ಕಬಿನಿ ಡ್ಯಾಂನಿಂದ ತಮಿಳುನಾಡಿಗೆ 5 ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರು ಬಿಡಲಾಗಿದೆ ಎಂದು ಅಂದಾಜಿಸಲಾಗಿದೆ.

ಮೈಸೂರು ಆನಂದರ ಮಾತ್ ಮಾತಿನಲ್ಲೂ ಹಾಸ್ಯ: ನೆರೆದವರಲ್ಲಿ ನಗೆಯ ಹೊನಲು





ಮೈಸೂರು, ಸೆ.19(ಎಸ್‌ಪಿಎನ್)– ಮೈಸೂರು ಗಣೇಶ ಉತ್ಸವದ 2ನೇ ದಿನದ ಕಾರ್ಯಕ್ರಮದ ಹಾಸ್ಯ ಸಂಜೆ ಶೀರ್ಷಿಕೆಯಡಿ ಹಾಸ್ಯ ಕಲಾವಿದ ಮೈಸೂರು ಆನಂದ್ ಅವರ ಹಾಸ್ಯದ ಮಾತುಗಳು ಪ್ರೇಕ್ಷಕರನ್ನು ನಗೆಗಡಲಿನಲ್ಲಿ ತೇಲುವಂತೆ ಮಾಡಿದವು.

ಮೈಸೂರು ಜೆಎಲ್‌ಬಿ ರಸ್ತೆಯಲ್ಲಿ ಮೈಸೂರು ಧಾರ್ಮಿಕ ಪ್ರತಿಷ್ಠಾನ ಮತ್ತು ಮೈಸೂರು ಕಲಾ ಪ್ರತಿಷ್ಠಾನ ಆಯೋಜಿಸಿರುವ ಮೈಸೂರು ಗಣೇಶ್ ಉತ್ಸವ–2023ರ ಹಿನ್ನೆಲೆಯಲ್ಲಿ ಮಾಧವ ಕೃಪಾದ ಪಕ್ಕದ ವೇದಿಕೆಯಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಮೈಸೂರು ಆನಂದ ಅವರ ಹಾಸ್ಯದ ಮಜಲುಗಳು ಪ್ರೇಕ್ಷಕರನ್ನು ರಂಜಿಸಿದವು. ಕನ್ನಡ ಭಾಷೆ ನಮ್ಮ ರಾಜ್ಯದ ಪ್ರತಿ ಹನ್ನೆರಡು ಕಿ.ಮೀಗೆ ಬದಲಾವಣೆಗೊಳ್ಳುತ್ತದೆ. ಚಾಮರಾಜನಗರ ಮತ್ತು ಮೈಸೂರು ಜಿಲೆಗಳಲ್ಲಿನ ಕನ್ನಡ ಭಾಷೆ ಜಾನಪದ ಸೊಗಡಿನಿಂದ ಕೂಡಿದ್ದು ಹಾಗೂ ವೇಗವಾಗಿ ಮಾತನಾಡುವ ಭಾಷೆಯಾಗಿದೆ. ಅಂತೆಯೇ ಮಂಗಳೂರಿನಲ್ಲಿ ಮಾತನಾಡುವ ಕನ್ನಡ ಭಾಷೆ ಗ್ರಾಂಥಿಕ ಪದಗಳನ್ನಷ್ಟೇ ಮಾತನಾಡುತ್ತಾರೆ. ಹುಬ್ಬಳ್ಳಿ ಕನ್ನಡದಲ್ಲಿ ಗಡುಸುತನದಿಂದ ಕೂಡಿದೆ ಎಂದು ಹಲವು ಉದಾಹರಣೆಗಳನ್ನು ನೀಡಿದರು.

ನಮ್ಮ ಭಾಷೆ ಬೆಳವಣಿಗೆಯಲ್ಲಿ ಕನ್ನಡ ಸಿನಿಮಾಗಳ ಪಾತ್ರವೂ ಅಪಾರವಾದುದು. 1950ರ ನಂತರ ಸಿನಿಮಾ ಕ್ಷೇತ್ರದಲ್ಲಿ ಕನ್ನಡ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಬದಲಾವಣೆಗೊಂಡಿವೆ. 1950ರಿಂದ 2023ರವರೆಗಿನ ಕನ್ನಡ ಸಿನಿಮಾ ಸಂಭಾಷಣೆ ಮತ್ತು ಸಿನಿಮಾಗಳಲ್ಲಾದ ಸಂಗೀತ ಮತ್ತು ನೃತ್ಯದಲ್ಲಾದ ಬದಲಾವಣೆ ಕುರಿತು ತಮ್ಮದೇ ಹಾಸ್ಯಧಾಟಿಯಲ್ಲಿ ಆಂಗಿಕ ಅಭಿನಯದ ಮೂಲಕ ಮತ್ತಷ್ಟು ಮೆರಗು ನೀಡಿದರು.

ಮುಂದುವರೆದು ಬೀದಿನಾಯಿ, ಸಾಕು ನಾಯಿಗಳ ಮೂಕ ಸಂಭಾಷಣೆಯಲ್ಲಿಯೇ ಹಾಸ್ಯದ ಪ್ರಸಂಗಗಳನ್ನು ತಿಳಿಸಿಕೊಟ್ಟರು. ಇದಕ್ಕೂ ಮುನ್ನ ಜಾನಪದ ಕಲಾವಿದರಿಂದ ಜಾನಪದ ನೃತ್ಯ ಪ್ರದರ್ಶಿಸಿದರು. ನಂತರ ಬೆಂಗಳೂರಿನ ಮಂಜು ಡ್ರಮ್ಸ್ ಕಲೆಕ್ಟಿವ್ ತಂಡದಿಂದ ಬಗೆಬಗೆಯ ಡ್ರಮ್ಸ್ ವಾದ್ಯಕ್ಕೆ ಪ್ರೇಕ್ಷಕರು ಮನಸೋತರು.

ಈ ಸಂದರ್ಭದಲ್ಲಿ ಮೈಸೂರು ಧಾರ್ಮಿಕ ಪ್ರತಿಷ್ಠಾನದ ಸದಸ್ಯರಾದ ಮಂಜುನಾಥ್, ಲೋಹಿತ್ ಅರಸ್, ಅಕ್ಷಯ್, ಚರಣ್, ದರ್ಶನ್, ಎನ್.ಆರ್. ಮಂಜುನಾಥ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಗಣೇಶ ಮೂರ್ತಿ ಚಂದ್ರಯಾನ–3 ಮಾದರಿ: ದೇಶದ 21 ಪುಣ್ಯಕ್ಷೇತ್ರಗಳಾದ ಗೋಕರ್ಣ, ಶಬರಿಮಲೆ, ತಿರುಮಲ, ವಾರಣಾಸಿ, ಶೃಂಗೇರಿ, ಹರಿದ್ವಾರ, ಪ್ರಯಾಗ್‌ರಾಜ್, ಅಯೋಧ್ಯೆ, ಕೇದಾರನಾಥ, ಪುರಿ, ಹೃಷೀಕೇಶ, ಮಥುರಾ, ವೃಂದಾವನ, ಮಧುರೈ, ಉಜ್ಜೈನಿ, ದ್ವಾರಕಾ, ಕನ್ಯಾಕುಮಾರಿ, ಕಂಚೀಪುರಿ, ರಾಮೇಶ್ವರ, ಕಾಮಾಖ್ಯ, ಗುವಾಹಾಟಿ ಸೇರಿದಂತೆ ಒಟ್ಟು 21 ತೀರ್ಥ ಕ್ಷೇತ್ರಗಳ ಮಣ್ಣು ಹಾಗೂ ಸಪ್ತನದಿಗಳಾದ ಗಂಗೆ–ಯಮುನೆ, ಗೋದಾವರಿ, ನರ್ಮದಾ, ಸಿಂಧು, ಕಾವೇರಿ, ಬ್ರಹ್ಮಪುತ್ರ, ತುಂಗಾಭದ್ರ ಸೇರಿದಂತೆ ಒಟ್ಟು 7 ಪವಿತ್ರ ನದಿಗಳು ನೀರನ್ನು ಈ ಮೂರ್ತಿ ನಿರ್ಮಿಸಲು ಉಪಯೋಗಿಸಿರುವ ಮಣ್ಣಿಗೆ ಹಾಕಿ, ಗಣೇಶ ಮೂರ್ತಿ ತಯಾರಿಸಿರುವುದು ವಿಶೇಷ. ಅಲ್ಲದೆ, ಈ ಮೂರ್ತಿ ನೋಡಲು ಚಂದ್ರಯಾನ–3 ಮಾದರಿ ಹೋಲುವಂತೆ ನಿರ್ಮಿಸಿ, ಪ್ರತಿಷ್ಠಾಪಿಸಲಾಗಿದೆ. ಈ ಗಣೇಶ ಮೂರ್ತಿ ಸಾರ್ವಜನಿಕರನ್ನು ಸೂಜಿಗಲ್ಲಿನಂತೆ ಸೆಳೆಯುತ್ತಿದೆ.

ಸೇವಾಕಾರ್ಯ ಜಾಗೃತಿ: ಆರ್‌ಎಸ್‌ಎಸ್ ಅಂಗ ಸಂಘಟನೆಗಳಾದ ಎಬಿವಿಪಿ, ಭಾರತೀಯ ಇತಿಹಾಸ ಸಂಕಲನ ಸಮಿತಿ ಮೈಸೂರು ವಿಭಾಗ, ವಿಶ್ವಹಿಂದೂ ಪರಿಷತ್, ಸ್ವಾವಲಂಬಿ ಭಾರತ ಅಭಿಯಾನದ 'ಉದ್ಯೋಗ ಹುಡುಕಬೇಡಿ–ಸೃಷ್ಟಿಸಿ' ಶೀರ್ಷಿಕೆಯಡಿ ಗ್ರಾಮ ವಿಕಾಸದ ವಿವಿಧ ಕಾರ್ಯಕ್ರಮಗಳು ಜಾಗೃತಿ ಸೇರಿದಂತೆ ಇತರೆ ಆರ್‌ಎಸ್‌ಎಸ್ ಅಂಗ ಸಂಸ್ಥೆಗಳ ಸೇವಾ ಕಾರ್ಯಕ್ರಮಗಳ ಮಳಿಗೆಗಳು ಸಾರ್ವಜನಿಕರ ಗಮನ ಸೆಳೆದವು.

ಮಹಿಳಾ ಮೀಸಲು; ಮಹಿಳಾ ಪ್ರಗತಿಗೆ ಮಹಾ ಕೊಡುಗೆ

ಮೈಸೂರು,ಸೆ.19(ಪಿಎಂ)– ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಬಹುದಿನಗಳ ಬೇಡಿಕೆಯಾಗಿದ್ದ ಮಹಿಳಾ ಮೀಸಲಾತಿಗೆ ಅನುಮೋದನೆ ದೊರೆತಿದೆ. ಅಂತೆಯೇ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ನೀಡುವ 'ನಾರಿ ಶಕ್ತಿ ವಂದನ್ ಅಧಿನಿಯಮ್' ಶೀರ್ಷಿಕೆಯಡಿಯ ಈ ಮೀಸಲಾತಿ ವಿಧೇಯಕವನ್ನು ಮಂಗಳವಾರ ಅಧಿವೇಶನದಲ್ಲಿ ಮಂಡಿಸಲಾಗಿದೆ. ಈ ಕುರಿತು ವಿವಿಧ ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿರುವ ಮಹಿಳಾ ಮುಖಂಡರು 'ಮೈಸೂರು ಮಿತ್ರ'ನಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



ಮಾಜಿ ಪ್ರಧಾನಿಗಳೂ ಆದ ಜೆಡಿಎಸ್ ಅಧಿನಾಯಕರಾದ ಹೆಚ್.ಡಿ.ದೇವೇಗೌಡರು 27 ವರ್ಷಗಳ ಹಿಂದೆ ದೇಶದ ಪ್ರಧಾನಿಯಾಗಿದ್ದಾಗ, ಮಹಿಳೆಯರಿಗೆ ದೇಶದ ಆಡಳಿತ ನಡೆಸುವ ಸಾಮರ್ಥ್ಯವಿದೆ ಎಂಬುದನ್ನು ಮನಗಂಡು ಅವರಿಗೆ ರಾಜಕೀಯ ಸ್ಥಾನಮಾನಗಳನ್ನು ಕಲ್ಪಿಸಲು ತೀರ್ಮಾನಿಸಿದ್ದರು. ಆ ಮೂಲಕ ಸ್ಥಳೀಯ ಸಂಸ್ಥೆಗಳಲ್ಲಿ ಮೀಸಲಾತಿ ಒದಗಿಸಿದರು. ಲೋಕಸಭೆ ಮತ್ತು ವಿಧಾನಸಭೆಗಳಲ್ಲಿಯೂ ಗರಿಷ್ಠ ಮಟ್ಟದಲ್ಲಿ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಶೇ.33ರಷ್ಟು ಮೀಸಲಾತಿ ಜಾರಿಗೆ ತರಬೇಕೆಂದು ಮಹದಾಸೆ ಹೊಂದಿದ್ದರಲ್ಲದೆ, ಕೂಡಲೇ ಜಾರಿಗೂ ಪ್ರಯತ್ನಿಸಿದ್ದರು. ಆದರೆ ಅದು ಸಾಧ್ಯವಾಗಿರಲಿಲ್ಲ. ಅವರು ಅಂದು ಕಂಡ ಕನಸು ಇಂದು ನನಸಾಗುತ್ತಿದೆ. ಅದಕ್ಕೆ ಇಡೀ ದೇಶದ ಮಹಿಳೆಯರು ಹೆಮ್ಮೆಪಡುತ್ತೇವೆ. ಜೊತೆಗೆ ರಾಷ್ಟ್ರದ ಮಹಿಳಾ ಸಮುದಾಯದ ಪರವಾಗಿ ದೇವೇಗೌಡರಿಗೆ ಕೃತಜ್ಞತೆ ಸಲ್ಲಿಸಬಯಸುತ್ತೇನೆ. ಈಗಾಗಲೇ ನಾನು ರಾಜಕೀಯವಾಗಿ ತೊಡಗಿಸಿಕೊಂಡು ಸ್ಥಾನಮಾನ ಪಡೆಯಲು ಹೆಚ್.ಡಿ.ದೇವೇಗೌಡರು ಕೊಟ್ಟಂತಹ ಕೊಡುಗೆಯೇ ಕಾರಣ ಮತ್ತು ನನ್ನ ರಾಜಕೀಯ ಬೆಳವಣಿಗೆಗೆ ಅವರ ಚಿಂತನೆಯೇ ಸ್ಫೂರ್ತಿ.

–ಕೆ.ಲಲಿತ ಜಿ.ಟಿ.ದೇವೇಗೌಡ, ಮಾಜಿ ಸದಸ್ಯರು, ಜಿಲ್ಲಾ ಪಂಚಾಯಿತಿ, ಮೈಸೂರು ಹಾಗೂ ಅಧ್ಯಕ್ಷರು, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿಯಮಿತ.



ಮಹಿಳಾ ಮೀಸಲಾತಿ ಬೇಡಿಕೆಗೆ 27 ವರ್ಷಗಳ ಇತಿಹಾಸವಿದೆ. ಈಗಲಾದರೂ ಜಾರಿಗೆ ಬರುತ್ತಿರುವುದು ಸಂತಸದ ವಿಚಾರ. ಆದರೆ ಇದನ್ನು ಲೋಕಸಭಾ ಚುನಾವಣೆ ಮುಂದಿರುವಾಗ ತರಲು ಹೊರಟಿರುವುದರ ಹಿಂದೆ ರಾಜಕೀಯ ಲಾಭದ ಉದ್ದೇಶವಿದೆ ಎಂಬುದು ಸ್ಪಷ್ಟ. ವಾಸ್ತವದಲ್ಲಿ ಈ ಮೊದಲು ಬಿಜೆಪಿಯ ಉಮಾಭಾರತಿ ಅವರೇ ಸದರಿ ಮೀಸಲಾತಿಯನ್ನು ವಿರೋಧಿಸಿದ್ದರು. ಓಬಿಸಿ ಮೀಸಲಾತಿ ಮುಂದಿಟ್ಟುಕೊಂಡು ಇವರು ಮಹಿಳಾ ಮೀಸಲಾತಿಗೆ ಅಡ್ಡಗಾಲು ಹಾಕಿದ್ದರು. ಈಗ ಬಿಜೆಪಿಯವರಿಗೆ ಮನವರಿಕೆಯಾಗಿದೆ ಎಂದೇನಿಲ್ಲ. ಜೊತೆಗೆ ಇದು ತಕ್ಷಣಕ್ಕೆ ಜಾರಿಗೆ ಬರುವುದಿಲ್ಲ ಎನ್ನಲಾಗಿದೆ. 2029 ಅನ್ನು ಗಮನದಲ್ಲಿ ಇಟ್ಟುಕೊಂಡು ಈಗ ತರಲು ಹೊರಟಿದ್ದಾರೆ. ಇಲ್ಲಿ ಮುಂದಿನ ಲೋಕಸಭಾ ಚುನಾವಣೆಯ ಲಾಭದ ಉದ್ದೇಶವಿರುವುದು ಸ್ಪಷ್ಟ. ಗೀತಾ ಮುಖರ್ಜಿಯವರು ಹಿಂದೆಯೇ ಹೇಳಿರುವಂತೆ ಒಮ್ಮೆ ಈ ವಿಧೇಯಕ ಮಂಡನೆಯಾದರೆ 15 ಕಲಾಪಗಳಲ್ಲಿ ಇದು ಚರ್ಚೆಯಾಗಬೇಕು. ಸದರಿ ಮೀಸಲಾತಿಯನ್ನು ಪ್ರಜಾಸತ್ತಾತ್ಮಕವಾಗಿ ಜಾರಿಗೆ ತರಬೇಕು. ಜೊತೆಗೆ ಮಹಿಳಾ ಸಂಘಟನೆಗಳ ಅಭಿಪ್ರಾಯಗಳನ್ನು ಪಡೆಯಬೇಕು. ಆ ಮೂಲಕ ಧನಾತ್ಮಕವಾಗಿ ಅನುಷ್ಠಾನ ಮಾಡಬೇಕು ಎಂಬುದು ನನ್ನ ನಿಲುವು.

–ಪ್ರೊ. ಸಬಿಹಾ ಭೂಮಿಗೌಡ, ವಿಶ್ರಾಂತ ಕುಲಪತಿಗಳು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ.



ನಿಜಕ್ಕೂ ತುಂಬ ಸಂತಸ ಉಂಟು ಮಾಡಿದೆ. ಏಕೆಂದರೆ ಈ ಮಹಿಳಾ ಮೀಸಲಾತಿ ಬೇಡಿಕೆಯ ಹೋರಾಟ ಹಲವು ದಶಕಕ್ಕೂ ಹಳೆಯದು. ಆದರೆ ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆ ಹಾಗೂ ಕೆಲ ರಾಜ್ಯಗಳಲ್ಲಿ ನಡೆಯುವ ವಿಧಾನಸಭಾ ಚುನಾವಣೆ ಸಂದರ್ಭದಲ್ಲೇ ಇದು ಜಾರಿಯಾಗಬೇಕು. ಈ ಮೀಸಲಾತಿಯಿಂದ ದೇಶದಲ್ಲಿ ಧನಾತ್ಮಕ ಬೆಳವಣಿಗೆಯಾಗಲಿದೆ. ಹೆಚ್ಚಿನ ಮಹಿಳೆಯರು ಪ್ರಜಾಸಾತ್ತಾತ್ಮಕ ಆಡಳಿತ ಪ್ರಕ್ರಿಯೆ ಒಳಗೆ ಬರಲು ಸದರಿ ಮೀಸಲಾತಿ ಜಾರಿ ಒಂದೇ ಮಾರ್ಗ.

–ಪ್ರೊ.ಆರ್.ಇಂದಿರಾ, ಸಮಾಜಶಾಸ್ತ್ರಜ್ಞರು, ಮಹಿಳಾಪರ ಚಿಂತಕರು.



1996ರ ಸೆಪ್ಟೆಂಬರ್‌ನಲ್ಲಿ ಅಂದಿನ ಪ್ರಧಾನಿಗಳಾಗಿದ್ದ ಹೆಚ್.ಡಿ.ದೇವೇಗೌಡರು ಮಹಿಳಾ ಮೀಸಲಾತಿ ವಿಧೇಯಕವನ್ನು ಮಂಡಿಸಿದ್ದರು. ಆದರೆ ಪಟ್ಟಭದ್ರ ಹಿತಾಸಕ್ತಿಗಳು ಮಹಿಳಾ ಮೀಸಲಾತಿ ವಿರೋಧಿಸಿದ್ದವು. ಇದರಿಂದ ಸದರಿ ವಿಧೇಯಕಕ್ಕೆ ಹಿನ್ನಡೆಯಾಗಿತ್ತು. ತದನಂತರ ಬಂದಂತಹ ಸರ್ಕಾರಗಳು ಈ ವಿಧೇಯಕ ಮಂಡಿಸಿರಲಿಲ್ಲ. ಇದೀಗ ವಿಧೇಯಕ ಮಂಡಿಸಿದ್ದು, ದೇಶ ಆರ್ಥಿಕವಾಗಿ ಮುಂದುವರೆಯಲು ಮಹಿಳೆಯರ ಪಾತ್ರ ಮಹತ್ವದ್ದಾಗಿದೆ. ಮೋದಿಯವರ ಸರ್ಕಾರ ಇದಕ್ಕೆ ಅನುಮೋದನೆ ನೀಡಿರುವುದಕ್ಕೆ ಕೃತಜ್ಞತೆ ಸಲ್ಲಿಸುವ ಜೊತೆಗೆ ಇದರ ಶ್ರೇಯಸ್ಸು ಹೆಚ್.ಡಿ.ದೇವೇಗೌಡರಿಗೂ ಸಲ್ಲಬೇಕಾಗುತ್ತದೆ. ಜೆಡಿಎಸ್ ಮಹಿಳಾ ಘಟಕದ ಪರವಾಗಿ ಕೇಂದ್ರದ ಮೋದಿಯವರ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ.

–ಪ್ರೇಮಾಶಂಕರೇಗೌಡ, ಮೈಸೂರು ಮಹಾನಗರಪಾಲಿಕೆ ಸದಸ್ಯರು, ಜೆಡಿಎಸ್.



ಈಗಲಾದರೂ ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಮಹಿಳಾ ಮೀಸಲಾತಿ ಜಾರಿಯಾಗುತ್ತಿರುವುದು ಸಂತಸದ ವಿಚಾರ. ಹೆಚ್.ಡಿ.ದೇವೇಗೌಡರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಈ ಸಂಬಂಧ ವಿಧೇಯಕ ಮಂಡನೆಯಾಗಿತ್ತು. ನಮ್ಮ ಪಕ್ಷವೂ ಮಹಿಳೆಯರಿಗೇ ಹೆಚ್ಚಿನ ಆದ್ಯತೆ ನೀಡುತ್ತಲೇ ಬಂದಿದೆ. ಕರ್ನಾಟಕ ವಿಧಾನಸಭಾ ಚುನಾವಣೆ ಪೂರ್ವದಲ್ಲೇ ಆಗಿದ್ದರೆ ಇನ್ನೂ ಸಂತಸವಾಗುತ್ತಿತ್ತು. ರಾಜ್ಯದಲ್ಲಿ ಹೆಚ್ಚಿನ ಮಹಿಳೆಯರು ವಿಧಾನಸೌಧ ಪ್ರವೇಶಕ್ಕೆ ಅವಕಾಶ ದೊರೆಯುತ್ತಿತ್ತು.

–ಹೆಚ್.ಎಂ.ಶಾಂತಕುಮಾರಿ, ಮೈಸೂರು ಮಹಾನಗರ ಪಾಲಿಕೆ ಸದಸ್ಯರು, ಕಾಂಗ್ರೆಸ್.



ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಶೇ.33ರಷ್ಟು ಮಹಿಳಾ ಮೀಸಲಾತಿ ಜಾರಿಗೆ ಮುಂದಾಗಿರುವುದು ಸಂತಸದ ವಿಚಾರ. ಸುಮಾರು ವರ್ಷಗಳಿಂದ ಈ ಬೇಡಿಕೆ ಇತ್ತು. ಪ್ರಧಾನಿ ನರೇಂದ್ರ ಮೋದಿಯವರು ಅದನ್ನು ಈಡೇರಿಸಲು ಹೊರಟಿದ್ದಾರೆ. ಇದು ಮಹಿಳಾ ಸಬಲೀಕರಣಕ್ಕೆ ಕಾರಣವಾಗಲಿದೆ. ಮೋದಿಯವರು ಐತಿಹಾಸಿಕ ಹೆಜ್ಜೆ ಇಟ್ಟಿದ್ದು, ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ.

–ಪ್ರಮೀಳಾ ಭರತ್, ಮೈಸೂರು ಮಹಾನಗರ ಪಾಲಿಕೆ ಸದಸ್ಯರು, ಬಿಜೆಪಿ.



ಕೇಂದ್ರದ ಮಹಿಳಾ ಮೀಸಲಾತಿ ಮಸೂದೆಗೆ ನಮ್ಮ ಸಹಮತ ಇಲ್ಲ. ಕಾರಣ, ಈಗ ಮಹಿಳೆಯರಿಗೆ ಬೇಕಿರುವುದು ಶಿಕ್ಷಣ, ಉದ್ಯೋಗ ಮತ್ತು ರಕ್ಷಣೆಯಾಗಿದೆ. ಮೀಸಲಾತಿ ಹೆಸರಿನಲ್ಲಿ ಮಹಿಳಾ ಸಮುದಾಯದ ನೈಜ ಸಮಸ್ಯೆಗಳನ್ನು ಮರೆಮಾಚುವ ಪ್ರಯತ್ನ ಇದಾಗಿದೆ. ಈಗಾಗಲೇ ರಾಜಕೀಯ ಕ್ಷೇತ್ರದಲ್ಲಿ ಸಾಕಷ್ಟು ಮಹಿಳೆಯರು ತೊಡಗಿಸಿಕೊಂಡಿದ್ದಾರೆ. ಈ ಪೈಕಿ ಪಂಚಾಯಿತಿ, ನಗರ ಪಾಲಿಕೆಗಳಲ್ಲಿ ಅಧಿಕಾರದಲ್ಲಿದ್ದರೂ ಮಹಿಳಾ ಸದಸ್ಯೆಯರ ಪರವಾಗಿ ಅವರ ಪತಿಯಂದಿರೇ ಅಧಿಕಾರ ನಡೆಸುವುದನ್ನು ಬಹುತೇಕ ನೋಡಿದ್ದೇವೆ. ಹಾಗಾಗಿ ಮಹಿಳಾ ಶಿಕ್ಷಣಕ್ಕೆ ಮೊದಲು ಉತ್ತೇಜನ ನೀಡಬೇಕು. ಆಗ ಮಹಿಳೆಯೇ ನಿರ್ಧಾರ ತೆಗೆದುಕೊಳ್ಳುವಂತಹ ವಾತಾವರಣ ನಿರ್ಮಾಣವಾಗಲಿದೆ. ಮಹಿಳೆ ಅಥವಾ ಪುರುಷರು ಯಾರೇ ಆಗಿದ್ದರೂ ಜನಪರವಾದ ಕಾಳಜಿ ಇರುವುದು ಮುಖ್ಯ. ಏಕೆಂದರೆ ಈಗಾಗಲೇ ಎಷ್ಟೋ ಮಹಿಳೆಯರು ಉನ್ನತ ಸ್ಥಾನದಲ್ಲಿದ್ದೂ ಮಹಿಳೆಯರ ಸಮಸ್ಯೆಗಳಿಗೆ ಪರಿಹಾರ ಸಿಕ್ಕಿದೆಯೇ? ಅವರ ಪರವಾದ ಧ್ವನಿ ಇದೆಯೇ? ಎಂದರೆ ಅದಾಗಿಲ್ಲ.

–ಜಿ.ಎಸ್.ಸೀಮಾ, ಜಿಲ್ಲಾ ಕಾರ್ಯದರ್ಶಿ, ಎಐಎಂಎಸ್‌ಎಸ್

ಕುಡಿತದ ಬಾಜಿ ಕಟ್ಟಿ ಪ್ರಾಣ ಕಳೆದುಕೊಂಡ ವ್ಯಕ್ತಿ

ಹಾಸನ,ಸೆ.19– ಕುಡಿತದ ಬಾಜಿ ಕಟ್ಟಿ, ವ್ಯಕ್ತಿಯೋರ್ವ ಪ್ರಾಣ ಕಳೆದುಕೊಂಡ ಘಟನೆ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಸಿಗರನಹಳ್ಳಿಯಲ್ಲಿ ನಡೆದಿದೆ. ಗ್ರಾಮದ ಬಸ್ ನಿಲ್ದಾಣದಲ್ಲಿ ದೇವರಾಜ್ ಮತ್ತು ತಿಮ್ಮೇಗೌಡ ಇಬ್ಬರು ಅರ್ಧ ಗಂಟೆಯಲ್ಲಿ 90 ಎಂಎಲ್‌ನ 10 ಪ್ಯಾಕೇಟ್ ಮದ್ಯ ಕುಡಿಯುವ ಚಾಲೆಂಜ್ ಕಟ್ಟಿದ್ದರು. ಅದರಂತೆ ಚಾಲೆಂಜ್‌ನಲ್ಲಿ ಹೆಚ್ಚು ಮದ್ಯ ಸೇವಿಸಿದ್ದ ತಿಮ್ಮೇಗೌಡ(60) ಇದೀಗ ಸಾವನ್ನಪ್ಪಿದ್ದಾನೆ.

ಇನ್ನು 30 ನಿಮಿಷದಲ್ಲಿ 90 ಎಂಎಲ್‌ನ 10 ಪ್ಯಾಕೇಟ್ ಮದ್ಯ ಕುಡಿಯುವ ಚಾಲೆಂಜ್ ಕಟ್ಟಿದ್ದ ಇಬ್ಬರಿಗೂ ಕೃಷ್ಣೇಗೌಡ ಎಂಬಾತ ಮದ್ಯದ ಪ್ಯಾಕೆಟ್‌ಗಳನ್ನು ನೀಡಿದ್ದ. ಚಾಲೆಂಜ್ ಗೆಲ್ಲಲು ಮದ್ಯ ಕುಡಿದು, ರಕ್ತ ವಾಂತಿ ಮಾಡಿಕೊಂಡು ತಿಮ್ಮೇಗೌಡ ಬಸ್ ನಿಲ್ದಾಣದಲ್ಲೇ ಬಿದ್ದಿದ್ದ. ತಿಮ್ಮೇಗೌಡ ಅಸ್ವಸ್ಥ ಆಗುತ್ತಲೆ ದೇವರಾಜು ಮತ್ತು ಕೃಷ್ಣೇಗೌಡ ಸ್ಥಳದಿಂದ ಎಸ್ಕೇಪ್ ಆಗಿದ್ದಾರೆ. ಇನ್ನು ಹಬ್ಬಕ್ಕಾಗಿ ತಿಮ್ಮೇಗೌಡನ ಮನೆಯವರು ಸಂಬಂಧಿಕರ ಮನೆಗೆ ತೆರಳಿದ್ದರು. ಈ ಮಧ್ಯೆ ಕುಡಿದು ಸುಸ್ತಾಗಿ ಬಿದ್ದಿದ್ದ ತಿಮ್ಮೇಗೌಡನನ್ನು ಗ್ರಾಮಸ್ಥರು ಮನೆಗೆ ಕರೆತಂದು ಬಿಟ್ಟಿದ್ದರು. ಮನೆಯಲ್ಲಿ ಯಾರೂ ಇಲ್ಲದ ವೇಳೆ ತಿಮ್ಮೇಗೌಡ ಸಾವನ್ನಪ್ಪಿದ್ದಾನೆ. ಘಟನೆ ಬಗ್ಗೆ ತಿಮ್ಮೇಗೌಡರ ಪುತ್ರಿ ಪೊಲೀಸ್ ಠಾಣೆಗೆ ದೂರು ನೀಡಿದ್ದು, ದೇವರಾಜು ಹಾಗೂ ಕೃಷ್ಣೇಗೌಡ ವಿರುದ್ಧ ಹೊಳೆನರಸೀಪುರ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಕೈಯಲ್ಲಿ ಮೊಬೈಲ್ ಹಿಡಿದ ಮಕ್ಕಳಿಗೆ ಸಂಬಂಧಿಗಳನ್ನೇ ಗುರುತಿಸದಂತಾಗಿದೆ!

● ಮಾಜಿ ಸಚಿವೆ ರಾಣಿ ಸತೀಶ್ ಕಳವಳ ● ನಾವೇ ಸಂಬಂಧಗಳಿಗೆ ತಿಲಾಂಜಲಿ ಹಾಡಿದ ಕರುಣಾಜನಕ ಸ್ಥಿತಿ ● ರಾಷ್ಟ್ರೀಯ ಮಕ್ಕಳ ರಂಗೋತ್ಸವಕ್ಕೆ ಚಾಲನೆ

ಮೈಸೂರು,ಸೆ.19(ಎಸ್‌ಬಿಡಿ)– ಮೊಬೈಲ್‌ನಿಂದ ಮಕ್ಕಳಲ್ಲಿ ಹತ್ತಿರದ ಸಂಬಂಧಿಯನ್ನೂ ಗುರುತಿಸಲಾಗದಷ್ಟು ಮೌಢ್ಯ ಆವರಿಸಿದೆ ಎಂದು ಮಾಜಿ ಸಚಿವೆ ರಾಣಿ ಸತೀಶ್ ಕಳವಳ ವ್ಯಕ್ತಪಡಿಸಿದರು.

ರಂಗಾಯಣ ಮತ್ತು ಭಾರತೀಯ ರಂಗಭೂಮಿ ಪ್ರತಿಷ್ಠಾನ ಸಹಯೋಗದಲ್ಲಿ ವಿವಿಧೆಡೆ ಆಯೋಜಿಸಿರುವ ಆರು ದಿನಗಳ 'ರಾಷ್ಟ್ರೀಯ ಮಕ್ಕಳ ರಂಗೋತ್ಸವ'ಕ್ಕೆ ಮಂಗಳವಾರ ಭೂಮಿಗೀತ ರಂಗವೇದಿಕೆಯಲ್ಲಿ ಚಾಲನೆ ನೀಡಿ, ಅವರು ಮಾತನಾಡಿದರು. ಇತ್ತೀಚೆಗೆ ಪೋಷಕರು ಮಕ್ಕಳ ಕೈಗೆ ಮೊಬೈಲ್ ಕೊಟ್ಟು ತಮ್ಮ ಕೆಲಸದಲ್ಲಿ ನಿರತರಾಗುತ್ತಾರೆ. ನಮ್ಮ ತೋಟದಲ್ಲಿ ಕೆಲಸ ಮಾಡುವ ಮಹಿಳೆ ತನ್ನ ಎರಡೂ ಮಕ್ಕಳಿಗೆ ಮೊಬೈಲ್ ನೀಡಿ, ಕೆಲಸಕ್ಕೆ ಬರುವುದಾಗಿ ತಿಳಿಸಿದರು. ಈಕೆ ಕೆಲಸ ಮುಗಿಸಿ ಮನೆಗೆ ಹೋಗುವವರೆಗೂ ಮೊಬೈಲ್ ಜೊತೆಗಿರುತ್ತಾರೆ. ತಾಂತ್ರಿಕ ಜಗತ್ತಿನಲ್ಲಿ ಗತ ಕಾಲದ ವೈಭವ, ಅಜ್ಜ–ಅಜ್ಜಿ, ಅಪ್ಪ–ಅಮ್ಮ ಎಲ್ಲಾ ಬಾಂಧವ್ಯಗಳೂ ಮರೆಯಾಗುತ್ತಿವೆ. ಸ್ವಂತ ಚಿಕ್ಕಪ್ಪನ ಮಗನನ್ನೂ ಗುರುತಿಸಲಾಗದಷ್ಟು ಮೌಢ್ಯ ಆವರಿಸಿದೆ. ಭಾವನೆ ಇಲ್ಲದ ಜೀವನ ನಿರ್ಮಾಣವಾಗುತ್ತಿದೆ. ಸಂಬಂಧಗಳು ದೂರವಾಗುತ್ತಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಬಗ್ಗೆ ಮಕ್ಕಳಿಗೆ ತಿಳಿಹೇಳುವುದರ ಜೊತೆಗೆ ಪೋಷಕರಿಗೂ ಜಾಗೃತಿ ಅಗತ್ಯವಿದೆ. ತಂದೆ–ತಾಯಿ ತಮ್ಮ ಮಕ್ಕಳ ಮೇಲೆ ನಿಗಾ ವಹಿಸಬೇಕು. ಮಕ್ಕಳು ಮೊಬೈಲ್ ವ್ಯಸನಿಗಳಾಗದಂತೆ ನೋಡಿಕೊಳ್ಳಬೇಕು. ಐಸ್‌ಕ್ರೀಂ, ಚಾಕೋಲೇಟ್ ಮೂಲಕ ಮಾದಕ ವಸ್ತು ನೀಡುವ ಆತಂಕಕಾರಿ ಪರಿಸ್ಥಿತಿಯಲ್ಲಿ ತುಂಬಾ ಜಾಗೃತೆ ವಹಿಸಬೇಕು. ಮಕ್ಕಳನ್ನು ಸರಿದಾರಿಯಲ್ಲಿ ಕರೆದೊಯ್ದು ಅವರನ್ನು ರಾಷ್ಟ್ರದ ಸಂಪತ್ತಾಗಿ ಪರಿವರ್ತಿಸಬೇಕು. ಈ ನಿಟ್ಟಿನಲ್ಲಿ ನಾಟಕ ಹೆಚ್ಚು ಪರಿಣಾಮಕಾರಿ. ಮಕ್ಕಳ ಉತ್ತಮ ಭವಿಷ್ಯವನ್ನು ದೃಷ್ಟಿಯಲ್ಲಿಟ್ಟುಕೊಂಡು ರೂಪಿಸಿರುವ ಮಕ್ಕಳ ರಂಗೋತ್ಸವ ಯಶಸ್ವಿಯಾಗಲಿ, ಉದ್ದೇಶ ಸಾಕಾರವಾಗಲಿ ಎಂದು ಆಶಿಸಿದರು.



ಮೈಸೂರು ರಂಗಾಯಣದಲ್ಲಿ ಆಯೋಜಿಸಿರುವ 'ರಾಷ್ಟ್ರೀಯ ಮಕ್ಕಳ ರಂಗೋತ್ಸವ'ದಲ್ಲಿ ಪ್ರಸಿದ್ಧ ಸಾಹಿತಿ ಜಿ.ಪಿ.ರಾಜರತ್ನಂ ನೆನಪಿನಾರ್ಥ ನಾಟಕೋತ್ಸವ ಏರ್ಪಡಿಸಲಾಗಿತ್ತು. ಈ ವೇಳೆ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪ ನಮನ ಸಲ್ಲಿಸಿದರು.

ಘೋರ ದುರಂತ: ಇದಕ್ಕೂ ಮುನ್ನ ಪ್ರಾಸ್ತಾವಿಕ ನುಡಿಗಳನ್ನಾಡಿದ ಹಿರಿಯ ರಂಗಕರ್ಮಿ ಪ್ರಸನ್ನ, ಮಕ್ಕಳನ್ನು ನೋಡಿದರೆ ಸಮಾಜದಲ್ಲಿ ಎದುರಾಗಿರುವ ಸಂಕಷ್ಟ ಅರಿವಿಗೆ ಬರುತ್ತದೆ. ಎದೆಹಾಲು ಕುಡಿಯುವ ಮಗುವಿಗೆ ಮೊಬೈಲ್ ನೀಡಿ, ತಾವೊಂದು ಮೊಬೈಲ್ ಹಿಡಿದು ಕುಳಿತುಕೊಳ್ಳುವ ದುಸ್ಥಿತಿ ನಿರ್ಮಾಣವಾಗಿದೆ. ಮನುಷ್ಯರು ಕೂಡ ಸಹಜವಾದ ಪ್ರಾಣಿ ಎನ್ನುವುದನ್ನೂ ಮರೆತಿದ್ದೇವೆ. ಸಹಜವಾಗಿ ಕಣ್ಣು, ಕಾಲು, ಕೈಯನ್ನು ಬಳಸದೆ ಮೊಬೈಲ್‌ಗೆ ಒತ್ತೆಯಿಟ್ಟು, ಯಂತ್ರಗಳ ದಾಸರಾಗಿದ್ದೇವೆ. ಈ ದಾಸತ್ವವನ್ನು ಮಕ್ಕಳಿಗೆ ನೀಡಿರುವುದು ಘೋರ ದುರಂತ ಎಂದು ವಿಷಾದಿಸಿದರು.

ಯುವಶಕ್ತಿ ದುರ್ಬಳಕೆ: ಯುವ ಸಮುದಾಯ ಸದ್ಯ ರಂಗಭೂಮಿಯತ್ತ ಮುಖ ಮಾಡಿದೆ. ಹೆಚ್ಚಿನ ಸಂಖ್ಯೆಯಲ್ಲಿ ರಂಗ ಚಟುವಟಿಕೆಯಲ್ಲಿ ತೊಡಗಿದ್ದಾರೆ. ಆದರೆ ಅವರಲ್ಲಿರುವ ಅಧಮ್ಯ ರಚನಾತ್ಮಕ ಶಕ್ತಿಯನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಧಾರಾವಾಹಿಗಳಲ್ಲಿ ನಟಿಸಲು ಬೆಂಗಳೂರು, ಮುಂಬೈ, ಚೆನ್ನೈನಲ್ಲಿ ಕಾದು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಅನಿವಾರ್ಯವಾಗಿ ಬೇರೆ ಭಾಷೆಯಲ್ಲಿ ನಟಿಸಲು ಹೋದವರ ಮೇಲೆ ಕನ್ನಡ ಉಳಿಸುತ್ತಿಲ್ಲ ಎಂದು ದೋಷಾರೋಪವನ್ನೂ ಮಾಡಲಾಗುತ್ತಿದೆ ಎಂದು ರಂಗಭೂಮಿ ಸುಧಾರಣೆ ಬಗ್ಗೆ ಸೂಚ್ಯವಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ರಂಗಾಯಣದ ಉಪನಿರ್ದೇಶಕಿ ನಿರ್ಮಲಾ ಮಠಪತಿ, ಸ್ವೀಡನ್ ಅತಿಥಿಗಳಾದ ಲೀನಾ ಫ್ರಿಡೆಲ್ ಹಾಗೂ ಲೀಸಾ ಉಪಸ್ಥಿತರಿದ್ದರು. ಬಳಿಕ ಭೂಮಿಗೀತದಲ್ಲಿ 'ಮುಟ್ಟಿಸಿಕೊಂಡವನು' ನಾಟಕ ಪ್ರದರ್ಶನವಾಯಿತು.

ಮಕ್ಕಳ ನಾಟಕದ ಮೂಲಕ ರಂಗಭೂಮಿ ಪ್ರವೇಶಿಸಿರುವ ಪ್ರಸಿದ್ಧ ನಟ ಮೋಹನ್ ಅಘಾಶೆ ಅವರು ಇದೇ ವೇಳೆ ಕಿರು ರಂಗಮಂದಿರದಲ್ಲಿ ಆಯೋಜಿಸಿರುವ ಹಿರಿಯರಿಂದ ಕಿರಿಯರಿಗಾಗಿ ನಾಟಕ ಪ್ರದರ್ಶನವನ್ನು ಉದ್ಘಾಟಿಸಿ, ಶುಭ ಕೋರಿದರು.

ಇದೇ ಸಂದರ್ಭದಲ್ಲಿ ಕಿರು ರಂಗಮಂದಿರದ ಆವರಣದಲ್ಲಿ ಮಕ್ಕಳ ಕುರಿತಾದ ವಿಶೇಷ ಚಿತ್ರಕಲೆಯನ್ನೊಳಗೊಂಡ ಕಲಾ ಗ್ಯಾಲರಿಯನ್ನು ಗಣ್ಯರು ಉದ್ಘಾಟಿಸಿದರು.

ಮಹಿಳಾ ಮೀಸಲಾತಿ ಮಸೂದೆಗೆ ಸ್ವಾಗತ...

ಮೈಸೂರು: ಮಕ್ಕಳ ರಂಗೋತ್ಸವದಲ್ಲೂ ಗಣ್ಯರು ಕೇಂದ್ರದ ಮಹಿಳಾ ಮೀಸಲಾತಿ ಮಸೂದೆ ಬಗ್ಗೆ ಸಂತಸ ವ್ಯಕ್ತಪಡಿಸಿದರು.

ಇಂದು ಒಂದು ಶುಭ ಸುದ್ದಿ ದೊರೆತಿದೆ. ದೇಶದಲ್ಲಿ ಹೆಣ್ಣು ಮಕ್ಕಳಿಗೆ ಶೇ.33ರಷ್ಟು ಮೀಸಲಾತಿಯನ್ನು ಲೋಕಸಭೆ ಅಂಗೀಕರಿಸಿದೆ. ಇದು ಬಹಳ ದೊಡ್ಡ ಸಂಗತಿ. ಭಾರತದ ಸಂಕಷ್ಟ ನೀಗುವ ಪ್ರಯತ್ನವಾಗಿದೆ ಎಂದು ಹಿರಿಯ ರಂಗಕರ್ಮಿ ಪ್ರಸನ್ನ ಹೇಳಿದರು.

ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ದಕ್ಕಿರುವುದು ಅತ್ಯಂತ ಸಂತೋಷ ಹಾಗೂ ಹೆಮ್ಮೆಯ ಸಂಗತಿಯಾಗಿದೆ. ಮಹಿಳೆಯರಿಗೆ ಸೂಕ್ತ ಸ್ಥಾನಮಾನ, ಗೌರವ ಸಿಗುವ ದೇಶ ಸಮೃದ್ಧವಾಗಿರುತ್ತದೆ ಎಂಬ ಮಾತಿದೆ. ಸಮಾಜದ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಸಾಧಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಮೀಸಲಾತಿಯಡಿ ಆಯ್ಕೆಯಾಗುವ ಅಭ್ಯರ್ಥಿಗಳ ಮೇಲೆ ತುಂಬಾ ಜವಾಬ್ದಾರಿ ಇದೆ ಎಂದು ಮಾಜಿ ಸಚಿವೆ ರಾಣಿ ಸತೀಶ್ ಅಭಿಪ್ರಾಯಿಸಿದರು.

ಮೈಸೂರು ವಿವಿ ಮೊಹಲ್ಲಾ 8ನೇ ಕ್ರಾಸ್‌ನ ಎಸ್‌ಪಿವಿಜಿಎಂಸಿ ಟ್ರಸ್ಟ್‌ನ 62ನೇ ಪಾರಂಪರಿಕ ಸಂಗೀತೋತ್ಸವಕ್ಕೆ ಚಾಲನೆ

ವಿದ್ವಾನ್ ಎನ್.ರವಿಕಿರಣ್‌ರಿಂದ ಆರಂಭಿಕ ಸಂಗೀತ ಕಛೇರಿಗೆ ಮಾರುಹೋದ ಸಂಗೀತ ಪ್ರೇಮಿಗಳು





ಮೈಸೂರಿನ ವಿವಿ ಮೊಹಲ್ಲಾ 8ನೇ ಕ್ರಾಸ್‌ನ ಪಾರಂಪರಿಕ ಸಂಗೀತೋತ್ಸವದಲ್ಲಿ ಮಂಗಳವಾರ ವಿದ್ವಾನ್ ಎನ್.ರವಿಕಿರಣ್ ತಂಡದಿಂದ ಸಂಗೀತ ಕಛೇರಿ ನಡೆಯಿತು.

ಮೈಸೂರು,ಸೆ.19(ಎಸ್‌ಬಿಡಿ)– ಮೈಸೂರಿನ ವಾಣಿ ವಿಲಾಸ (ವಿವಿ) ಮೊಹಲ್ಲಾ 8ನೇ ಕ್ರಾಸ್‌ನಲ್ಲಿ ಶ್ರೀ ಪ್ರಸನ್ನ ವಿದ್ಯಾಗಣಪತಿ ಮಹೋತ್ಸವ ಚಾರಿಟಬಲ್ (ಎಸ್‌ಪಿವಿಜಿಎಂಸಿ) ಟ್ರಸ್ಟ್ ವತಿಯಿಂದ ಆಯೋಜಿಸಿರುವ 62ನೇ 'ಪಾರಂಪರಿಕ ಸಂಗೀತೋತ್ಸವ'ಕ್ಕೆ ಮಂಗಳವಾರ ವಿಧ್ಯುಕ್ತ ಚಾಲನೆ ದೊರಕಿತು.


ಸಂಗೀತೋತ್ಸವಕ್ಕೆ ಚಾಲನೆ ನೀಡಿದ ವಿದ್ವಾನ್ ಎನ್.ರವಿಕಿರಣ್ ಮಾತನಾಡಿ, ಎಲ್ಲಾ ಸಂಗೀತಗಾರರೂ ವಿವಿ ಮೊಹಲ್ಲಾ 8ನೇ ಕ್ರಾಸ್‌ನಲ್ಲಿ ಕಾರ್ಯಕ್ರಮ ನೀಡಲು ಬಯಸುತ್ತಾರೆ. ಇಲ್ಲಿ ಹಾಡಿ, ನುಡಿಸಲು ಹೆಮ್ಮೆಪಡುತ್ತಾರೆ. ವಿದೇಶದಲ್ಲಿದ್ದರೂ ಕೂಡ ಇಲ್ಲಿನ ಕಾರ್ಯಕ್ರಮಕ್ಕೆ ಆಹ್ವಾನ ಬಂದರೆ ಓಡೋಡಿ ಬರುತ್ತಾರೆ. ಇದಕ್ಕೆಲ್ಲಾ 8ನೇ ಕ್ರಾಸ್‌ನಲ್ಲಿರುವ ದೈವಿಕ ವಾತಾವರಣವೇ ಕಾರಣ ಎಂದು ಶ್ಲಾಘಿಸಿದರು.

ಪಾರಂಪರಿಕ ಸಂಗೀತವನ್ನು ಪ್ರೋತ್ಸಾಹಿಸುವ ಮಹದುದ್ದೇಶದಿಂದ ಸ್ಥಾಪಿತವಾದ ಈ ಟ್ರಸ್ಟ್, 62 ವರ್ಷಗಳಿಂದ ಸಂಗೀತ ಉತ್ಸವವನ್ನು ಸುಸೂತ್ರವಾಗಿ ನಡೆಸಿಕೊಂಡು ಬರುತ್ತಿದೆ. ಸಾಕಷ್ಟು ಕಲಾವಿದರಿಗೆ ವೇದಿಕೆ ಕಲ್ಪಿಸಿಕೊಟ್ಟಿದೆ. ನಾಡಿನ ಕಲಾರಸಿಕರಿಗೆ ಸಾಂಸ್ಕೃತಿಕ ಜೀವಂತಿಕೆಯನ್ನು ನೀಡಿದೆ. ಲಕ್ಷಾಂತರ ಕಲಾರಸಿಕರಿಗೆ ಭಾರತದ ವೈವಿಧ್ಯಮಯ ಸಂಗೀತವನ್ನು ಉಣಬಡಿಸಿದೆ ಎಂದು ಬಣ್ಣಿಸಿದರು.

ಮೈಸೂರೆಂದರೆ ನನ್ನ ಮನೆಗೆ ಬರುವಷ್ಟು ಖುಷಿಯಾಗುತ್ತದೆ. ನನ್ನ ತಾತ ನಾರಾಯಣ ಅಯ್ಯಂಗಾರ್ ಅವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಸ್ಥಾನ ಸಂಗೀತ ವಿದ್ವಾಂಸರಾಗಿದ್ದರು. ಕಾವೇರಿ ನೀರನ್ನು ಕುಡಿದು ಬಾಲ್ಯ ಕಳೆದ ನಾನು, ಅವಳೊಂದಿಗೆ ತಮಿಳುನಾಡಿಗೆ ಹೋದೆ. ಆದರೆ ಇಲ್ಲಿನ ಕೇಳುಗರೆಂದರೆ ನನಗೆ ತುಂಬಾ ವಿಶೇಷ. ಈ ವೇದಿಕೆಯಲ್ಲಿ ನಾನೂ 14 ಬಾರಿ ಸಂಗೀತ ಕಛೇರಿ ನೀಡಿದ್ದೇನೆ. ನನಗೆ ಪ್ರಸನ್ನ ವಿದ್ಯಾಗಣಪತಿಯೆಂದರೆ ಅತೀವ ಭಕ್ತಿ. ಕೋವಿಡ್ ಸಂದರ್ಭದಲ್ಲಿ ಅಮೆರಿಕದಲ್ಲಿದ್ದಾಗ ರಚಿಸಿದ ಪ್ರಸನ್ನ ಗಣಪತಿ ಕೃತಿಯನ್ನು ಇಂದು ಗಣಪನಿಗೆ ಅರ್ಪಿಸುತ್ತಿದ್ದೇನೆ ಎಂದರು.

ಟ್ರಸ್ಟ್ ಅಧ್ಯಕ್ಷರಾದ ಉದ್ಯಮಿ ಎಂ.ಜಗನ್ನಾಥ ಶೆಣೈ ಅವರು ಮಾತನಾಡಿ, ಕಲೆಗೆ ಬೆಲೆ ಕಟ್ಟಲಾಗದು. ಆದರೆ ಕಲಾವಿದರಿಗೆ ಕಲೆಯೇ ಜೀವನ. ಹಾಗಾಗಿ ಕಲಾಭಿಮಾನಿಯಾದವರು ಉಚಿತವಾಗಿ ಕಲಾವಿದರಿಂದ ಕಛೇರಿ ಮಾಡಿಸಬಾರದು. ಕಲೆ ಮತ್ತು ಕಲಾವಿದನಿಗೆ ಸಮ್ಮಾನ ದಕ್ಕಬೇಕು. ಇದು ಸಂಗೀತ ಬೆಳೆಸುವ ಹಾಗೂ ಕಲೆಯನ್ನು ಉಳಿಸುವ ಮಾರ್ಗ ಎಂದು ಹೇಳುವ ಮೂಲಕ ಕಲಾವಿದರಿಗೆ ಪ್ರೋತ್ಸಾಹ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಪಾರಂಪರಿಕ ಸಂಗೀತೋತ್ಸವ ಸ್ವಂತ ಕಟ್ಟಡದಲ್ಲಿ ನೆರವೇರುವಂತಾಗಬೇಕು ಎನ್ನುವುದು ಕಲಾಸಕ್ತರ ಆಶಯವಾಗಿದೆ. ಈ ನಿಟ್ಟಿನಲ್ಲಿ ಆಗುವಂತಹ ಪ್ರಯತ್ನಕ್ಕೆ ನನ್ನ ಸಹಕಾರ ಇದ್ದೇ ಇರುತ್ತದೆ ಎಂದು ಇದೇ ವೇಳೆ ಭರವಸೆ ನೀಡಿದರು. ಈ ವೇಳೆ ಟ್ರಸ್ಟ್‌ನ ಪೋಷಕರಾದ ಮಾಜಿ ಶಾಸಕ ವಾಸು, ಕಾರ್ಯದರ್ಶಿ ಸಿ.ಆರ್.ಹಿಮಾಂಶು ಮತ್ತಿತರರು ಉಪಸ್ಥಿತರಿದ್ದರು. ಬಳಿಕ ವಿದ್ವಾನ್ ಎನ್.ರವಿಕಿರಣ್ 'ಚಿತ್ರವೀಣಾ', ವಿದೂಷಿ ಗಾಯತ್ರಿ 'ವಯೋಲಿನ್', ವಿದ್ವಾನ್ ಮನ್ನಾರ್‌ಗುಡಿ ಈಶ್ವರನ್ 'ಮೃದಂಗ' ಹಾಗೂ ವಿದ್ವಾನ್ ಜಿ.ಎಸ್.ರಾಮಾನುಜಮ್ 'ಘಟಂ' ವಾದ್ಯ ಸಂಗೀತ ಸಂಗೀತಾಸಕ್ತರ ಮನಸೂರೆಗೊಂಡಿತು.

ಕಾವೇರಿ ವಿವಾದ: ಪರಸ್ಪರ ಮಾತುಕತೆಯಿಂದ ಪರಿಹಾರ



ನವದೆಹಲಿ: ಕರ್ನಾಟಕ ಮತ್ತು ತಮಿಳುನಾಡು ನಡುವಿನ ಕಾವೇರಿ ಜಲ ವಿವಾದವನ್ನು ಕಾನೂನಾತ್ಮಕವಾಗಿ ಬಗೆಹರಿಸಲು ಸಾಧ್ಯವಿಲ್ಲ ಎಂದಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ದಶಕಗಳಷ್ಟು ಹಳೆಯದಾದ ಸಮಸ್ಯೆಯನ್ನು ಉಭಯ ರಾಜ್ಯಗಳು ಪರಸ್ಪರ ಮಾತುಕತೆ ಮೂಲಕ ಬಗೆಹರಿಸಿಕೊಳ್ಳುವ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ರಾಜ್ಯಸಭೆಯಲ್ಲಿ ಸಂವಿಧಾನ ಸಭೆಯಿಂದ ಆರಂಭವಾದ 75 ವರ್ಷಗಳ ಸಂಸತ್ತಿನ ಪಯಣ–ಸಾಧನೆ, ಅನುಭವ, ನೆನಪುಗಳು ಮತ್ತು ಕಲಿಕೆ' ಕುರಿತ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಗೌಡರು, ಸರ್ವಪಕ್ಷ ಸಭೆಯಲ್ಲಿ ನೆರೆಯ ರಾಜ್ಯದ ಕೆಲವು ಗೆಳೆಯರು ಕಾವೇರಿ ಸಮಸ್ಯೆಯನ್ನು ಪ್ರಸ್ತಾಪಿಸಿದ್ದಾರೆ. ಕಳೆದ 60 ವರ್ಷಗಳಿಂದ ಈ ಸಮಸ್ಯೆ ಇದ್ದು, ಕಾನೂನಾತ್ಮಕವಾಗಿ ಬಗೆಹರಿಯುವುದಿಲ್ಲ ಎಂದರು.

ನಮ್ಮ ಸ್ನೇಹಿತರು ಸುಗಮ ರೀತಿಯ ಸಮಸ್ಯೆ ಪರಿಹರಿಸಲು ಬಯಸಿದರೆ, ನಾವೆಲ್ಲರೂ ಒಟ್ಟಿಗೆ ಕುಳಿತು ಸಮಸ್ಯೆ ಬಗೆಹರಿಸೋಣ. ಇಲ್ಲದಿದ್ದರೆ ವಿವಾದ ಮುಂದುವರಿಯುತ್ತದೆ ಮತ್ತು ಎರಡೂ ಕಡೆಯಿಂದ ಹೋರಾಟ ಮುಂದುವರಿಯುತ್ತದೆ. ನಾವು ಒಟ್ಟಿಗೆ ಕುಳಿತು ಬಿಕ್ಕಟ್ಟು ಬಗೆಹರಿಸಲು ಪ್ರಯತ್ನಿಸದ ಹೊರತು ಈ ಸಮಸ್ಯೆಯನ್ನು ಪರಿಹರಿಸಲಾಗದು, ಕಾನೂನಾತ್ಮಕವಾಗಿ ಖಂಡಿತವಾಗಿಯೂ ವಿವಾದ ಬಗೆಹರಿಸಲು ಸಾಧ್ಯವಿಲ್ಲ. ಕರ್ನಾಟಕ ರಾಜ್ಯ ಮಳೆಯಿಲ್ಲದೆ ಬರ ಪರಿಸ್ಥಿತಿ ಇರುವುದರಿಂದ ಸಂಕಷ್ಟದಲ್ಲಿರುವ ಜನರ ಪರ ನಿಂತಿದ್ದೇನೆ. ಕರ್ನಾಟಕ ಅಥವಾ ತಮಿಳುನಾಡಿಗೆ ಸೇರದ ಈ ಸದನದ ಎರಡೂ ಕಡೆಯ ಐವರು ಸದಸ್ಯರನ್ನು ನೀವು (ರಾಜ್ಯಸಭಾ ಸದಸ್ಯ ಜಗದೀಪ್ ಧನಕರ್) ನಿಯೋಜಿಸಿ, ಅವರು ಹೋಗಿ ಜನರ ಸ್ಥಿತಿ ಏನಾಗಿದೆ ಎಂಬುದನ್ನು ನೋಡಿ ನಂತರ ಈ ಸದನಕ್ಕೆ ವರದಿ ಮಾಡಲಿ, ನಾನು ಒಪ್ಪಿಕೊಳ್ಳುತ್ತೇನೆ. ಅನಾವಶ್ಯಕವಾಗಿ ಜಗಳ ಮಾಡಿಕೊಳ್ಳುವುದು ಬೇಡ ಎಂದರು.

ಹೆಚ್.ಡಿ.ಕೋಟೆಯ ತೆರಣಿಮಂಟಿ ಯುವತಿ ನಾಪತ್ತೆ



ಮೈಸೂರು, ಸೆ.19– ಪ್ರಭುಸ್ವಾಮಿ, ಗೌರಮ್ಮ ಅವರ 2ನೇ ಮಗಳಾದ ಅನುಷ ಟಿ.ಪಿ ಎಂಬ 21 ವರ್ಷದ ಯುವತಿ ಸೆ.10ರಂದು ಕಾಣೆಯಾಗಿದ್ದು, ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈಕೆ ಮೂಲತಃ ಹೆಚ್.ಡಿ.ಕೋಟೆ ತಾಲೂಕಿನ ತೆರಣಿಮಂಟಿ ಗ್ರಾಮದ ನಿವಾಸಿ. ಮೈಸೂರಿನ ಮಹಾರಾಣಿ ಮಹಿಳಾ ಕಾಲೇಜಿ ವಿದ್ಯಾರ್ಥಿನಿಯಾಗಿದ್ದಾರೆ.


ಚಹರೆ: ಸುಮಾರು 5.5 ಅಡಿ ಎತ್ತರ, ಕಪ್ಪು ಮೈ ಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಗುಲಾಬಿ ಬಣ್ಣದ ಟಾಪ್, ತಿಳಿ ಬಣ್ಣದ ಪ್ಯಾಂಟ್ ಧರಿಸಿರುತ್ತಾಳೆ. ಕಾಣೆಯಾದ ವ್ಯಕ್ತಿ ಪತ್ತೆಯಾದಲ್ಲಿ ಸರಗೂರು ಪೊಲೀಸ್ ಠಾಣೆಯಲ್ಲಿ ದೂ.ಸಂ: 08228–265542 ಮೊ.ಸಂ: 9480805064 ಅನ್ನು ಸಂಪರ್ಕಿಸಬಹುದು.

ಮೈಸೂರು ಪಾಲಿಕೆಯ ಇಂಡಿಯನ್ ಸ್ವಚ್ಛತಾ ಲೀಗ್ 2.0ಗೆ ಸಂಸದ ಪ್ರತಾಪ್ ಸಿಂಹ ಚಾಲನೆ

ಸ್ವಚ್ಛತಾ ಅಭಿಯಾನದಲ್ಲಿ ಸ್ವಚ್ಛ ಭಾರತ ಮಿಷನ್ ರಾಯಭಾರಿಗಳಾದ ಮಂಡ್ಯ ರಮೇಶ್, ಫಾಲ್ಕಿಯಾ ಖಾನ್ ಭಾಗಿ

ಮೈಸೂರು, ಸೆ. 19(ಆರ್‌ಕೆ)– 2023ರ ಸ್ವಚ್ಛ ಸರ್ವೇಕ್ಷಣಾ ಅಭಿಯಾನದ ಅಂಗವಾಗಿ ಮೈಸೂರು ಮಹಾನಗರ ಪಾಲಿಕೆಯು ಸೆ.17ರಂದು ಇಂಡಿಯನ್ ಸ್ವಚ್ಛತಾ ಲೀಗ್ (ಸಿಎಸ್‌ಎಲ್) 2.0 ಆರಂಭಿಸಿದೆ.

ಸಂಸದ ಪ್ರತಾಪ್ ಸಿಂಹ, ಮೇಯರ್ ಶಿವಕುಮಾರ್ ಹಾಗೂ ಶಾಸಕ ಟಿ.ಎಸ್.ಶ್ರೀವತ್ಸ ಅವರು ಮೈಸೂರು ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಭಾನುವಾರ ಬೆಳಗ್ಗೆ ಇಂಡಿಯನ್ ಸ್ವಚ್ಛತಾ ಲೀಗ್‌ಗೆ ಚಾಲನೆ ನೀಡಿದರು. ಈ ವೇಳೆ ಸ್ವಚ್ಛ ಭಾರತ ಮಿಷನ್ ರಾಯಭಾರಿಗಳಾದ ಖ್ಯಾತ ರಂಗಕರ್ಮಿ ಹಾಗೂ ಚಲನಚಿತ್ರ ನಟ ಮಂಡ್ಯ ರಮೇಶ್ ಮತ್ತು ಪ್ರತಿಭಾನ್ವಿತ ವಿದ್ಯಾರ್ಥಿ, ವಾಗ್ಮಿ ಫಾಲ್ಕಿಯಾ ಖಾನ್ ಅವರು ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸಿದರು.



ಸ್ವಚ್ಛತೆ ಕಾಪಾಡುವ ಬಗ್ಗೆ ಪ್ರಮಾಣವಚನ ಮಾಡಿದ ಅವರು, ನಂತರ ಗಾಂಧಿಚೌಕದಲ್ಲಿ ಮಾನವ ಸರಪಳಿ ನಿರ್ಮಿಸಿ ಅರಿವು ಮೂಡಿಸಿದರು. ಬಳಿಕ ವಾಕಥಾನ್ ಮೂಲಕ ಗನ್‌ಹೌಸ್ ಸರ್ಕಲ್‌ಗೆ ತೆರಳಿ ಸಹಿ ಸಂಗ್ರಹ ಮಾಡಲಾಯಿತು. ಉಪಮೇಯರ್ ಡಾ. ಆರ್.ರೂಪಾ, ಪಾಲಿಕೆ ಕಮಿಷನರ್ ಆಶಾದ್ ಉರ್ ರೆಹಮಾನ್ ಷರೀಫ್, ಡೆಪ್ಯುಟಿ ಕಮಿಷನರ್ ಜಿ.ಎಸ್.ಸೋಮಶೇಖರ್, ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷೆ ಸವಿತಾ ಸುರೇಶ್, ನಗರಪಾಲಿಕೆ ಸದಸ್ಯ ಸತೀಶ್, ಆರೋಗ್ಯಾಧಿಕಾರಿ ಡಾ. ವೆಂಕಟೇಶ್, ಎಕ್ಸಿಕ್ಯೂಟಿವ್ ಇಂಜಿನಿಯರ್ ಸಿಂಧು, ಪರಿಸರ ಇಂಜಿನಿಯರ್‌ಗಳು, ವಲಯಾಧಿಕಾರಿಗಳು, ಅಭಿವೃದ್ಧಿ ಅಧಿಕಾರಿಗಳು, ವಿವಿಧ ಕಾಲೇಜುಗಳ ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು.

ವಿರಾಜಪೇಟೆ ಅರಣ್ಯ ಪ್ರದೇಶದಲ್ಲಿ ಸೂಟ್‌ಕೇಸ್‌ನಲ್ಲಿ ಕೊಳೆತ ಮಹಿಳೆ ಶವ ಪತ್ತೆ

30 ದಿನಗಳ ಹಿಂದಿನ ಶವ, ಕೊಲೆ ಶಂಕೆ

ವಿರಾಜಪೇಟೆ, ಸೆ.19– ವಿರಾಜಪೇಟೆ ತಾಲೂಕಿನ ಪೆರುಂಬಾಡಿ ಚೆಕ್‌ಪೋಸ್ಟ್‌ನಿಂದ 3 ಕಿ.ಮೀ ದೂರದ ಅರಣ್ಯ ಪ್ರದೇಶದಲ್ಲಿ ಸೂಟ್‌ಕೇಸ್ ಒಳಗೆ ಕೊಳೆತ ಮೃತದೇಹ ಪತ್ತೆಯಾಗಿದೆ. ನೀಲಿ ಬಣ್ಣದ ಟ್ರ್ಯಾಲಿ ಸೂಟ್‌ಕೇಸ್ ಒಳಗೆ ಸುಮಾರು 25 ರಿಂದ 35



ವರ್ಷ ಪ್ರಾಯದ ಮಹಿಳೆಯ ಮೃತದೇಹ ಕಂಡು ಬಂದಿದ್ದು ಸಂಪೂರ್ಣ ಕೊಳೆತು ಗುರುತು ಪತ್ತೆ ಕಷ್ಟಸಾಧ್ಯವಾಗಿ ಪರಿಣಮಿಸಿದೆ.

ಮಹಿಳೆ ಮೃತಪಟ್ಟು ಅಂದಾಜು 30 ದಿನಗಳು ಕಳೆದಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಸೂಟ್‌ಕೇಸ್ ಸಹಿತ ಮೃತದೇಹವನ್ನು ಮಡಿಕೇರಿ ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ. ಘಟನೆ ಕುರಿತು ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪ್ರಕರಣದ ತನಿಖೆಗೆ ಮುಂದಾಗಿರುವ ಪೊಲೀಸರು ಆಯಾ ಠಾಣಾ ವ್ಯಾಪ್ತಿಯಲ್ಲಿ 25ರಿಂದ 35 ವರ್ಷ ಪ್ರಾಯದ ಮಹಿಳೆ ಅಥವಾ ಯುವತಿಯರು ಕಾಣೆಯಾಗಿ ಪತ್ತೆಯಾಗದಿರುವ ಪ್ರಕರಣಗಳಿದ್ದಲ್ಲಿ ವಿರಾಜಪೇಟೆ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಕೋರಿದ್ದಾರೆ.

ಕೊಲೆ ಶಂಕೆ: ಸೂಟ್‌ಕೇಸ್ ಒಳಗೆ ಮಹಿಳೆಯ ಮೃತದೇಹ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಕೊಲೆ ಶಂಕೆ ವ್ಯಕ್ತವಾಗುತ್ತಿದೆ. ಮಹಿಳೆಯನ್ನು ಬೇರೊಂದು ಸ್ಥಳದಲ್ಲಿ ಕೊಲೆ ಮಾಡಿ ಸೂಟ್‌ಕೇಸ್ ಒಳಗೆ ತುಂಬಿ ಅರಣ್ಯ ಪ್ರದೇಶದಲ್ಲಿ ಎಸೆದು ಹೋಗಿರುವ ಕುರಿತು ಅನುಮಾನಗಳು ವ್ಯಕ್ತವಾಗುತ್ತಿವೆ.

ತಾಯಿ ನೆಲದಲ್ಲೇ ಕೊಡವರು ಅತಂತ್ರರು, ಅನಾಥರು

ಸಿಎನ್‌ಸಿಯ 4ನೇ ದಿನದ ಪಾದಯಾತ್ರೆಯಲ್ಲಿ ಅಧ್ಯಕ್ಷ ಎನ್.ಯು. ನಾಚಪ್ಪ ಆತಂಕ



ಮಡಿಕೇರಿ, ಸೆ.19– ಕೊಡವರು ತಮ್ಮ ತಾಯಿ ನೆಲದಲ್ಲೇ ಇಂದು ಅತಂತ್ರರು ಮತ್ತು ಅನಾಥರಾಗಿದ್ದು, ಕೊಡವರ ಹೆಗ್ಗುರುತು ಹಾಗೂ ಅಸ್ತಿತ್ವದ ಬಗ್ಗೆ ಭಯ ಕಾಡುತ್ತಿದೆ. ಆದ್ದರಿಂದ ಕೊಡವರಂತಹ ಸೂಕ್ಷ್ಮ ಬುಡಕಟ್ಟು ಜನಾಂಗದ ಬಗ್ಗೆ ವಿಶೇಷ ಕಾಳಜಿ ತೋರಿ ರಕ್ಷಿಸುವುದು ಕೇಂದ್ರ ಮತ್ತು ರಾಜ್ಯ ಸರ್ಕಾರದ ರಾಜ್ಯಾಂಗದತ್ತ ಋಣಭಾರವಾಗಿದೆ ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು. ನಾಚಪ್ಪ ಪ್ರತಿಪಾದಿಸಿದ್ದಾರೆ.

ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆ ಸೇರಿದಂತೆ ಸಂವಿಧಾನದತ್ತವಾದ 9 ಬೇಡಿಕೆಗಳ ಕುರಿತು ಕೊಡವ ನ್ಯಾಷನಲ್ ಕೌನ್ಸಿಲ್ ಜಿಲ್ಲೆಯಾದ್ಯಂತ ನಡೆಸುತ್ತಿರುವ ಪಾದಯಾತ್ರೆಯ 4ನೇ ದಿನದ ಕೊಡವ ಜಾಗೃತಿ ಸಭೆ ಸೂರ್ಲಬಿ ನಾಡ್‌ಮಂದ್, ಗಡಿನಾಡು ನಾಡ್ ಮಂದ್–ಬಿಳಿಗೇರಿ–ಮಾದಾಪುರದಲ್ಲಿ ನಡೆಯಿತು. ಪಾದಯಾತ್ರೆಯ ನೇತೃತ್ವ ವಹಿಸಿ ಮಾತನಾಡಿದ ಎನ್.ಯು.ನಾಚಪ್ಪ ಅವರು, ಸಂವಿಧಾನದ ವಿಧಿಗಳಡಿಯಲ್ಲಿ ಕೊಡವ ಸಮುದಾಯಕ್ಕೆ ರಕ್ಷಣೆ ಒದಗಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮುಂದಾಗಬೇಕು ಎಂದು ಒತ್ತಾಯಿಸಿದರು.

ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನವು ಅತ್ಯಂತ ಶ್ರೇಷ್ಠ ಮತ್ತು ಸರ್ವ ಶಾಶ್ವತವೂ ಆಗಿರುವುದರಿಂದ ಸಂವಿಧಾನದಡಿಯಲ್ಲಿ ಕೊಡವರಂತಹ ಸೂಕ್ಷ್ಮ ಬುಡಕಟ್ಟು ಜನಾಂಗವನ್ನು ವಿಶೇಷವಾಗಿ ರಕ್ಷಿಸುವುದು ರಾಜ್ಯಾಂಗದತ್ತ ಋಣಭಾರವಾಗಿದೆ ಎಂದರು.

ಕೊಡವರು ಕೊಡವ ನೆಲದ ಪ್ರಾಚೀನ ಬುಡಕಟ್ಟು ಜನರಾಗಿದ್ದು, ಕೊಡವ ಮಂದ್‌ಗಳು, ಜಲದೇವತೆ ಕಾವೇರಿ, ಸೂರ್ಯ, ಚಂದ್ರ, ಭೂಮಿ ತಾಯಿಯಷ್ಟೇ ಪವಿತ್ರವೂ ಆಗಿದ್ದಾರೆ. ನಮ್ಮ ಪಾದಯಾತ್ರೆಯಲ್ಲಿ ಬಳಸುತ್ತಿರುವ ಬ್ಯಾನರ್‌ನಲ್ಲಿ ಭರತ ವರ್ಷದ ಪ್ರಾಚೀನ ಭೂಪಟವನ್ನು ಪ್ರದರ್ಶಿಸುತ್ತಿದ್ದೇವೆ. ಈ ಭೂಪಟದಲ್ಲಿ ಕ್ರಿಸ್ತಪೂರ್ವ 2 ಸಾವಿರ ವರ್ಷಗಳಿಗೂ ಮುನ್ನ ಕೊಡವರ ಅಸ್ತಿತ್ವ ಇದೆ ಎಂದು ಗುರುತು ಮಾಡಲಾಗಿದೆ. ಪ್ರಾಚೀನ ಬುಡಕಟ್ಟು ಕೊಡವ ಜನಾಂಗವನ್ನು ಈ ದೇಶದ ಜನ ಹಾಗೂ ಸರ್ಕಾರ ಸಂವಿಧಾನದ 51 ಎ.ಎಫ್ ವಿಧಿ ಮತ್ತು ವಿಶ್ವ ರಾಷ್ಟ್ರ ಸಂಸ್ಥೆಯ ಸನದ್‌ನ ಪ್ರಕಾರ ರಕ್ಷಿಸಿ ಪೋಷಿಸಿ ಕಾಪಾಡಬೇಕಾಗಿದೆ ಎಂದು ತಿಳಿಸಿದರು.

ಸಿಎನ್‌ಸಿ ನಡೆಸುತ್ತಿರುವ ಯಾತ್ರೆಯು ಕೊಡವರನ್ನು ಅವರ ಹಕ್ಕುಗಳ ಕುರಿತು ಜಾಗೃತಿಗೊಳಿಸುವ ಮತ್ತು ಕೊಡವರ ಒಮ್ಮತದ ಅಭಿಪ್ರಾಯದ ಸಂದೇಶವನ್ನು ಸರ್ಕಾರಕ್ಕೆ ರವಾನಿಸುವ ಸಲುವಾಗಿದೆ. ಪ್ರತಿ ನಾಡಿನ ಮಂದ್‌ಗಳಲ್ಲಿ ಭಕ್ತಿಪೂರ್ವಕ ನಮನ ಸಲ್ಲಿಸಿ ಅದರ ಮಹತ್ವವನ್ನು ದೇಶದ ಜನತೆ ಮತ್ತು ಸರ್ಕಾರಕ್ಕೆ ತಿಳಿಸಿ

ಸಂವಿಧಾನದತ್ತವಾದ ಕೊಡವರ ಬೇಡಿಕೆ ಈಡೇರಿಸುವುದು ಸರ್ಕಾರದ ಕರ್ತವ್ಯ

ವಿಶ್ವ ಜನತೆಯ ಧರ್ಮ ಪ್ರಜ್ಞೆಯನ್ನು ಜಾಗೃತಿಗೊಳಿಸುವ ಪವಿತ್ರ ತೀರ್ಥಯಾತ್ರೆ ಕೈಗೊಂಡಿದ್ದೇವೆ ಎಂದರು.

ಸೂರ್ಲಬಿ ನಾಡ್ ಮಂದ್‌ನಲ್ಲಿ ತಂಬುಕುತ್ತೀರ ರೇಖಾ ಸೋಮಯ್ಯ, ತಂಬುಕುತ್ತೀರ ಮಾಯಮ್ಮ ತಿಮ್ಮಯ್ಯ, ತಂಬುಕುತ್ತೀರ ಸೀತಮ್ಮ ಬೋಪಯ್ಯ, ಅಪ್ಪುಡ ಶಾಂತಿ ಅಯ್ಯಪ್ಪ, ಅಪ್ಪುಡ ಸುಬ್ಬಮ್ಮ ಮುತ್ತಣ್ಣ, ಒಡಿಯಂಡ ಮುದ್ದವ್ವ ಪೂವಯ್ಯ, ಒಡಿಯಂಡ ಶ್ರಾವಣಿ ಶಿವಕುಮಾರ್, ಮುದ್ದಂಡ ನೀಲಮ್ಮ ತಿಮ್ಮಯ್ಯ, ಮುದ್ದಂಡ ಚಿನ್ನಮ್ಮ ಮುದ್ದಪ್ಪ, ಗೌಡಂಡ ಶರತ್ ಮುದ್ದಪ್ಪ, ನಾಗಂಡ ಶಿವನ್ ಮುದ್ದಪ್ಪ ನಾಗಂಡ ಲವ ತಮ್ಮಯ್ಯ, ಚೋಳಪಂಡ ನಾಣಯ್ಯ, ಚೋಳಪಂಡ ಜ್ಯೋತಿ ನಾಣಯ್ಯ, ಕೂಪದಿರ ಸಾಬು ಸುಬ್ರಮಣಿ ಸೇರಿದಂತೆ ನೂರಾರು ಮಂದಿ ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಶ್ರೀ ಗೌರಮ್ಮನವರ ಪಲ್ಲಕ್ಕಿ ಉತ್ಸವ



ವಿರಾಜಪೇಟೆ, ಸೆ.19– ಶ್ರೀ ಬಸವೇಶ್ವರ ದೇವಸ್ಥಾನ ಗೌರಿ ಗಣೇಶ ಉತ್ಸವ ಸಮಿತಿಯಿಂದ ಐತಿಹಾಸಿಕ ದೇಶದ ಶ್ರೀ ಗೌರಮ್ಮನ ಪಲ್ಲಕ್ಕಿ ಉತ್ಸವ ಎನ್.ಯು. ಅಯ್ಯಪ್ಪ (ಮೋಹನ್) ಅವರ ಕೆರೆಯಿಂದ ಪ್ರಾರಂಭಗೊಂಡು ನಗರದ ತೆಲುಗರ ಬೀದಿ, ದಖ್ಖನಿಮೊಹಲ್ಲಾ, ಮೊಗರಗಲ್ಲಿ, ಮುರ್ನಾಡು ರಸ್ತೆ, ಅಪ್ಪಯ್ಯಸ್ವಾಮಿ ರಸ್ತೆ, ದೇವರಕಾಡು ಮಾರ್ಗವಾಗಿ ಚಿಕ್ಕಪೇಟೆ ಸೇರಿದಂತೆ ಪಟ್ಟಣದ ಮುಖ್ಯ ಬೀದಿಗಳಲ್ಲಿ ಮೆರವಣಿಗೆ ನಡೆಸಿ ಬಸವೇಶ್ವರ ದೇವಸ್ಥಾನದಲ್ಲಿ ಶ್ರೀ ಗೌರಮ್ಮನ ವಿಗ್ರಹ ಪ್ರತಿಷ್ಠಾಪನೆ ಮಾಡಲಾಯಿತು. ಈ ಸಂದರ್ಭ ದೇವಸ್ಥಾನದ ಅಡಳಿ ಮಂಡಳಿ ಸದಸ್ಯರು ಭಕ್ತಾದಿಗಳು ಭಾಗವಹಿಸಿದ್ದರು. ಈ ವೇಳೆ ಪಟಾಕಿ ಸಿಡಿಮದ್ದು ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಆರೋಗ್ಯ ಮೇಳ ಸದುಪಯೋಗಪಡಿಸಿಕೊಳ್ಳಿ

ಕುಶಾಲನಗರ, ಸೆ.19– ಗ್ರಾಮೀಣ ಜನರ ಆರೋಗ್ಯ ಸುಧಾರಣೆಗಾಗಿ ಸರ್ಕಾರ ನಡೆಸುತ್ತಿರುವ ತಾಲೂಕು ಮಟ್ಟದ ಆರೋಗ್ಯ ಮೇಳದ ಪ್ರಯೋಜನವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷೆ ಕೆ.ಪಿ. ಚಂದ್ರಕಲಾ ಸಲಹೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯುಷ್ಮಾನ್ ಭವ ಕಾರ್ಯಕ್ರಮದ ಪ್ರಯುಕ್ತ ಕುಶಾಲನಗರದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಏರ್ಪಡಿಸಿದ್ದ ತಾಲೂಕು ಮಟ್ಟದ ಆರೋಗ್ಯ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ನೇತ್ರದಾನ, ಅಂಗಾಂಗ ದಾನ ನೋಂದಣಿ ಕೇಂದ್ರ ಉದ್ಘಾಟಿಸಿದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವಿ.ಪಿ.ಶಶಿಧರ್ ಮಾತನಾಡಿ, ನಮ್ಮನ್ನಾಳುವ ಸರಕಾರಗಳು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಬೇಕಿದೆ. ಪ್ರತಿಯೊಬ್ಬರಿಗೂ ಆರೋಗ್ಯ ಅತಿ ಮುಖ್ಯ. ಕಾಲ ಕಾಲಕ್ಕೆ ಆರೋಗ್ಯ ತಪಾಸಣೆಗಳಿಗೆ ಒಳಗಾಗುವ ಮೂಲಕ ಆರೋಗ್ಯ ರಕ್ಷಣೆಗೆ



ಕಾಳಜಿ ವಹಿಸಬೇಕಿದೆ ಎಂದರು.

ಈ ಸಂದರ್ಭ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸತೀಶ್ ಕುಮಾರ್, ತಾಲೂಕು ಆರೋಗ್ಯಾಧಿಕಾರಿ ಡಾ.ಶ್ರೀನಿವಾಸ್, ಕುಡಾ ಮಾಜಿ ಅಧ್ಯಕ್ಷ ಮಂಜುನಾಥ್ ಗುಂಡುರಾವ್, ಪಪಂ ಮಾಜಿ ಸದಸ್ಯ ಜೋಸೆಫ್ ವಿಕ್ಟರ್ ಸೋನ್ಸ್, ಪ್ರಮುಖರಾದ ನಟೇಶ್ ಗೌಡ ಸೇರಿದಂತೆ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಮಧುಸೂದನ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಚ್.ಕೆ.ಶಾಂತಿ ಹಾಗೂ ವೈದ್ಯ ವೃಂದ, ಆಶಾ ಮತ್ತು ಆರೋಗ್ಯ ಕಾರ್ಯಕರ್ತರು ಇದ್ದರು.

ಜನರಲ್ ತಿಮ್ಮಯ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಡಿಕೇರಿ, ಸೆ.19– 2022–23 ನೇ ಸಾಲಿನಲ್ಲಿ ಹತ್ತನೇ ತರಗತಿ ಮತ್ತು ದ್ವಿತೀಯ ಪಿಯುಸಿ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಗರಿಷ್ಠ ಅಂಕಗಳನ್ನು ಪಡೆದ ಕರ್ನಾಟಕ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ 'ಜನರಲ್ ಕೆ.ಎಸ್.ತಿಮ್ಮಯ್ಯ' ನಗದು ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.31 ಕೊನೆಯ ದಿನವಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಶೂಟಿಂಗ್ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆ

ಮಡಿಕೇರಿ, ಸೆ.19– ಕೊಡಗು ವಿದ್ಯಾಲಯದ 8ನೇ ತರಗತಿ ವಿದ್ಯಾರ್ಥಿನಿ ಕೆ.ಹೆಚ್. ಧ್ವನಿ ಅವರು ಇತ್ತೀಚೆಗೆ ಪಶ್ಚಿಮ ಬಂಗಾಳ'ದ ಅಸನ್‌ಸೋಲ್‌ನಲ್ಲಿ ನಡೆದ 32ನೇ ಆಲ್ ಇಂಡಿಯಾ ಜಿ.ವಿ. ಮೌಲಾಂಕರ್ ಶೂಟಿಂಗ್ ಚಾಂಪಿಯನ್ ಶಿಪ್‌ನಲ್ಲಿ ಭಾಗವಹಿಸಿ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.



ಈ ಹಿಂದೆ ಬೆಂಗಳೂರಿನಲ್ಲಿ ನಡೆದ ರಾಜ್ಯ ಮಟ್ಟದ ಎನ್.ಆರ್. ವಿಭಾಗದಲ್ಲಿ ಭಾಗವಹಿಸಿ ಸಬ್ ಯೂತ್ ವಿಭಾಗದಲ್ಲಿ 4ನೇ ಸ್ಥಾನ ಮತ್ತು ಯೂತ್ ವಿಭಾಗದಲ್ಲಿ 5ನೇ ಸ್ಥಾನಕ್ಕೆ ಭಾಜನರಾಗಿದ್ದಾರೆ.

ಇವರು ಮರಗೋಡುವಿನ ಕೃಷಿಕ ಕಾನಡ್ಕ ಹನೀಶ್ ಹಾಗೂ ಆಶಾ ದಂಪತಿ ಪುತ್ರಿಯಾಗಿದ್ದಾರೆ.


ಗುಡ್ಡೆಹೊಸೂರಿನಲ್ಲಿ ಗಣಪತಿ ಪ್ರತಿಷ್ಠಾಪನೆ



ಗುಡ್ಡೆಹೊಸೂರು, ಸೆ.19– ಇಲ್ಲಿನ ಸಮುದಾಯಭವನದಲ್ಲಿ 29ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಉತ್ಸವಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು. ಈ ಸಂದರ್ಭ ವಿನಾಯಕ ಸೇವಾ ಸಮಿತಿಯ ಎಲ್ಲಾ ಸದಸ್ಯರು ಹಾಜರಿದ್ದರು. ಅರ್ಚಕ ರಾಜಪ್ಪ ಪೂಜಾಕಾರ್ಯ ನಡೆಸಿದರು.

ಅಮರನಾಥ ಗುಹೆ ಮಾದರಿಯ ಮಂಟಪದಲ್ಲಿ ಗಣಪತಿ ಪ್ರತಿಷ್ಠಾಪನೆ

ವಿರಾಜಪೇಟೆ, ಸೆ.19– ವಿರಾಜಪೇಟೆಯ ದೇವರಾಜು ಅರಸು ನಗರದ ಶ್ರೀ ವಿಘ್ನೇಶ್ವರ ಸೇವಾ ಸಮಿತಿ ವತಿಯಿಂದ 43ನೇ ವರ್ಷದ ಶ್ರೀ ಗೌರಿ ಗಣೇಶೋತ್ಸವದ



ಅಂಗವಾಗಿ (ಜಮ್ಮು ಮತ್ತು ಕಾಶ್ಮೀರದಲ್ಲಿ ಶಿವನಿಗೆ ಸಮರ್ಪಿತವಾಗಿರುವ' 'ಅಮರನಾಥ ಗುಹೆ ದೇವಾಲಯ' ಮಾದರಿಯ ಮಂಟಪದಲ್ಲಿ) ವಿಘ್ನೇಶ್ವರ ಮೂರ್ತಿಯನ್ನು ಹಿರಿಯ ವಕೀಲ ಎಂ.ಕೆ.ಪೂವಯ್ಯ ಹಾಗೂ ಸ್ಥಳೀಯ ಜೋತಿಷಿ ದಿವಾಕರ್ ಭಟ್ ಅವರ ನೇತೃತ್ವದಲ್ಲಿ ಪ್ರತಿಷ್ಠಾಪಿಸಲಾಯಿತು. ಬಳಿಕ ನಡೆದ ವೇದಿಕೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಘ್ನೇಶ್ವರ ಸೇವಾ ಸಮಿತಿ ಅಧ್ಯಕ್ಷ ಶ್ರೀಕಾಂತ್ ವಹಿಸಿದ್ದರು. ಸಭೆಯನ್ನುದ್ದೇಶಿಸಿ ಎಂ.ಕೆ.ಪೂವಯ್ಯ ಹಾಗೂ ದಿವಕರ್ ಭಟ್ ಅವರು ಹಿತವಚನ ನುಡಿದರು. ವೇದಿಕೆಯಲ್ಲಿ ಪುರಸಭೆ ಸದಸ್ಯ ರಂಜಿ ಪೂಣಚ್ಚ, ಸ್ಥಳಿಯ ನಿವಾಸಿಗಳಾದ ಬಿ.ಕೆ.ಚಂದ್ರು, ಕೆ.ಡಿ.ಪ್ರದೀಪ್, ಜೀವನ್, ಸದಾನಂದ, ರಾಜಣ್ಣ ಮತ್ತಿತರರು ಉಪಸ್ಥಿತರಿದ್ದರು. ಅಂಬಿಕಾ ರಾಜೇಶ್ ಸ್ವಾಗತಿಸಿ ನಿರೂಪಿಸಿದರು.

ನಾಳೆಯಿಂದ ರಾಷ್ಟ್ರೀಯ ಮಕ್ಕಳ ರಂಗೋತ್ಸವ



ಚಾಮರಾಜನಗರ, ಸೆ.19– ನಗರದಲ್ಲಿ ಸೆ.21ರಿಂದ 24ರವರೆಗೆ ರಾಷ್ಟ್ರೀಯ ಮಕ್ಕಳ ರಂಗೋತ್ಸವ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ಜೆಎಸ್‌ಎಸ್ ಕಲಾ ಮಂಟಪ ಸಂಚಾಲಕ ಚಂದ್ರಶೇಖರಾಚಾರ್ ಹೆಗ್ಗೊಠಾರ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ 108ನೇ ಜಯಂತಿ ಅಂಗವಾಗಿ ಮೈಸೂರು ಜೆಎಸ್‌ಎಸ್ ಕಲಾ ಮಂಟಪ, ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಹಾಗೂ ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆಯಿಂದ ನಗರದ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ನಾಟಕ ಪ್ರದರ್ಶನ ಆಯೋಜಿಸಲಾಗಿದ್ದು, ನಾಟಕ ವೀಕ್ಷಣೆಗೆ ಉಚಿತ ಪ್ರವೇಶವಿದೆ ಎಂದರು.

ಭಾರತೀಯ ರಂಗಭೂಮಿ ಫೌಂಡೇಷನ್ ಸಂಸ್ಥೆ ಮೈಸೂರಿನಲ್ಲಿ ಕಾರ್ಯಾರಂಭ ಮಾಡಿದ್ದು, ಸಂಸ್ಥೆಯು ಶೈಕ್ಷಣಿಕ ರಂಗಭೂಮಿ ಮತ್ತು ಮಕ್ಕಳ ರಂಗಭೂಮಿಯತ್ತ ಗಮನಹರಿಸಿದ್ದು, ಇದರ ಸಹಯೋಗದಲ್ಲಿ ನಗರದಲ್ಲಿ ಮಕ್ಕಳ ರಂಗೋತ್ಸವ ನಡೆಯಲಿದೆ ಎಂದರು.

ಸೆ.21ರಂದು ಸಂಜೆ 6.30ಕ್ಕೆ ರಾಷ್ಟ್ರೀಯ ಮಕ್ಕಳ ರಂಗೋತ್ಸವಕ್ಕೆ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ್ ಚಾಲನೆ ನೀಡುವರು. 21 ರಂದು ಮೈಸೂರು ನವೋದಯ ತಂಡದಿಂದ ಲಕ್ಷ್ಮಿಗುಪ್ತ ನಿರ್ದೇಶನದ 40 ನಿಮಿಷದ ಕುಪ್ಪಳ್ಳಿ ಪುಟ್ಟ (ಕನ್ನಡ), ಇದರ ನಂತರ 60 ನಿಮಿಷದ ರಜನೀಶ್ ಬಿಸ್ಟ್ ನಿರ್ದೇಶನದ ದಿಂಚಕ್ ಪೋ, ಹೋಂಪುಷ್ ನಾಟಕ ಪ್ರದರ್ಶನಗೊಳ್ಳಲಿವೆ ಎಂದು ತಿಳಿಸಿದರು.

ಸೆ.22ರಂದು ವಾಲ್ಟರ್ ಪೀಟರ್ ನಿರ್ದೇಶನದ ಲಾಪೋಲಾ ಚಿಲ್ಡ್ರನ್ ಫೆಂಡ, ಮೇರಿಸಹೇಲಿ, 23ರಂದು ಕನ್ನಡ ಭಾಷೆಯ 80 ನಿಮಿಷದ ಗುಡ್ಡದಹಾಡು, ಸೆ.24ರಂದು ತಮಿಳು ಮತ್ತು ಕನ್ನಡ ಮಿಶ್ರಿತ ಭಾಷೆಯ 45 ನಿಮಿಷದ ಸರ್. ಮೇಡಂ, ಎಲ್ಲಿ ಹೆಂಗೇ ಡ್ರಾಮಾ, ಎಂಗ ಡ್ರಾಮಾರೊಂಬ ಸೀರಿಯಸ್. ನಂತರ ಹಿಂದಿ ಭಾಷೆಯ 75 ನಿಮಿಷದ ಬರ್ತ್‌ಡೇ ಚಾಕೋಲೆಟ್ ಮತ್ತು ಗೀತ್‌ರಾ ನಾಟಕಗಳು ಪ್ರದರ್ಶನಗೊಳ್ಳಲಿವೆ ಎಂದು ವಿವರಿಸಿದ ಅವರು ನಗರದ ರಂಗಾಸಕ್ತರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ನಾಟಕಗಳನ್ನು ವೀಕ್ಷಿಸಬೇಕು ಎಂದು ಮನವಿ ಮಾಡಿದರು.

ಶಾಂತಲಾ ಕಲಾವಿದರ ಸಂಘದ ಅಧ್ಯಕ್ಷ ಎ.ಡಿ.ಸಿಲ್ವ ಮಾತನಾಡಿ, ಸೆ.28ರಂದು ಸಂಜೆ 7ಕ್ಕೆ ನಗರದ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಕರ್ನಾಟಕ ಇಡಿಗುಂಜಿ ಮಹಾಗಣಪತಿ ಯಕ್ಷಗಾನ ಮಂಡಳಿ ಕೆರೆಮನೆ ಮಾರುತಿ ಪ್ರತಾಪ ಯಕ್ಷಗಾನ ಪ್ರಸಂಗ ಅಭಿನಯಿಸುವರು ಎಂದರು.

ಸುದ್ದಿಗೋಷ್ಠಿಯಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಾರ್ವಜನಿಕ ಸಂಪರ್ಕಾಧಿಕಾರಿ ಆರ್.ಎಂ.ಸ್ವಾಮಿ, ಜೆಎಸ್‌ಎಸ್ ಮಹಿಳಾ ಕಾಲೇಜು ಪ್ರಾಂಶುಪಾಲ ಜಿ.ಸಿದ್ದರಾಜು ಹಾಜರಿದ್ದರು.

ಜಿಲ್ಲಾದ್ಯಂತ ಗೌರಿ-ಗಣೇಶ ಹಬ್ಬದ ಸಂಭ್ರಮ



ಆರೂವರೆ ಅಡಿ ಎತ್ತರದ ಸುದರ್ಶನ ಗಣಪತಿಯನ್ನು ಮಧ್ಯಾಹ್ನ 12.30 ರಿಂದ 1.30ರೊಳಗಿನ ಅಭಿಜಿತ್ ಮುಹೂರ್ತದಲ್ಲಿ ಪ್ರತಿಷ್ಠಾಪಿಸಿ ಪೂಜಿಸಲಾಯಿತು. ಶ್ರೀವಿದ್ಯಾ ಗಣಪತಿ ಮಂಡಳಿ ಅಧ್ಯಕ್ಷ ಕೃಷ್ಣಕುಮಾರ್ ಮಾತನಾಡಿ, ಗೌರಿ–ಗಣೇಶ ಹಬ್ಬವನ್ನು ನಾಡಿನ ಸಂಸ್ಕೃತಿ, ಭಾವೈಕ್ಯತೆ ಪ್ರತೀಕವಾಗಿ ಆಚರಿಸಲಾಗುತ್ತಿದೆ. ಶ್ರೀವಿದ್ಯಾಗಣಪತಿ ಮಂಡಳಿಯಿಂದ ಪ್ರತಿ ವರ್ಷದಂತೆ ಈ ಬಾರಿಯು ಗಣೇಶ ಮೂರ್ತಿ ಪ್ರತಿಷ್ಠಾಪಿಸಿದ್ದು, ಈ ವರ್ಷ ಸುದರ್ಶನ ಚಕ್ರ ಗಣಪತಿ ಮೂರ್ತಿ ಪ್ರತಿಷ್ಠಾಪಿಸಲಾಗಿದೆ ಎಂದರು.

ಅ.7ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದೆ. ಅ.19ರಂದು ನಗರದ ನಾನಾ ಬೀದಿಗಳಲ್ಲಿ ಜಾನಪದ ಕಲಾ ತಂಡಗಳೊಂದಿಗೆ ನಗರದ ದೊಡ್ಡರಸನ ಕೊಳದಲ್ಲಿ ಚಿತ್ತಾಕರ್ಷಕ ಬಾಣ ಬಿರುಸುಗಳೊಂದಿಗೆ ವಿಸರ್ಜಿಸಲಾಗುವುದು ಎಂದು ಮಾಹಿತಿ ನೀಡಿದರು.

ಚಾಮರಾಜನಗರ, ಸೆ.19– ಜಿಲ್ಲಾದ್ಯಂತ ಗೌರಿ–ಗಣೇಶ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಈ ಬಾರಿ ಗೌರಿ–ಗಣೇಶ ಹಬ್ಬ ಒಂದೇ ದಿನ ಬಂದಿದ್ದರಿಂದ ಜನರು ತಮ್ಮ ಮನೆಗಳಲ್ಲಿ ಗೌರಿ–ಗಣೇಶನನ್ನು ಒಟ್ಟಿಗೆ ಪ್ರತಿಷ್ಠಾಪಿಸಿ ಪೂಜಿಸಿದರು.

ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಹನೂರು, ಯಳಂದೂರು ಹಾಗೂ ಗುಂಡ್ಲುಪೇಟೆ ಸೇರಿದಂತೆ ಗ್ರಾಮೀಣ ಭಾಗಗಳಲ್ಲಿ ಜನರು ಸಂಭ್ರಮದಿಂದ ಹಬ್ಬ ಆಚರಿಸಿದರು. ಜಿಲ್ಲೆಯ ಎಲ್ಲಾ ದೇವಾಲಯಗಳಲ್ಲೂ ವಿಶೇಷ ಪೂಜೆ ನಡೆಯಿತು. ಈ ಮಧ್ಯೆ ಸಾರ್ವಜನಿಕ ಗಣೇಶೋತ್ಸವ ಆಯೋಜಿಸುವ ಸಂಘ ಸಂಸ್ಥೆಗಳು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಗೌರಿ ಗಣೇಶನನ್ನು ಪ್ರತಿಷ್ಠಾಪಿಸಿದವು.

ಸುದರ್ಶನ ಚಕ್ರಧಾರಿ ಗಣಪತಿ ಪ್ರತಿಷ್ಠಾಪನೆ: ನಗರದ ರಥದ ಬೀದಿಯಲ್ಲಿ ಶ್ರೀ ವಿದ್ಯಾಗಣಪತಿ ಮಂಡಳಿ ವತಿಯಿಂದ 61ನೇ ಗಣೇಶ ಪ್ರತಿಷ್ಠಾಪನಾ ಮಹೋತ್ಸವ ಸೋಮವಾರ ವಿಜೃಂಭಣೆಯಿಂದ ನಡೆಯಿತು.

ಪ್ರತಿಷ್ಠಾಪನೆ ವೇಳೆ ಶ್ರೀವಿದ್ಯಾ ಗಣಪತಿ ಮಂಡಳಿ ಗೌರವ ಕಾರ್ಯದರ್ಶಿ ಮಹದೇವಣ್ಣ, ಗೌರವ ಸಲಹೆಗಾರ ಬಾಲಸುಬ್ರಹ್ಮಣ್ಯಂ, ಕಾರ್ಯಾಧ್ಯಕ್ಷ ಮಹದೇವನಾಯಕ, ಮಂಜುನಾಥಗೌಡ, ಮನೋಜ್ ಪಟೇಲ್, ನಟರಾಜು, ನಾರಾಯಣಪ್ರಸಾದ್, ಬಾಲರಾಜ್, ನೂರೊಂದು ಶೆಟ್ಟಿ ಮಹೇಶ್, ಮಹದೇವನಾಯಕ ಇತರರು ಇದ್ದರು.

ಪಥಸಂಚಲನ: ಶಾಂತಿ ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ನಗರದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ನೇತೃತ್ವದಲ್ಲಿ ಪೊಲೀಸರು ಪಥ ಸಂಚಲನ ನಡೆಸಿದರು. ಚಾಮರಾಜೇಶ್ವರ ದೇಗುಲದಿಂದ ಚಾಮರಾಜನಗರ ಪಟ್ಟಣ, ಪೂರ್ವ, ಗ್ರಾಮಾಂತರಗಳಲ್ಲಿ ಮೀಸಲು ಹಾಗೂ ಟ್ರಾಫಿಕ್ ಠಾಣೆ ಪೊಲೀಸರು ಪಥ ಸಂಚಲನ ನಡೆಸಿದರು.

ಗ್ರಾಮೀಣ ಭಾಗದಲ್ಲಿ ಸಂಭ್ರಮ: ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಗೌರಿ–ಗಣೇಶ ಹಬ್ಬವನ್ನು ಸಡಗರದಿಂದ ಆಚರಿಸಲಾಯಿತು. ಬೀದಿ–ಬೀದಿಗಳಲ್ಲಿ, ದೇವಸ್ಥಾನ, ಸಮುದಾಯ ಭವನ ಸೇರಿದಂತೆ ಹಲವೆಡೆ ಚಪ್ಪರ ಹಾಕಿ ನಾನಾ ವಿನ್ಯಾಸದ ಗಣೇಶನ ಮೂರ್ತಿಗಳನ್ನು ಯುವಕರು, ಸಂಘ– ಸಂಸ್ಥೆಯ ಮುಖಂಡರು ಪ್ರತಿಷ್ಠಾಪಿಸಿ, ಪೂಜಿಸಿದರು.

ಭರ್ಜರಿ ವ್ಯಾಪಾರ: ಗಣೇಶ ಹಬ್ಬ ಹಿನ್ನೆಲೆಯಲ್ಲಿ ಸೋಮವಾರ ಗಣೇಶ ಮೂರ್ತಿಗಳನ್ನು ಕೊಳ್ಳಲು ಗ್ರಾಹಕರು ಮುಗಿಬಿದ್ದರು. ಈ ಬಾರಿ ಗಣೇಶ ಮೂರ್ತಿಗಳ ವ್ಯಾಪಾರ ಉತ್ತಮವಾಗಿ ನಡೆಯಿತು. ಸೋಮವಾರ ಮಧ್ಯಾಹ್ನದ ವೇಳೆಗೆ ನಗರದಲ್ಲಿ ಎಲ್ಲಾ ಗಣೇಶ ಮೂರ್ತಿಗಳು ಮಾರಾಟವಾಗಿ, ವ್ಯಾಪಾರಿಗಳು ತಮ್ಮ ಅಂಗಡಿಗಳನ್ನು ತೆರವು ಮಾಡಿದರು. ಕೊರೊನಾ ನಂತರ ಈ ಬಾರಿಯೇ ಉತ್ತಮ ವ್ಯಾಪಾರವಾಯಿತು ಎಂದು ಗಣೇಶ ಮೂರ್ತಿ ಮಾರಾಟಗಾರರು ತಿಳಿಸಿದರು.



ಗುಂಡ್ಲುಪೇಟೆಯಲ್ಲಿ ಶ್ರದ್ಧಾಭಕ್ತಿಯ ಗೌರಿ–ಗಣೇಶ ಹಬ್ಬ

ಗುಂಡ್ಲುಪೇಟೆ, ಸೆ.19– ಪಟ್ಟಣ ಹಾಗೂ ತಾಲೂಕಿನಾದ್ಯಂತ ಗೌರಿ ಗಣೇಶ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಮುಂಜಾನೆಯಿಂದಲೇ ಗೃಹಿಣಿಯರು ಗೌರಿ ಗುಡಿಗೆ ತೆರಳಿ ಗೌರಿ ಮಾತೆಗೆ ವಿಶೇಷ ಪೂಜೆ ಸಲ್ಲಿಸಿ, ಬಾಗಿನ ಅರ್ಪಿಸಿದರು. ಅಲ್ಲದೇ ಸುಮಂಗಲಿಯರು ತಂಡೋಪತಂಡವಾಗಿ ಗೌರಿ ಪ್ರತಿಷ್ಠಾಪಿಸಿರುವ ದೇವಾಲಯ ಮತ್ತು ಮನೆಗಳಿಗೆ ತೆರಳಿ ತಮ್ಮ ಬಂಧು ಬಾಂಧವರಿಗೆ ಬಾಗಿನ ಅರ್ಪಿಸಿ, ಗೌರಿ ಮಾತೆಗೆ ಪೂಜೆ ಸಲ್ಲಿಸಿ ಪುನೀತರಾದರು. ಅಲ್ಲದೇ ಪುಟ್ಟ ಮಕ್ಕಳು ಹೊಸ ಬಟ್ಟೆ ತೊಟ್ಟು ಪೋಷಕರೊಂದಿಗೆ ದೇವಾಲಯ ಕಡೆಗೆ ಹೆಜ್ಜೆ ಇಡುತ್ತಿದ್ದು ಸಾಮಾನ್ಯವಾಗಿತ್ತು. ಪಟ್ಟಣದ ಬಲಮುರಿ ಗಣಪತಿ ದೇವಾಲಯ, ಶ್ರೀರಾಮೇಶ್ವರ ದೇವಾಲಯ,



ಸರ್ವಶಕ್ತಿ ಸಿದ್ಧಿ ವಿನಾಯಕ ದೇವಾಲಯದಲ್ಲಿ ಗಣೇಶ ಮೂರ್ತಿಗೆ ವಿಶೇಷ ಅಲಂಕಾರ ಮತ್ತು ಪೂಜೆ ಸಲ್ಲಿಸಲಾಯಿತು.

ಖಾಸಗಿ ಫೋಟೋ ವೈರಲ್ ಮಾಡುವುದಾಗಿ ಶಿಕ್ಷಕಿಗೆ ಬ್ಲಾಕ್‌ಮೇಲ್

ಪತಿ ಬಿಟ್ಟು ಬರುವಂತೆ ಪೀಡಿಸುತ್ತಿದ್ದ ಇಬ್ಬರ ಬಂಧನ

ಚಾಮರಾಜನಗರ, ಸೆ.19– ಸಾಮಾಜಿಕ ಜಾಲತಾಣದಲ್ಲಿ ಖಾಸಗಿ ವಿಡಿಯೋ ಹಾಗೂ ಫೋಟೋಗಳನ್ನು ವೈರಲ್ ಮಾಡುವುದಾಗಿ ಶಿಕ್ಷಕಿಯೊಬ್ಬರಿಗೆ ಬ್ಲಾಕ್‌ಮೇಲ್ ಮಾಡುತ್ತಿದ್ದ ಯುವಕ ಹಾಗೂ ಆತನ ಸಹಚರನನ್ನು ನಗರದ ಸೈಬರ್, ಆರ್ಥಿಕ ಮತ್ತು ಮಾದಕ ದ್ರವ್ಯ ತಡೆ (ಎಸ್‌ಇಎನ್) ವಿಭಾಗದ ಪೊಲೀಸರು ಬಂಧಿಸಿದ್ದಾರೆ.

ಕೊಳ್ಳೇಗಾಲದ ಅಬ್ದುಲ್ ಆಸಿಂ (29), ಮಯೂರ್ ಬಂಧಿತ ಆರೋಪಿಗಳು. ಕೊಳ್ಳೇಗಾಲದ ಶಾಲೆಯೊಂದರಲ್ಲಿ ಶಿಕ್ಷಕಿಯಾಗಿರುವ 23 ವರ್ಷದ ಗೃಹಿಣಿ ಇದೇ 15ರಂದು ನಗರದ ಎಸ್‌ಇಎನ್ ಠಾಣೆಯಲ್ಲಿ ದೂರು ನೀಡಿದ್ದರು. 16ರಂದು (ಶನಿವಾರ) ಇಬ್ಬರನ್ನೂ ಪೊಲೀಸರು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಕೆಲ ವರ್ಷದಿಂದ ಪರಿಚಯವಿರುವ ಅಬ್ದುಲ್ ಆಸಿಂ, ನನ್ನ ಜೊತೆ ಸಲುಗೆಯಿಂದ ವರ್ತಿಸಿ, ನನ್ನನ್ನು ಪ್ರೀತಿಸುತ್ತಿರುವುದಾಗಿ ಮತ್ತು ಗಂಡನನ್ನು ಬಿಟ್ಟು ಬಂದು ಬಿಡು ಎಂದು ಪೀಡಿಸುತ್ತಿದ್ದುದಲ್ಲದೆ, ಆತನ ಜೊತೆ ನಿಂತಿದ್ದಾಗ, ಆತನ ಸ್ನೇಹಿತ ಮಯೂರ್ ತೆಗೆದುಕೊಂಡಿದ್ದ ಚಿತ್ರಗಳನ್ನು ಹಾಗೂ ವಿಡಿಯೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಮಾಡುತ್ತೇನೆ. ಅಲ್ಲದೇ 10 ಲಕ್ಷ ನೀಡದಿದ್ದರೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಶಿಕ್ಷಕಿ ದೂರಿನಲ್ಲಿ ತಿಳಿಸಿದ್ದಾರೆ.

ತಮಿಳುನಾಡಿಗೆ ಕಾವೇರಿ ನೀರು: ಖಾಲಿ ಕೊಡ ಪ್ರದರ್ಶನ



ಚಾಮರಾಜನಗರ, ಸೆ.19– ಕೆಆರ್‌ಎಸ್‌ನಿಂದ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಖಂಡಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ನಗರ ಜಿಲ್ಲಾಡಳಿತ ಭವನದ ಮುಖ್ಯಗೇಟ್ ಎದುರು ಜಮಾಯಿಸಿದ ಪ್ರತಿಭಟನಾಕಾರರು ಖಾಲಿ ಕೊಡಗಳನ್ನು ಪ್ರದರ್ಶನ ಮಾಡಿ ತಮಿಳುನಾಡು, ಕರ್ನಾಟಕ ಸರ್ಕಾರ, ಕಾವೇರಿ ನದಿ ನೀರು ನಿಯಂತ್ರಣ ಮಂಡಳಿ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರ ಹಾಕಿದರು.

ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ಕನ್ನಡಿಗರು, ರೈತರ ವಿರೋಧದ ನಡುವೆಯೂ ಕಾವೇರಿ ನದಿ ನೀರು ನಿಯಂತ್ರಣ ಮಂಡಳಿ ಮತ್ತೆ ಪ್ರತಿದಿನ 5 ಸಾವಿರ ಕ್ಯುಸೆಕ್ ನೀರು ಬಿಡುವಂತೆ ಆದೇಶಿಸಿರುವುದು ಖಂಡನೀಯ ಎಂದರು.

ಮಳೆಯ ಕೊರತೆಯಿಂದ ಜಲಾಶಯಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದೆ. ಪ್ರತಿದಿನ 5 ಸಾವಿರ ಕ್ಯುಸೆಕ್ಸ್ ನೀರನ್ನು ತಮಿಳುನಾಡಿಗೆ ಹರಿಸಿದರೆ ಕಾವೇರಿ ಕೊಳ್ಳ ಬರಿದಾಗುತ್ತದೆ. ಇದರಿಂದ ರಾಜ್ಯದ ಜನತೆಗೆ ತೊಂದರೆಯಾಗಲಿದೆ. ಸರ್ಕಾರ ತಮಿಳುನಾಡಿಗೆ ಬಕೆಟ್ ಹಿಡಿದಿದೆ. ಕೂಡಲೇ, ತಮಿಳುನಾಡಿಗೆ ಹರಿಸುವ ನೀರನ್ನು ಬಂದ್ ಮಾಡಬೇಕು. ಇಲ್ಲದಿದ್ದರೆ ಹೋರಾಟ ಉಗ್ರಗೊಳಿಸಲಾಗುವುದು. ಯಾವುದೇ ಕಾರಣಕ್ಕೂ ರಾಜ್ಯದ ರೈತರ ಹಿತ ಬಲಿ ಕೊಡಬಾರದು. ತಮಿಳುನಾಡು ಕಾವೇರಿ ಕ್ಯಾತೆಯನ್ನು ಮುಂದುವರೆಸುತ್ತಿದ್ದರೆ ಗಡಿ ಬಂದ್ ಮಾಡಿ, ತಮಿಳುನಾಡು ವಾಹನಗಳು ರಾಜ್ಯ ಪ್ರವೇಶಿಸದಂತೆ ಮಾಡುತ್ತೇವೆ ಎಂದರು.

ಪ್ರತಿಭಟನೆಯಲ್ಲಿ ನಿಜಧ್ವನಿ ಗೋವಿಂದರಾಜು, ರಾಜು, ಚಾ.ರಾ.ಕುಮಾರ್, ಅರುಣ್ ಕುಮಾರ್, ಮಹೇಶ್‌ಗೌಡ, ರವಿಚಂದ್ರ ಪ್ರಸಾದ್, ಲಿಂಗರಾಜು, ನಂಜುಂಡಸ್ವಾಮಿ, ಚಾ.ಹ.ರಾಮು, ವೀರಭದ್ರ, ತಾಂಡವಮೂರ್ತಿ, ದೊರೆ, ಸುರೇಶ್ ಇತರರಿದ್ದರು.

ಇಂದು ಜನಸಂಪರ್ಕ ಸಭೆ

ಚಾಮರಾಜನಗರ, ಸೆ.19– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ–ಕೊಡಗು ಅಧೀಕ್ಷಕ ಇಂಜಿನಿಯರ್ ಅಧ್ಯಕ್ಷತೆಯಲ್ಲಿ ಸೆ.20ರಂದು ಬೆಳಗ್ಗೆ 11 ರಿಂದ 12 ಗಂಟೆವರೆಗೆ ಜನಸಂಪರ್ಕ ಸಭೆಯನ್ನು ಚಾಮರಾಜನಗರದ ಉಪವಿಭಾಗ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಸಭೆಗೆ ಹಾಜರಾಗಿ ವಿದ್ಯುತ್ ಸಂಬಂಧಿತ ಕುಂದುಕೊರತೆಗಳಿದ್ದಲ್ಲಿ ತಿಳಿಸುವಂತೆ ನಿಗಮದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

ತರಬೇತಿಗೆ ಅರ್ಜಿ ಆಹ್ವಾನ

ಚಾಮರಾಜನಗರ, ಸೆ.19– ಎಸ್‌ಬಿಐ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆಯಿಂದ ಉಚಿತವಾಗಿ ಅಣಬೆ ಬೇಸಾಯ ಮತ್ತು ಕುರಿ ಸಾಕಾಣಿಕೆ ತರಬೇತಿ ನೀಡಲಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಮಾಹಿತಿಗೆ ದೂ:08226–200214, ಮೊ: 9606098878, 8722483393, ಇ–ಮೇಲ್ rsetichamarajanagar.ks@gmail.com ಸಂಪರ್ಕಿಸಿ.

ಭಾರತ ಚಂದ್ರನನ್ನು ತಲುಪಿದೆ, ಪಾಕಿಸ್ತಾನ ಪ್ರಪಂಚದ ಮುಂದೆ ಭಿಕ್ಷೆ ಬೇಡುತ್ತಿದೆ



ಲಾಹೋರ್, ಸೆ.19– ಭಾರತ ಚಂದ್ರನನ್ನು ತಲುಪಿ, ಜಿ20 ಶೃಂಗಸಭೆಯನ್ನು ಆಯೋಜಿಸಿರುವಾಗ ನಮ್ಮ ದೇಶ ವಿಶ್ವದ ಮುಂದೆ ಹಣ ಭಿಕ್ಷೆ ಬೇಡುತ್ತಿದೆ ಎಂದು ಪಾಕಿಸ್ತಾನದ ಮಾಜಿ ಪ್ರಧಾನಿ ನವಾಜ್ ಷರೀಫ್ ಅವರು ಮಂಗಳವಾರ ಹೇಳಿದ್ದಾರೆ. ಅಲ್ಲದೆ ಪಾಕಿಸ್ತಾನ ಅದರ ಆರ್ಥಿಕ ಸಮಸ್ಯೆಗಳಿಗೆ ದೇಶದ ಮಾಜಿ ಜನರಲ್‌ಗಳು ಮತ್ತು ನ್ಯಾಯಾಧೀಶರನ್ನು ದೂಷಿಸಿದ್ದಾರೆ.

ಪಾಕಿಸ್ತಾನದ ಆರ್ಥಿಕತೆಯು ಕಳೆದ ಹಲವು ವರ್ಷಗಳಿಂದ ಪತನದತ್ತ ಸಾಗುತ್ತಿದೆ. ಅನಿಯಂತ್ರಿತ ಎರಡಂಕಿಯ ಹಣದುಬ್ಬರದಿಂದ ಜನಸಾಮಾನ್ಯರ ತತ್ತರಿಸಿ ಹೋಗಿದ್ದಾರೆ ಎಂದು ತಮ್ಮ ದೇಶದ ವಿರುದ್ಧವೇ ವಾಗ್ದಾಳಿ ನಡೆಸಿದ್ದಾರೆ.

ಸೋಮವಾರ ಸಂಜೆ ಲಂಡನ್‌ನಿಂದ ವಿಡಿಯೋ ಲಿಂಕ್ ಮೂಲಕ ಲಾಹೋರ್‌ನ ಪಕ್ಷದ ಸಭೆಯನ್ನು ಉದ್ದೇಶಿಸಿ ಮಾತನಾಡುವಾಗ ಮಾಜಿ ಪ್ರಧಾನಿ ಷರೀಫ್, 'ಭಾರತ ಚಂದ್ರನನ್ನು ತಲುಪಿ ಜಿ20 ಶೃಂಗಸಭೆಯನ್ನು ಬಹಳ ಯಶಸ್ವಿಯಾಗಿ ನಡೆಸಿದೆ. ಇಂದು ಪಾಕಿಸ್ತಾನದ ಪ್ರಧಾನಿ ಹಣಕ್ಕಾಗಿ ಪ್ರಪಂಚದ ಶ್ರೀಮಂತ ದೇಶಗಳ ಮುಂದೆ ಭಿಕ್ಷೆ ಬೇಡುತ್ತಿದ್ದಾರೆ.

ಭಾರತ ಮಾಡಿದ ಸಾಧನೆಯನ್ನು ಪಾಕಿಸ್ತಾನಕ್ಕೆ ಸಾಧಿಸಲು ಏಕೆ ಸಾಧ್ಯವಾಗಲಿಲ್ಲ? ಇದಕ್ಕೆ ಯಾರು ಹೊಣೆ?' ಎಂದು ಪ್ರಶ್ನಿಸಿದರು.

ಪಾಕಿಸ್ತಾನ್ ಮುಸ್ಲಿಂ ಲೀಗ್–ನವಾಜ್ (ಪಿಎಂಎಲ್–ಎನ್) ಪಕ್ಷದ 73 ವರ್ಷದ ಸರ್ವೋಚ್ಚ ನಾಯಕ ಷರೀಫ್ ಅವರು, 1990ರಲ್ಲಿ ತಮ್ಮ ಸರ್ಕಾರ ಪ್ರಾರಂಭಿಸಿದ ಆರ್ಥಿಕ ಸುಧಾರಣೆಗಳನ್ನು ಭಾರತ ಅನುಸರಿಸಿದೆ ಎಂದು ಹೇಳಿದ್ದಾರೆ.

ಒಂದನೇ ಪುಟದಿಂದ

ದೇವೇಗೌಡರ ಕನಸು ನನಸಾಗುತ್ತಿದೆ

ಬಂದಿರುವುದು ನನಗೆ ಸಂತೋಷ ಉಂಟು ಮಾಡಿದೆ. 1995ರಲ್ಲಿ ಮಾನ್ಯ ದೇವೇಗೌಡರು ಕರ್ನಾಟಕದ ಮುಖ್ಯಮಂತ್ರಿಗಳಾಗಿದ್ದಾಗ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲು ನೀಡಿ, ಅಧಿಕಾರ ನಡೆಸುವ ಹಕ್ಕು ಕಲ್ಪಿಸಿ ಮಹಿಳಾ ಸಬಲೀಕರಣದ ಸುವರ್ಣ ಅಧ್ಯಾಯಕ್ಕೆ ನಾಂದಿ ಹಾಡಿದ್ದರು. ಅಂದು ನಮ್ಮ ರಾಜ್ಯದಲ್ಲಿ ಘಟಿಸಿದ ಈ ಕ್ರಾಂತಿಕಾರಿ ವಿದ್ಯಮಾನವನ್ನು ಇಡೀ ದೇಶವೇ ಬೆರಗು ಕಂಗಳಿಂದ ನೋಡಿತ್ತು. ಇಂದು ಮಹಿಳಾ ಮೀಸಲು ಮಸೂದೆ ಲೋಕಸಭೆಯಲ್ಲಿ ಅಂಗೀಕಾರ ಆಗುವುದು ಖಚಿತವಾಗಿದ್ದು, ಈ ಮೂಲಕ ಮಾಜಿ ಪ್ರಧಾನಿಗಳ ಕನಸು ನನಸಾಗುತ್ತಿದೆ.ಮಹಿಳೆಯರಿಗೆ ಸಮಾನ ಹಕ್ಕು ಅವಕಾಶಗಳನ್ನು ಕಲ್ಪಿಸುವುದು ಇಂದಿನ ತುರ್ತು. ಮಾನ್ಯ ಪ್ರಧಾನಿಗಳಾದ ನರೇಂದ್ರ ಮೋದಿ ಅವರು, ಮತ್ತವರ ಸಂಪುಟ ಕೈಗೊಂಡ ನಿರ್ಧಾರ ಶ್ಲಾಘನೀಯ. ರಾಜಕೀಯಕ್ಕೆ ಅತೀತವಾಗಿ ಈ ಮಸೂದೆಯನ್ನು ಎಲ್ಲಾ ಪಕ್ಷಗಳು ಬೆಂಬಲಿಸಬೇಕು ಎನ್ನುವುದು ನನ್ನ ಮನವಿ ಎಂದು ಎಚ್.ಡಿ.ಕುಮಾರಸ್ವಾಮಿ ಟ್ವೀಟ್ ಮೂಲಕ ತಿಳಿಸಿದ್ದಾರೆ.

INDIA ಮೈತ್ರಿಕೂಟದ ನಾಯಕರಿಂದಲೇ ಅಡ್ಡಿ: ದೇವೇಗೌಡ ಅವರು ಪ್ರಧಾನಮಂತ್ರಿಗಳಾಗಿದ್ದ ಸಂದರ್ಭದಲ್ಲಿಯೇ 1996 ಸೆಪ್ಟೆಂಬರ್ 12ರಂದು ರಾಜ್ಯಸಭೆಯಲ್ಲಿ ಈ ಐತಿಹಾಸಿಕ ಮಸೂದೆ (ಮಹಿಳಾ ಮೀಸಲಾತಿ) ಅನ್ನು ಮಂಡಿಸಲಾಗಿತ್ತು. ಆದರೆ, ಅವರ ಸಂಯುಕ್ತರಂಗ ಸರಕಾರದ ಮೈತ್ರಿಕೂಟದ ಕೆಲ ಮಿತ್ರಪಕ್ಷಗಳೇ ತೀವ್ರ ವಿರೋಧ ವ್ಯಕ್ತಪಡಿಸಿದ ಕಾರಣಕ್ಕೆ ಆ ಮಸೂದೆ ಅಂಗೀಕಾರ ಆಗಲಿಲ್ಲ. ಇವತ್ತು ಕಾಂಗ್ರೆಸ್ಸಿನ I.N.D.I.A. ಮೈತ್ರಿಕೂಟವನ್ನು ಸೇರಿಕೊಂಡಿರುವ ನಾಯಕರೇ ಅಂದು ಈ ಮಸೂದೆಗೆ ತಡೆ ಒಡ್ಡಿದ್ದರು ಎಂದು ಕುಮಾರಸ್ವಾಮಿ ಟ್ವೀಟ್‌ನಲ್ಲಿ ಆರೋಪಿಸಿದ್ದಾರೆ.

ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆ

ಸಂಸ್ಕೃತಿ ಸಚಿವಾಲಯವು ವಿಶ್ವ ಪರಂಪರೆ ಪಟ್ಟಿಗೆ ಶಿಫಾರಸ್ಸು ಮಾಡಿತ್ತು. ಸೋಮವಾರ ಸೌದಿ ಅರೇಬಿಯಾದ ರಿಯಾದ್‌ನಲ್ಲಿ ನಡೆದ ಯುನೆಸ್ಕೋದ ವಿಶ್ವ ಪಾರಂಪರಿಕ ಸಮಿತಿಯ 45ನೇ ಅಧಿವೇಶನದಲ್ಲಿ ಭಾರತದ ಪ್ರಸ್ತಾಪ ಪ್ರಸ್ತಾವನೆ ಅಂಗೀಕಾರವಾಗಿದ್ದು, ಸೋಮನಾಥಪುರದ ಕೇಶವ ದೇವಾಲಯ, ಬೇಲೂರಿನ ಚೆನ್ನಕೇಶವ ಮತ್ತು ಹಳೆಬೀಡಿನ ಹೊಯ್ಸಳೇಶ್ವರ ದೇವಾಲಯಗಳು ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆ ಸರ್ವಾನುಮತದ ಅನುಮೋದನೆ ದೊರೆತಿದೆ.

ಸೋಮನಾಥಪುರ ದೇವಾಲಯವು ಮೈಸೂರಿನಿಂದ 35 ಕಿ.ಮೀ. ದೂರದಲ್ಲಿದ್ದು, 2014 ಏಪ್ರಿಲ್ 15ರಲ್ಲಿ ಯುನೆಸ್ಕೋ ತಾತ್ಕಾಲಿಕ ಪಟ್ಟಿಯಲ್ಲಿತ್ತು. ದೇಶದ ಅತೀ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆ ಪ್ರತೀಕವಾಗಿ ಈ ದೇವಾಲಯ ತನ್ನ ಪರಂಪರೆಯನ್ನು ಉಳಿಸಿಕೊಂಡಿದೆ. ಜಪಾನ್, ನೈಜೀರಿಯ, ಓಮನ್, ಗ್ರೀಸ್, ಇಟಲಿ, ರಷ್ಯಾ, ಇಥಿಯೋಪಿಯಾ, ಜಾಂಬಿಯಾ, ದಕ್ಷಿಣ ಆಫ್ರಿಕ ಸೇರಿದಂತೆ ಹಲವು ರಾಷ್ಟ್ರಗಳು ಕರ್ನಾಟಕದ ಹೊಯ್ಸಳ ದೇವಾಲಯಗಳನ್ನು ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಗೆ ಸೇರಿಸುವ ವಿಚಾರದಲ್ಲಿ ಬೆಂಬಲ ನೀಡಿದ್ದವು.

ಯುನೆಸ್ಕೋಗೆ ಭಾರತದ ಕಾಯಂ ಪ್ರತಿನಿಧಿಯಾಗಿರುವ ವಿಶಾಲ್ ವಿ.ಶರ್ಮ ಅವರು, ವಿಶ್ವ ಪಾರಂಪರಿಕ ಸಮಿತಿಗೆ ಕೃತಜ್ಞತೆ ಸಲ್ಲಿಸಿದ್ದು, ಕನ್ನಡ ಭಾಷೆಯಲ್ಲಿ ಚೆನ್ನಕೇಶವ ಎಂದರೆ ಒಳ್ಳೆಯ ಅಥವಾ ಪರೋಪಕಾರಿ ಕೃಷ್ಣ ಎಂಬುದಾಗಿ ತಿಳಿಸಿದ್ದಾರೆ. ಕರ್ನಾಟಕದ ಈ ಮೂರೂ ಸ್ಮಾರಕಗಳಲ್ಲಿ ಆಧ್ಯಾತ್ಮಿಕ ಉದ್ದೇಶ ಹಾಗೂ ಆಧ್ಯಾತ್ಮಿಕ ಆಚರಣೆಗಳ ಚಕ್ರ, ಶ್ರದ್ಧೆಗಳನ್ನು ಒಳಗೊಂಡ ವಿಶೇಷ ಅನುಭವಗಳಿವೆ. ರಾಮಾಯಣ, ಮಹಾಭಾರತ ಮತ್ತು ಶ್ರೀಮದ್ ಭಾಗವತಂನಲ್ಲಿ ಬರುವ ಪ್ರಸಂಗಗಳನ್ನು ಕಲ್ಲಿನಲ್ಲಿ ಸವಿವರವಾಗಿ ಕೆತ್ತನೆ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

ಕಡೆಯದಾಗಿ ಕನ್ನಡ ಭಾಷೆಯಲ್ಲಿ ತಮ್ಮ ಮಾತು ಮುಗಿಸಿದ ಅವರು, 'ನಾನು ಅಭಿನಂದಿಸುತ್ತೇನೆ ಭಾರತ ಜನಗಳಿಗೆ, ಭಾರತ್ ಮಾತಾಕಿ ಜೈ' ಎಂದು ತಿಳಿಸಿದ್ದಾರೆ. 2022ರ ಸೆಪ್ಟೆಂಬರ್ 16ರಂದು ಯುನೆಸ್ಕೋ ತಂಡವು ಸೋಮನಾಥಪುರದ ಕೇಶವ ದೇವಾಲಯಕ್ಕೆ ಭೇಟಿ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಟಿಯಾಂಗ್ ಕಿಯನ್ ಬೂನ್ ನೇತೃತ್ವದ ಇಂಟರ್‌ನ್ಯಾಷನಲ್ ಕಮಿಷನ್ ಆನ್ ಮಾನ್ಯುಮೆಂಟ್ಸ್ ಅಂಡ್ ಸೈಟ್ಸ್ (ICOMOS) ತಜ್ಞರೂ ಸಹ ಮೈಸೂರು ಮತ್ತು ಹಾಸನ ಜಿಲ್ಲೆಯ ಈ ಪಾರಂಪರಿಕ ಹೊಯ್ಸಳ ದೇವಾಲಯಗಳಿಗೆ ಭೇಟಿ ನೀಡಿದ್ದರು.

> **"ಇದು ನಮ್ಮ ರಾಜ್ಯ, ದೇಶಕ್ಕೆ ಹೆಮ್ಮೆಯ ವಿಷಯ. ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಯಲ್ಲಿ ಗುರ್ತಿಸಿರುವ ಹೊಯ್ಸಳರ ಕಾಲದ ದೇವಾಲಯಗಳಿಗೆ ಪ್ರಪಂಚದಾದ್ಯಂತ ಹಲವು ರಾಷ್ಟ್ರಗಳಿಂದ ಬರುವ ಪ್ರವಾಸಿಗರಿಗೆ ಮೂಲ ಸೌಲಭ್ಯ ಕಲ್ಪಿಸಬೇಕಾಗಿದೆ. ಅದರಿಂದ ಸ್ಥಳೀಯ ಉದ್ಯಮ ವೃದ್ಧಿಯಾಗುವುದಲ್ಲದೇ ಉದ್ಯೋಗವೂ ಸೃಷ್ಟಿಯಾಗಲಿದೆ.**
> – ಎ.ದೇವರಾಜು, ಆಯುಕ್ತರು,
> ಪುರಾತತ್ವ, ಸಂಗ್ರಹಾಲಯಗಳು ಹಾಗೂ ಪರಂಪರೆ ಇಲಾಖೆ

ಸಮಗ್ರ ಪ್ರಸ್ತಾವನೆ ಸಲ್ಲಿಸಲಾಗಿತ್ತು

(ಬೇಲೂರು ಮತ್ತು ಹಳೆಬೀಡು ಸೇರಿದಂತೆ ಹೊಯ್ಸಳ ವಾಸ್ತುಶಿಲ್ಪ ಸರಣಿ)' ಪ್ರಸ್ತಾವನೆಯನ್ನು ವಿಶ್ವ ಪರಂಪರೆ ಸಲಹಾ ಸಮಿತಿಗೆ ಕಳುಹಿಸಲಾಗಿತ್ತು.

ವಿಶ್ವ ಪರಂಪರೆ ಸಲಹಾ ಸಮಿತಿಯು 2014ರ ಏಪ್ರಿಲ್ 15ರಂದು ಪ್ರಕಟಿಸಿದ್ದ ತಾತ್ಕಾಲಿಕ ಪಟ್ಟಿಯಲ್ಲಿ ಈ ಮೂರೂ ಪ್ರಸ್ತಾವನೆಗಳು ಪ್ರಕಟವಾಗಿದ್ದವು. ಮುಂದಿನ ಹಂತದ ಪ್ರಕ್ರಿಯೆಗಳ ಬಳಿಕ ವಿಶ್ವ ಪರಂಪರೆ ಅಂತಿಮ ಪಟ್ಟಿಯಲ್ಲಿ ಮೈಸೂರಿನ ಸೋಮನಾಥಪುರದ ಕೇಶವ ದೇವಸ್ಥಾನ, ಹಾಸನದ ಹಳೆಬೀಡು ಹೊಯ್ಸಳೇಶ್ವರ ಹಾಗೂ ಬೇಲೂರಿನ ಚೆನ್ನಕೇಶವ ದೇವಾಲಯಗಳು ಸೇರ್ಪಡೆಗೊಂಡಿವೆ.

ಹೊಯ್ಸಳರ ಕಾಲದ ದೇವಾಲಯಗಳು, ಗೋಪುರಗಳು, ವಿಶೇಷ ಕಂಬಗಳು, ಅತ್ಯಾಕರ್ಷಕ ಶಿಲ್ಪಕಲೆ, ಅಪರೂಪ ವಾಸ್ತುಶಿಲ್ಪದ ಫೋಟೋ, ತಾಣಗಳ ನಕ್ಷೆ ಸಹಿತ ಅಗತ್ಯ ವಿವರಣೆಯನ್ನೊಳಗೊಂಡ ಪ್ರಸ್ತಾವನೆಯನ್ನು ಸಲ್ಲಿಸುವಲ್ಲಿ ಡಾ.ಸಿ.ಜಿ.ಬೆಟಸೂರಮಠ ಅವರು ಸಾಕಷ್ಟು ಶ್ರಮಿಸಿದ್ದರು. ಸದ್ಯ ಅವರು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ವಿಶ್ವ ಪರಂಪರೆ ಸಲಹಾ ಸಮಿತಿಯು 9 ವರ್ಷಗಳ ಹಿಂದೆ ತಾತ್ಕಾಲಿಕ ಪಟ್ಟಿಗೆ ಅಂಗೀಕರಿಸಿದ್ದ ಮೂರು ಪ್ರಸ್ತಾವನೆಯಲ್ಲಿ ಒಂದು ಅಂತಿಮ ಪಟ್ಟಿ ಸೇರ್ಪಡೆಯಾಗಿರುವ ಹಿನ್ನೆಲೆಯಲ್ಲಿ 'ಮೈಸೂರು ಮಿತ್ರ'ನಲ್ಲಿ ಅತೀವ ಸಂತಸ ಹಂಚಿಕೊಂಡ ಡಾ.ಸಿ.ಜಿ.ಬೆಟಸೂರಮಠ ಅವರು, ವಿಶ್ವ ಪರಂಪರೆ ಪಟ್ಟಿಗೆ ಸೇರ್ಪಡೆಯಾಗಿರುವುದರಿಂದ ಈ ತಾಣಗಳಲ್ಲಿ ಪ್ರವಾಸೋದ್ಯಮ, ಆರ್ಥಿಕತೆ ಅಭಿವೃದ್ಧಿ ಜೊತೆಗೆ ಸ್ಥಳೀಯರಿಗೂ ಸಾಕಷ್ಟು ಅನುಕೂಲವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮೊರೆ ಹೋಗಲು ರಾಜ್ಯ ನಿರ್ಧಾರ

ಉದ್ದೇಶದಿಂದ ನಾಳೆ ಸಭೆ ಕರೆಯಲಾಗಿದೆ ಎನ್ನಲಾಗಿದೆ. ಕಾವೇರಿ ನೀರು ನಿಯಂತ್ರಣ ಪ್ರಾಧಿಕಾರದ ಆದೇಶವನ್ನು ಪಾಲಿಸದೇ ನ್ಯಾಯಾಲಯದ ಮೆಟ್ಟಿಲು ಹತ್ತಿದರೆ ನಮ್ಮ ಅರ್ಜಿಯನ್ನು ಪುರಸ್ಕರಿಸುವುದಿಲ್ಲ ಎಂದು ಸರ್ಕಾರಕ್ಕೆ ಕಾನೂನು ತಜ್ಞರು ಎಚ್ಚರಿಕೆ ನೀಡಿದ್ದಾರೆ.

ಮೊದಲು ಆದೇಶ ಪಾಲಿಸಿ ನಂತರ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ, ನಮ್ಮಲ್ಲಿನ ಸಂಕಷ್ಟವನ್ನು ಅಂಕಿ–ಅಂಶಗಳ ಸಹಿತ ಮುಂದಿಡೋಣ. ಮುಂಗಾರು ಮಳೆ ಕೊರತೆಯಿಂದ ರಾಜ್ಯ ತೀವ್ರ ಬರಗಾಲಕ್ಕೆ ಸಿಲುಕಿದೆ. ಕಾವೇರಿ ನದಿ ಪಾತ್ರವೂ ಇದರಿಂದ ಹೊರತಾಗಿಲ್ಲ. ನಮ್ಮ ಜಲಾಶಯಗಳಿಗೆ ಹರಿದು ಬರುವ ನೀರಿನ ಪ್ರಮಾಣ ತೀರಾ ಕನಿಷ್ಠ. ಅದರಲ್ಲೇ ನೀರನ್ನು ಹಂಚಿಕೊಂಡಿದ್ದೇವೆ. ನಮ್ಮ ಬೆಳೆದು ನಿಂತಿರುವ ಬೆಳೆ ಹಾಗೂ ಮುಂದಿನ ಬೇಸಿಗೆ ಮುಗಿಯುವವರೆಗೂ ಕುಡಿಯುವ ನೀರು ಪೂರೈಸಲು ಈಗಿರುವ ನೀರು ಸಾಲದಾಗಿದೆ. ಎರಡೂ ರಾಜ್ಯಗಳ ಕಾವೇರಿ ನದಿ ಪಾತ್ರದಲ್ಲಿನ ವಾಸ್ತವಾಂಶ ಅರಿಯಲು ನೀವೇ ಒಂದು ತಂಡ ಕಳುಹಿಸಿ ವರದಿ ಪಡೆದು ತೀರ್ಮಾನಿಸಿ. ಅಲ್ಲಿಯವರೆಗೂ ಪ್ರಾಧಿಕಾರ ನೀಡಿರುವ ಆದೇಶಕ್ಕೆ ತಡೆ ಕೋರಲು ಸರ್ಕಾರ ನಿರ್ಧರಿಸಿದೆ. ಬಿಳಿಗುಂಡ್ಲುವಿನ ಜಲ ಮಾಪನದಲ್ಲಿ 5 ಸಾವಿರ ಕ್ಯುಸೆಕ್ ನೀರು ಈ ಹಿಂದೆ ಹರಿಸಿದಾಗಲು ಮೆಟ್ಟೂರಿಗೆ ತಲುಪಿರುವುದು ಎರಡರಿಂದ ಮೂರು ಕ್ಯುಸೆಕ್ ಮಾತ್ರ. ಮೆಟ್ಟೂರು ಮತ್ತು ಬಿಳಿಗುಂಡ್ಲುವಿನ ನಡುವೆ ಇಷ್ಟು ಪ್ರಮಾಣದ ನೀರು ಆವಿಯಾಗುತ್ತಿದೆ ಎಂಬ ವಾಸ್ತವ ಸಂಗತಿಯನ್ನು ಗಮನಕ್ಕೆ ತರಲು ನಿರ್ಧರಿಸಲಾಗಿದೆ.

ಗಣೇಶ ಚತುರ್ಥಿಯಂದು ದಸರಾ ಗಜಪಡೆಗೆ ಪೂಜೆ

- ಅರಮನೆ ಆವರಣದಲ್ಲಿವೆ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ 9 ಆನೆಗಳು
- ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು ಸಾನ್ನಿಧ್ಯ



ಮೈಸೂರು,ಸೆ.19(ಎಂಟಿವೈ)– ನಾಡ ಹಬ್ಬ ದಸರಾ ಮಹೋತ್ಸವದ ಗಜಪಡೆಗೆ ಅರಮನೆ ಆವರಣದಲ್ಲಿ ಗೌರಿ–ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಸೋಮವಾರ ವಿಶೇಷ ಪೂಜೆ ಸಲ್ಲಿಸಲಾಯಿತು.

ಅರಮನೆ ಆವರಣದಲ್ಲಿರುವ ತ್ರಿನೇಶ್ವರ ಸ್ವಾಮಿ ದೇವಾಲಯದ ಸಮೀಪ ಗಜಪಡೆಯ ನಾಯಕ ಅಭಿಮನ್ಯು ನೇತೃತ್ವದ ಮೊದಲ ತಂಡದ 9 ಆನೆಗಳಿಗೂ ಗಣಪತಿ ಹಬ್ಬದ ಪೂಜೆ ನೆರವೇರಿಸಲಾಯಿತು. ಸಂಪ್ರದಾಯದಂತೆ ಮಧ್ಯಾಹ್ನ 12.30ರಿಂದ 1 ಗಂಟೆವರೆಗೆ ಸಲ್ಲುವ ಶುಭ ಲಗ್ನದಲ್ಲಿ ಅರ್ಚಕ ಎಸ್.ವಿ. ಪ್ರಹ್ಲಾದರಾವ್ ಎಲ್ಲಾ ಆನೆಗಳಿಗೂ ಪಾದ ತೊಳೆದು, ಅರಿಶಿನ, ಕುಂಕುಮ, ಶ್ರೀಗಂಧ ಹಚ್ಚಿ ಆರತಿ ಬೆಳಗಿದರು. ಬಳಿಕ ಗಣೇಶನಿಗೆ ಪ್ರಿಯವಾದ ಮೋದಕ, ಕಡಬು, ಚಕ್ಕಲಿ, ಕೋಡಬಳೆ ಸೇರಿದಂತೆ ಇನ್ನಿತರ ತಿನಿಸು, ಕಬ್ಬು, ಬೆಲ್ಲ, ಬಾಳೆ ಹಣ್ಣು ಸೇರಿದಂತೆ ಪಂಚಫಲ ನೀಡಲಾಯಿತು. ಡಿಸಿಎಫ್‌ಗಳಾದ ಸೌರಭ್ ಕುಮಾರ್, ಬಸವರಾಜು ಅರಣ್ಯ ಇಲಾಖೆಯ ಪರ ಪೂಜೆ ಸಲ್ಲಿಸಿದರು.

ಪೇಜಾವರ ಶ್ರೀಗಳಿಂದಲೂ ಪೂಜೆ : ಚಾತುರ್ಮಾಸ್ಯ ವ್ರತದ ಹಿನ್ನೆಲೆಯಲ್ಲಿ ಮೈಸೂರಲ್ಲೇ ವಾಸ್ತವ್ಯ ಹೂಡಿರುವ ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದ ಸ್ವಾಮೀಜಿ ಅವರು ಅರಣ್ಯ ಇಲಾಖೆ ವತಿಯಿಂದ ಸಾಂಪ್ರದಾಯಿಕ ಪೂಜೆ ನೆರವೇರುತ್ತಿದ್ದ ಸಂದರ್ಭದಲ್ಲಿ ಅಭಿಮನ್ಯು ನೇತೃತ್ವದ ಗಜಪಡೆಗೆ ಪೂಜೆ ಸಲ್ಲಿಸಿದರು.


ವನ್ಯಜೀವಿಗಳ ಸಂರಕ್ಷಣೆಗೆ ಸಹಕರಿಸಿ: ಪೂಜೆ ಬಳಿಕ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು ಮಾತನಾಡಿ, ನಾಡದೇವಿ ಶ್ರೀ ಚಾಮುಂಡೇಶ್ವರಿಯ ಕೃಪೆಯಿಂದ ದಸರಾ ಮಹೋತ್ಸವ ಯಶಸ್ವಿಯಾಗಿ ನೆರವೇರುವುದರೊಂದಿಗೆ ನಾಡಿನಲ್ಲಿ ಶಾಂತಿ, ಸಮೃದ್ಧಿ ಸುಭಿಕ್ಷೆ ನೆಲೆಯಾಗಲಿ ಎಂದು ಪ್ರಾರ್ಥಿಸಲಾಗಿದೆ. ದಸರಾ ಮಹೋತ್ಸವ ಸನಾತನ ಧರ್ಮದ ಶ್ರೇಷ್ಠ ಸಂಪ್ರದಾಯವಾಗಿದ್ದು, ಅದನ್ನು ಸಂಪ್ರದಾಯದಂತೆ ಆಚರಿಸಿಕೊಂಡು ಬರುತ್ತಿರುವುದು ಶ್ಲಾಘನೀಯ. ಜಂಬೂ ಸವಾರಿ ಯಶಸ್ಸಿನಲ್ಲಿ ಗಜಪಡೆಯ ಪಾತ್ರ ಮಹತ್ವದ್ದಾಗಿದೆ. ನಿರ್ವಿಘ್ನವಾಗಿ ನೆರವೇರಲಿ ಎಂದು ಗಜಪಡೆಗೆ ಪೂಜೆ ಸಲ್ಲಿಸಲಾಗಿದೆ. ದೇಶದಲ್ಲಿ ಗಜಸಂತತಿ ಸೇರಿದಂತೆ ವನ್ಯ ಜೀವಿಗಳು ಸಮೃದ್ಧಿಯಾಗಿ ಜೀವಿಸಲು ನಾವೆಲ್ಲರೂ ಸಹಕರಿಸಬೇಕು. ವಿವಿಧೆಡೆ ನಡೆಯುವ ಮಾನವ–ಪ್ರಾಣಿ ಸಂಘರ್ಷ ತಡೆಗೆ ಸರ್ಕಾರ ಪ್ರಯತ್ನಿಸಬೇಕು. ಇದಕ್ಕೆ ಜನರು ಸಹಕರಿಸಬೇಕು ಎಂದು ತಿಳಿ ಹೇಳಿದರು.

ಪೂಜೆ ವೇಳೆ ವರುಣನ ಪ್ರೋಕ್ಷಣೆ: ಗಜಪಡೆಗೆ ಪೂಜೆ ಆರಂಭವಾದ ಕೆಲವೇ ಸಮಯದಲ್ಲಿ ಬಿರುಸಾದ ಮಳೆ ಆರಂಭವಾಯಿತು. ಅದಕ್ಕೂ ಮುನ್ನವೇ ನಿಗದಿತ ಮುಹೂರ್ತದಲ್ಲಿ ಪೂಜಾ ಕೈಂಕರ್ಯ ಬಹುತೇಕ ಪೂರ್ಣಗೊಂಡಿದ್ದವು. ಮತ್ತೊಂದು ಸುತ್ತಿನ ಪೂಜಾ ಕಾರ್ಯದಲ್ಲಿ ಶ್ರೀಗಳು ಪಾಲ್ಗೊಂಡರು. ಮಳೆ ಸುರಿಯುತ್ತಿದ್ದರೂ ಎಲ್ಲಾ ಆನೆಗಳಿಗೂ ಪೂಜೆ ನೆರವೇರಿಸಿ, ಶುಭಕೋರಲಾಯಿತು.

ಪ್ರತ್ಯಕ್ಷ ಗಣಪತಿ: ಅರ್ಚಕ ಎಸ್.ವಿ. ಪ್ರಹ್ಲಾದ್‌ರಾವ್ ಮಾತನಾಡಿ, ಹಿಂದೂ ಸಂಪ್ರದಾಯದಲ್ಲಿ ಗಣೇಶ ಹಬ್ಬಕ್ಕೆ ವಿಶೇಷ ಪ್ರಾತಿನಿಧ್ಯವಿದೆ. ಆನೆಗಳನ್ನು ಪ್ರತ್ಯಕ್ಷ ಗಣಪತಿ ಎಂದು ಭಾವಿಸುತ್ತೇವೆ. ಈ ಹಿನ್ನೆಲೆಯಲ್ಲಿ ಪ್ರತಿವರ್ಷ ಗಣೇಶ ಹಬ್ಬದಂದು ದಸರಾ ಗಜಪಡೆಗೆ ಪೂಜೆ ಸಲ್ಲಿಸುವ ಸಂಪ್ರದಾಯ ಅನುಸರಿಸಲಾಗುತ್ತಿದ್ದು, ಈ ಬಾರಿಯೂ ಗಜಪೂಜೆ ನೆರವೇರಿಸಲಾಗಿದೆ. ದಸರಾ ಮಹೋತ್ಸವದಲ್ಲಿ ಗಜಪಡೆಗಳು ಯಶಸ್ವಿಯಾಗಿ ಭಾಗವಹಿಸುವುದರೊಂದಿಗೆ ನಾಡಿಗೆ ಒಳಿತಾಗಲೆಂದು ಪ್ರಾರ್ಥಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್. ಸುಬ್ರಹ್ಮಣ್ಯ, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯ ಡಾ.ಮುಜೀಬ್ ರೆಹಮಾನ್, ಸಹಾಯಕರಾದ ಅಕ್ರಮ್, ರಂಗರಾಜು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಗಣೇಶ ಚತುರ್ಥಿ, ಈದ್‌ಮಿಲಾದ್ ಹಿನ್ನೆಲೆ
ಮೈಸೂರು ನಗರ, ಜಿಲ್ಲಾ ಪೊಲೀಸರಿಂದ ಪಥ ಸಂಚಲನ



ಮೈಸೂರು, ಸೆ19(ಆರ್‌ಕೆ)–ಗಣೇಶ ಚತುರ್ಥಿ ಹಾಗೂ ಈದ್‌ಮಿಲಾದ್ ಹಿನ್ನೆಲೆಯಲ್ಲಿ ಮೈಸೂರು ನಗರ ಮತ್ತು ಜಿಲ್ಲಾ ಪೊಲೀಸರು ಸೋಮವಾರ ಪಥ ಸಂಚಲನ ನಡೆಸಿ, ಸಾರ್ವಜನಿಕರಿಗೆ ಕಾನೂನು–ಸುವ್ಯವಸ್ಥೆ ಕಾಯ್ದುಕೊಳ್ಳಬೇಕಾದ ಸಂದೇಶ ಸಾರಿದರು.

ಸೆಪ್ಟೆಂಬರ್ 20 ಮತ್ತು 22ರಂದು ಸಾಮೂಹಿಕ ಗಣಪತಿ ವಿಸರ್ಜನೆ ಹಾಗೂ 28ರಂದು ಈದ್‌ಮಿಲಾದ್ ಹಬ್ಬ ಆಚರಣೆ ಸಂದರ್ಭ, ಸಂಯಮದಿಂದ ವರ್ತಿಸಬೇಕು. ಗದ್ದಲ, ಗಲಾಟೆಗೆ ಅವಕಾಶ ನೀಡಬಾರದು. ಸಮಾಜ ಘಾತುಕ ಚಟುವಟಿಕೆ ನಡೆಸಿದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂಬ ಎಚ್ಚರಿಕೆ ನೀಡಿರುವ ಪೊಲೀಸರು, ಅಲ್ಪಸಂಖ್ಯಾತರು, ಅಸಹಾಯಕರು, ಅಮಾಯಕರ ರಕ್ಷಣೆಗೂ ನಾವಿದ್ದೇವೆ ಎಂಬ ಅಭಯ ನೀಡಿದ್ದಾರೆ.

ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಹಾಗೂ ಕಾನೂನು–ಸುವ್ಯವಸ್ಥೆ ವಿಭಾಗದ ಡಿಸಿಪಿ ಎಂ.ಮುತ್ತುರಾಜ್ ನೇತೃತ್ವದಲ್ಲಿ ಸೋಮವಾರ ಬೆಳಗ್ಗೆ ಅಶೋಕ ರಸ್ತೆಯ ಮಿಲಾದ್‌ಭಾಗ್ ಪಾರ್ಕ್ ಬಳಿ ಆರಂಭವಾದ ಪಥ ಸಂಚಲನವು, ಫೌಂಟೆನ್ ಸರ್ಕಲ್, ಶಿವಾಜಿ ರಸ್ತೆ ಮೂಲಕ ಎನ್.ಆರ್.ಮೊಹಲ್ಲಾದ ಮಾರುತಿ ಸರ್ಕಲ್ ಬಳಿ ಅಂತ್ಯವಾಯಿತು.

ಮಧ್ಯಾಹ್ನ ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ, ಎನ್.ಆರ್.ಉಪ ವಿಭಾಗದ ಅಶ್ವತ್ಥನಾರಾಯಣ, ವಿಜಯನಗರ ಉಪ ವಿಭಾಗದ ಎಸ್.ಜಿ. ಗಜೇಂದ್ರ ಪ್ರಸಾದ್, ಕೆ.ಆರ್. ಉಪ ವಿಭಾಗದ ಎಸ್.ಇ.ಗಂಗಾಧರ ಸ್ವಾಮಿ, ಸಿಸಿಬಿ ಎಸಿಪಿ ಸಂದೇಶ್ ಕುಮಾರ್, ಸಂಚಾರ ವಿಭಾಗದ ಪರಶುರಾಮಪ್ಪ ತಮ್ಮ ವ್ಯಾಪ್ತಿಗಳಲ್ಲಿ ಆಯಾ ಠಾಣಾ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್‌ಗಳೊಂದಿಗೆ ಪಥ ಸಂಚಲನ ನಡೆಸಿದರು.

ಅಂದೇ ಎಸ್ಪಿ ಸೀಮಾ ಲಾಟ್ಕರ್, ಅಡಿಷನಲ್ ಎಸ್ಪಿ ಡಾ. ನಂದಿನಿ ನೇತೃತ್ವದಲ್ಲಿ ಮೈಸೂರು ಜಿಲ್ಲೆಯಾದ್ಯಂತ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಪಥ ಸಂಚಲನ ನಡೆಸಿ ಸಾರ್ವಜನಿಕರಿಗೆ ಸಂದೇಶ ರವಾನಿಸಿದರು.

ವಿಷ್ಣುವರ್ಧನ್ ಹುಟ್ಟುಹಬ್ಬ ಅಂಗವಾಗಿ ನಾಳೆ ಗೀತಗಾಯನ ಕಾರ್ಯಕ್ರಮ



ಮೈಸೂರು, ಸೆ.19(ಜಿಎ)–ನಟ ಡಾ. ವಿಷ್ಣುವರ್ಧನ್ ಹುಟ್ಟುಹಬ್ಬದ ಅಂಗವಾಗಿ ಡಾ. ರಾಜ್‌ಕುಮಾರ್ ಕಲಾ ಸೇವಾ ಟ್ರಸ್ಟ್ ವತಿಯಿಂದ ಸೆ.21 ರಂದು ವಿಷ್ಣುವರ್ಧನ್ ಅವರ ಚಲನಚಿತ್ರಗಳ ಆಯ್ದ ವಿಶೇಷ ಗೀತ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಮೈಸೂರು ಜಯರಾಂ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸಂಜೆ 5.30ಕ್ಕೆ ನಗರದ ನಾದಬ್ರಹ್ಮ ಸಂಗೀತ ಸಭಾದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಇಳೈ ಆಳ್ವಾರ್ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಡಾ.ವೈ.ಡಿ. ರಾಜಣ್ಣ, ರವಿಗೌಡ, ಎಂ.ಡಿ. ಪಾರ್ಥ ಸಾರಥಿ ಸೇರಿದಂತೆ ಮತ್ತಿತರರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ಆಯ್ದ ಚಲನಚಿತ್ರಗಳ ವಿಶೇಷ ಗೀತೆಯನ್ನು ನಂದಕುಮಾರ್, ಸುರೇಶ್, ನಂಜಂಡ, ರವಿಸಂತು, ಪಾಪಣ್ಣ, ಪುಟ್ಟು, ರಾಹುಲ್, ಚಂದನ್, ಶಶಿಕಲಾ, ಶಾರದಾಂಬ, ಧನ್ಯಶ್ರೀ ಅವರು ಕರೋಕೆ ಸಹಾಯದಿಂದ ಹಾಡುಗಳನ್ನು ಹಾಡಲಿದ್ದಾರೆ. ಸಾರ್ವಜನಿಕರಿಗೆ ಉಚಿತ ಪ್ರವೇಶವಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಎಂ.ಡಿ. ಪಾರ್ಥಸಾರಥಿ, ಸುಧೀಂದ್ರ ಸುರೇಶ್, ರಾಹುಲ್ ಕುಮಾರ್ ಉಪಸ್ಥಿತರಿದ್ದರು.

ಸೆ.23, ಕ್ರೀಡಾಪಟುಗಳಿಗೆ ಅಭಿನಂದನಾ ಕಾರ್ಯಕ್ರಮ



ಮೈಸೂರು, ಸೆ.19(ಜಿಎ)–ಮೈಸೂರಿನ ರಾಷ್ಟ್ರೀಯ, ಅಂತಾರಾಷ್ಟ್ರೀಯ ಕ್ರೀಡಾಪಟುಗಳಿಗೆ ಪ್ರೇರಣಾ ಚಾರಿಟಬಲ್ ಟ್ರಸ್ಟ್ ವತಿಯಿಂದ ಸೆ.23ರಂದು ಅಭಿನಂದನಾ ಕಾರ್ಯಕ್ರಮ ಆಯೋಜಿಸಲಾಗಿದೆ. ಟ್ರಸ್ಟ್ ಅಧ್ಯಕ್ಷ ಶ್ರೀರಂಗರಾಜು ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ನಗರ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿರುವ ರಾಷ್ಟ್ರೀಯ, ಅಂತಾರಾಷ್ಟ್ರೀಯ ಸಾಧಕ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರೇರಣಾ ಚಾರಿಟಬಲ್ ಟ್ರಸ್ಟ್ ಎಂಬ ಸಂಸ್ಥೆ ಅಸ್ತಿತ್ವಕ್ಕೆ ಬಂದಿದೆ ಎಂದರು.

ಸೆ. 23ರ ಸಂಜೆ 6.30ಕ್ಕೆ ನಗರದ ಚಾಮುಂಡಿಬೆಟ್ಟದ ತಪ್ಪಲಿನ ಲಲಿತಾದ್ರಿಪುರ ರಸ್ತೆಯ ಇವಾನ್ ರೆಸಾರ್ಟ್‌ನಲ್ಲಿ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮದಲ್ಲಿ ಪ್ರಥಮ ಬಾರಿಗೆ ಶಾಸಕರಾಗಿ ಚುನಾಯಿತರಾಗಿರುವ ಶಾಸಕರಾದ ಜಿ.ಡಿ. ಹರೀಶ್‌ಗೌಡ, ಎಚ್.ಟಿ. ಮಂಜು, ದರ್ಶನ್ ಪುಟ್ಟಣ್ಣಯ್ಯ ಅವರನ್ನು ಅಭಿನಂದಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಖಜಾಂಚಿ ಡಾ.ದಿವಾಕರ್ ಮತ್ತು ಸದಸ್ಯ ಚೇತನ್ ಕುಮಾರ್ ಉಪಸ್ಥಿತರಿದ್ದರು.

ಬಹಿರಂಗ ಹರಾಜಿನ ಮುಂದೂಡಿಕೆ

ಮೈಸೂರು, ಸೆ.19– 2023–24ನೇ ಸಾಲಿನಲ್ಲಿ ಜಿಲ್ಲಾ ತೋಟಗಾರಿಕೆ ಸಂಘದಿಂದ ನಿಶಾದ್ ಭಾಗ್ (ಕುಪ್ಪಣ್ಣ ಪಾರ್ಕ್) ಆವರಣದಲ್ಲಿ ನಡೆಯುವ ದಸರಾ ಫಲಪುಷ್ಪ ಪ್ರದರ್ಶನದ ಪ್ರವೇಶ ಶುಲ್ಕ, ಆಹಾರ ಮಳಿಗೆ ಹಾಗೂ ಅಮ್ಯೂಸ್‌ಮೆಂಟ್ ಪಾರ್ಕಿಗೆ ಸಂಬಂಧಿಸಿದಂತೆ ಷೀಲ್ಡ್ ಕವರ್ ಟೆಂಡರ್‌ನ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ಸಂಸ್ಥೆಯವರು ಸೆಪ್ಟೆಂಬರ್ 4ರಿಂದ 19ರವರೆಗೆ ಸಂಜೆ 5.30ರೊಳಗಾಗಿ ಕಚೇರಿಯಲ್ಲಿ ಅರ್ಜಿಗಳನ್ನು ಸಲ್ಲಿಸಲು ತಿಳಿಸಲಾಗಿತ್ತು. ಆದರೆ ತಾಂತ್ರಿಕ ಕಾರಣಾಂತರಗಳಿಂದ ಸದರಿ ಟೆಂಡರ್ ಪ್ರಕ್ರಿಯೆಯನ್ನು ರದ್ದುಪಡಿಸಲಾಗಿದೆ.

ಸದರಿ ಟೆಂಡರ್ ಪ್ರಕ್ರಿಯೆ ದಿನಾಂಕವನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಮಿಳುನಾಡಿಗೆ ನೀರು ಹರಿಸುವುದನ್ನು ಖಂಡಿಸಿ

ಮೈಸೂರು ಬಸ್ ನಿಲ್ದಾಣದ ಬಳಿ ರೈತರ ಪ್ರತಿಭಟನೆ

ರಸ್ತೆ ತಡೆಯಿಂದ ಟ್ರಾಫಿಕ್ ಜಾಮ್, ಸಾರ್ವಜನಿಕರ ಪರದಾಟ, ಪೊಲೀಸರೊಂದಿಗೆ ವಾಗ್ವಾದ, ರೈತರ ಬಂಧನ, ಬಿಡುಗಡೆ





ಮೈಸೂರು, ಸೆ.19(ಜಿಎ)–ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದನ್ನು ಖಂಡಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ವತಿಯಿಂದ ಮೈಸೂರಿನಲ್ಲಿ ಮಂಗಳವಾರ ದಿಢೀರ್ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಗ್ರಾಮಾಂತರ ಬಸ್ ನಿಲ್ದಾಣದ ಮುಂದೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷರಾದ ಕುರುಬೂರು ಶಾಂತಕುಮಾರ್ ಅವರ ನೇತೃತ್ವದಲ್ಲಿ ಕಾವೇರಿ ನೀರನ್ನು ಮತ್ತೆ ತಮಿಳುನಾಡಿಗೆ ಬಿಡುತ್ತಿರುವುದನ್ನು ಖಂಡಿಸಿ, ದಿಢೀರ್ ರಸ್ತೆ ತಡೆದು ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗುತ್ತಾ ಆಕ್ರೋಶ ವ್ಯಕ್ತಪಡಿಸಿದರು.

ಅಯ್ಯಯ್ಯೋ ಅನ್ಯಾಯ, ಕಾವೇರಿ ನಮ್ಮದು, ಉಳಿಯಲಿ ಉಳಿಯಲಿ ನೀರು ಉಳಿಯಲಿ, ರೈತ ದ್ರೋಹಿ ಸರ್ಕಾರಕ್ಕೆ ಧಿಕ್ಕಾರ, ವಚನಭ್ರಷ್ಟ ಸರ್ಕಾರಕ್ಕೆ ಧಿಕ್ಕಾರ ಎಂದು ಘೋಷಣೆ ಕೂಗುತ್ತಾ ರಸ್ತೆಗೆ ಅಡ್ಡಲಾಗಿ ನಿಂತು ಪ್ರತಿಭಟನೆ ಆರಂಭಿಸಿದರು. ಕೆಲ ರೈತ ಮುಖಂಡರು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಭಾವಚಿತ್ರವನ್ನು ಸುಟ್ಟು ಆಕ್ರೋಶ ವ್ಯಕ್ತಪಡಿಸಿದರು. ರಸ್ತೆ ತಡೆಯಿಂದ ನೂರಾರು ವಾಹನಗಳು ರಸ್ತೆಯಲ್ಲಿ ನಿಂತು ಸಂಚಾರ ಅಸ್ತವ್ಯಸ್ತಗೊಂಡು ಬಸ್ ನಿಲ್ದಾಣದ ಸುತ್ತಮುತ್ತ ಟ್ರಾಫಿಕ್ ಜಾಮ್ ಉಂಟಾಯಿತು.

ಈ ವೇಳೆ ರೈತ ಮುಖಂಡ ಕುರುಬೂರು ಶಾಂತಕುಮಾರ್ ಮಾತನಾಡಿ, ಸರ್ಕಾರ ನುಡಿದಂತೆ ನಡೆಯುತ್ತಿಲ್ಲ. ಕದ್ದುಮುಚ್ಚಿ ನೀರು ಬಿಡುತ್ತಿದೆ. ಕಾವೇರಿ ಭಾಗದ ಜನರನ್ನು ಬಲಿ ಕೊಡುತ್ತಿದ್ದು, ಬೆಂಗಳೂರು–ಮೈಸೂರು ನಗರದ ಜನತೆಗೆ ಕುಡಿಯುವ ನೀರಿಗೂ ಸಮಸ್ಯೆ ತಂದೊಡ್ಡುತ್ತಿದೆ. ನೀರಾವರಿ ಸಚಿವರ ಬೇಜವಾಬ್ದಾರಿ ನಡವಳಿಕೆ ಈ ಸಮಸ್ಯೆಗೆ ಕಾರಣವಾಗಿದೆ. ಕೂಡಲೇ ಸಚಿವ ಸ್ಥಾನ ಬದಲಾಯಿಸಬೇಕು. ಕಾವೇರಿ ನೀರು ನಿರ್ವಹಣಾ ಮಂಡಳಿ ಪ್ರಾಧಿಕಾರದ ಆದೇಶ ಧಿಕ್ಕರಿಸಬೇಕು. ನೀರು ಬಿಡುವುದನ್ನು ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಮೈಸೂರು–ಬೆಂಗಳೂರು ನಗರಗಳ ಅಚ್ಚುಕಟ್ಟು ಭಾಗದ ರೈತರು ಮತ್ತು ಜನಸಾಮಾನ್ಯರು ಜನಪ್ರತಿನಿಧಿಗಳಿಗೆ ಸರಿಯಾದ ಪಾಠ ಕಲಿಸಬೇಕು. ಇಲ್ಲದಿದ್ದರೆ ಎಲ್ಲರೂ ಸೇರಿ ಕುಡಿಯುವ ನೀರಿಗೆ ಮರಣ ಶಾಸನ ಬರೆಯುತ್ತಾರೆ. ತಕ್ಷಣದಿಂದಲೇ ಎಲ್ಲಾ ಸಂಘ ಸಂಸ್ಥೆಗಳು ಹೋರಾಟಕ್ಕಿಳಿದು ಸರ್ಕಾರಕ್ಕೆ ಬಿಸಿ ಮುಟ್ಟಿಸಬೇಕು ಎಂದು ಅವರು ಕರೆ ನೀಡಿದರು.

ರಸ್ತೆ ತಡೆ ತೆರವುಗೊಳಿಸುವಂತೆ ರೈತರ ಮನವೊಲಿಸಲು ಪೊಲೀಸರು ಮುಂದಾದರು. ಇದಕ್ಕೆ ರೈತರು ಜಗ್ಗದೆ ಪೊಲೀಸರ ವಿರುದ್ಧ ವಾಗ್ವಾದಕ್ಕಿಳಿದರು. ಈ ವೇಳೆ ಮಾತಿನ ಚಕಮಕಿ ನಡೆದು ಪರಿಸ್ಥಿತಿ ವಿಕೋಪಕ್ಕೆ ತಿರುಗಿದಾಗ ಚಳುವಳಿ ನಿರತ ರೈತರನ್ನು ಪೊಲೀಸರು ಬಂಧಿಸಿ ಮೈಸೂರಿನ ಸಿಎಆರ್ ಮೈದಾನಕ್ಕೆ ಕರೆದೊಯ್ದು ನಂತರ ಬಿಡುಗಡೆಗೊಳಿಸಲಾಯಿತು.

ಪ್ರತಿಭಟನೆಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಆಮ್ ಆದ್ಮಿ ಪಕ್ಷದ ರಂಗಯ್ಯ, ಕಬ್ಬು ಬೆಳೆಗಾರ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್, ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ತಾಲೂಕು ಅಧ್ಯಕ್ಷರುಗಳಾದ ಕುರುಬೂರು ಸಿದ್ದೇಶ್, ಹಾಡ್ಯ ರವಿ, ಕುರುಬೂರು ಪ್ರದೀಪ್, ಹೆಗ್ಗೂರು ರಂಗರಾಜ್, ಅಂಬಳೆ ಮಂಜುನಾಥ್, ಮಾರ್ಬಳ್ಳಿ ನೀಲಕಂಠಪ್ಪ ಕಾಟೂರು ಮಾದೇವಸ್ವಾಮಿ, ಕೋಟೆ ಸುನಿಲ್, ಸಾತಗಳ್ಳಿ ಬಸವರಾಜ್, ಹಿರೇನಂದಿ ಮಹಾದೇವಪ್ಪ ಕೆಂಡಗಣ್ಣಸ್ವಾಮಿ, ಚಾಮರಾಜನಗರ ಮಹೇಶ್, ಚುಂಚರಾಯನಹುಂಡಿ ಗಿರೀಶ್, ದೇವನೂರು ನಾಗೇಂದ್ರ ಸ್ವಾಮಿ, ಪಿ ರಾಜು ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಮೈಸೂರು ಮಿತ್ರ

ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾದ ಗೌರಿ-ಗಣೇಶ!




ಮೈಸೂರು, ಸೆ.19-ಹಿಂದೂ-ಮುಸ್ಲಿಂ ಯುವಕರು ಒಟ್ಟಾಗಿ ಗೌರಿ ಗಣೇಶನ ಹಬ್ಬವನ್ನು ಆಚರಿಸುವ ಮೂಲಕ ಮೈಸೂರಿನಲ್ಲಿ ಗಮನಸೆಳೆದಿದ್ದಾರೆ.

ಮೈಸೂರಿನ ಅಗ್ರಹಾರದ ಕುಂದೂರು ಮಠದ ರಸ್ತೆಯಲ್ಲಿ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಹಬ್ಬ ಆಚರಿಸುವ ಮೂಲಕ ಭಾವೈಕ್ಯತೆ ಮೆರೆದಿದ್ದಾರೆ. ಪರಸ್ಪರ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು ಸಿಹಿತಿನಿಸಿ ಹಿಂದೂ ಮುಸ್ಲಿಂ ಭಾಯಿ... ಭಾಯಿ.. ಸಂದೇಶವನ್ನು ಜನತೆಗೆ ರವಾನಿಸಿದರು. ಈ ವೇಳೆ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್ ಮಾತನಾಡಿ, ನಮ್ಮ ದೇಶದಲ್ಲಿ ವರ್ಷದಲ್ಲಿ ಹಲವಾರು ಹಬ್ಬಗಳನ್ನು ಆಚರಣೆ ಮಾಡುತ್ತಿದ್ದು, ಈ ಬಾರಿ ಗೌರಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬ ಸಮೀಪ ಬಂದಿದ್ದರಿಂದ ಉಭಯ ಸಮಾಜದ ಬಾಂಧವರು ಈ ಹಬ್ಬಗಳನ್ನು ಬಹಳ ಶಾಂತಿಯುತವಾಗಿ ಆಚರಣೆ ಮಾಡಿ ಸೌಹಾರ್ದತೆಯಿಂದ ಬಾಳುವಂತೆ ಕರೆ ನೀಡಿದರು.

ಶ್ರೀ ಗಣಪತಿ ಯುವಕರ ಸಂಘದ ಮುಖ್ಯ ಸಂಚಾಲಕ ಮೋಹನ್ ಕುಮಾರ್ ಗೌಡ ಮಾತನಾಡಿ, ಇತಿಹಾಸದಲ್ಲಿ ಎರಡು ಸಮುದಾಯಗಳ ಹಬ್ಬಗಳು ಬಂದರೆ ಸೌಹಾರ್ದಯುತವಾಗಿ ಆಚರಣೆ ಮಾಡುವ ಪದ್ಧತಿ ನಮ್ಮ ನಾಡಿನಲ್ಲಿದೆ. ಆದರೆ ಕೆಲವು ಕಿಡಿಗೇಡಿಗಳಿಂದ ಎರಡು ಸಮಾಜದಲ್ಲಿ ಶಾಂತಿಯನ್ನು ಕದಡುವ ಯತ್ನಗಳು ನಡೆಯುತ್ತಿದ್ದು, ಆದ್ದರಿಂದ ಎರಡೂ ಸಮುದಾಯದ ಮುಖಂಡರು ಈ ಬಗ್ಗೆ ಲಕ್ಷ್ಯ ವಹಿಸಿ ಹಬ್ಬಗಳನ್ನು ಆಚರಣೆ ಮಾಡಲು ಮುಂದಾಗಬೇಕು. ಈ ದಿನ ಈ ಯುವಕರು ಒಟ್ಟಾಗಿ ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸುತ್ತಾ ಬಂದಿರುವುದು ಬಹಳ ಸಂತಸದ ವಿಚಾರ. ಇದೇ ರೀತಿ ಸೌಹಾರ್ದತೆ ಆಚರಣೆ ಪ್ರತಿ ಜಿಲ್ಲೆಯಲ್ಲಿ ಆದರೆ ಬಹಳ ಉತ್ತಮ ಬೆಳವಣಿಗೆಯನ್ನು ರಾಜ್ಯದಲ್ಲಿ ಕಾಣಲು ಸಾಧ್ಯವಿದೆ ಎಂದರು. ಸಗೀರ್ ಅಹಮದ್, ಅಫ್ರೋಜ್ ಖಾನ್, ಸಾಹೇದ್ ಮುಗುದುಮ್, ನೂರ್ ಶರೀಫ್, ಸೈಯದ್ ಫಾಸಿಲ್, ಖಾಲಿದ್ ಅಹಮದ್, ನಾಗೇಂದ್ರ, ನಿಹಾಲ್, ಭುವನ್, ವೈ.ವಿಶ್ರುತ್. ಎಸ್.ಗೌಡ, ರಕ್ಷಿತ್, ಯಶಸ್.ಎಸ್.ಗೌಡ ಹಾಗೂ ಇನ್ನಿತರರು ಭಾಗವಹಿಸಿದ್ದರು.

ಇಂದಿನಿಂದ ಕಟ್ಟೆ ಬಳಗದಿಂದ 8ನೇ ವರ್ಷದ ಗಣೇಶೋತ್ಸವ

ಮೈಸೂರು, ಸೆ.19- ನಗರದ ಕೃಷ್ಣಮೂರ್ತಿಪುರಂ 1ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆಯಲ್ಲಿ ಕಟ್ಟೆ ಬಳಗದ ವತಿಯಿಂದ 8ನೇ ವರ್ಷದ ಗಣೇಶೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸೆ.20ರಂದು ಬೆಳಿಗ್ಗೆ 10ಗಂಟೆಗೆ ಶ್ರೀ ಮಹಾಗಣಪತಿ ಪ್ರತಿಷ್ಠಾಪನೆ, ಸಂಜೆ 4.30ಕ್ಕೆ ಮಕ್ಕಳಿಗೆ ಮತ್ತು ಮಹಿಳೆಯರಿಗೆ ಕ್ರೀಡಾಸ್ಪರ್ಧೆ, ಸೆ.21ರಂದು ಸಂಜೆ 6.30ಕ್ಕೆ ವಿದ್ವಾನ್ ರಾಜೇಶ್ ಪಡಿಯಾರ್ ಮತ್ತು ತಂಡದವರಿಂದ 'ದಾಸವಾಣಿ, ಸೆ.22ರಂದು ಸಂಜೆ 6.30ಕ್ಕೆ ಮೈಸೂರಿನ 'ಜೂನಿಯರ್ ಹಂಸಲೇಖ' ಎಂದು ಖ್ಯಾತರಾಗಿರುವ ಕೀಬೋರ್ಡ್ ವಾದಕ ಎ.ಎಸ್.ಪ್ರಸನ್ನಕುಮಾರ್ ಮತ್ತು ತಂಡದವರಿಂದ ಕನ್ನಡ ಮತ್ತು ಹಿಂದಿ ಚಲನಚಿತ್ರಗೀತೆಗಳ 'ಲೈವ್ ರಸಸಂಜೆ' ಕಾರ್ಯಕ್ರಮ, ಸೆ.23ರಂದು ಸಂಜೆ 6-30ಕ್ಕೆ ಕೃಷ್ಣಮೂರ್ತಿಪುರಂ ಪ್ರಮುಖ ಬೀದಿಗಳಲ್ಲಿ ಶ್ರೀ ಮಹಾಗಣಪತಿ ಮೆರವಣಿಗೆ, ಪ್ರಸಾದ ವಿನಿಯೋಗ ನಂತರ ವಿಸರ್ಜನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಕಟ್ಟೆ ಬಳಗದ ಮುಖ್ಯ ಸಂಚಾಲಕ ಸತ್ಯನಾರಾಯಣ ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 9686832244 ಸಂಪರ್ಕಿಸುವುದು.



ರಂಗಾಯಣ ರೂವಾರಿ, ಶ್ರೇಷ್ಠ ರಂಗತಜ್ಞ ಬಿ.ವಿ.ಕಾರಂತ ಜನ್ಮದಿನದ ಅಂಗವಾಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ರಂಗಾಯಣದಲ್ಲಿರುವ ಅವರ ಪುತ್ಥಳಿಗೆ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾಲಾರ್ಪಣೆ ಮಾಡಿದರು. ಚಿತ್ರದಲ್ಲಿ ರಂಗಕರ್ಮಿ ರಾಜಶೇಖರ ಕದಂಬ,ರಂಗಾಯಣ ಉಪ ನಿರ್ದೇಶಕಿ ನಿರ್ಮಲಾ ಮಠಪತಿ,ಪರಿಷತ್ತಿನ ಕಾರ್ಯದರ್ಶಿಗಳಾದ ಲತಮೋಹನ್, ಚೀಲೂರು ಚಂದ್ರಶೇಖರ್, ಕಲಾವಿದ ಕೃಷ್ಣಪ್ರಸಾದ್ ಇದ್ದಾರೆ.

ಇಂದು ವಿನಾಯಕ ಸ್ನೇಹ ಬಳಗದಿಂದ ರಂಗೋಲಿ ಸ್ಪರ್ಧೆ; ಯೋಗಪಟುಗಳಿಂದ ಯೋಗಪ್ರದರ್ಶನ

ಮೈಸೂರು, ಸೆ.19- ಮೈಸೂರಿನ ಸುವರ್ಣ ಬೆಳಕು ಫೌಂಡೇಷನ್ ಹಾಗೂ ವಿನಾಯಕರ ಸ್ನೇಹ ಬಳಗದ ವತಿಯಿಂದ ನಾಳೆ (ಬುಧವಾರ) ಮಧ್ಯಾಹ್ನ 4 ಗಂಟೆಗೆ ರಂಗೋಲಿ ಸ್ಪರ್ಧೆ ಹಾಗೂ ವಿಜಯ ಅವರಿಂದ ಭರತನಾಟ್ಯ ಪ್ರದರ್ಶನ ಹಾಗೂ ಮೈಸೂರಿನ ಯೋಗ ಶಿಕ್ಷಕ ಪಿ.ಎನ್ ಗಣೇಶ್ ಕುಮಾರ್ ಅವರ ಶಿಷ್ಯರಿಂದ ಯೋಗ ಪ್ರದರ್ಶನ ಮತ್ತು ರಾಘವೇಂದ್ರ ಅರಳಿಕಟ್ಟೆ ಅವರಿಂದ ಜಿಮ್ನಾಸ್ಟಿಕ್‌ನ ಅಮೋಘ ಪ್ರದರ್ಶನ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಶಾಸಕ ಟಿ.ಎಸ್.ಶ್ರೀವತ್ಸ, ಮಿಸ್ ಕರ್ನಾಟಕ ತನಿಷ್ಕಮೂರ್ತಿ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್, ಮಹೇಶ್ ನಾಯಕ್ ಭಾಗವಹಿಸಲಿದ್ದಾರೆ. ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಿದವರಿಗೆ ಪ್ರಮಾಣ ಪತ್ರ ನೀಡಲಾಗುವುದು. ವಿಜೇತರಾದವರಿಗೆ ನಗದು ಬಹುಮಾನ ನೀಡಲಾಗುವುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.



ಮೈಸೂರಿನ ಜೆ.ಪಿ.ನಗರ ಸ್ಪೋರ್ಟ್ಸ್ ಕ್ಲಬ್‌ಗೆ ನೂತನ ಪದಾಧಿಕಾರಿಗಳನ್ನು ಇತ್ತೀಚೆಗೆ ಆಯ್ಕೆ ಮಾಡಲಾಯಿತು. ಚಿತ್ರದಲ್ಲಿ (ಕುಳಿತಿರುವವರು) ಆರ್.ರಮೇಶ್ ರಾವ್ (ಜಂಟಿ ಕಾರ್ಯದರ್ಶಿ), ಎಸ್.ಸುರೇಶ್ (ಕಾರ್ಯದರ್ಶಿ), ಎನ್.ರವಿ(ಅಧ್ಯಕ್ಷರು), ಜಿ.ಸಿ.ರಾಜಪ್ಪ (ಉಪಾಧ್ಯಕ್ಷ), ಬಿ.ಸುರೇಶ್ (ಖಜಾಂಚಿ), ಕಾರ್ಯಕಾರಿ ಸಮಿತಿ ಸದಸ್ಯರುಗಳಾಗಿ (ನಿಂತಿರುವವರು)ದೊಡ್ಡ ಸಿದ್ದಯ್ಯ, ಎ.ಎಸ್.ಗುರುಸ್ವಾಮಿ, ಬಿ.ಎಂ. ಪ್ರಕಾಶ್, ಬಿ.ಎನ್.ಲಕ್ಷ್ಮೀನಾರಾಯಣ, ಎಂ.ಸಿ.ನಾಗರಾಜು, ಎಂ.ಚಂದ್ರ, ಡಾ. ಎಸ್.ಸೋಮಶೇಖರ್, ಎಂ.ಎಸ್.ವಿಜಯ್ ಕುಮಾರ್, ಎ.ಚಿದಾನಂದ ಅರಸ್ ಅವರನ್ನು ಕಾಣಬಹುದು.

ಫೋನ್-ಇನ್-ಕಾರ್ಯಕ್ರಮ



ಮೈಸೂರು, ಸೆ. 19- ಗೃಹಲಕ್ಷ್ಮಿ ಯೋಜನೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಇತರೆ ಸೇವೆಗಳ ಕುರಿತು ಮೈಸೂರು ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಬಿ.ಬಸವರಾಜು ಅವರ ಜೊತೆ ನೇರ ಸಂದರ್ಶನ ಫೋನ್-ಇನ್ ಕಾರ್ಯಕ್ರಮವನ್ನು ನಾಳೆ (ಸೆ.20) ಬೆಳಗ್ಗೆ 11:30 ರಿಂದ 12:30ರ ವರೆಗೆ ಆಯೋಜಿಸಲಾಗಿದೆ. ಸಾರ್ವಜನಿಕರು ಗೃಹಲಕ್ಷ್ಮಿ ಯೋಜನೆ, ಅಂಗನವಾಡಿ ಸೇವೆಗಳು, ಮಹಿಳಾ ಸಬಲೀಕರಣ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಇತರೆ ಸೇವೆಗಳ ಕುರಿತು ನೇರವಾಗಿ ದೂ.8296725912, 0821-2546563 ಕರೆ ಮಾಡಿ ಮಾತನಾಡಬಹುದು.




ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಹುಟ್ಟುಹಬ್ಬ ಮತ್ತು ಗೌರಿ ಗಣೇಶ ಹಬ್ಬದ ಪ್ರಯುಕ್ತ ಮೈಸೂರು ಮಹಾನಗರ ಪಾಲಿಕೆ ಸದಸ್ಯರಾದ ಪ್ರಮೀಳಾ ನೇತೃತ್ವದಲ್ಲಿ ನಗರಪಾಲಿಕೆ ಮಹಿಳಾ ಪೌರಕಾರ್ಮಿಕ ಬಂಧುಗಳಿಗೆ ಅರಿಶಿನ, ಕುಂಕುಮದೊಂದಿಗೆ ಬಾಗಿನವನ್ನು ಅರ್ಪಿಸಿ, ಗೌರಿ ಗಣೇಶ ಹಬ್ಬವನ್ನು ಆಚರಿಸಲಾಯಿತು. ಈ ವೇಳೆ ಮುಖಂಡರಾದ ಗಂಗಮ್ಮ, ಭರತ್, ಶ್ರೀನಿವಾಸ್, ಚರಣ್, ಪ್ರವೀಣ್, ವಿನೋದ್ ರಾಜ್, ಚಂದ್ರಕಲಾ, ಗಾಯತ್ರಿ, ವಿಮಲಾ, ರೇಣುಕಾ, ಜೊತರಾಮ್, ಭರತ್ ರಾಮ್, ಕೀರ್ತನ, ಮೇಘನಾ, ಮೋನಿಕಾ ಮತ್ತಿತರರು ಉಪಸ್ಥಿತರಿದ್ದರು.

ತಮಿಳ್ನಾಡಿಗೆ ನೀರು ಬಿಡುವ ತರಾತುರಿ ಏಕೆ...

● ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಆಕ್ರೋಶ ● ಕಾವೇರಿ ನೀರಿನ ವಿಚಾರದಲ್ಲಿ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ





ಬೆಂಗಳೂರು, ಸೆ.19-(ಕೆಎಂಶಿ) ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀರು ಬಿಡಿ ಎಂದು ಆದೇಶ ನೀಡಿದಾಕ್ಷಣ ರಾಜ್ಯ ಸರ್ಕಾರವು ತಡಮಾಡದೆ, ಸುಪ್ರೀಂ ಕೋರ್ಟಿಗೆ ತುರ್ತು ಅರ್ಜಿ ಸಲ್ಲಿಸದೇ ತಮಿಳುನಾಡಿಗೆ ನೀರು ಬಿಡುವ ಆತುರ ತೋರಿದ್ದೇಕೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಅಲ್ಲದೆ, ಒಕ್ಕೂಟ ವ್ಯವಸ್ಥೆಯ ಬಗ್ಗೆಯೇ ಕನ್ನಡಿಗರಿಗೆ ಭ್ರಮನಿರಸನ ಆಗುತ್ತಿದೆ. ತಮಿಳುನಾಡು ಈ ವ್ಯವಸ್ಥೆಗೆ ಧಕ್ಕೆ ತರುವ ಕೆಲಸ ಮಾಡುತ್ತಿದೆ ಎಂದು ಬಿಡದಿಯ ತಮ್ಮ ತೋಟದ ಮನೆಯಲ್ಲಿ ಸುದ್ದಿಗೋಷ್ಠಿಯಲ್ಲಿ ಪ್ರತಿಕ್ರಿಯಿಸಿದರು. ನಾವು ನಮ್ಮ ಜನರ ಹಣದಲ್ಲಿ ಅಣೆಕಟ್ಟು ನಿರ್ಮಾಣ ಮಾಡಿದ್ದೇವೆ. ಕೇಂದ್ರ ಸರ್ಕಾರ ನಮಗೇನೂ ಇದಕ್ಕೆ ಹಣ ಕೊಟ್ಟಿಲ್ಲ. ಅದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. 200 ವರ್ಷಗಳಿಂದ ಅವರ ದಬ್ಬಾಳಿಕೆ ಸಹಿಸಿಕೊಂಡಿದ್ದೇವೆ. ಇದನ್ನು ಒಕ್ಕೂಟ ವ್ಯವಸ್ಥೆ ಎಂದು ಕರೆಯಬೇಕಾ ಎಂದು ಕಿಡಿಕಾರಿದರು. ನಾವು ಕೂಡ ಕಠಿಣ ನಿರ್ಧಾರ ತೆಗೆದುಕೊಳ್ಳಬೇಕಾಗುತ್ತದೆ. ಎಷ್ಟು ವರ್ಷ ಈ ದಬ್ಬಾಳಿಕೆ ಸಹಿಸಲು ಸಾಧ್ಯ. ಆದೇಶ ಧಿಕ್ಕರಿಸಿದರೆ ಜೈಲಿಗೆ ಹಾಕ್ತಾರಾ ಹಾಕಲಿ ಬಿಡಿ. ಅರೆಸೇನಾ ಪಡೆಯನ್ನು ಕರೆಸುತ್ತಾರ ಕರೆಸಲಿ ನೋಡೋಣ. ಹೀಗೆ ನಿರಂತರವಾಗಿ ದಬ್ಬಾಳಿಕೆ ನಡೆಸುತ್ತಿದ್ದರೆ ಸಹಿಸಲು ಸಾಧ್ಯವೇ, ಇದು ಯಾವ ಸೀಮೆ ಒಕ್ಕೂಟದ ವ್ಯವಸ್ಥೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಪಕ್ಷಭೇದ ಮರೆತು ಒಗ್ಗೂಡಿ ಹೋರಾಟ ಮಾಡಲೇಬೇಕಿದೆ. ತಮಿಳುನಾಡಿನಲ್ಲಿ ಯಾವ ರೀತಿ ಎಲ್ಲರೂ ಇಂಥ ಸಂದರ್ಭಗಳಲ್ಲಿ ಒಗ್ಗೂಡುತ್ತಾರೋ ಹಾಗೆಯೇ ನಾವೂ ಒಗ್ಗೂಡಬೇಕು. ಆದರೆ, ರಾಜಕೀಯ ಅಂತ ನಾವಿಲ್ಲಿ ಹೊಡೆದಾಡಿಕೊಂಡು ಕೂತಿದ್ದೇವೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.


ನಾನು ದೆಹಲಿಗೆ ಹೋದಾಗ ಈ ಬಗ್ಗೆ ಮಾತನಾಡುತ್ತೇನೆ. ಮೈತ್ರಿ ಮಾಡಿಕೊಳ್ತಾ ಇದೀವಿ ಅನ್ನುವ ಕಾರಣಕ್ಕೆ ಇದರ ಬಗ್ಗೆ ಮಾತಾಡಲು ಹಿಂದೆಮುಂದೆ ನೋಡುವುದಿಲ್ಲ. ಮೈತ್ರಿ ಬಗ್ಗೆ ಮಾತಾಡುವ ಸಂದರ್ಭದಲ್ಲಿ ಈ ವಿಚಾರದ ಬಗ್ಗೆ ಕೂಡ ಚರ್ಚೆ ನಡೆಸುತ್ತೇನೆ. ರಾಜ್ಯದ ಹಿತವನ್ನು ಯಾವ ಕಾರಣಕ್ಕೂ ನಿರ್ಲಕ್ಷ್ಯ ಮಾಡುವುದಿಲ್ಲ. ಹಾಗೆಯೇ, ಬಿಜೆಪಿಯವರು ಧೈರ್ಯದಿಂದ ಪ್ರಧಾನಿ ನರೇಂದ್ರ ಮೋದಿ ಅವರ ಬಳಿ ಹೋಗಿ ಮಾತಾಡಲಿ ಎಂದರು.

ಆಗಸ್ಟ್ 10ರಂದು ಕಾವೇರಿ ಜಲ ನಿಯಂತ್ರಣಾ ಸಭೆ, ಆಗಸ್ಟ್ 11ರಂದು ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರದ ಸಭೆ ನಡೆಯಿತು. ಅತ್ತ ನೀರು ಬಿಡಲು ಕರ್ನಾಟಕಕ್ಕೆ ಪ್ರಾಧಿಕಾರ ಸೂಚನೆ ನೀಡಿದ ಮರುದಿನವೇ ರಾಜ್ಯವು ತುರ್ತಾಗಿ ಸುಪ್ರೀಂ ಕೋರ್ಟಿಗೆ ಹೋಗಬೇಕಿತ್ತು. ಹಾಗೆ ಮಾಡಲಿಲ್ಲ, ರಾಜ್ಯ ಸರ್ಕಾರ ವಿನಾ ಕಾರಣ ಕಾಲಹರಣ ಮಾಡಿತು ಎಂದು ಅವರು ನೇರ ಆರೋಪ ಮಾಡಿದರು.

ಸೋಮವಾರದಂದು ಮುಂದಿನ 15 ದಿನ ನೆರೆರಾಜ್ಯಕ್ಕೆ ನಿತ್ಯವೂ 5 ಸಾವಿರ ಕ್ಯೂಸೆಕ್ಸ್ ನೀರು ಬಿಡುವಂತೆ ಹೇಳಿದ ಕೂಡಲೇ ರಾಜ್ಯ ಸರ್ಕಾರ ಒಂದು ತುರ್ತು ಅರ್ಜಿಯನ್ನು ಸುಪ್ರೀಂಕೋರ್ಟಿಗೆ ಸಲ್ಲಿಸಬೇಕಿತ್ತು. ಮಧ್ಯರಾತ್ರಿಯಾದರೂ ನ್ಯಾಯಾಲಯಕ್ಕೆ ವಾಸ್ತವ ಸ್ಥಿತಿಯನ್ನು ಮನವರಿಕೆ ಮಾಡಿಕೊಡಬೇಕಿತ್ತು. ಎಷ್ಟೋ ಸಂದರ್ಭದಲ್ಲಿ ಮಧ್ಯರಾತ್ರಿ ಸಮಯದಲ್ಲಿಯೂ ಸುಪ್ರೀಂ ಕೋರ್ಟ್ ಕಲಾಪ ನಡೆದಿದೆ. ರಾಜ್ಯ ಸರ್ಕಾರ ಈ ವಿಷಯದಲ್ಲಿ ಪೂರ್ಣ ವಿಫಲವಾಗಿದೆ. ಸರ್ಕಾರಕ್ಕೆ ಕಾನೂನು ತಜ್ಞರು ಸಲಹೆ ಕೊಡಲಿಲ್ಲವಾ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಒಂದು ಕಡೆ ಗೌರಿ ಗಣೇಶ ಹಬ್ಬವನ್ನು ಜನರು ಆಚರಣೆ ಮಾಡುತ್ತಿದ್ದರೆ, ಇನ್ನೊಂದು ಕಡೆ ರಾಜ್ಯ ಸರ್ಕಾರ ತಮಿಳುನಾಡಿಗೆ ನೀರು ಹರಿಸುತ್ತಿದೆ. ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರವು ನೆರೆ ರಾಜ್ಯದ ಒತ್ತಡಕ್ಕೆ ಮಣಿದು ಮುಂದಿನ 15 ದಿನಗಳ ಕಾಲ ನಿತ್ಯ 5 ಸಾವಿರ ಕ್ಯೂಸೆಕ್ ನೀರು ಬಿಡಲು ಆದೇಶ ಮಾಡಿದೆ. ಯಾವುದೇ ಕಾರಣಕ್ಕೂ ನೀರು ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರ ಪಟ್ಟು ಹಿಡಿಯಬೇಕಿತ್ತು ಎಂದರು.

ನಾನು ಸಿಎಂ ಆಗಿದ್ದಾಗ ಇಂಥ ಆದೇಶ ಬಂದಾಗ ರಿವ್ಯೂ ಪಿಟಿಷನ್ ಹಾಕಿದ್ದೆವು. ಅಂಥ ಅರ್ಜಿ ಸಲ್ಲಿಸುವುದಕ್ಕೆ ಇವರಿಗೆ ಏನಾಗಿತ್ತು ನಾವು ನೀರನ್ನು ಬಿಡದೇ ಇದ್ದರೆ, ಕೋರ್ಟ್‌ನಲ್ಲಿ ನಮ್ಮ ವಿರುದ್ಧ ಆದೇಶ ಬರಬಹುದು ಎಂದು ನಿನ್ನೆ ರಾತ್ರಿಯಿಂದಲೇ ತಮಿಳುನಾಡಿಗೆ ನೀರನ್ನು ಸರ್ಕಾರ ಹರಿಸುತ್ತಿದೆ. ಪ್ರಾಧಿಕಾರದ ಸೂಚನೆ ಬಂದ ಕೂಡಲೇ ವಿವೇಚನಾಹೀನರಾಗಿ ಜಲ ಸಂಪನ್ಮೂಲ ಸಚಿವರು ತರಾತುರಿಯಲ್ಲಿ ನೀರು ಹರಿಸುವ ನಿರ್ಧಾರ ಮಾಡಿರುವುದು ಸರಿಯಲ್ಲ. ಇಬ್ಬರೂ ನಮ್ಮ ರೈತರ ಬದುಕಿನ ಜತೆ ಚೆಲ್ಲಾಟ ಆಡುತ್ತಿದ್ದಾರೆ ಎಂದು ದೂರಿದರು. ಕಾವೇರಿ ವಿಚಾರದಲ್ಲಿ ಸಭೆಗಳು ನಡೆದಾಗ ನಮ್ಮ ರಾಜ್ಯದ ಹಿರಿಯ ಅಧಿಕಾರಿಗಳು ಸಭೆಗಳಲ್ಲಿ ಭಾಗವಹಿಸದೇ ಲಘುವಾಗಿ ತೆಗೆದುಕೊಂಡಿದ್ದಾರೆ. ಅಲ್ಲಿ ನೋಡಿದರೆ ತಮಿಳುನಾಡಿನ ಹತ್ತು ಹದಿನೈದು ಅಧಿಕಾರಿಗಳು ಸಭೆಗಳಲ್ಲಿ ಭಾಗವಹಿಸುತ್ತಾರೆ. ಪಾಪ. ನಮ್ಮ ಅಧಿಕಾರಿಗಳಿಗೆ ಬಿಡುವೇ ಇಲ್ಲ. ಪ್ರಾಧಿಕಾರ ಮತ್ತು ಜಲ ನಿಯಂತ್ರಣಾ ಸಮಿತಿ ಸಭೆಗಳಿಗೆ ವರ್ಚುವಲ್ ಮೂಲಕ ಹಾಜರಾಗುತ್ತಾರೆ ಎಂದು ತರಾಟೆಗೆ ತೆಗೆದುಕೊಂಡರು.

ಮಾಜಿ ಪ್ರಧಾನಿ ದೇವೇಗೌಡರ ಏಕಾಂಗಿ ಹೋರಾಟ



ರಾಜ್ಯಸಭೆಯಲ್ಲಿ ಈ ಇಳಿ ವಯಸ್ಸಲ್ಲೂ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಏಕಾಂಗಿ ಹೋರಾಟ ಮಾಡುತ್ತಿದ್ದಾರೆ. ಈ ವೇಳೆ ರಾಜ್ಯದವರೇ ಆಗಿರುವ ಕಾಂಗ್ರೆಸ್ ಪಕ್ಷದ ಅಧ್ಯಕ್ಷರು ಎಲ್ಲಿ ಹೋಗಿದ್ದರು. ಇವರಿಗೆ ಏನಾಗಿದೆ? ತಮಿಳುನಾಡಿನವರು ಈ ವಿಚಾರ ಪ್ರಸ್ತಾಪ ಮಾಡಿದಾಗ ಮಲ್ಲಿಕಾರ್ಜುನ ಖರ್ಗೆಯವರು ಯಾಕೆ ಮಾತಾಡಲಿಲ್ಲ ಎಂದು ಕುಮಾರಸ್ವಾಮಿ, ಖರ್ಗೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ದೇವೇಗೌಡರು ರಾಜ್ಯದ ಜಲ ಸಂಕಷ್ಟವನ್ನು ಸದನದ ಮುಂದೆ ಇಟ್ಟು ಭಾಷಣ ಮಾಡುತ್ತಿದ್ದರೆ ತಮಿಳುನಾಡಿನ ಸದಸ್ಯರು ಪ್ರತಿಭಟನೆ ಮಾಡುತ್ತಿದ್ದರು. ಅವರನ್ನು ಎದುರಿಸಲು ಕೂತು ಮಾತನಾಡುತ್ತಿದ್ದ ದೇವೇಗೌಡರು ಎದ್ದು ನಿಂತರು. ಕೊನೆಪಕ್ಷ ತಮಿಳುನಾಡಿಗೆ ನೀರು ಹರಿಸುವ ಮುನ್ನ ಆ ದೃಶ್ಯವನ್ನಾದರೂ ಕಣ್ಮುಂದೆ ತಂದುಕೊಳ್ಳಬಹುದಿತ್ತಲ್ಲ ಎಂದು ಸರ್ಕಾರದ ವಿರುದ್ಧ ಅವರು ಹರಿಹಾಯ್ದರು. ದೇವೇಗೌಡರು ದಿಲ್ಲಿಯಲ್ಲಿ ಕಾವೇರಿ ಬಗ್ಗೆ ಮಾತನಾಡುತ್ತಿದ್ದರೆ, ಕೆಲವರು ಮೈತ್ರಿ ಬಗ್ಗೆ ಚರ್ಚೆ ಮಾಡಲು ಹೋಗಿದ್ದಾರೆ ಎಂದು ಅಪಪ್ರಚಾರ ನಡೆಸುತ್ತಿದ್ದಾರೆ. ದೇವೇಗೌಡರು ಹೋಗಿರುವುದು ಕಾವೇರಿ ಬಗ್ಗೆ ಮಾತನಾಡಲು ಅಲ್ಲ ಅಂತ ಮಂಡ್ಯದ ಮಹಾನಾಯಕರು ಒಬ್ಬರು ಹೇಳಿದ್ದಾರೆ. ಇವರೆಲ್ಲಾ ನಿನ್ನೆ ಮೊನ್ನೆ ಬಂದವರು. ದೇವೇಗೌಡರ ಕಮಿಟ್‌ಮೆಂಟ್ ಬಗ್ಗೆ ಇವರಿಗೇನು ಗೊತ್ತು ಎಂದು ಅವರು ಕಿಡಿಕಾರಿದರು.

ಕೆನಡಾಕ್ಕೆ ಭಾರತ ತಿರುಗೇಟು

ರಾಜತಾಂತ್ರಿಕ ಅಧಿಕಾರಿ ದೇಶ ತೊರೆಯುವಂತೆ ಸೂಚನೆ

ನವದೆಹಲಿ, ಸೆ.19- ಸಿಖ್ ಪ್ರತ್ಯೇಕತಾವಾದಿ ನಾಯಕ ಹತ್ಯೆಯಲ್ಲಿ ಭಾರತದ ಕೈವಾಡ ಇದೆ ಎಂದು ಆರೋಪಿಸಿ ಭಾರತೀಯ ರಾಜತಾಂತ್ರಿಕ ಅಧಿಕಾರಿಯನ್ನು ಹೊರ ಹಾಕಿದ ಕೆಲವೇ ಗಂಟೆಗಳ ನಂತರ ಕೆನಡಾಗೆ ಭಾರತ ತಿರುಗೇಟು ನೀಡಿದೆ. ಏಟಿಗೆ ಎದಿರೇಟು ಎಂಬಂತೆ ಭಾರತ ಸರ್ಕಾರ ಕೆನಡಾದ ಉನ್ನತ ರಾಜತಾಂತ್ರಿಕ ಅಧಿಕಾರಿಯನ್ನು ಉಚ್ಚಾಟಿಸಿದೆ.

ಭಾರತದಲ್ಲಿರುವ ಕೆನಡಾದ ಹೈಕಮಿಷನರ್ ಅವರನ್ನು ಇಂದು ಕರೆಸಿ, ಕೆನಡಾದ ಹಿರಿಯ ರಾಜತಾಂತ್ರಿಕರನ್ನು ಹೊರಹಾಕುವ ಭಾರತ ಸರ್ಕಾರದ ನಿರ್ಧಾರದ ಬಗ್ಗೆ ತಿಳಿಸಲಾಯಿತು.

ಈ ವೇಳೆ ಮುಂದಿನ ಐದು ದಿನದೊಳಗೆ ಭಾರತವನ್ನು ತೊರೆಯುವಂತೆ ಸಂಬಂಧಪಟ್ಟ ರಾಜತಾಂತ್ರಿಕರಿಗೆ ತಿಳಿಸಲಾಗಿದೆ ಎಂದು ವರದಿಯಾಗಿದೆ.

ಸೋಮವಾರ ಮಧ್ಯಾಹ್ನ ನಡೆದ ಸಂಸತ್ ಅಧಿವೇಶನದಲ್ಲಿ ಮಾತನಾಡಿದ್ದ ಕೆನಡಾದ ಪ್ರಧಾನಮಂತ್ರಿ ಜಸ್ಟಿನ್ ಟ್ರುಡೊ, ಖಾಲಿಸ್ತಾನಿ ಭಯೋತ್ಪಾದಕ ಹತ್ಯೆಯ ಹಿಂದೆ ಭಾರತೀಯ ಏಜೆಂಟರುಗಳ ಕೈವಾಡವಿದೆ ಎಂಬುವುದಕ್ಕೆ ನಮ್ಮ ಸರ್ಕಾರದ ಬಳಿ ಸಾಕ್ಷಿಗಳಿವೆ ಎಂದು ಹೇಳಿದ್ದರು.

ಜಸ್ಟಿನ್ ಟ್ರುಡೋ ಹೇಳಿಕೆ ಬೆನ್ನಲ್ಲೇ ಪ್ರತಿಕ್ರಿಯೆ ನೀಡಿದ್ದ ಕೆನಡಾದ ವಿದೇಶಾಂಗ ಸಚಿವೆ ಮೆಲಾನಿ ಜೋಲಿ, ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಗೆ ಸಂಬಂಧಿಸಿದಂತೆ ಸರ್ಕಾರ ಕಠಿಣ ನಿಲುವು ತಾಳಿದೆ. ಇಂದು ಭಾರತದ ಹಿರಿಯ ಗುಪ್ತಚರ ಅಧಿಕಾರಿಯನ್ನು ಕೆನಡಾದಿಂದ ಉಚ್ಚಾಟನೆ ಮಾಡಲಾಗಿದೆ. ಇವರು ಭಾರತದ ವಿದೇಶಿ ಗುಪ್ತಚರ ಸಂಸ್ಥೆ ರಿಸರ್ಚ್ ಅಂಡ್ ಅನಾಲಿಸಿಸ್ ವಿಂಗ್ (RAW)ನ ಮುಖ್ಯಸ್ಥರಾಗಿದ್ದರು ಎಂದು ಹೇಳಿದ್ದರು.

ಈ ಹೇಳಿಕೆಯನ್ನು ಭಾರತ ನಿರಾಕರಿಸಿದ್ದು, ಕೆನಡಾ ಸಂಸತ್ತಿನಲ್ಲಿ ಆ ರಾಷ್ಟ್ರದ ಪ್ರಧಾನಿ ನೀಡಿರುವ ಹೇಳಿಕೆಯನ್ನು ನೋಡಿದ್ದೇವೆ. ಕೆನಡಾ ಪ್ರಧಾನಿ ಹಾಗೂ ಕೆನಡಾ ರಾಷ್ಟ್ರದ ವಿದೇಶಾಂಗ ಸಚಿವರು ನೀಡಿರುವ ಹೇಳಿಕೆಯನ್ನು ತಿರಸ್ಕರಿಸುತ್ತಿದ್ದೇವೆ. ಕೆನಡಾದಲ್ಲಿ ಯಾವುದೇ ಹಿಂಸಾಚಾರದಲ್ಲಿ ಭಾರತ ಸರ್ಕಾರವು ಭಾಗಿಯಾಗಿದೆ ಎಂಬ ಆರೋಪಗಳು ಅಸಂಬದ್ಧವಾದದ್ದು. ನಾವು ಕಾನೂನಿನ ಆಳ್ವಿಕೆಗೆ ಬದ್ಧತೆ ಹೊಂದಿರುವ ಪ್ರಜಾಸತ್ತಾತ್ಮಕ ರಾಜಕೀಯ ಹೊಂದಿದ್ದೇವೆಂದು ತಿಳಿಸಿದೆ.

ಸ್ವಂತ ಉದ್ಯಮ ಸ್ಥಾಪಿಸಲು ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ಸೆ.19- ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ಇವರು ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸುವವರಿಗಾಗಿ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಅಕ್ಟೋಬರ್ ತಿಂಗಳಲ್ಲಿ ಹಮ್ಮಿಕೊಂಡಿದ್ದಾರೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18 ವರ್ಷದಿಂದ 40 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದವರಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನಾಂಕವಾಗಿದ್ದು, ಅರ್ಜಿಯನ್ನು ಸಯ್ಯಾಜಿರಾವ್ ರಸ್ತೆಯಲ್ಲಿನ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಯ್ಯಾಜಿರಾವ್ ರಸ್ತೆಯಲ್ಲಿನ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರದ ಜಂಟಿ ನಿರ್ದೇಶಕರ ಕಛೇರಿ ದೂ.ಸಂ 6361611136 /7353474649 ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯಾಚೇನಹಳ್ಳಿಯಲ್ಲಿ ವಿಶ್ವಕರ್ಮ ಜಯಂತೋತ್ಸವ ಆಚರಣೆ



ಮೈಸೂರು, ಸೆ.19- ಭಗವಾನ್ ವಿಶ್ವಕರ್ಮ ಜಯಂತೋತ್ಸವವನ್ನು ಯಾಚೇನಹಳ್ಳಿ ಗ್ರಾಮದಲ್ಲಿ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ವಿಶ್ವಕರ್ಮ ಕುಲಬಾಂಧವರು, ಸಂಘದ ಪದಾಧಿಕಾರಿಗಳು ಹಾಗೂ ನಿರ್ದೇಶಕರು ಸಂಘದ ಎಲ್ಲಾ ಸದಸ್ಯರು ಆಚರಿಸಿದರು.

ಗ್ರಾಮದ ಶ್ರೀ ಸಿದ್ದೇಶ್ವರಸ್ವಾಮಿ ದೇವಸ್ಥಾನದ ಆವರಣದಿಂದ ಶ್ರೀ ಭಗವಾನ್ ವಿಶ್ವಕರ್ಮ ಮತ್ತು ಶ್ರೀ ಕಾಳಿಕಾಂಬ ದೇವಿಯ ಕಳಸವನ್ನು ಪೂಜಿಸಿ ಕಲಾ ತಂಡದೊಂದಿಗೆ ರಥಯಾತ್ರೆಯ ಮೂಲಕ ಮೆರವಣಿಗೆ ನಡೆಸಲಾಯಿತು.

ನಂತರ ನಡೆದ ಸಭಾ ಕಾರ್ಯಕ್ರಮದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಗಣ್ಯರಿಂದ ಪ್ರತಿಭಾ ಪುರಸ್ಕಾರ ನೀಡಲಾಯಿತು. ಈ ಕಾರ್ಯಕ್ರಮಕ್ಕೆ ಯಾಚೇನಹಳ್ಳಿ ಗ್ರಾಮದ ಎಲ್ಲಾ ವಿಶ್ವಕರ್ಮಕುಲ ಬಾಂಧವರು ಗ್ರಾಮಸ್ಥರು ಆಗಮಿಸಿದ್ದರು.

ಇದೆ ವೇಳೆ ಕಾರ್ಯಕ್ರಮದಲ್ಲಿ ಸಮುದಾಯದ ಅಧ್ಯಕ್ಷ ವೈ.ಕೆ ವೇಣುಗೋಪಾಲ್, ಗೌರವಾಧ್ಯಕ್ಷ ಕೆಂಪಾಚಾರ್, ಉಪಾಧ್ಯಕ್ಷ ಸಿದ್ದಪ್ಪಾಜಿ ಹಾಗೂ ನಿರ್ದೇಶಕ ರಾಜಣ್ಣ ಸೇರಿದಂತೆ ಹಲವು ಗಣ್ಯರು ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

ಮೈಸೂರು ಪಾಲಿಕೆಯಲ್ಲಿ ಐದು ತಿಂಗಳಲ್ಲಿ 135 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹಿಸಿದ ಪಾಲಿಕೆ



ಮೈಸೂರು, ಸೆ.19(ಆರ್‌ಕೆ)-ಪ್ರಸಕ್ತ ಸಾಲಿನಲ್ಲಿ ಕಳೆದ ಏಪ್ರಿಲ್ 1ರಿಂದ ಸೆಪ್ಟೆಂಬರ್ 19ರವರೆಗೆ ಕೇವಲ 5 ತಿಂಗಳಲ್ಲಿ ಮೈಸೂರು ಮಹಾನಗರ ಪಾಲಿಕೆಯು 135 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹಿಸಿದೆ.

ಪಾಲಿಕೆಯ ಎಲ್ಲಾ 9 ವಲಯ ಕಚೇರಿಗಳ ವಲಯಾಧಿಕಾರಿಗಳ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿರುವ ಕಂದಾಯಾಧಿಕಾರಿಗಳು, ರೆವಿನ್ಯೂ ಇನ್ಸ್‌ಪೆಕ್ಟರ್‌ಗಳು, ಸಿಬ್ಬಂದಿ ನೆರವಿನೊಂದಿಗೆ 5 ತಿಂಗಳ ಅವಧಿಯಲ್ಲಿ ಒಟ್ಟು 135 ಕೋಟಿ, 36,02,419 ರೂ.ಗಳ ಆಸ್ತಿ ತೆರಿಗೆಯನ್ನು ಸಂಗ್ರಹಿಸುವಲ್ಲಿ ಯಶಸ್ವಿಯಾಗಿದ್ದಾರೆ.

ವಲಯ-1ರ ವ್ಯಾಪ್ತಿಯಲ್ಲಿ 13,607 ಆಸ್ತಿ ಮಾಲೀಕರಿಂದ 16,66,85,457 ರೂ. ವಸೂಲಾಗಿದ್ದು, ಆನ್‌ಲೈನ್ ಮೂಲಕ 4,55,88,679 ರೂ., ಕರ್ನಾಟಕ-ಒನ್‌ನಲ್ಲಿ 82,28,199 ರೂ. ಹಾಗೂ ಬ್ಯಾಂಕ್ ಕೌಂಟರ್‌ನಲ್ಲಿ 11,28,68,579 ರೂ. ಪಾವತಿಯಾಗಿದೆ. ವಲಯ ಕಚೇರಿ-2ರಲ್ಲಿ 17,64,67,528 ರೂ., ವಲಯ ಕಚೇರಿ-3ರಲ್ಲಿ ಆನ್‌ಲೈನ್‌ನಲ್ಲಿ 8,04,76,514 ರೂ., ಕರ್ನಾಟಕ-ಒನ್‌ನಲ್ಲಿ 3,53,59,979 ರೂ., ಬ್ಯಾಂಕ್ ಕೌಂಟರ್‌ನಲ್ಲಿ 11,11,25,444 ರೂ. ಸೇರಿ ಒಟ್ಟು 22,80,71,912 ರೂ. ಆಸ್ತಿ ತೆರಿಗೆ ಸಂಗ್ರಹಿಸಲಾಗಿದೆ. ವಲಯ ಕಚೇರಿ-4ರಲ್ಲಿ 19,58,22,729 ರೂ., ವಲಯ ಕಚೇರಿ-5ರಲ್ಲಿ 12,18,50,208 ರೂ., ವಲಯ ಕಚೇರಿ-6ರಲ್ಲಿ 20,53,51,120 ರೂ. ವಲಯ ಕಚೇರಿ-7ರಲ್ಲಿ 6,90,18,097 ರೂ., ವಲಯ ಕಚೇರಿ-8ರಲ್ಲಿ 6,93,09,598 ರೂ. ಹಾಗೂ ವಲಯ ಕಚೇರಿ-9ರಲ್ಲಿ 16,509 ಆಸ್ತಿಗಳಿಂದ ಒಟ್ಟು 11,98,40,000 ರೂ. ತೆರಿಗೆ ಸಂಗ್ರಹಿಸಲಾಗಿದೆ.

ಈ ಕುರಿತಂತೆ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿರುವ ಮೈಸೂರು ಮಹಾನಗರ ಪಾಲಿಕೆ ಉಪ ಆಯುಕ್ತ (ಕಂದಾಯ) ದಾಸೇಗೌಡ, ಪ್ರಸಕ್ತ ಸಾಲಿನಲ್ಲಿ 162 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹಿಸುವ ಗುರಿ ಹೊಂದಿದ್ದೆವು. ಆದರೆ, ಕೇವಲ 5 ತಿಂಗಳಲ್ಲೇ 135.36 ಕೋಟಿ ರೂ. ಸಂಗ್ರಹಿಸಲಾಗಿದ್ದು, ಸುಮಾರು ಶೇ.80ರಷ್ಟು ಸಾಧನೆಯಾಗಿದೆ ಎಂದರು.

ಹಳೇ ಆಸ್ತಿಗಳ ಬಾಕಿ ತೆರಿಗೆ ಜೊತೆಗೆ ಸೇರ್ಪಡೆಯಾಗಿರುವ ಹೊಸ ಆಸ್ತಿಗಳಿಂದ ತೆರಿಗೆ ಸಂಗ್ರಹಿಸಲು ನಮ್ಮ ವಲಯಾಧಿಕಾರಿಗಳು, ಅಭಿವೃದ್ಧಿ ಅಧಿಕಾರಿಗಳು, ಕಂದಾಯಾಧಿಕಾರಿಗಳು, ಸಹಾಯಕ ಕಂದಾಯಾಧಿಕಾರಿಗಳು, ರೆವಿನ್ಯೂ ಇನ್ಸ್‌ಪೆಕ್ಟರ್‌ಗಳು ಹಾಗೂ ಸಿಬ್ಬಂದಿ ಈ ಕಾರ್ಯದಲ್ಲಿ ನಿರತರಾಗಿರುವುದರಿಂದ ಇನ್ನೊಂದು ತಿಂಗಳಲ್ಲಿ ಗುರಿ ಮುಟ್ಟುವ ಸಾಧ್ಯತೆ ಇದೆ ಎಂದು ಅವರು ನುಡಿದರು.

ಗಣೇಶೋತ್ಸವ ಏಕತೆಯ ಪ್ರತೀಕ



ಮೈಸೂರು, ಸೆ. 19- ಮೈಸೂರಿನ ಮಂಡಿ ಮೊಹಲ್ಲಾದ ರುಕ್ಮಿಣಿ ಗುಣಬಾಯ್ ಸಮುದಾಯ ಭವನದಲ್ಲಿ ಜೀವಧಾರ ರಕ್ತ ನಿಧಿ ಕೇಂದ್ರ ಹಾಗೂ ಮಂಡಿ ಮೊಹಲ್ಲಾ ಹಿತರಕ್ಷಣಾ ವೇದಿಕೆ ವತಿಯಿಂದ ಗೌರಿ ಗಣೇಶ ಹಬ್ಬ ಹಾಗೂ ಪ್ರಧಾನಿ ನರೇಂದ್ರ ಮೋದಿ 73ನೇ ಜನುಮದಿನದ ಹಿನ್ನೆಲೆಯಲ್ಲಿ ಮೊಹಲ್ಲಾದ 400 ಮಹಿಳೆಯರಿಗೆ ಸೀರೆ, ಕುಂಕುಮ, ಅರಿಶಿನ, ಬಳೆ ಮತ್ತು ಬಾಗಿನ ಅರ್ಪಿಸಲಾಯಿತು.

ಈ ವೇಳೆ ಆರ್‌ಎಸ್‌ಎಸ್‌ನ ಪ್ರಾಂತ ಕಾರ್ಯಕಾರಿ ಸದಸ್ಯ ಮಾ ವೆಂಕಟರಾಮ್ ಮಾತನಾಡಿ, ಭಕ್ತಿ ಹಾಗೂ ಭಾವೈಕ್ಯತೆಯ ಹಿನ್ನೆಲೆಯಲ್ಲಿ ಬಾಲಗಂಗಾಧರ ತಿಲಕರ ಮುಂದಾಳತ್ವದಲ್ಲಿ ಆರಂಭವಾದ ಗಣೇಶ ಹಬ್ಬವು ಇಂದು ನಮ್ಮೆಲ್ಲರ ಅಚ್ಚುಮೆಚ್ಚಿನ ಹಬ್ಬವಾಗಿದೆ. ಚದುರಿ ಹೋಗಿದ್ದ ಅಂದಿನ ಅನಕ್ಷರಸ್ಥ ಸಮಾಜದಲ್ಲಿ ಸ್ವಾತಂತ್ರ್ಯ ಹೋರಾಟಕ್ಕಾಗಿ ಜನರನ್ನು ಒಂದೇ ವೇದಿಕೆಯಡಿ ಏಕೀಕರಣಗೊಳಿಸಲು ತಿಲಕರು ಆಯ್ಕೆ ಮಾಡಿದ್ದೇ ಈ ಗಣೇಶ ಹಬ್ಬ. ತಿಲಕರ ಕರೆಗೆ ಜಾತಿ-ಮತ ಭೇದವಿಲ್ಲದೆ ಬಹುಬೇಗನೆ ಸ್ಪಂದಿಸಿದರು. ದೇಶಾದ್ಯಂತ ಭಕ್ತಿಯ ಪ್ರವಾಹ ಹರಿಯುವುದರೊಂದಿಗೆ ಬ್ರಿಟಿಷರಿಗೆ ನಮ್ಮ ಏಕತೆಯ ಬಿಸಿ ಮುಟ್ಟಿಸಿತು ಎಂದರು. ಜಾತಿ ಜಾತಿಗಳ ನಡುವೆ ಅಂತರ ತುಂಬಲು, ಅವರ ನಡುವೆ ಕೆಳಹಂತದಲ್ಲಿ ಐಕ್ಯತೆ ಮೂಡಿಸುವುದೇ ಗಣೇಶೋತ್ಸವ, ಇದೊಂದು ರಾಷ್ಟ್ರೀಯ ಹಬ್ಬವಾಗಿದೆ. ಗಣೇಶ ಪ್ರತಿಯೊಬ್ಬರ ಪಾಲಿಗೂ ದೇವಸ್ವರೂಪಿಯಾಗಿದ್ದು, ದೇಶಾದ್ಯಂತ ಜನತೆ ವಿಜೃಂಭಣೆಯಿಂದ ಶಾಂತಿಯುತವಾಗಿ ಆಚರಿಸಬೇಕು ಎಂದರು.

ಮಾಜಿ ಶಾಸಕ ಎಲ್ ನಾಗೇಂದ್ರ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮೃಗಾಲಯ ಮಾಜಿ ಸದಸ್ಯರಾದ ಜ್ಯೋತಿರೇಚಣ್ಣ, ಬಿಜೆಪಿ ಮಹಿಳಾ ಮೋರ್ಚಾ, ಪ್ರಧಾನ ಕಾರ್ಯದರ್ಶಿ ರೇಣುಕಾ ರಾಜ್, 24ನೇ ವಾರ್ಡಿನ ಅಧ್ಯಕ್ಷ ಕೇಬಲ್ ವಿಜಿ, ಹೇಮಾ ಸಂತೋಷ್, ಉಮೇಶ್, ನಾಗಮಣಿ, ರಶ್ಮಿ, ಸೂರಜ್, ಸದಾಶಿವ್, ಚಂದ್ರು, ಮಹದೇವ, ಸುರೇಶ್ ರಾವ್, ಕೇಶವ್, ವಿಜಯ್ ಕುಮಾರ್ ಹಾಗೂ ಇನ್ನಿತರರು ಭಾಗವಹಿಸಿದ್ದರು.

ಶ್ರೀ ಶಿವರಾತ್ರಿ ರಾಜೇಂದ್ರ ಶ್ರೀಗಳು ಮಹಾನ್ ಸಂತ



ತಿ.ನರಸೀಪುರ, ಸೆ.19– ಸುತ್ತೂರು ಮಠದ ಲಿಂಗೈಕ್ಯ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಲಕ್ಷಾಂತರ ಬಡ ವಿದ್ಯಾರ್ಥಿಗಳಿಗೆ ಅನ್ನ, ಅಕ್ಷರ ಹಾಗೂ ಆರೋಗ್ಯ ಕರುಣಿಸಿದ ಮಹಾನ್ ಸಂತ ಎಂದು ಅಪರ ಜಿಲ್ಲಾಧಿಕಾರಿ ಸಿ.ಶಿವರಾಜು ಬಣ್ಣಿಸಿದರು.

ಪಟ್ಟಣದ ಜೆಎಸ್ಎಸ್ ಸಭಾ ಭವನದಲ್ಲಿ ಮೈಸೂರು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಹಾಗೂ ತಾಲೂಕು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ಶಿವರಾತ್ರಿ ರಾಜೇಂದ್ರ ಶ್ರೀಗಳ 108ನೇ ಜಯಂತಿ ಅಂಗವಾಗಿ ಏರ್ಪಡಿಸಿದ್ದ ಸಂಸ್ಥಾಪನಾ ದಿನ ಹಾಗೂ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ತಾಲೂಕಿನ ಪ್ರತಿಭಾನ್ವಿತ ವೀರಶೈವ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಿ ಅವರು ಮಾತನಾಡಿದರು.

ಯಾವುದೇ ಸೌಲಭ್ಯಗಳಿಲ್ಲದ ಕಾಲದಲ್ಲೇ ಸಾವಿರಾರು ವಿದ್ಯಾರ್ಥಿಗಳಿಗೆ ಆಶ್ರಯ, ಅನ್ನ ನೀಡಿ ಅವರನ್ನು ವಿದ್ಯಾವಂತರನ್ನಾಗಿ ಮಾಡಿದರು. ಯಾವುದೇ ಇರುವಿಕೆಯನ್ನು ತೋರಿಸದೆ ನಿಷ್ಠೆಯಿಂದ ಕಾಯಕ ಮಾಡಿ ಸಂಸ್ಥೆಯನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ದರು. ಎಂದರು

ಅಧ್ಯಕ್ಷತೆ ವಹಿಸಿದ್ದ ಡಾ.ಹೆಳವರಹುಂಡಿ ಸಿದ್ದಪ್ಪ ಮಾತನಾಡಿ, ರಾಜೇಂದ್ರ ಶ್ರೀಗಳು ಸೂರ್ಯನಿದ್ದಂತೆ, ಯಾವುದಕ್ಕೂ ಕಾಯದೆ ತಮ್ಮ ದಿನನಿತ್ಯದ ಕಾಯಕವನ್ನು ಮಾಡುತ್ತಿದ್ದರು. ಆದ್ದರಿಂದಲೇ ಸಿದ್ಧಗಂಗಾ ಮಠದ ಶ್ರೀ ಶಿವಕುಮಾರ ಸ್ವಾಮೀಜಿ ರಾಜೇಂದ್ರ ಶ್ರೀ ಅವರನ್ನು ಸದ್ದು ಗದ್ದಲವಿಲ್ಲದ ಮೌನ ಕ್ರಾಂತಿಯ ಸಂತ ಎಂದು ಬಣ್ಣಿಸಿದ್ದರು ಎಂದರು.

ವಾಟಾಳು ಸೂರ್ಯ ಸಿಂಹಾಸನ ಮಠದ ಶ್ರೀ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿದರು. ಸಮಾರಂಭವನ್ನು ಲೋಕಸೇವಾ ಆಯೋಗದ ಮಾಜಿ ಅಧ್ಯಕ್ಷ ಷಡಕ್ಷರಸ್ವಾಮಿ ಉದ್ಘಾಟಿಸಿದರು. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಸಿ.ಸೋಮಶೇಖರ್ ನುಡಿ ನಮನ ಸಲ್ಲಿಸಿದರು. ರಾಜೇಂದ್ರ ಶ್ರೀಗಳ ಕುರಿತು ಚಿ.ಅಕ್ಷಯ್ ಮಹೇಂದ್ರ ಕಿರು ನುಡಿ ನಮನ ಸಲ್ಲಿಸಿದರು.

ಗಣ್ಯರು ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ, ಸ್ಮರಣಿಕೆ ನೀಡಿ ಸನ್ಮಾನಿಸಿದರು.

ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಕಾರ್ಯಕಾರಿ ಸಮಿತಿ ಸದಸ್ಯ ಸಿದ್ದಲಿಂಗಸ್ವಾಮಿ, ಶರಣ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ತೊಂಟೇಶ್, ತಿ.ನರಸೀಪುರ ವೀರಶೈವ ಸೇವಾ ಸಮಾಜದ ಅಧ್ಯಕ್ಷ ಎಸ್. ಶಾಂತರಾಜು, ತಾಲೂಕು ಬಸವ ಕೇಂದ್ರದ ಅಧ್ಯಕ್ಷ ಪರಮೇಶ ಪಟೇಲ್ ಹಲವಾರ, ವಕೀಲ ಕೆ.ಬಿ.ಪರಮೇಶ್, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಚಂದ್ರಶೇಖರ್, ಹಿರಿಯ ಮುಖಂಡರಾದ ಸೀಹಳ್ಳಿ ಗುರುಮೂರ್ತಿ, ಎಸ್.ಸುಧಾಕರ್, ಪ್ರಕಾಶ್, ಮಲ್ಲಣ್ಣ ಹಾಗೂ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳಾದ ಓಂಕಾರಸ್ವಾಮಿ, ಶಿವಕುಮಾರ್, ಉಪನ್ಯಾಸಕ ಮೂಗೂರು ಕುಮಾರಸ್ವಾಮಿ, ಹೋಟಲ್ ರಾಜಣ್ಣ, ಜೆಎಸ್ಎಸ್ ಯೋಗೇಶ್.ಎನ್.ಮೂರ್ತಿ, ಆಡಿಟರ್ ಮಂಜು, ಮಲ್ಲೇಶ್, ಎನ್.ಎಸ್.ಜ್ಞಾನೇಂದ್ರ ಮೂರ್ತಿ, ಬಿ.ಜಿ.ರಾಜೇಶ್, ನಾಗೇಶ್, ಸಿ.ಬಿ.ಹುಂಡಿ ಸಿದ್ದು, ದಯಾನಂದ ಪಟೇಲ್ ಮತ್ತಿತರರು ಹಾಜರಿದ್ದರು.

ಸೆ.24 ರಂದು ವಾರ್ಷಿಕ ಮಹಾಸಭೆ

ಹುಣಸೂರು, ಸೆ.19– ಹುಣಸೂರಿನ ಮಹಾಭೋದಿ ಡಾ.ಬಿ.ಆರ್.ಅಂಬೇಡ್ಕರ್ ವಿವಿಧೋದ್ದೇಶ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯು ಸೆ.24ರಂದು ನಗರದ ಹಳೆ ಬಸ್ ನಿಲ್ದಾಣದ ಎದುರಿನಲ್ಲಿರುವ ಸಂಘದಲ್ಲಿ ನಡೆಯಲಿದೆ ಎಂದು ಸಂಘದ ಕಾರ್ಯದರ್ಶಿ ಶ್ರೀಮತಿ ಶಶಿಕಲಾ.ಎಸ್. ತಿಳಿಸಿದ್ದಾರೆ.

ಅಂದು ಬೆಳಗ್ಗೆ 11 ಗಂಟೆಗೆ ಸಂಘದ ಅಧ್ಯಕ್ಷರಾದ ಎನ್.ಕೃಷ್ಣ ಅಧ್ಯಕ್ಷತೆಯಲ್ಲಿ ನಡೆಯುವ ಮಹಾಸಭೆಯಲ್ಲಿ ವಾರ್ಷಿಕ ಲೆಕ್ಕ–ಪತ್ರ ಮಂಡನೆ, ಆಯ–ವ್ಯಯ ಪಟ್ಟಿ ಮಂಜೂರು ಮಾಡುವುದು ಸದಸ್ಯರಿಂದ ಬಂದಿರುವ ವಿಚಾರಗಳ ಚರ್ಚೆ, ಅಧ್ಯಕ್ಷರ ಅಪ್ಪಣೆ ಮೇರೆಗೆ ಮತ್ತಿತರ ವಿಷಯಗಳನ್ನು ಚರ್ಚಿಸಲಾಗುವುದು ಎಂದು ಅವರು ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಿಕ್ಷಣ ಕ್ಷೇತ್ರ ದಾರಿ ತಪ್ಪಿದರೆ ಮತ್ತೆ ಸರಿಪಡಿಸಲಾಗದು

ಮೈಸೂರು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರ ಅಭಿಪ್ರಾಯ



ಹುಣಸೂರು, ಸೆ.19– ಸಮಾಜದಲ್ಲಿ ಯಾವುದೇ ಕ್ಷೇತ್ರ ಕಲುಷಿತಗೊಂಡರೂ ಸರಿಪಡಿಸಿಕೊಳ್ಳಬಹುದು. ಆದರೆ ಶಿಕ್ಷಣ ಕ್ಷೇತ್ರದಲ್ಲಿ ಏರುಪೇರಾದರೆ ಅಡಿಪಾಯ ಕಸಿದು ಬೀಳುತ್ತದೆ ಎಂದು ಮೈಸೂರು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ, ಸಾಹಿತಿ ಡಾ.ಮಾಧುಪ್ರಸಾದ್ ಆತಂಕ ವ್ಯಕ್ತಪಡಿಸಿದರು.

ನಗರದ ರೋಟರಿ ಸಭಾಂಗಣದಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆಯ ಸಮಾರಂಭದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ಬಳಿಕ ಮಾತನಾಡಿ, ವಿಜ್ಞಾನ ಮತ್ತು ಇಂಜಿನಿಯರ್ ಕ್ಷೇತ್ರದಲ್ಲಿ ಏರುಪೇರುಗಳು ಕಂಡು ಬಂದರೆ ಸರಿಪಡಿಸಬಹುದು. ಆದರೆ ಶಿಕ್ಷಣ ಕ್ಷೇತ್ರ ಒಮ್ಮೆ ದಾರಿ ತಪ್ಪಿದರೆ ಮತ್ತೆ ಸರಿಪಡಿಸುವುದು ಅಷ್ಟು ಸುಲಭದ ಮಾತಲ್ಲ. ಶಿಕ್ಷಣ ಕ್ಷೇತ್ರ ಪವಿತ್ರವಾದುದ್ದು, ಸಮಾಜ ಕಟ್ಟುವ ಮತ್ತು ಉತ್ತಮ ಪ್ರಜೆಯನ್ನಾಗಿಸುವುದು ಶಿಕ್ಷಕರ ಮೇಲಿದೆ ಎಂದರು.

ರೋಟರಿ ವಿದ್ಯಾಸಂಸ್ಥೆ ನಿಕಟಪೂರ್ವ ಅಧ್ಯಕ್ಷ ಡಾ.ವೃಷಬೇಂದ್ರಸ್ವಾಮಿ ಹಿರಿಯ ಶಿಕ್ಷಕರಿಗೆ ಸನ್ಮಾನಿಸಿ ಮಾತನಾಡಿ, ಸಂಸ್ಥೆಯು ತಾಲೂಕಿನಲ್ಲಿ ಉತ್ತಮ ಫಲಿತಾಂಶ ನೀಡುವ ಜತೆಗೆ ಯಾವುದೇ ಡೊನೇಷನ್ ಹಾವಳಿ ಇಲ್ಲದೆ, ಕನಿಷ್ಠ ದರದ ಶುಲ್ಕ ಪಡೆದು ಸೇವೆ ನೀಡುತ್ತಿದೆ. ಶಿಕ್ಷಕರಿಗೂ ಸೇವಾ ಭದ್ರತೆಯೊಂದಿಗೆ ಸಕಾಲದಲ್ಲಿ ಎಲ್ಲಾ ಸೌಲಭ್ಯಗಳನ್ನು ನೀಡುತ್ತಾ ಬಂದಿದೆ ಎಂದರು.

ರೋಟರಿ ವಿದ್ಯಾ ಸಂಸ್ಥೆ ಅಧ್ಯಕ್ಷ ಡಾ.ಚಂದ್ರನಂದನ್ ಮಾತನಾಡಿ, ಶಿಕ್ಷಕರು ಪಾಠ ಮಾಡಿ ಪರೀಕ್ಷೆ ಬರೆದರೆ ಮುಗಿಯೊದಿಲ್ಲ, ವಿದ್ಯಾರ್ಥಿಗಳನ್ನು ತಿದ್ದಿ ತೀಡಿ ಸಮಾಜದ ಜ್ಞಾನವನ್ನು ತುಂಬಿ ನಡೆ, ನುಡಿ ಮತ್ತು ಸಂಸ್ಕೃತಿಯನ್ನು ಕಲಿಸುವ ಮೂಲಕ ಸಮಾಜದಲ್ಲಿ ಉತ್ತಮ ಪ್ರಜೆ ಮಾಡುವ ಹೊಣೆಗಾರಿಕೆ ತಂದೆ–ತಾಯಿ ಅಷ್ಟೇ ಶಿಕ್ಷಕರುಗಳಿಗೆ ಇರುತ್ತದೆ ಎಂದರು. ರೋಟರಿ ಕ್ಲಬ್ ಅಧ್ಯಕ್ಷ ಎಸ್.ಚನ್ನಕೇಶವ, ರೋಟರಿ ವಿದ್ಯಾಸಂಸ್ಥೆ ಉಪಾಧ್ಯಕ್ಷ ಆರ್.ಆನಂದ್ ಮಾತನಾಡಿದರು.

ಹಿರಿಯ ಶಿಕ್ಷಕರಿಗೆ ಸನ್ಮಾನ: ರೋಟರಿ ವಿದ್ಯಾಸಂಸ್ಥೆಯಲ್ಲಿ ಹಿರಿಯ ಶಿಕ್ಷಕರಾದ ಪ್ರೌಢಶಾಲೆ ವಿಭಾಗದಿಂದ ಶಮೀನಾ ಪಾರ್ವೀಜ್, ಪ್ರಾಥಮಿಕ ವಿಭಾಗದಿಂದ ಶರ್ಮಿಳಾ ಅವರನ್ನು ರೋಟರಿ ಸಂಸ್ಥೆ ವತಿಯಿಂದ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಮೈಸೂರು ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ, ಸಾಹಿತಿ ಡಾ.ಮಾಧುಪ್ರಸಾದ್ ಅವರನ್ನು ಕೂಡ ಸನ್ಮಾನಿಸಲಾಯಿತು. ಶಿಕ್ಷಕರು ಕುಣಿದು ಕುಪ್ಪಳಿಸಿ, ವಿದ್ಯಾರ್ಥಿಗಳನ್ನು ನಗೆಗಡಲಿನಲ್ಲಿ ತೇಲಿಸಿದರು.

ಶಿಕ್ಷಕರಿಗೆ ಬಹುಮಾನ ವಿತರಣೆ: ಶಾಲೆಯ ವಿದ್ಯಾರ್ಥಿಗಳು ತಮ್ಮ ಶಿಕ್ಷಕರಿಗೆ ಕ್ರೀಡಾಕೂಟವನ್ನು ಏರ್ಪಡಿಸಿ, ವಿಜೇತರಾದವರಿಗೆ ವಿಶೇಷ ಬಹುಮಾನಗಳನ್ನು ಉಡುಗೊರೆಯಾಗಿ ನೀಡಲಾಯಿತು. ವಿದ್ಯಾಸಂಸ್ಥೆ ವತಿಯಿಂದ ವಿಶೇಷ ಉಡುಗೊರೆ ಮತ್ತು ಭೋಜನ ವ್ಯವಸ್ಥೆ ಮಾಡಲಾಗಿತ್ತು. ರೋಟರಿ ಜಿಲ್ಲಾ ಚೆರ್ಮೆನ್ ಧರ್ಮಾಪುರನಾರಾಯಣ್, ಸದಸ್ಯರಾದ ಸರೋಜಿನಿ ವಿಕ್ರಂ, ಮುಖ್ಯ ಶಿಕ್ಷಕಿ ದೀಪಾ ಎಲ್., ರೋಟರಿ ಇನ್ನರ್ ವೀಲ್ಸ್ ಅಧ್ಯಕ್ಷೆ ಸ್ಮಿತಾ ದಯಾನಂದ್, ಕಾರ್ಯದರ್ಶಿ ಜಯಲಕ್ಷ್ಮೀ, ಸದಸ್ಯರಾದ ಭಾಗ್ಯ, ಜ್ಯೋತಿ, ಯಶೋಧ ಹಾಜರಿದ್ದರು.

ನಿಂತಿದ್ದ ಬೈಕ್‌ಗೆ ಮತ್ತೊಂದು ಬೈಕ್ ಡಿಕ್ಕಿ

ಅಣ್ಣ ಸಾವು, ತಂಗಿಗೆ ತೀವ್ರ ಗಾಯ


ಮೃತ ಯಶವಂತ

ಹೆಚ್.ಡಿ.ಕೋಟೆ, ಸೆ.19– ವೇಗವಾಗಿ ಬಂದ ಬೈಕೊಂದು ಡಿಕ್ಕಿ ಹೊಡೆದ ಪರಿಣಾಮ ಅಣ್ಣ ಸಾವನ್ನಪ್ಪಿ, ತಂಗಿ ತೀವ್ರವಾಗಿ ಗಾಯಗೊಂಡಿರುವ ಘಟನೆ ಮೈಸೂರು–ಮಾನಂದವಾಡಿ ಮುಖ್ಯ ರಸ್ತೆ ಹ್ಯಾಂಡ್‌ಪೋಸ್ಟ್ ಬಳಿ ಸಂಭವಿಸಿದೆ.

ತಾಲ್ಲೂಕಿನ ಹ್ಯಾಂಡ್‌ಪೋಸ್ಟ್–ಯರಳ್ಳಿ ನಿವಾಸಿ ಮಂಜುನಾಥ್ ಅವರ ಪುತ್ರ ಯಶವಂತ(19) ಮೃತಪಟ್ಟ ದುರ್ದೈವಿಯಾಗಿದ್ದು, ತೀವ್ರವಾಗಿ ಗಾಯಗೊಂಡಿರುವ ಈತನ ತಂಗಿ ಯಶಸ್ವಿನಿಯನ್ನು ಆಸ್ಪತ್ರೆಗೆ ಸೇರಿಸಲಾಗಿದೆ. ಅಪಘಾತಕ್ಕೆ ಕಾರಣವಾದ ಬೈಕ್ ಸವಾರರಾದ ವೆಂಕಟೇಶ್ ಮತ್ತು ಶಶಿ ಅವರು ಸಹ ತೀವ್ರವಾಗಿ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸೋಮವಾರ ರಾತ್ರಿ 7.30ರ ಸಮಯದಲ್ಲಿ ಯಶ್ವಂತ್ ಹಾಗೂ ಅವರ ತಂಗಿ ಯಶಸ್ವಿನಿ ಇಬ್ಬರು ಬೈಕ್‌ನಲ್ಲಿ ಶಿರಮಹಳ್ಳಿ ಗ್ರಾಮಕ್ಕೆ ಅವರ ಅಜ್ಜಿ ಮನೆಗೆ ಗೌರಿ–ಗಣೇಶ ಹಬ್ಬಕ್ಕೆ ಎಂದು ತೆರಳುತ್ತಿದ್ದರು. ಮೈಸೂರು–ಮಾನಂದವಾಡಿ ಮುಖ್ಯ ರಸ್ತೆಯ ಹ್ಯಾಂಡ್‌ಪೋಸ್ಟ್‌ನ ಕೂಲ್ಯಾಂಡ್ ಹೋಟೆಲ್ ಬಳಿ ತನ್ನ ತಂಗಿಯ ಜೊತೆ ಬೈಕ್ ನಿಲ್ಲಿಸಿಕೊಂಡಿದ್ದ ಸಂದರ್ಭದಲ್ಲಿ ಅಂತರಸಂತೆ ಕಡೆಯಿಂದ ವೇಗವಾಗಿ ಬಂದ ಬೈಕ್ ಡಿಕ್ಕಿ ಹೊಡೆಯಿತು.

ಇದರಿಂದ ತೀವ್ರವಾಗಿ ಗಾಯಗೊಂಡ ಯಶ್ವಂತ್ ಹಾಗೂ ಅವರ ತಂಗಿ ಯಶಸ್ವಿನಿ ರಕ್ತಸ್ರಾವದಲ್ಲಿ ಬಿದ್ದಿದ್ದಾರೆ. 108 ಆಂಬುಲೆನ್ಸ್ ಮೂಲಕ ಇಬ್ಬರನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಯಿತು. ಇಬ್ಬರಿಗೂ ತುರ್ತು ಚಿಕಿತ್ಸೆ ನೀಡಿ ಮೈಸೂರಿಗೆ ಕಳುಹಿಸಲಾಯಿತು, ಅಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಯಶವಂತ್ ನಿಧನರಾಗಿದ್ದಾರೆ. ತಂಗಿ ಯಶಸ್ವಿನಿಗೆ ತಲೆಭಾಗಕ್ಕೆ ಜಾಸ್ತಿ ಪೆಟ್ಟು ಬಿದ್ದು ಕಾಲು ಮುರಿದುಕೊಂಡು ಚಿಕಿತ್ಸೆ ಪಡೆಯುತ್ತಿದ್ದಾರೆ.

ನಿಂತಿದ್ದ ಬೈಕಿಗೆ ಗುದ್ದಿದ ವೆಂಕಟೇಶ್, ಶಶಿ ಇಬ್ಬರಿಗೂ ಕಾಲು ಹಾಗೂ ತಲೆಭಾಗಕ್ಕೆ ಪೆಟ್ಟು ಬಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ಮೃತ ಯಶವಂತ್ ಅವರ ಅಂತ್ಯಕ್ರಿಯೆಯನ್ನು ಹ್ಯಾಂಡ್‌ಪೋಸ್ಟ್ ಯರಹಳ್ಳಿ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬ ವರ್ಗ ತಿಳಿಸಿದೆ. ಹೆಚ್.ಡಿ.ಕೋಟೆ ಪಟ್ಟಣದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಹಿರಿಕ್ಯಾತನಹಳ್ಳಿ: ಬೈಕ್ ಡಿಕ್ಕಿ ಹೊಡೆದು ಪದವಿ ವಿದ್ಯಾರ್ಥಿ ಸಾವು



ಹಿರೀಕ್ಯಾತನಹಳ್ಳಿ, ಸೆ.19– ಎರಡು ಬೈಕ್‌ಗಳ ನಡುವೆ ಡಿಕ್ಕಿ ಸಂಭವಿಸಿ ಪದವಿ ವಿದ್ಯಾರ್ಥಿ ಸಾವನ್ನಪ್ಪಿರುವ ಘಟನೆ ಹುಣಸೂರು ತಾಲೂಕಿನ ರಾಮನಾಥಪುರ–ತೆರಕಣಾಂಬಿ ರಾಜ್ಯ ಹೆದ್ದಾರಿ ರಸ್ತೆಯ ಹಿರೀಕ್ಯಾತನಹಳ್ಳಿ ಗ್ರಾಮದಲ್ಲಿ ಜರುಗಿದೆ ಹಿರೀಕ್ಯಾತನಹಳ್ಳಿ ಗ್ರಾಮದ ಮಹದೇವ್ ಎಂಬುವರ ಪುತ್ರ ಹರ್ಷ (20) ಮೃತ ದುರ್ದೈವಿ.

ಯುವಕ ಹರ್ಷ ಹುಣಸೂರಿನ ಸಂತ ಜೋಸೆಫರ ಕಾಲೇಜಿನಲ್ಲಿ ಅಂತಿಮ ವರ್ಷದ ಬಿಎ ವ್ಯಾಸಂಗ ಮಾಡುತ್ತಿದ್ದ. ಗೌರಿ–ಗಣೇಶ ಹಬ್ಬದ ಪ್ರಯುಕ್ತ ಯುವಕರೆಲ್ಲ ಸೇರಿ ಗಣೇಶನ ವಿಗ್ರಹ ಪ್ರತಿಷ್ಠಾಪನೆ ಮಾಡಿ ಪ್ರಸಾದ ಹಂಚಿಕೆ ಮಾಡಿ ನಂತರ ಮನೆಯ ಹಾಲನ್ನು ಡೈರಿಗೆ ಹಾಕಿ ವಾಪಸ್ ಮನೆಗೆ ಬೈಕ್‌ನಲ್ಲಿ ಹಿಂದಿರುಗುತ್ತಿದ್ದಾಗ ಎದುರಿನಿಂದ ಬಂದ ಬೈಕ್ ಡಿಕ್ಕಿ ಹೊಡೆದ ರಭಸಕ್ಕೆ ತಲೆಗೆ ತೀವ್ರ ಪೆಟ್ಟಾಗಿದ್ದರಿಂದ ತಕ್ಷಣ ಆಂಬುಲೆನ್ಸ್ ಮೂಲಕ ಹುಣಸೂರಿನ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಯಿತು ಆದರೆ ಹೆಚ್ಚಿನ ಚಿಕಿತ್ಸೆಗೆ ಮೈಸೂರಿನ ಖಾಸಗಿ ಖಾಸಗಿ ಆಸ್ಪತ್ರೆಗೆ ದಾಖಲಿಸಿದರಾದರೂ ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ರಾತ್ರಿ ಯುವಕ ಮೃತಪಟ್ಟಿದ್ದಾನೆ.

ಈ ಘಟನೆಯ ಸಂಬಂಧ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿಕೊಂಡು, ಸ್ಥಳ ಮಹಜರು ಮಾಡಿ ತನಿಖೆ ಕೈಗೊಳ್ಳಲಾಗಿದೆ. ಮೃತನ ಶವಪರೀಕ್ಷೆ ನಡೆಸಿ ವಾರಸುದಾರರಿಗೆ ನೀಡಲಾಯಿತು. ನಂತರ ಗ್ರಾಮದಲ್ಲಿ ಮಂಗಳವಾರ ಅಂತ್ಯ ಸಂಸ್ಕಾರ ನಡೆಯಿತು.

ಚನ್ನೇಗೌಡನಕೊಪ್ಪಲು ಡೈರಿಗೆ ಮೂರು ಲಕ್ಷ ನಿವ್ವಳ ಲಾಭ



ಬೆಟ್ಟದಪುರ, ಸೆ.19– ಬೆಟ್ಟದಪುರದ ಚನ್ನೇಗೌಡನಕೊಪ್ಪಲಿನ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘವು 2022–23ನೇ ಸಾಲಿನಲ್ಲಿ 3,73,035ರೂ ನಿವ್ವಳ ಲಾಭಗಳಿಸಿದೆ ಎಂದು ಮೈಮುಲ್ ವಿಸ್ತರಣಾಧಿಕಾರಿ ಸತೀಶ್ ಹೇಳಿದರು.

ಸಂಘದ ಕಚೇರಿಯಲ್ಲಿ ಮಂಗಳವಾರ ನಡೆದ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಸಂಘವು ಉತ್ತಮ ಲಾಭಾಂಶ ಪಡೆಯುವ ಮೂಲಕ ಸಾಗುತ್ತಿದೆ. ಸಂಘದ ಅಭಿವೃದ್ಧಿಗೆ ಪ್ರತಿಯೊಬ್ಬ ಸದಸ್ಯರ ಸಹಕಾರ ಪ್ರಮುಖವಾಗಿದೆ. ಗುಣಮಟ್ಟದ ಹಾಲು ಪೂರೈಕೆ ಮಾಡುವ ಮೂಲಕ ಹೆಚ್ಚಿನ ಆದಾಯಗಳಿಸಿ ಎಂದರು.

ಕಾರ್ಯಕ್ರಮದಲ್ಲಿ ಅತಿ ಹೆಚ್ಚು ಹಾಲು ಸರಬರಾಜು ಮಾಡಿದ ಮೂವರನ್ನು ಸನ್ಮಾನಿಸಿ ಬಹುಮಾನ ನೀಡಲಾಯಿತು. ಸಂಘದ ಅಧ್ಯಕ್ಷೆ ಸರಸ್ವತಿ, ಉಪಾಧ್ಯಕ್ಷೆ ರಾಜೇಶ್ವರಿ, ನಿರ್ದೇಶಕಿಯರಾದ ಭಾಗ್ಯಮ್ಮ, ವನಜಾಕ್ಷಿ, ಕೆ.ಎಸ್ ಅನಿತ, ಪೂರ್ಣಿಮಾ, ಲತಾ, ವೀಣಾ, ರೂಪ, ಕಾರ್ಯದರ್ಶಿ ಸವಿತಾ, ಸಿಬ್ಬಂದಿಗಳಾದ ಭಾರತಿ, ಪಂಕಜ, ಗ್ರಾಮಸ್ಥರು ಇದ್ದರು.

ಪಿ.ಪಟ್ಟಣ ತಾಲೂಕು ದಸರಾ ಕ್ರೀಡಾಕೂಟ ಉದ್ಘಾಟನೆ



ಪಿರಿಯಾಪಟ್ಟಣ, ಸೆ.19– ರಾಷ್ಟ್ರೀಯ ದಸರಾ ಹಬ್ಬ ನಮ್ಮ ನಾಡಿನ ಹೆಮ್ಮೆಯ ಸಂಸ್ಕೃತಿಯ ಪ್ರತೀಕ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಬೆಕ್ಕರೆ ಸತೀಶ್ ಆರಾಧ್ಯ ತಿಳಿಸಿದರು. ಪಟ್ಟಣದ ಹರವೆ ಮಲ್ಲರಾಜ ಪಟ್ಟಣ ಬಳಿಯ ತಾಲೂಕು ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಶ್ರೀ ಸೋಮೇಶ್ವರ ಕ್ರೀಡಾ ಸಂಸ್ಥೆ ಭೋಗನಹಳ್ಳಿ ಸಂಯುಕ್ತಾಶ್ರಯದಲ್ಲಿ ನಡೆದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದಸರಾ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ವಯಸ್ಸಿನ ಮಿತಿ ಇಲ್ಲದಿರುವುದರಿಂದ ಆಸಕ್ತಿಯುಳ್ಳವರು ಪಾಲ್ಗೊಳ್ಳುವ ಮೂಲಕ ತಮ್ಮಲ್ಲಿನ ಕ್ರೀಡಾ ಪ್ರತಿಭೆ ಪ್ರದರ್ಶಿಸಬೇಕು, ತಾಲೂಕು ಕ್ರೀಡಾಂಗಣದಲ್ಲಿ ಮೂಲಸೌಕರ್ಯ ಕೊರತೆಯಿದ್ದು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸಮಸ್ಯೆ ಪರಿಹಾರಕ್ಕೆ ಮುಂದಾಗಬೇಕು ಎಂದರು.

ಈ ವೇಳೆ ಪುರುಷ ಹಾಗೂ ಮಹಿಳೆಯರಿಗೆ ವಿವಿಧ ಆಟೋಟ ಸ್ಪರ್ಧೆ ಏರ್ಪಡಿಸಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಈ ಸಂದರ್ಭ ನಿವೃತ್ತ ಸೈನಿಕ ರಾವಂದೂರು ಶಿವು, ರಾವಂದೂರು ಪಿಎಸಿಸಿಎಸ್ ಅಧ್ಯಕ್ಷ ಮರಿಗೌಡ, ಸೋಮೇಶ್ವರ ಕ್ರೀಡಾ ಸಂಸ್ಥೆ ಸಂಘಟನಾ ಕಾರ್ಯದರ್ಶಿ ಶರತ್, ನಿವೃತ್ತ ಸೈನಿಕ ಸ್ವಾಮಿ, ಮುಖ್ಯ ಶಿಕ್ಷಕ ಚಂದ್ರಶೇಖರ್, ಸುರೇಶ ನಾಯಕ್, ದೇವರಾಜ್, ಕ್ರೀಡಾ ಅಧಿಕಾರಿಗಳು, ಆರೋಗ್ಯ ಮತ್ತು ಆರಕ್ಷಕ ಇಲಾಖೆ ಸಿಬ್ಬಂದಿ ಮತ್ತು ಸೋಮೇಶ್ವರ ಕ್ರೀಡಾ ಸಂಸ್ಥೆ ಪದಾಧಿಕಾರಿಗಳು ಸದಸ್ಯರು ಇದ್ದರು

ಸೆ.23, ವಾರ್ಷಿಕ ಮಹಾಸಭೆ

ಮಲ್ಲುಂಡಿ, ಸೆ.19– ನಂಜನಗೂಡು ತಾಲೂಕಿನ ಹೆಡಿಯಾಲ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2022–23ನೇ ಸಾಲಿನ ವಾರ್ಷಿಕ ಮಹಾಸಭೆಯು ಸಂಘದ ಅಧ್ಯಕ್ಷ ಬಿ.ಎಸ್.ಮಹದೇವಪ್ಪ ಅವರ ಅಧ್ಯಕ್ಷತೆಯಲ್ಲಿ ಸೆ.23 ರಂದು ಗ್ರಾಮದ ಹರ್ಷ ಕನ್ವೆನ್ಷನ್ ಹಾಲ್‌ನಲ್ಲಿ ನಡೆಯಲಿದ್ದು ಸುತ್ತಮುತ್ತ ಗ್ರಾಮಸ್ಥರು ಭಾಗವಹಿಸಬೇಕೆಂದು ಸಿಇಓ ಹೆಚ್.ಡಿ.ಶಿವಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತ ಸುಸ್ತಿದಾರನಾಗದಿದ್ದರೆ ಸಹಕಾರ ಸಂಘ ಅಭಿವೃದ್ಧಿ



ತಿ.ನರಸೀಪುರ.ಸೆ.19– ಬ್ಯಾಂಕಿನಿಂದ ಸಾಲ ಪಡೆದ ರೈತ ಸುಸ್ತಿದಾರನಾಗದೆ ಸಕಾಲಕ್ಕೆ ಸಾಲ ಮರುಪಾವತಿ ಮಾಡಿದಾಗ ಮಾತ್ರವೇ ಯಾವುದೇ ಸಹಕಾರ ಸಂಘದ ಅಭಿವೃದ್ಧಿ ಸಾಧ್ಯ ಎಂದು ತಾಲೂಕು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಅಧ್ಯಕ್ಷ ಕೆಂಪಯ್ಯನಹುಂಡಿ ಎಂ.ಮಹದೇವಣ್ಣ ತಿಳಿಸಿದ್ದಾರೆ.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಏರ್ಪಡಿಸಲಾಗಿದ್ದ ಬ್ಯಾಂಕಿನ 2022–23 ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಹಕಾರಿ ಬ್ಯಾಂಕು ರೈತರು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಕೃಷಿ ಉದ್ದೇಶಗಳಿಗೆ ಸಾಕಷ್ಟು ಸಾಲ ಸೌಲಭ್ಯ ಒದಗಿಸುತ್ತಾ ಬಂದಿದೆ. ಆದರೆ ಸಾಲ ಪಡೆದ ರೈತ ಸಕಾಲಕ್ಕೆ ಸಾಲದ ಹಣ ಪಾವತಿ ಮಾಡದ ಹಿನ್ನೆಲೆಯಲ್ಲಿ ಸಹಕಾರ ಸಂಘ ಕೆಲವೊಮ್ಮೆ ಲಾಭಾಂಶ ಗಳಿಸಲು ಸಾಧ್ಯವಾಗುವುದಿಲ್ಲ. ರೈತರು ತಾವು ಸಂಘದಿಂದ ಪಡೆದ ಸಾಲವನ್ನು ಪ್ರಾಮಾಣಿಕವಾಗಿ ಮರು ಪಾವತಿ ಮಾಡಿದರೆ ಸಂಘವು ಏಳಿಗೆ ಹೊಂದಲಿದೆ ಎಂದರು.

ಸಂಘವು ಈ ಬಾರಿ ಲಾಭಾಂಶ ಗಳಿಸಲು ಸಾಧ್ಯವಾಗಿಲ್ಲ. ಆದಾಗ್ಯೂ 2023–24 ನೇ ಸಾಲಿನಲ್ಲಿ ಬ್ಯಾಂಕು 3.50 ಕೋಟಿ ರೂ.ಗಳ ಸಾಲ ವಿತರಣೆ ಮಾಡುವ ಗುರಿ ಹೊಂದಿದೆ ಎಂದರು.ಮುಂದಿನ ಸಾಲಿನಲ್ಲಿ ಶೇ.80 ರಷ್ಟು ಸಾಲ ವಸೂಲಾತಿ ಮಾಡಲು ಸುಸ್ತಿ ಸಾಲಗಳ ಮೇಲೆ ಪೂರ್ಣ ಪ್ರಮಾಣದಲ್ಲಿ ಕಾನೂನು ಕ್ರಮ ಜರುಗಿಸಲು ನಿರ್ಧರಿಸಲಾಗಿದೆ, ಅಲ್ಲದೇ ಸರ್ಕಾರದ ಆದೇಶದನ್ವಯ ಬ್ಯಾಂಕಿನ ಹಾಲಿ ಇರುವ 500 ಮುಖಬೆಲೆಯ ಷೇರನ್ನು 1000 ರೂ.ಗಳಿಗೆ ಹೆಚ್ಚಿಸಲಾಗಿದ್ದು 2023–24ನೇ ಸರ್ವ ಸದಸ್ಯರ ಮಹಾಸಭೆಗೆ ಹಾಜರಾಗಲು 1,000 ರೂ.ಗಳ ಷೇರು ಮೊಬಲಗು ಇರುವುದು ಕಡ್ಡಾಯವಾಗಿರುತ್ತದೆ ಎಂದು ತಿಳಿಸಿದರು.

ಬ್ಯಾಂಕಿನ ವ್ಯವಸ್ಥಾಪಕ ಎನ್.ಮಹೇಶ್ ವಾರ್ಷಿಕ ವರದಿ ಮಂಡಿಸಿದರು. ಬ್ಯಾಂಕ್‌ನ ಉಪಾಧ್ಯಕ್ಷ ಬಿ.ಎಂ.ಲಿಂಗರಾಜು,ಮಾಜಿ ಅಧ್ಯಕ್ಷರಾದ ಕೆ.ವಜ್ರೇಗೌಡ, ರುದ್ರಸ್ವಾಮಿ, ನಿರ್ದೇಶಕರಾದ ಎಂ.ಎಸ್. ಶಿವಮೂರ್ತಿ, ಬಿ.ಸಿ.ಪಾರ್ಥಸಾರಥಿ, ಎನ್.ಎನ್. ಮಹದೇವ ಸ್ವಾಮಿ, ಟಿ.ಎಸ್.ಸಿದ್ದರಾಜು, ಎನ್.ಲಿಂಗಪ್ಪಾಜಿ, ಎಂ.ನಾಗರತ್ನ, ಗಂಗಮ್ಮ, ಎಂ.ಮಲ್ಲಿಕಾರ್ಜುನ ಸ್ವಾಮಿ, ವಿರೂಪಾಕ್ಷ, ಪ್ರೇಮಕುಮಾರ್, ಸುಂದರ್, ಎನ್.ಮಹೇಶ್, ಜಿಪಂ ಮಾಜಿ ಸದಸ್ಯ ಹೊನ್ನನಾಯಕ, ಸ್ವಾಮಿಗೌಡ, ಸಿ.ಮಹದೇವು, ಹಿರಿಯೂರು ಮಹದೇವಪ್ಪ, ಸುಮಿತ್ರ ಅಂಕಪ್ಪ, ಬ್ಯಾಂಕಿನಪ್ರಭಾರ ಲೆಕ್ಕಿಣಿಗ ಪ್ರಭುಸ್ವಾಮಿ, ರಫಿಯಾ ಕೌಸರ್, ತನುಜಾ, ಬಿ.ಶಂಕರ ಮತ್ತಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಮಾರ್ಕ್ ಆಂಟೋನಿ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ತತ್ಸಮ ತದ್ಭವ(ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಜವಾನ್ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಸಪ್ತಸಾಗರದಾಚೆ ಎಲ್ಲೋ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಸಪ್ತಸಾಗರದಾಚೆ ಎಲ್ಲೋ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಮಾರ್ಕ್ ಆಂಟೋನಿ (ತ)	4 ಪ್ರದರ್ಶನಗಳು
ಸಂಗಂ	
ಜವಾನ್ (ಹಿ)	4 ಪ್ರದರ್ಶನಗಳು
ಲಿಡೋ	
ಋಷಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಜವಾನ್ (ಹಿ)	4 ಪ್ರದರ್ಶನಗಳು
ಪ್ರಭಾ	
ನಮೋ ಭೂತಾತ್ಮ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಸಪ್ತಸಾಗರದಾಚೆ ಎಲ್ಲೋ (ಕ): ಬೆ.10.15ಕ್ಕೆ, ಮ.1.05ಕ್ಕೆ, ರಾ.7.05ಕ್ಕೆ, ರಾ.9.55ಕ್ಕೆ, ಜವಾನ್ (ಹಿಂ): ಮ.3.55ಕ್ಕೆ.
ಸ್ಕ್ರೀನ್ 2	ತತ್ಸಮ ತದ್ಭವ (ಕ): ಬೆ.11ಕ್ಕೆ, ರಾ.7.10ಕ್ಕೆ, ರಾ.9.45ಕ್ಕೆ, 13 ಪಾರ್ಟ್ 1 (ಕ): ಮ.1.45ಕ್ಕೆ, ಮಿಸ್ ಶೆಟ್ಟಿ ಮಿಸ್ಟರ್ ಪೊಲಿಶೆಟ್ಟಿ (ತೆ): ಸಂ.4.15ಕ್ಕೆ.
ಸ್ಕ್ರೀನ್ 3	ಪರಿಮಳಾ ಡಿಸೋಜಾ (ಕ): ಬೆ.11ಕ್ಕೆ, ದಿ ನನ್ 2 (ಇಂ): ಮ.1.45ಕ್ಕೆ, ಮಾರ್ಕ್ ಆಂಟೋನಿ (ತ): ಸಂ.4.15ಕ್ಕೆ, ಎ ಹಾಂಟಿಂಗ್ ಇನ್ ವೆನಿಸ್ (ಇಂ): ರಾ.7.15ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 4	ಜವಾನ್ (ಹಿಂ): ಬೆ.9.45ಕ್ಕೆ, ಮ.1ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಸಂ.4.15ಕ್ಕೆ

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ತತ್ಸಮ ತದ್ಭವ (ಕ): ಬೆ.11.10ಕ್ಕೆ, ಸಂ.4.45ಕ್ಕೆ, ಸಪ್ತಸಾಗರದಾಚೆ ಎಲ್ಲೋ (ಕ): ಮ.1.45ಕ್ಕೆ, ರಾ.7.20ಕ್ಕೆ, ಮಾರ್ಕ್ ಆಂಟೋನಿ (ತ): ರಾ.10.20ಕ್ಕೆ.
ಸ್ಕ್ರೀನ್ 2	ಜವಾನ್ (ಹಿಂ): ಬೆ.11.15ಕ್ಕೆ, ಮ.2.50ಕ್ಕೆ, ಸಂ.6.25ಕ್ಕೆ, ರಾ.10ಕ್ಕೆ.
ಸ್ಕ್ರೀನ್ 3	ಜವಾನ್ (ಹಿಂ): ಬೆ.10.15ಕ್ಕೆ, ಮ.1.50ಕ್ಕೆ, ಸಂ.5.25ಕ್ಕೆ, ರಾ.9ಕ್ಕೆ.
ಸ್ಕ್ರೀನ್ 4	ಪರಿಮಳಾ ಡಿಸೋಜಾ (ಕ): ಬೆ.10.30ಕ್ಕೆ, 13 (ಕ): ಮ.1.20ಕ್ಕೆ, ಮಾರ್ಕ್ ಆಂಟೋನಿ (ತ): ಸಂ.4.20ಕ್ಕೆ, ಟೇಲ್ ಆಫ್ ಮಹಾನಗರ (ಕ): ರಾ.7.30ಕ್ಕೆ, ಕಾಸರ್‌ಗೋಲ್ಡ್ (ಮ): ರಾ.10.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 2	ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ.
ಸ್ಕ್ರೀನ್ 3	ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 4	ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, ಗದರ್ 2 (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.9.45ಕ್ಕೆ, ಆಚಾರ್ & ಕೋ (ಕ): ಮ.3.55ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.3.25ಕ್ಕೆ, ರಾ.10.30ಕ್ಕೆ, ನಮೋ ಭೂತಾತ್ಮ (ಕ): ಬೆ.11.55ಕ್ಕೆ, ರಾಖಿ ಔರ್ ರಾಣಿ (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, ಓಪನ್‌ಹೈಮರ್ (ಇಂ): ಸಂ.6.35ಕ್ಕೆ, ಭೋಳಾ ಶಂಕರ್ (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, ಮೆಗ್ 2 (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಚಾ.ನಗರ ಲೋಕಸಭಾ ಕ್ಷೇತ್ರದಿಂದ ನಾನು ಕೂಡ ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿ



ತಿ.ನರಸೀಪುರ, ಸೆ.19– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನಾನೂ ಕೂಡ ಕಾಂಗ್ರೆಸ್ ಪಕ್ಷದ ಟಿಕೆಟ್ ಆಕಾಂಕ್ಷಿ ಎಂದು ಯುವ ಕಾಂಗ್ರೆಸ್ ಮುಖಂಡ ಪ್ರಮಲ್ ಮಂಜುನಾಥ್ ತಿಳಿಸಿದ್ದಾರೆ.

ಚಾಮರಾಜನಗರ ಮತ್ತು ತಿ.ನರಸೀಪುರ ಕ್ಷೇತ್ರದ ಜನತೆಗೆ ಗೌರಿ–ಗಣೇಶ ಹಬ್ಬದ ಶುಭಾಶಯಗಳನ್ನು ತಿಳಿಸಿ ಮಾತನಾಡುತ್ತಿದ್ದ ಅವರು ಪಕ್ಷದ ಹೈಕಮಾಂಡ್ ಸೂಚಿಸಿದರೆ ಖಂಡಿತ ನಾನು ಚಾಮರಾಜನಗರ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆದ್ದು ಬರುವೆ ಎಂದರು.

ನಮ್ಮ ತಾತ ದಿವಂಗತ ಟಿ.ಎನ್.ನರಸಿಂಹಮೂರ್ತಿ ಮತ್ತು ತಂದೆ ದಿವಂಗತ ಎನ್.ಮಂಜುನಾಥ್ ಅವರು ಕಾಂಗ್ರೆಸ್ ಪಕ್ಷದ ಕಟ್ಟಾಳುವಾಗಿ ದುಡಿದು ಪಕ್ಷಕ್ಕೆ ಸೇವೆ ಸಲ್ಲಿಸಿದ್ದು, ನಾನು ಕೂಡ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಮುಂದುವರೆಯಲು ಬಯಸಿ ಟಿಕೆಟ್ ಕೇಳುತ್ತಿರುವೆ ಎಂದು ಅವರು ತಿಳಿಸಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲೂ ಪಕ್ಷದ ಹೈಕಮಾಂಡ್ ನಮ್ಮ ಸಮುದಾಯಕ್ಕೆ ಟಿಕೆಟ್ ನೀಡುವ ಭರವಸೆ ನೀಡಿತ್ತು ಇದೀಗ ಲೋಕಸಭಾ ಚುನಾವಣೆಯಲ್ಲಾದರೂ ನನಗೆ ಟಿಕೆಟ್ ನೀಡಿ ಸಮುದಾಯಕ್ಕೆ ಅವಕಾಶ ಕಲ್ಪಿಸಿಕೊಡುವ ವಿಶ್ವಾಸವಿದೆ ಎಂದು ಅವರು, ಈ ವಿಚಾರದಲ್ಲಿ ಹೈಕಮಾಂಡ್ ಕೈಗೊಳ್ಳುವ ತೀರ್ಮಾನಕ್ಕೆ ಬದ್ಧನಾಗಿರುವುದಾಗಿ ತಿಳಿಸಿದರು.


ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಚುನಾವಣೆ ವೇಳೆ ನೀಡಿದ್ದ ಭರವಸೆಗಳನ್ನೂ ಈಡೇರಿಸಿ ಜನರ ವಿಶ್ವಾಸ ಗೆದ್ದಿದ್ದು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಜಯಭೇರಿ ಬಾರಿಸುವುದು ನಿಶ್ಚಿತ ಎಂದಿರುವ ಅವರು ಹೈಕಮಾಂಡ್ ಸೂಚಿಸಿದರೆ ವಿಜಯದಶಮಿ ವೇಳೆಗೆ ಚಾಮರಾಜನಗರ ಲೋಕಸಭಾ ಕ್ಷೇತ್ರದಾದ್ಯಂತ ಪ್ರವಾಸ ಕೈಗೊಂಡು ಚುನಾವಣೆಗೆ ಸಿದ್ಧಗೊಳ್ಳುವುದಾಗಿ ತಿಳಿಸಿದರು.

ಸೆ.22 ರಂದು ಟೌನ್ ಸಹಕಾರ ಸಂಘದ ವಾರ್ಷಿಕ ಮಹಾಸಭೆ

ಹುಣಸೂರು, ಸೆ.19– ಹುಣಸೂರಿನ ಟೌನ್ ವಿವಿಧೋದ್ದೇಶ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯು ಸೆ.22ರಂದು ನಗರದ ಕಾಫಿ ವರ್ಕ್ಸ್ ರಸ್ತೆಯಲ್ಲಿರುವ ಸಂಘದಲ್ಲಿ ನಡೆಯಲಿದೆ ಎಂದು ಸಂಘದ ಕಾರ್ಯದರ್ಶಿ ಭರತ್‌ಕುಮಾರ್ ತಿಳಿಸಿದ್ದಾರೆ. ಅಂದು ಬೆಳಗ್ಗೆ 10 ಗಂಟೆಗೆ ಸಂಘದ ಅಧ್ಯಕ್ಷರಾದ ಹೆಚ್.ವೈ.ಕೃಷ್ಣ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಮಹಾಸಭೆಯಲ್ಲಿ ವಾರ್ಷಿಕ ಲೆಕ್ಕ–ಪತ್ರ ಮಂಡನೆ, ಆಯ–ವ್ಯಯ ಪಟ್ಟಿ ಮಂಜೂರು ಮಾಡುವುದು, ಸದಸ್ಯರಿಂದ ಬಂದಿರುವ ವಿಚಾರಗಳ ಚರ್ಚೆ, ಅಧ್ಯಕ್ಷರ ಅಪ್ಪಣೆ ಮೇರೆಗೆ ಮತ್ತಿತರ ವಿಷಯಗಳನ್ನು ಚರ್ಚಿಸಲಾಗುವುದು ಎಂದು ತಿಳಿಸಿದ್ದಾರೆ.

ಬಾಲಕನ ಬಲಿ ಪಡೆದಿದ್ದ ಹುಲಿ ಕೊನೆಗೂ ಸೆರೆ

ಹೆಚ್.ಡಿ.ಕೋಟೆ ಬಳಿ ಅರಣ್ಯ ಇಲಾಖೆ ಯಶಸ್ವಿ ಕಾರ್ಯಾಚರಣೆ, ಅರವಳಿಕೆ ನೀಡಿ ಬೋನ್‌ನಲ್ಲಿ ಬಂಧನ



ಹೆಚ್.ಡಿ.ಕೋಟೆ, ಸೆ.19(ಎಂಟಿವೈ, ಮಂಜು)– ಬಾಲಕನ ಬಲಿ ಪಡೆಯುವ ಮೂಲಕ ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದ್ದ ಹುಲಿಯನ್ನು ಸೆರೆ ಹಿಡಿಯುವಲ್ಲಿ ಕೊನೆಗೂ ಅರಣ್ಯ ಇಲಾಖೆ ಯಶಸ್ವಿಯಾಗಿದೆ.

ಇದೀಗ ಸಿಕ್ಕಿಬಿದ್ದಿರುವ 7–8 ವರ್ಷದ ಗಂಡು ಹುಲಿಯನ್ನು ಕಾಡಿಗೆ ಬಿಡಲು ಅರಣ್ಯ ಇಲಾಖೆ ಸಿದ್ಧತೆ ನಡೆಸುತ್ತಿದ್ದರೆ, ಇತ್ತ ಹುಲಿ ಸೆರೆ ಸಿಕ್ಕಿರುವ ವಿಷಯ ತಿಳಿದ ಗ್ರಾಮಸ್ಥರು ಗುಂಪು–ಗುಂಪಾಗಿ ಆಗಮಿಸಿ ಹುಲಿಯನ್ನು ಕಂಡು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

ಸೆ.4ರಂದು ತಾಲೂಕಿನ ಕಲ್ಲಹಟ್ಟಿ ಗ್ರಾಮದ ಜಮೀನಿನಲ್ಲಿ ಮೆಣಸಿನಕಾಯಿ ಮೂಟೆ ಕಾಯುತ್ತಾ ಕುಳಿತಿದ್ದ ಮಾದುಬಾಯಿಯವರ ಪುತ್ರ ಚರಣ್‌ನಾಯಕ್(9)ನ ಮೇಲೆ ದಾಳಿ ನಡೆಸಿದ ಹುಲಿ, ಎಳೆದೊಯ್ದು ದೇಹದ ಕೆಲಭಾಗಗಳನ್ನು ತಿಂದು ಹಾಕಿತ್ತು ಜಮೀನಿನಲ್ಲಿ ಮಗ ಇಲ್ಲದಿದ್ದನ್ನು ಕಂಡ ಮಾದುಬಾಯಿ, ಮನೆಗೆ ಕರೆ ಮಾಡಿ ವಿಚಾರಿಸಿ, ಅಲ್ಲಿಗೆ ಹೋಗದಿರುವ ವಿಚಾರ ತಿಳಿದು, ಅಲ್ಲೇ ಸುತ್ತ–ಮುತ್ತ ಹುಡುಕಾಡಿದಾಗ ಬಾಲಕನ ಶವ ಪತ್ತೆಯಾಗಿತ್ತು.

ಪೋಷಕರ ಚೀರಾಟ ಕೇಳಿ ಸುತ್ತ–ಮುತ್ತಲಿನ ಹೊಲದಲ್ಲಿ ಕೆಲಸ ಮಾಡುತ್ತಿದ್ದವರು ಮತ್ತು ಗ್ರಾಮಸ್ಥರು ಸ್ಥಳಕ್ಕೆ ಆಗಮಿಸಿ ಅರಣ್ಯ ಇಲಾಖೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದರಲ್ಲದೆ, ಮನುಷ್ಯರ ರುಚಿ ನೋಡಿರುವ ಹುಲಿಯನ್ನು ಸೆರೆ ಹಿಡಿಯಬೇಕು ಎಂದು ಸ್ಥಳಕ್ಕೆ ಆಗಮಿಸಿದ್ದ ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಆಗ್ರಹಿಸಿದ್ದರು.

ಗ್ರಾಮಸ್ಥರ ಪ್ರತಿಭಟನೆ ಮತ್ತು ಒತ್ತಾಯದ ಹಿನ್ನೆಲೆಯಲ್ಲಿ ಹಿರಿಯ ಅಧಿಕಾರಿಗಳ ಆದೇಶದಂತೆ ಹುಲಿ ಸೆರೆ ಹಿಡಿಯಲು ಆದೇಶ ದೊರೆತ ಕೂಡಲೇ ಹಲವೆಡೆ ಬೋನಿರಿಸಿ ಸಾಕಾನೆಗಳ ಸಹಕಾರದೊಂದಿಗೆ ಹುಲಿ ಸೆರೆಗೆ ಕೂಂಬಿಂಗ್ ಕಾರ್ಯಾಚರಣೆ ನಡೆಸಿದರೂ ಚಾಲಾಕಿ ಹುಲಿ ಸೆರೆ ಸಿಕ್ಕಿರಲಿಲ್ಲ. ಅಲ್ಲಲ್ಲಿ ಸಾಕುಪ್ರಾಣಿಗಳನ್ನು ಕೊಂದು ನಾಪತ್ತೆಯಾಗುತ್ತಿತ್ತು.

ಕಳೆದ 3–4ದಿನದ ಹಿಂದೆ ತಾವರೆ ನಾಯ್ಕ ಎಂಬುವವರ ಜಮೀನಿನಲ್ಲಿ ಹೋರಿಯೊಂದನ್ನು ಹುಲಿ ಕೊಂದು ತಿಂದಿತ್ತು ಅರೆಬರೆ ತಿಂದ ಹೋರಿಯ ಕಳೇಬರವನ್ನು ತೆಗೆಯದೆ ಅದೇ ಜಾಗದಲ್ಲಿ ಬಿಡಲಾಗಿತ್ತು. ಅರಣ್ಯ ಇಲಾಖೆ ವೈದ್ಯರು ಮತ್ತು ಸಿಬ್ಬಂದಿ ಸಾಕಾನೆಗಳಾದ ಅಶ್ವತ್ಥಾಮ, ಮಹಾರಾಷ್ಟ್ರದ ಭೀಮನ ಸಹಾಯದಿಂದ ಆ ಸ್ಥಳದ ಸುತ್ತಮುತ್ತ ಮರೆಯಾಗಿ ಕುಳಿತು ಹುಲಿ ಬರುವಿಕೆಯನ್ನು ಕಾಯುತ್ತಿದ್ದರು.


ಇತ್ತ ಹುಲಿ, ಹೋರಿಯ ಮಾಂಸ ತಿನ್ನಲು ಆಗಮಿಸಿದ ವೇಳೆ ಆನೆಯ ಕುಳಿತು ಕಾಯುತ್ತಿದ್ದ ಅರಣ್ಯ ಇಲಾಖೆಯ ಡಾ.ರಮೇಶ್ ಸಂಜೆ 7.20ರಲ್ಲಿ ಅರವಳಿಕೆ ಚುಚ್ಚುಮದ್ದನ್ನು ನೀಡಿದರು. ಇದರಿಂದ ಹುಲಿ ಸ್ವಲ್ಪ ದೂರ ಆರ್ಭಟಿಸುತ್ತ ಹೋಗಿ, ಬಿದ್ದಿದೆ. ತಕ್ಷಣ ಅರಣ್ಯ ಸಿಬ್ಬಂದಿ ಮತ್ತು ವೈದ್ಯರು ಸ್ಥಳಕ್ಕೆ ತೆರಳಿ ಹುಲಿ ಪ್ರಜ್ಞೆ ತಪ್ಪಿರುವುದನ್ನು ಖಚಿತಪಡಿಸಿಕೊಂಡು ಅದನ್ನು ತಮ್ಮ ಜೀಪಿನಲ್ಲಿ ಹಾಕಿಕೊಂಡು ಸ್ವಲ್ಪ ದೂರ ತೆರಳಿದರು. ನಂತರ ಬೋನಿನಲ್ಲಿ ಹುಲಿಯನ್ನು ಬಂಧಿಸಿಡಲಾಗಿದೆ. ಈ ಕಾರ್ಯಾಚರಣೆಯಲ್ಲಿ ಡಾ.ರಮೇಶ್ ಮತ್ತು ಡಾ.ರಂಜನ್ ಪಾಲ್ಗೊಂಡಿದ್ದರು.

ಸೆರೆಯಾದ ಹುಲಿ ಅರಣ್ಯದಲ್ಲಿ ಕಾಳಗದಲ್ಲಿ ಗಾಯಗೊಂಡಿರುವುದರಿಂದ ಬೇಟೆಯಾಡಲು ಅಶಕ್ತವಾಗಿ ಕಾಡಿನಿಂದ ನಾಡಿಗೆ ಬಂದು ಉಪಟಳ ನೀಡುತ್ತಿತ್ತೆಂದು ಮೇಲ್ನೋಟಕ್ಕೆ ತಿಳಿದು ಬಂದಿದೆ. ಸೆರೆಯಾದ ಹುಲಿಯ ಬಗ್ಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಂತೆ ಮುಂದಿನ ಕ್ರಮ ಕೈಗೊಳ್ಳುವುದಾಗಿ ಅರಣ್ಯ ಇಲಾಖೆ ಮೂಲಗಳು ತಿಳಿಸಿವೆ. ಹುಲಿ ಸೆರೆ ಸಿಕ್ಕ ವಿಷಯ ತಿಳಿಯುತ್ತಿದ್ದಂತೆಯೆ ಕಲ್ಲಹಟ್ಟಿ ಗ್ರಾಮಸ್ಥರು ಅದನ್ನು ನೋಡಲು ಮುಗಿಬಿದ್ದಿದ್ದು, ಸದ್ಯ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

ಪ್ರಜ್ವಲ್ ರೇವಣ್ಣಗೆ ಬಿಗ್ ರಿಲೀಫ್

ಹೈಕೋರ್ಟ್ ಆದೇಶಕ್ಕೆ ತಡೆಯಾಜ್ಞೆ ನೀಡಿದ ಸುಪ್ರಿಂ!

ನವದೆಹಲಿ, ಸೆ.19– ಕರ್ನಾಟಕದ ಏಕೈಕ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಆಯ್ಕೆಯನ್ನು ಅನೂರ್ಜಿತ ಎಂದು ಘೋಷಿಸಿದ ಕರ್ನಾಟಕ ಹೈಕೋರ್ಟ್ ಆದೇಶಕ್ಕೆ ಸುಪ್ರೀಂ ಕೋರ್ಟ್ ನಿನ್ನೆ (ಸೋಮವಾರ) ತಡೆಯಾಜ್ಞೆ ನೀಡಿದೆ. ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಜೆಬಿ.ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರ ಪೀಠ ತಡೆಯಾಜ್ಞೆ ನೀಡಿದೆ. ಆದರೆ ಪ್ರಜ್ವಲ್ ಅವರು ಸಂಸತ್ತಿನ ಕಲಾಪಗಳಲ್ಲಿ ಭಾಗವಹಿಸಬಹುದಾದರೂ ಸಂಸದರಾಗಿ ಮತ ಚಲಾಯಿಸಲು ಮತ್ತು ಯಾವುದೇ ಭತ್ಯೆಗಳನ್ನು ಪಡೆಯಲು ಅರ್ಹರಾಗಿರುವುದಿಲ್ಲ ಎಂದು ಪೀಠ ಹೇಳಿದೆ.



ಮುಂದಿನ ನಾಲ್ಕು ವಾರಗಳ ಅವಧಿಗೆ ಈ ತಡೆಯಾಜ್ಞೆ ನೀಡಿದ್ದು, ಮುಂದಿನ ವಿಚಾರಣೆ ಬಳಿಕ ಸುಪ್ರೀಂಕೋರ್ಟ್ ಅಂತಿಮ ತೀರ್ಪು ಪ್ರಕಟಿಸಲಿದೆ. ಅರ್ಜಿದಾರರ ಪರವಾಗಿ ಹಿರಿಯ ವಕೀಲ ಮುಕುಲ್ ರೋಹಟಗಿ ಮತ್ತು ಕೆ.ಕೆ.ವೇಣುಗೋಪಾಲ್ ಅವರ ವಾದವನ್ನು ಆಲಿಸಿದ ನಂತರ ನ್ಯಾಯಾಲಯವು ತನ್ನ ಆದೇಶವನ್ನು ನೀಡಿದೆ.

ಚುನಾವಣಾ ಅರ್ಜಿದಾರರ ಪರ ಹಿರಿಯ ವಕೀಲರಾದ ಪ್ರಮೀಳಾ ನೇಸರ್ಗಿ ಹಾಗೂ ವಕೀಲ ಬಾಲಾಜಿ ಶ್ರೀನಿವಾಸನ್ ವಾದ ಮಂಡಿಸಿದರು. ನಿಯಮಗಳು ಮತ್ತು ಕಾರ್ಯವಿಧಾನಗಳ ವಿರುದ್ಧ ತನ್ನ ನಿರ್ಧಾರಕ್ಕೆ ಬರಲು ಇತರ ಕಾರಣಗಳ ನಡುವೆ ಹೈಕೋರ್ಟ್ ತನ್ನ ವಿರುದ್ಧ ಸಲ್ಲಿಸಲಾದ ಎರಡು ಪ್ರತ್ಯೇಕ ಚುನಾವಣಾ ಅರ್ಜಿಗಳನ್ನು ಕ್ರೋಢೀಕರಿಸಿದೆ ಎಂದು ಪ್ರಜ್ವಲ್ ತನ್ನ ಮನವಿಯಲ್ಲಿ ಪ್ರತಿಪಾದಿಸಿದ್ದಾರೆ. ಹೈಕೋರ್ಟ್ ತನ್ನ ತೀರ್ಪಿನಲ್ಲಿ, ಪ್ರಜ್ವಲ್ ಅವರ ಚುನಾವಣಾ ಅಫಿಡವಿಟ್‌ನಲ್ಲಿ ಅವರ ಆಸ್ತಿ ಸೇರಿದಂತೆ ಸಂಪೂರ್ಣ ಅಗತ್ಯವಿರುವ ವಿವರಗಳನ್ನು ಬಹಿರಂಗಪಡಿಸದ ಕಾರಣ 2019ರ ಚುನಾವಣೆಯನ್ನು ಅಮಾನ್ಯ ಮತ್ತು ಅನೂರ್ಜಿತ ಎಂದು ಹೈಕೋರ್ಟ್ ಘೋಷಿಸಿತು. ನ್ಯಾಯಮೂರ್ತಿ ಕೆ. ನಟರಾಜನ್ ಅವರು ಅಂದಿನ ಬಿಜೆಪಿ ಅಭ್ಯರ್ಥಿ ಮತ್ತು ಈಗ ಜೆಡಿಎಸ್ ಶಾಸಕ ಎ.ಮಂಜು ಮತ್ತು ವಕೀಲ ದೇವರಾಜೇಗೌಡ ಸಲ್ಲಿಸಿದ್ದ ಚುನಾವಣಾ ಅರ್ಜಿಗಳ ಮೇಲೆ ತೀರ್ಪು ನೀಡಿದ್ದರು.

2019ರ ಮೇ 23ರಂದು ಪ್ರಜ್ವಲ್ 6,76,606 ಮತಗಳನ್ನು ಗಳಿಸಿ ವಿಜಯಿ ಎಂದು ಘೋಷಿಸಲಾಯಿತು. ಪ್ರತಿಸ್ಪರ್ಧಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಎ. ಮಂಜು 5,35,282 ಮತಗಳನ್ನು ಪಡೆದು ಪರಾಜಿತರಾಗಿದ್ದರು.

ಲಷ್ಕರ್ ಕಮಾಂಡರ್ ಉಜೈರ್ ಖಾನ್ ಹತ್ಯೆ; ಕೋಕರ್ನಾಗ್ ಎನ್‌ಕೌಂಟರ್ ಅಂತ್ಯ

ಶ್ರೀನಗರ(ಜಮ್ಮು ಮತ್ತು ಕಾಶ್ಮೀರ), ಸೆ.19– ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್‌ನಲ್ಲಿ ಲಷ್ಕರ್ ಕಮಾಂಡರ್ ಉಜೈರ್ ಖಾನ್ ಹತ್ಯೆಯಾಗಿದ್ದಾನೆ. ಮತ್ತೊಬ್ಬ ಉಗ್ರನ ಶವವನ್ನು ಸೇನೆ ಪತ್ತೆ ಮಾಡಿದೆ. ಕಾಶ್ಮೀರ ಎಡಿಜಿಪಿ ವಿಜಯ್ ಕುಮಾರ್ ಇಂದು ಈ ಮಾಹಿತಿ ನೀಡಿದ್ದಾರೆ. ಭಯೋತ್ಪಾದಕ ಉಜೈರ್ ಖಾನ್ ತಲೆಗೆ 10 ಲಕ್ಷ ರೂಪಾಯಿ ಬಹುಮಾನ ಘೋಷಿಸಲಾಗಿತ್ತು. ಉಜೈರ್ ಹತ್ಯೆಯೊಂದಿಗೆ ಒಂದು ವಾರದ ಅನಂತನಾಗ್ ಎನ್‌ಕೌಂಟರ್ ಅಂತ್ಯಗೊಂಡಿದೆ.



ಅನಂತ್‌ನಾಗ್ ಜಿಲ್ಲೆಯ ಗರೋಲ್ ಅರಣ್ಯದಲ್ಲಿ ಒಂದು ವಾರದ ಜಂಟಿ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆ ಕೊನೆಗೊಂಡಿದೆ. ಆದರೆ ಶೋಧ ಕಾರ್ಯಾಚರಣೆ ಮುಂದುವರಿಯುತ್ತದೆ ಎಂದು ಕಾಶ್ಮೀರ ಹೆಚ್ಚುವರಿ ಡಿಜಿಪಿ ವಿಜಯ್ ಕುಮಾರ್ ಹೇಳಿದ್ದಾರೆ. ಸೋಮವಾರ ಪತ್ತೆಯಾದ ಶವವನ್ನು ಲಷ್ಕರ್–ಎ–ತೊಯ್ಬಾ ಕಮಾಂಡರ್ ಉಜೈರ್ ಖಾನ್ ಎಂದು ಗುರುತಿಸಲಾಗಿದೆ ಎಂದು ಅವರು ಹೇಳಿದರು. ಮತ್ತೋರ್ವ ಭಯೋತ್ಪಾದಕನ ಶವ ಪತ್ತೆಯಾಗಿದೆ. ಆದರೆ ಆತನ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು ಅವರು ಹೇಳಿದ್ದಾರೆ.

ಮಾರಕ ವೈರಸ್‌ಗೆ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ 7 ಚಿರತೆ ಮರಿಗಳ ಸಾವು

ಬೆಂಗಳೂರು, ಸೆ.19– ಮಾರಕ ವೈರಸ್‌ಗೆ 7 ಚಿರತೆ ಮರಿಗಳು ಸಾವನ್ನಪ್ಪಿರುವ ಘಟನೆ ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ ವರದಿಯಾಗಿದೆ. ಪೆಲಿನ್ ಪ್ಯಾನ್ಲೂಕೋಪೇನಿಯಾ ಎಂಬ ಮಾರಕ ವೈರಸ್‌ಗೆ ಚಿರತೆ ಮರಿಗಳು ಬಲಿಯಾಗಿವೆ ಎಂದು ಹೇಳಲಾಗುತ್ತಿದೆ. ಬೆಕ್ಕಿನಿಂದ ಹರಡುವ ಮಾರಕ ರೋಗ ಇದಾಗಿದ್ದು, ಆಗಸ್ಟ್ 22ರಂದು ಉದ್ಯಾನದ ಚಿರತೆ ಮರಿಗಳಲ್ಲಿ ಮೊದಲ ಬಾರಿಗೆ ಸೋಂಕು ಕಾಣಿಸಿಕೊಂಡಿತ್ತು. ಸೆಪ್ಟೆಂಬರ್ 5ರ ವೇಳೆಗೆ ಏಳೂ ಮರಿಗಳು ಸಾವಿಗೀಡಾಗಿವೆ ಎಂದು ತಿಳಿದು ಬಂದಿದೆ. ಬನ್ನೇರುಘಟ್ಟ ಉದ್ಯಾನದಲ್ಲಿ ಇತ್ತೀಚೆಗಷ್ಟೇ ಚಿರತೆ ಸಫಾರಿ ಆರಂಭಿಸಿ ಒಂಬತ್ತು ಚಿರತೆ ಮರಿಗಳನ್ನು ಸಫಾರಿಯಲ್ಲಿ ಬಿಡಲಾಗಿತ್ತು. ಆ ಪೈಕಿ ಸೋಂಕಿನಿಂದ ಮೂರು ಚಿರತೆ ಮರಿಗಳು ಮೃತಪಟ್ಟಿವೆ .ಬಿಳಿಗಿರಿರಂಗನ ಬೆಟ್ಟ, ಮೈಸೂರು ಮೃಗಾಲಯ ಮತ್ತು ಮದ್ದೂರು ಬಳಿ ಗಾಯಗೊಂಡಿದ್ದ ಚಿರತೆ ಮರಿಗಳನ್ನು ರಕ್ಷಿಸಿ, ಬನ್ನೇರುಘಟ್ಟ ಜೈವಿಕ ಉದ್ಯಾನದ ಪುನರ್ವಸತಿ ಕೇಂದ್ರಕ್ಕೆ ತರಲಾಗಿತ್ತು. ಅಲ್ಲಿ ಆರೈಕೆ ಮಾಡಿದ ನಂತರ ಸಫಾರಿಗೆ ಬಿಡಲಾಗಿತ್ತು. ಇನ್ನು ಪುನರ್ವಸತಿ ಕೇಂದ್ರದ ಆರೈಕೆಯಲ್ಲಿದ್ದ ನಾಲ್ಕು ಚಿರತೆ ಮರಿಗಳು ಮೃತಪಟ್ಟಿವೆ ಎಂದು ವರದಿಗಳು ತಿಳಿಸಿವೆ.

ಬೆಕ್ಕುಗಳಿಂದ ಹರಡುವ ವೈರಸ್ ಇದಾಗಿದ್ದು, ಕಾಡುಬೆಕ್ಕು ಮತ್ತು ಸಾಕು ಬೆಕ್ಕುಗಳಿಂದ ಸೋಂಕು ಹರಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ಸೋಂಕು ತಗುಲಿದ ಪ್ರಾಣಿಗಳು ಆಹಾರ ಜೀರ್ಣವಾಗದೆ ರಕ್ತಭೇದಿಯಾಗುತ್ತದೆ. ಬಿಳಿ ರಕ್ತಕಣಗಳು ಕಡಿಮೆಯಾಗಿ ನಿಶ್ಯಕ್ತಿಯಿಂದ ಮೃತಪಡುತ್ತವೆ ಎಂದು ಬನ್ನೇರುಘಟ್ಟ ಜೈವಿಕ ಉದ್ಯಾನದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

5ನೇ ವರ್ಷದ ಸವಿನೆನಪು



ಶಂಕರ
ರೈಲ್ವೆ ನಿವೃತ್ತರು
ಮರಣ : 20.9.2018

ದುಃಖತಪ್ತರು : ತಾಯಿ ಲಕ್ಷ್ಮಮ್ಮ, ಹೆಂಡತಿ ಲಕ್ಷ್ಮಿದೇವಿ, ಗಂಡು ಮಕ್ಕಳು, ಸೊಸೆಯಂದಿರು, ಹೆಣ್ಣುಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು, ತಮ್ಮಂದಿರು ಹಾಗೂ ಬಂಧುಮಿತ್ರರು.

ಅರಣ್ಯ ಇಲಾಖೆ
ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮೈಸೂರು ವೃತ್ತ, ಮೈಸೂರು
ಸಂ: ಎ2/ಸಿಬ್ಬಂದಿ/ಅ.ವೀ/ನೇ.ನೇ/ಸಿಆರ್–10/2023–24 ದಿ: 15.09.2023

ಅರಣ್ಯ ವೀಕ್ಷಕ ಗ್ರೂಪ್ "ಡಿ" ಹುದ್ದೆಗಳಿಗೆ ನೇರ ನೇಮಕಾತಿ

ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಮೈಸೂರು ವೃತ್ತಕ್ಕೆ ಸಂಬಂಧಿಸಿದಂತೆ 32 ಅರಣ್ಯ ವೀಕ್ಷಕ ಹುದ್ದೆಗಳಿಗೆ ದಿನಾಂಕ: 27.09.2023 ರಿಂದ 26.10.2023ರ ಒಳಗೆ ಅರ್ಜಿಗಳನ್ನು ಸಲ್ಲಿಸಲು ಆಹ್ವಾನಿಸಲಾಗಿದೆ. ಪೂರ್ಣ ಮಾಹಿತಿಯನ್ನು ಇಲಾಖಾ ವೆಬ್‌ಸೈಟ್ https://aranya.gov.in ನಲ್ಲಿ ಲಭ್ಯವಿರುತ್ತದೆ.

ಸಹಿ/– ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ
DIPR/DDMYS/KSMCA/376/2023-24

ಶ್ರೀ ಭಾನು ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ (ರಿ.)
(ಬೆಂಗಳೂರು ಪ್ರಾಂತ ಮತ್ತು ಮೈಸೂರು ಪ್ರಾಂತ) ನಂ.6 1ನೇ ಮಹಡಿ ಹರೀಶ್ ಕಾಂಪ್ಲೆಕ್ಸ್, ಹೆಬ್ಬಾಳು ಮುಖ್ಯ ರಸ್ತೆ, ಲೋಕನಾಯಕನಗರ, ಮೈಸೂರು–570016

ವಾರ್ಷಿಕ ಮಹಾಸಭೆ

ದಿನಾಂಕ: 21–09–2023ರ ಗುರುವಾರ ಬೆಳಿಗ್ಗೆ 11.00 ಗಂಟೆಗೆ, 2022–23ನೇ ಸಾಲಿನ 14ನೇ ವರ್ಷದ ವಾರ್ಷಿಕ ಮಹಾಸಭೆಯನ್ನು ಸಂಘದ ಅಧ್ಯಕ್ಷರಾದ ಶ್ರೀ ಹೆಚ್.ಎಸ್.ಕೋಳಾಲಗೌಡರವರ ಅಧ್ಯಕ್ಷತೆಯಲ್ಲಿ ಮೈಸೂರು ನಗರದ ಜೆ.ಎಲ್.ಬಿ ರೋಡ್, ರೋಟರಿ ಭವನದ ದೇವೇಗೌಡ ಹಾಲ್‌ನಲ್ಲಿ ಏರ್ಪಡಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದೇ ಇರುವ ಸದಸ್ಯರುಗಳು ಈ ಪ್ರಕಟಣೆಯನ್ನು ಆಹ್ವಾನ ಪತ್ರಿಕೆಯೆಂದು ಪರಿಗಣಿಸಿ ವಾರ್ಷಿಕ ಮಹಾಸಭೆಗೆ ತಪ್ಪದೇ ಹಾಜರಾಗಬೇಕೆಂದು ಈ ಮೂಲಕ ಕೋರಲಾಗಿದೆ.

ದೂರವಾಣಿ : 7019439822
7848950882 / 9739777793

ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
ಸಹಿ/– ಲತಾ ಜಿ.ಡಿ. ಕಾರ್ಯದರ್ಶಿ
ಮೊ: 9480792164

ಮಾನ್ಯ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ನ್ಯಾಯಾಲಯ, ಮಂಡ್ಯ

ದಾವಾ ಸಂಖ್ಯೆ : 2/ 2023.

ಶ್ರೀ. ಕೆ.ಸಿ.ನಿರಂಜನ್ & ಇನ್ನೊಬ್ಬರು........ವಾದಿಗಳು ಮತ್ತು ಶ್ರೀ.ಕೆ.ಎನ್.ಶಂಕರ್ @ ಚಂದ್ರಶೇಖರ್ & ಇನ್ನೊಬ್ಬರು.

1. ಶ್ರೀ.ಕೆ.ಎನ್.ಶಂಕರ್ @ ಚಂದ್ರಶೇಖರ್ ಬಿನ್ ಲೇಟ್ ನಂಜೇಗೌಡ, ವಯಸ್ಸು 55 ವರ್ಷ,
2. ಶ್ರೀ ರವೀಂದ್ರ ಟಿ.ಎಸ್., ಬಿನ್ ಕೆ.ಸಿದ್ದೇಗೌಡ, ವಯಸ್ಸು 50 ವರ್ಷ, ಪ್ರತಿವಾದಿ ನಂ.1 ಮತ್ತು 2 ರವರ ವಾಸ: ಬೊಮ್ಮನದೊಡ್ಡಿ (ಗ್ರಾಮ) ದಾಖ್ಲೆ ಕ್ಯಾತಘಟ್ಟ ಗ್ರಾಮ, ಸಿ.ಎ.ಕೆರೆ ಹೋಬಳಿ, ಮಂಡ್ಯ ತಾಲ್ಲೂಕು ....ಪ್ರತಿವಾದಿಗಳು.

ಈ ಮೂಲಕ 1 ನೇ ಪ್ರತಿವಾದಿಗಳಾದ ನಿಮಗೆ ತಿಳಿಯಪಡಿಸುವುದೇನೆಂದರೆ, ಈ ಮೇಲ್ಕಾಣಿಸಿದ ವಾದಿ. ಈ ಮೇಲ್ಕಂಡ ದಾವೆಯನ್ನು ನಿಮ್ಮ ಮತ್ತು ಇತರೆ ಪ್ರತಿವಾದಿಗಳ ವಿರುದ್ಧ ಷೆಡ್ಯೂಲ್ ಸ್ವತ್ತಿನ ಬಾಬ್ತು ಭಾಗಾಂಶ ಕೋರಿ ಅಸಲು ದಾವ ಸಂಖ್ಯೆ. 2/2023 ರಂತೆ ಮಾನ್ಯ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ, ಮದ್ದೂರಿನಲ್ಲಿ ದಾವೆಯನ್ನು ಸಲ್ಲಿಸಿರುತ್ತಾರೆ. ಈ ದಾವೆಯಲ್ಲಿ ನಿಮ್ಮನ್ನು ಪಕ್ಷಗಾರರನ್ನಾಗಿ ಮಾಡಿರುತ್ತಾರೆ. ಸದರಿ ಪ್ರಕರಣವು ದಿನಾಂಕ 25.10.2023 ರಂದು ವಿಚಾರಣೆಗೆ ಇರುತ್ತದೆ. ಸದರಿ ದಿನಾಂಕದಂದು ಬೆಳಗ್ಗೆ 11–00 ಗಂಟೆಗೆ ಮೇಲ್ಕಂಡ ನ್ಯಾಯಾಲಯಕ್ಕೆ ಖುದ್ದಾಗಿಯಾಗಲಿ ಅಥವಾ ವಕೀಲರ ಮೂಲಕವಾಗಲೀ ತಾವು ಹಾಜರಾಗಿ ತಮ್ಮ ಆಹವಾಲು/ತಕರಾರು ಇದ್ದಲ್ಲಿ ಸಲ್ಲಿಸತಕ್ಕದೆಂದು ತಿಳಿಯಪಡಿಸಲಾಗಿದೆ. ತಪ್ಪಿದಲ್ಲಿ ತಮ್ಮ ತಕರಾರು ಇಲ್ಲವೆಂದು ಪರಿಗಣಿಸಿ ತಮ್ಮನ್ನು ಏಕಪಕ್ಷೀಯವಾಗಿ ಪರಿಗಣಿಸಿ ಪ್ರಕರಣವನ್ನು ಮುಂದುವರಿಸಲಾಗುವುದು. ನ್ಯಾಯಾಲಯದ ಆದೇಶದ ಮೇರೆಗೆ ಮೊಹರಿನೊಂದಿಗೆ ದಿನಾಂಕ: 13.09.2023 ರಂದು ನೋಟೀಸ್ ಪ್ರಚುರ ಪಡಿಸಲಾಗಿದೆ.

ನ್ಯಾಯಾಲಯದ ಅಪ್ಪಣೆ ಮೇರೆಗೆ
ಸಹಿ/– ಶಿರಸ್ತೇದಾರರು.
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮದ್ದೂರು,
ಎಂ.ಜೆ.ಪ್ರೈನ್
ವಾದಿಪರ ವಕೀಲರು

ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಅದರ ಮಾಲೀಕರಾದ, ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ವರುಣ ಹೋಬಳಿ, ಕೀಳನಪುರ ಗ್ರಾಮ, ಮನೆ ನಂಬರ್: 33 ರ ನಿವಾಸಿಯಾದ ಶ್ರೀ. ರಾಮಚಂದ್ರ ಕೆ. ಟಿ. ಬಿನ್ ಲೇ. ತಿಮ್ಮಶೆಟ್ಟಿ ಮತ್ತು ಇವರ ಕುಟುಂಬದ ಸದಸ್ಯರುಗಳಿಂದ ಖರೀದಿಸಲು ಉದ್ದೇಶಿಸಿರುತ್ತಾರೆ. ಷೆಡ್ಯೂಲ್ ಸ್ವತ್ತಿನ ಪರಭಾರೆಯ ವಿಚಾರದಲ್ಲಿ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇದ್ದಲ್ಲಿ, ಇಂದಿನಿಂದ ಐದು (05) ದಿನಗಳ ಒಳಗೆ ತಮ್ಮ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಈ ಕೆಳಗೆ ಸಹಿ ಮಾಡಿದವರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಸ್ವತ್ತಿನ ಮೇಲೆ ಇತರ ಯಾರಿಗೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ಷೆಡ್ಯೂಲ್: ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ವರುಣ ಹೋಬಳಿ, ಇನಾಂ ಉತ್ತನಹಳ್ಳಿ ಗ್ರಾಮದ ಸರ್ವೆ ನಂಬರ್. 342/5 ರಲ್ಲಿನ ಮೂವತ್ತಾರು ಗುಂಟೆ (0.36.00.00) ವಿಸ್ತೀರ್ಣದ ಖುಷ್ಕಿ ಜಮೀನಿಗೆ ಚೆಕ್ಕುಬಂದಿ: ಪೂರ್ವಕ್ಕೆ:– ಬ್ಲಾಕ್ 5. ಪಶ್ಚಿಮಕ್ಕೆ:– ಬ್ಲಾಕ್ 3. ಉತ್ತರಕ್ಕೆ: – ರಸ್ತೆ, ದಕ್ಷಿಣಕ್ಕೆ:– ಸರ್ವೆ ನಂಬರ್ 341

Sd/- M.N.Prakash kalappa, Advocate, KAR- 1996-2000, # 2-3, First Floor, PRI Complex, 67/7A, New Sayyajirao Road, Fort Mohalla, Mysore 570004, India. Cell: 93431 12535 E-mail: mnprakashkalappa@gmail.com
ಮೈಸೂರು: 19/09/2023